23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 297 | ನವದೆಹಲಿ | ಬೆಲೆ ₹10 | ಮೇ 3 2026, ಭಾನುವಾರ

## ಒಳಪುಟಗಳಲ್ಲಿ




ವಂಚನೆ ಪ್ರಕರಣದಲ್ಲಿ ಕಮಲೇಶ್ ಪರೇಖ್ ಯುಎಇಯಿಂದ ಗಡಿಪಾರು - ಪು.4

ಭೂಮಾಫಿಯಾ, ಹ್ಯಾಕರ್‌ಗಳಿಗೆ ಹೆಬ್ಬಾಗಿಲು: ಪತ್ರ ಬರಹಗಾರರ ಒಕ್ಕೂಟ ಆತಂಕ - ಪು.5

ಮಂಗಳೂರಿನಲ್ಲಿ ಹೈಕೋರ್ಟ್ ಸಂಚಾರಿ ಪೀಠ: ಸ್ಥಳ ಪರಿಶೀಲನೆಗೆ ಮುಖ್ಯ ನ್ಯಾಯಮೂರ್ತಿ ಒಪ್ಪಿಗೆ- ಎಂಎಲ್‌ಸಿ ಐವನ್ ಡಿಸೋಜಾ - ಪು. 6


# ಕೃಷಿ ಲಾಭದಾಯಕವಾಗಿಸಲು ವೈಜ್ಞಾನಿಕ ನೆರವು ನೀಡಲು ಬದ್ಧ

**ಬೆಂಗಳೂರು, ಮೇ 2:** ಕೃಷಿಯನ್ನು ಲಾಭದಾಯಕವಾಗಿಸಲು ವೈಜ್ಞಾನಿಕ ನೆರವನ್ನು ನೀಡಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಓಕಳೀಪುರಂನಲ್ಲಿ ರೇಷ್ಮೆ ಮತ್ತು ಖನಿಜ ಭವನ ನಿರ್ಮಾಣಕ್ಕೆ ಶಂಕುಸ್ಥಾಪನೆ ಹಾಗೂ ಇ-ರೇಷ್ಮೆ ಪೋರ್ಟಲ್ ಬಿಡುಗಡೆಯನ್ನು ನೆರವೇರಿಸಿ ಮಾತನಾಡಿದರು.

ರೇಷ್ಮೆ ಮೇಲೆ 1.50 ಲಕ್ಷ ಕುಟುಂಬಗಳು ಇದರ ಮೇಲೆ ಅವಲಂಬಿಸಿದ್ದು, ರೇಷ್ಮೆ ಲಾಭದಾಯಕವಾದ ಕಸುಬು. ಅದಕ್ಕಾಗಿಯೇ ಹೆಚ್ಚು ಜನ ವ್ಯವಸಾಯದ ಜೊತೆಗೆ ಉಪಕಸುಬು ಮಾಡಬೇಕು ಎಂದರು. ಕೃಷಿಯಿಂದ ವಿಮುಖರಾಗುತ್ತಿರುವ ಯುವಜನಾಂಗವನ್ನು ಪುನ: ಸೆಳೆಯಲು ರೇಷ್ಮೆ ತೋಟಗಾರಿಕೆ, ಪಶುಸಂಗೋಪನೆಗೆ ಸರ್ಕಾರ ಹೆಚ್ಚಿನ ಒತ್ತು ನೀಡುತ್ತಿದೆ ಎಂದರು.

ಬೈವೋಲ್ಟಿನ್ ರೇಷ್ಮೆಗೆ ಬೇಡಿಕೆ ಹೆಚ್ಚಾಗಿದ್ದು, ನಮ್ಮ ಸರ್ಕಾರದ ಅವಧಿಯಲ್ಲಿ ಸಾಗಾಣಿಕೆ ವೆಚ್ಚವನ್ನು 10 ರಿಂದ 20. ರೂ.ಗಳಿಗೆ ಹೆಚ್ಚಿಸಲಾಯಿತು ಮತ್ತು ಬೈವೋಲ್ಟಿನ್ ಬೆಳೆಯಲು ಹೆಚ್ಚಿನ ನೆರವನ್ನು ನೀಡಲು ಬದ್ಧವಾಗಿದೆ ಎಂದರು. ಕಚ್ಚಾರೇಷ್ಮೆ ಉತ್ಪಾದನೆಯಲ್ಲಿ ಕರ್ನಾಟಕ ದೇಶದಲ್ಲಿಯೇ ಮೊದಲ ಸ್ಥಾನದಲ್ಲಿದೆ.

ಹಾಲು ಉತ್ಪಾದನೆಯಲ್ಲಿ ಎರಡನೇ ಸ್ಥಾನ ಹಾಗೂ ಕಾಫಿ ಉತ್ಪಾದನೆಯಲ್ಲಿಯೂ ಮೊದಲ ಸ್ಥಾನದಲ್ಲಿದ್ದೇವೆ. ದಿನಕ್ಕೆ 1 ಕೋಟಿ ಲೀಟರ್ ಹಾಲು ಉತ್ಪಾದನೆಯಲ್ಲಿ 1.22 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆಬೆಳೆ ಹಾಕಲಾಗಿದೆ ಎಂದು ಸಿಎಂ ವಿವರಿಸಿದರು.

**ರೇಷ್ಮೆ ಮತ್ತು ಖನಿಜ ಭವನ ನಿರ್ಮಾಣಕ್ಕೆ ಶಂಕುಸ್ಥಾಪನೆ**
**ಇ-ರೇಷ್ಮೆ ಪೋರ್ಟಲ್ ಬಿಡುಗಡೆಗೊಳಿಸಿದ ಸಿಎಂ ಸಿದ್ದರಾಮಯ್ಯ**



ಬೆಂಗಳೂರಿನ ಓಕಳೀಪುರದಲ್ಲಿರುವ 4 ಎಕರೆ 25 ಗುಂಟೆ ವಿಸ್ತೀರ್ಣದ ಈ ಸ್ಥಳ ರೇಷ್ಮೆ ಇಲಾಖೆಗೆ ಸೇರಿದ್ದು 1995 ರಲ್ಲಿ ಇದನ್ನು ಖರೀದಿಸಲಾಗಿತ್ತು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ರೇಷ್ಮೆ ಭವನದ ಅಗತ್ಯತೆಯನ್ನು ಮನಗಂಡು ಸ್ಥಳವನ್ನು ರೇಷ್ಮೆ ಇಲಾಖೆ ಕೊಟ್ಟರೆ ಗಣಿ ಮತ್ತು ಭೂವಿಜ್ಞಾನ ಇಲಾಖೆಗೆ ಸೇರಿದ ಮೈಸೂರು ಖನಿಜ ಕಾರ್ಪೊರೇಷನ್ ವತಿಯಿಂದ ಭವನ ನಿರ್ಮಾಣ ಮಾಡುವುದು ಎಂದು ತೀರ್ಮಾನಿಸಿ ಈ ಕ್ರಮ ಕೈಗೊಳ್ಳಲಾಗಿದೆ. ರೇಷ್ಮೆ ಇಲಾಖೆಯ ಅಭಿವೃದ್ಧಿಯ ದೃಷ್ಟಿಯಿಂದ ಅಗತ್ಯವಿರುವಷ್ಟು ಸ್ಥಳವನ್ನು ಬಳಸಿಕೊಂಡು ಇತರ ಇಲಾಖೆಗಳಿಗೂ ಸ್ಥಳಾವಕಾಶ ಮಾಡಿಕೊಡುವಂತೆ ಸೂಚಿಸಲಾಗಿದೆ ಎಂದರು. ರೂ. 666.75 ಕೋಟಿಗಳಿಗೆ ಟೆಂಡರ್ ಆಗಿದ್ದು, ಮೂರು ವರ್ಷಗಳ ಅವಧಿಯಲ್ಲಿ ಕಟ್ಟಡ ನಿರ್ಮಾಣವಾಗಬೇಕು, 13 ಅಂತಸ್ತಿನ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಲಿದ್ದು ಕಟ್ಟಡ ಸದೃಢವಾಗಿರಬೇಕು ಎಂದು ಸ್ಥಳದಲ್ಲಿ ಹಾಜರಿದ್ದ ಗುತ್ತಿಗೆದಾರರಿಗೆ ಮುಖ್ಯಮಂತ್ರಿಗಳು ಸೂಚಿಸಿದರು. ಮೂರು ವರ್ಷಗಳ ಕಾಲಮಿತಿಯಲ್ಲಿ ಕಟ್ಟಡ ಮುಗಿಯದಿದ್ದರೆ ಕ್ರಮ ನಿಮ್ಮ ವಿರುದ್ಧ ಕ್ರಮಕೈಗೊಳ್ಳಲಾಗುವುದು ಎಂದೂ ಎಚ್ಚರಿಕೆ ನೀಡಿದರು.

ಸಚಿವರಾದ ದಿನೇಶ್ ಗುಂಡೂರಾವ್, ವೆಂಕಟೇಶ್, ಖನಿಜ ನಿಗಮದ ಅಧ್ಯಕ್ಷ ಜಿ.ಎಸ್ .ಪಾಟೀಲ್, ಉಪಾಧ್ಯಕ್ಷ ಎಚ್. ಲಕ್ಷ್ಮಣ್, ರೇಷ್ಮೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಚುನಾವಣೋತ್ತರ ಸಮೀಕ್ಷೆ ಬಗ್ಗೆ ನಂಬಿಕೆ ಇಲ್ಲ: ಡಿ.ಕೆ.ಶಿವಕುಮಾರ್

**ಗುವಾಹಟಿ, ಮೇ 2:** "ಚುನಾವಣೋತ್ತರ ಸಮೀಕ್ಷೆಗಳು ನಮ್ಮ ಪರವಾಗಿರಲಿ, ಇಲ್ಲದಿರಲಿ ಅದರ ಮೇಲೆ ನನಗೆ ನಂಬಿಕೆ ಇಲ್ಲ. ನನ್ನ ತಂತ್ರಗಾರಿಕೆಯೇ ಬೇರೆ, ಈ ಬಾರಿ ಎಲ್ಲಾ ರಾಜ್ಯಗಳಲ್ಲಿ ಇಂಡಿಯಾ ಮೈತ್ರಿಕೂಟ ಅಧಿಕಾರಕ್ಕೆ ಬರಲಿದೆ. ಅಸ್ಸಾಂನಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವ ವಿಶ್ವಾಸವಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.



- ಅಸ್ಸಾಂನಲ್ಲಿ ಜನ ಬದಲಾವಣೆ ಬಯಸಿದ್ದು, ಕಾಂಗ್ರೆಸ್ ಮೈತ್ರಿಕೂಟಕ್ಕೆ ಅಧಿಕಾರ ನೀಡಲಿದ್ದಾರೆ
- ಅಸ್ಸಾಂನಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ: ಡಿಸಿಎಂ ಡಿಕೆಶಿ

ಗುವಾಹಟಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಜೊತೆ ಸಭೆ ನಡೆಸಿದ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

"ಅಸ್ಸಾಂ ರಾಜ್ಯದ ಕಾಂಗ್ರೆಸ್ ಪಕ್ಷವು ಒಗ್ಗಟ್ಟಾಗಿದ್ದು, ಆತ್ಮವಿಶ್ವಾಸದಲ್ಲಿದೆ. ನಮ್ಮ ತಂಡದ ಪರಿಶ್ರಮದ ಬಗ್ಗೆ ನನಗೆ ಹೆಮ್ಮೆ ಇದೆ. ಚುನಾವಣೆಯನ್ನು ಬಹಳ ಚೆನ್ನಾಗಿ ನಡೆಸಿದ್ದು, ಸಕಾರಾತ್ಮಕ ಫಲಿತಾಂಶದ ನಿರೀಕ್ಷೆ ಇದೆ. ಮಾಧ್ಯಮಗಳ ವರದಿ ಏನೇ ಇದ್ದರೂ ನನಗೆ ಪಕ್ಷ ಅಧಿಕಾರ ಬರುವ ವಿಶ್ವಾಸವಿದೆ. ಮಾಧ್ಯಮಗಳ ವರದಿ ನೋಡಿ ಅಸ್ಸಾಂ ಮತದಾರರಲ್ಲಿ ಆತಂಕ ಮೂಡಿದೆ. ಅಸ್ಸಾಂನಲ್ಲಿ ಬಿಜೆಪಿ ಜೊತೆ ಗುರುತಿಸಿಕೊಂಡವರಿಗೆ ಮಾತ್ರ ಉಚಿತ ಯೋಜನೆಗಳನ್ನು ನೀಡಲಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಯಾರು ಯಾರಿಗೆ ಮತ ಹಾಕಿದ್ದಾರೆ ಎಂದು ಹೇಗೆ ಹೇಳಲು ಸಾಧ್ಯ? ನಮ್ಮ ಆಂತರಿಕ ಸಮೀಕ್ಷೆ ಉತ್ತಮವಾಗಿದ್ದು, ಯಾರ ನೆರವು ಇಲ್ಲದೇ ನಾವು ಅಧಿಕಾರ ಹಿಡಿಯುವ ವಿಶ್ವಾಸ ನಮ್ಮ ಅಭ್ಯರ್ಥಿಗಳಲ್ಲಿ ಇದೆ" ಎಂದು ತಿಳಿಸಿದರು.

ಚುನಾವಣೋತ್ತರ ಸಮೀಕ್ಷೆ ವರದಿಗಳ ಬಗ್ಗೆ ಕೇಳಿದಾಗ, "ಈ ಸಮೀಕ್ಷೆಗಳಲ್ಲಿ ಬಳಸುವ ಮಾದರಿ ಪ್ರಮಾಣ ಬಹಳ ಸಣ್ಣದಾಗಿರುತ್ತವೆ. ಹೀಗಾಗಿ ನಮ್ಮ ಲೆಕ್ಕಾಚಾರ ಬೇರೆ ಇದೆ. ನಾನು ಯಾವುದೇ ರಾಜ್ಯಗಳ ಚುನಾವಣೋತ್ತರ ಸಮೀಕ್ಷೆ ನಂಬುವುದಿಲ್ಲ. ನಾನು ಇಲ್ಲಿಗೆ ಬಂದಿರುವುದೇ ನಮ್ಮ ಶಾಸಕರನ್ನು ರಕ್ಷಿಸಿ, ಮಾರ್ಗದರ್ಶನ ನೀಡಿ, ಶಕ್ತಿ ತುಂಬಲು" ಎಂದು ತಿಳಿಸಿದರು.

ಅಸ್ಸಾಂ ಚುನಾವಣೆ ಬಗ್ಗೆ ಕೇಳಿದಾಗ, "ನಮ್ಮ ಕಾರ್ಯಕರ್ತರು ಬಹಳ ವಿಭಿನ್ನ. ಹೀಗಾಗಿ ಅಸ್ಸಾಂನಲ್ಲಿ ಇಂಡಿಯಾ ಮೈತ್ರಿಕೂಟ ಅಧಿಕಾರಕ್ಕೆ ಬರಲಿದೆ. ನಮ್ಮ ನಾಯಕರ ಮೇಲೆ ನಮಗೆ ನಂಬಿಕೆ ಇದೆ. ಅವರು ಸಾಕಷ್ಟು ಪರಿಶ್ರಮ ಹಾಕಿದ್ದಾರೆ. ಮತದಾರರ ಮೇಲೆ ವಿಶ್ವಾಸವಿದೆ. ಅವರಿಗೆ ಬದಲಾವಣೆ ಬೇಕಾಗಿದೆ. ಆ ಬದಲಾವಣೆ ಸಿಗಲಿದೆ ಎಂಬ ಆತ್ಮವಿಶ್ವಾಸವಿದೆ" ಎಂದು ತಿಳಿಸಿದರು.

ತಮಿಳುನಾಡು ಚುನಾವಣೆ ಬಗ್ಗೆ ಕೇಳಿದಾಗ, "ದೇಶದಾದ್ಯಂತ ಇಂಡಿಯಾ ಮೈತ್ರಿಕೂಟದ ಸರ್ಕಾರ ಅಧಿಕಾರಕ್ಕೆ ಬರಲಿದೆ" ಎಂದರು.

ಪಶ್ಚಿಮ ಬಂಗಾಳದಲ್ಲಿ ಇಂಡಿಯಾ ಮೈತ್ರಿಕೋಟ ಅಧಿಕಾರಕ್ಕೆ ಬರುವುದೇ ಎಂದು ಕೇಳಿದಾಗ, "ಪ್ರತಿ ರಾಜ್ಯದಲ್ಲೂ ಇಂಡಿಯಾ ಮೈತ್ರಿಕೂಟ ಅಧಿಕಾರಕ್ಕೆ ಬರಲಿದೆ" ಎಂದರು.

### ಬಿಜೆಪಿ ಗೆಲ್ಲುವ ವಿಶ್ವಾಸ ಕಳೆದುಕೊಂಡಿದೆ

"ನಮಗೆ ಬಂದಿರುವ ಮಾಹಿತಿ ಪ್ರಕಾರ ನಮ್ಮ ಅಭ್ಯರ್ಥಿಗಳನ್ನು ಬಿಜೆಪಿ ಸಂಪರ್ಕಿಸಿದೆ. ಇದು ಬಿಜೆಪಿಯವರು ಆತಂಕಕ್ಕೆ ಒಳಗಾಗಿರುವುದಕ್ಕೆ ಸಾಕ್ಷಿಯಾಗಿದೆ. ಬಿಜೆಪಿ ಗೆಲ್ಲುವ ವಿಶ್ವಾಸ ಕಳೆದುಕೊಂಡಿದೆ. ಆದರೆ ನಾವೆಲ್ಲರೂ ಒಟ್ಟಾಗಿದ್ದೇವೆ. ಹೀಗಾಗಿ ನಾವು ಇಲ್ಲಿ ಸೇರಿ ಮತದಾನದ ದಿನವನ್ನು ನಾವು ಹೇಗೆ ಎದುರಿಸಬೇಕು ಎಂದು ಮಾರ್ಗದರ್ಶನ ನೀಡಲಾಗಿದೆ. ಬಿಜೆಪಿ ಆಡಳಿತ ಯಂತ್ರ ದುರ್ಬಳಕೆಗೆ ಮುಂದಾಗಲಿದ್ದು, ನಾವು ಯಾವ ರೀತಿ ಜಾಗರೂಕರಾಗಿರಬೇಕು ಎಂದು ಮಾರ್ಗದರ್ಶನ ನೀಡಿದ್ದೇವೆ" ಎಂದರು. "ಇದಕ್ಕಾಗಿ ದೆಹಲಿ, ಅಸ್ಸಾಂ ಹಾಗೂ ಗುವಾಹಟಿಯಲ್ಲಿ ಪ್ರತ್ಯೇಕ ಕಾನೂನು ಘಟಕ ಸ್ಥಾಪಿಸಲಾಗಿದೆ. ನಮ್ಮ ಪ್ರಧಾನ ಕಾರ್ಯದರ್ಶಿಗಳು ಮತದಾನದ ದಿನ ಇಲ್ಲಿಗೆ ಆಗಮಿಸುತ್ತಾರೆ. ನಾವು ನಮ್ಮ ಅಭ್ಯರ್ಥಿಗಳನ್ನು ರಕ್ಷಣೆ ಮಾಡಿಕೊಳ್ಳುತ್ತೇವೆ. ಬಿಜೆಪಿಗೆ ಗೆಲ್ಲುವ ವಿಶ್ವಾಸ ಇದ್ದಿದ್ದರೆ ನಮ್ಮ ಅಭ್ಯರ್ಥಿಗಳು, ಶಾಸಕರನ್ನು ಸಂಪರ್ಕ ಮಾಡುತ್ತಿರಲಿಲ್ಲ" ಎಂದು ಡಿ.ಕೆ.ಶಿವಕುಮಾರ್ ನುಡಿದರು.

## ಜಾಗತಿಕ ಮಾರುಕಟ್ಟೆ ಸ್ಥಿತಿಗತಿಗೆ ತಕ್ಕಂತೆ ತೈಲ ಕಂಪನಿಗಳಿಂದ ಬೆಲೆ ಏರಿಕೆ

**ದಾವಣಗೆರೆ, ಮೇ 2:** ವಿಶ್ವದಾದ್ಯಂತ ಎದುರಾಗಿರುವ ಇಂಧನ ಬಿಕ್ಕಟ್ಟಿನಿಂದಾಗಿ ಅಂತರಾಷ್ಟ್ರೀಯ ಮಾರುಕಟ್ಟೆಯ ಸ್ಥಿತಿಗತಿಗಳಿಗೆ ಅನುಗುಣವಾಗಿ ತೈಲ ಕಂಪನಿಗಳು ಎಲ್‌ಪಿಜಿ ಬೆಲೆ ಏರಿಕೆ ಮಾಡಿವೆ. ಆದರೆ, ಪ್ರಸ್ತುತ ನಡೆಯುತ್ತಿರುವ ಯುದ್ಧಗಳು ಕೊನೆಗೊಂಡ ನಂತರ ಬೆಲೆಗಳು ಮತ್ತೆ ಇಳಿಕೆಯಾಗಲಿವೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಭಾರತಕ್ಕೆ ಅಗತ್ಯವಿರುವ ಶೇ.50ರಷ್ಟು ಇಂಧನವು ವಿದೇಶಗಳಿಂದ ಆಮದಾಗುತ್ತದೆ. ಪ್ರಮುಖವಾಗಿ ಹಾರ್ಮುಜ್ ಜಲಸಂಧಿಯ ಮೂಲಕ ಇಂಧನ ಪೂರೈಕೆಯಾಗುತ್ತಿದ್ದು, ಅಲ್ಲಿ ಉಂಟಾಗಿರುವ ತೊಂದರೆಗಳಿಂದಾಗಿ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿದೆ. ಇದರಿಂದಾಗಿ ಬೆಲೆ ಏರಿಕೆ ಅನಿವಾರ್ಯವಾಗಿದೆ ಎಂದು ಸ್ಪಷ್ಟಪಡಿಸಿದರು.

ಇದೇ ವೇಳೆ ಯುಪಿಎ ಸರ್ಕಾರದ ಅವಧಿಯ ನಿರ್ಧಾರಗಳನ್ನು ಟೀಕಿಸಿದ ಜೋಶಿ, "2004ರಿಂದ 2014ರವರೆಗೆ ಅಧಿಕಾರದಲ್ಲಿದ್ದ ಕಾಂಗ್ರೆಸ್ ನೇತೃತ್ವದ ಸರ್ಕಾರವು ಇಂಧನ ಬೆಲೆ ನಿಗದಿಪಡಿಸುವ



- ಮಧ್ಯಪ್ರಾಚ್ಯ ಸಂಘರ್ಷ ಕೊನೆಗೊಂಡ ನಂತರ ಮತ್ತೆ ಇಳಿಕೆ: ಕೇಂದ್ರ ಸಚಿವ ಪ್ರಲ್ಹಾದಜೋಶಿ ವಿಶ್ವಾಸ

ಅಧಿಕಾರವನ್ನು ಕಂಪನಿಗಳಿಗೆ ನೀಡಿದೆ. ಈಗ ಕಂಪನಿಗಳು ಆ ಅಧಿಕಾರ ಬಳಸಿ ಬೆಲೆ ಹೆಚ್ಚಿಸುತ್ತಿವೆ. ಆದರೂ ಕೇಂದ್ರ ಸರ್ಕಾರವು ಸಾರ್ವಜನಿಕರಿಗೆ ಹೊರೆಯಾಗದಂತೆ ಗಮನಹರಿಸುತ್ತಿದೆ" ಎಂದರು.

ರಾಜ್ಯ ರಾಜಕೀಯದ ಕುರಿತು ಮಾತನಾಡಿದ ಜೋಶಿ, ಕರ್ನಾಟಕದಲ್ಲಿ ಭ್ರಷ್ಟಾಚಾರ ಮಿತಿ ಮೀರಿದೆ ಎಂದು ಕಿಡಿಕಾರಿದರು. ಅಧಿಕಾರ ಹಂಚಿಕೆಯ ಗೊಂದಲದಿಂದಾಗಿ ಆಡಳಿತ ವ್ಯವಸ್ಥೆ ಕುಸಿದಿದೆ. ಸರ್ಕಾರಿ ನೌಕರರಿಗೆ ಸಂಬಳ ನೀಡಲು ಕೂಡ ಸರ್ಕಾರದ ಖಜಾನೆಯಲ್ಲಿ ಹಣವಿಲ್ಲದಂತಾಗಿದೆ. ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡುವ ಬಗ್ಗೆ ಹೈಕಮಾಂಡ್ ಚರ್ಚೆ ನಡೆಸುತ್ತಿರುವುದು ಅವರ ಆಂತರಿಕ ವಿಷಯ, ಆದರೆ ಇದರಿಂದ ಅಭಿವೃದ್ಧಿ ಕುಂಠಿತವಾಗಿದೆ" ಎಂದು ದೂರಿದರು.

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಬಿಜೆಪಿ ಜಯಭೇರಿ ಬಾರಿಸಲಿದೆ ಎಂದು ಅವರು ಭವಿಷ್ಯ ನುಡಿದರು. ಅಲ್ಲದೆ, ಮುಂಬರುವ ಪಂಚರಾಜ್ಯಗಳ ಚುನಾವಣೆಯಲ್ಲೂ ಅಸ್ಸಾಂ, ಪಶ್ಚಿಮ ಬಂಗಾಳ ಮತ್ತು ತಮಿಳುನಾಡಿನಲ್ಲಿ ಪಕ್ಷವು ಉತ್ತಮ ಸಾಧನೆ ಮಾಡಲಿದೆ ಎಂದು ಆಶಯ ವ್ಯಕ್ತಪಡಿಸಿದರು.


## ಮೊಬೈಲ್ ಬ್ರಾಡ್‌ಕಾಸ್ಟ್ ಅಲರ್ಟ್ ಯಶಸ್ವಿ ಪರೀಕ್ಷೆ

**ನವದೆಹಲಿ, ಮೇ 2:** ಪ್ರಕೃತಿ ವಿಕೋಪಗಳು ಮತ್ತು ತುರ್ತು ಸಂದರ್ಭಗಳಲ್ಲಿ ನಾಗರಿಕರ ಸುರಕ್ಷತೆಯನ್ನು ಖಚಿತಪಡಿಸಲು ಕೇಂದ್ರ ಸರ್ಕಾರ ರೂಪಿಸಿರುವ ಸೆಲ್ ಬ್ರಾಡ್‌ಕಾಸ್ಟ್ ಅಲರ್ಟ್ ವ್ಯವಸ್ಥೆಯನ್ನು ದೇಶಾದ್ಯಂತ ಯಶಸ್ವಿಯಾಗಿ ಪರೀಕ್ಷಿಸಲಾಗಿದೆ.

ಶನಿವಾರ ಮಧ್ಯಾಹ್ನ 12 ಗಂಟೆ ಸಮಯದಲ್ಲಿ ದೇಶದ ಹಲವೆಡೆ ಮೊಬೈಲ್ ಫೋನ್‌ಗಳಲ್ಲಿ ಜೋರಾದ ಎಚ್ಚರಿಕೆ ಧ್ವನಿ ಹಾಗೂ ಸಂದೇಶಗಳು ಕಾಣಿಸಿಕೊಂಡು ವಿಚಾರ ತಿಳಿಯದ ಜನರಲ್ಲಿ ಕೆಲಕಾಲ ಗೊಂದಲ ಉಂಟಾಯಿತು. ದೂರಸಂಪರ್ಕ ಇಲಾಖೆ ಹಾಗೂ ಸಂಬಂಧಿತ ರಾಷ್ಟ್ರೀಯ ಸಂಸ್ಥೆಗಳ ಸಹಕಾರದಲ್ಲಿ ಅಭಿವೃದ್ಧಿಪಡಿಸಲಾದ ಈ ಸ್ವದೇಶಿ ತಂತ್ರಜ್ಞಾನ ಆಧಾರಿತ ತುರ್ತು ಎಚ್ಚರಿಕೆ ವ್ಯವಸ್ಥೆಯ ಪರೀಕ್ಷೆ ಯಶಸ್ವಿಯಾಗಿ ನೆರವೇರಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ವೇಳೆ ಲಕ್ಷಾಂತರ ಮೊಬೈಲ್ ಬಳಕೆದಾರರಿಗೆ ಪರೀಕ್ಷಾರ್ಥ ಅಲರ್ಟ್ ಸಂದೇಶಗಳು ತಲುಪಿವೆ.

ಈ ಹೊಸ ವ್ಯವಸ್ಥೆ ಸಾಮಾನ್ಯ ಎಸ್‌ಎಂಎಸ್ ಎಚ್ಚರಿಕೆಗಿಂತ ಹೆಚ್ಚು ವೇಗವಾಗಿ ಮತ್ತು ಪರಿಣಾಮಕಾರಿಯಾಗಿ ಮಾಹಿತಿ

**ಪ್ರಕೃತಿ ವಿಕೋಪ, ತುರ್ತು ಸಂದರ್ಭಗಳಲ್ಲಿ ನಾಗರಿಕರ ಸುರಕ್ಷತೆ ಖಚಿತಪಡಿಸಲು ಕೇಂದ್ರ ಸರ್ಕಾರ ರೂಪಿಸಿರುವ ವ್ಯವಸ್ಥೆ**



ತಲುಪಿಸುವಂತೆ ವಿನ್ಯಾಸಗೊಳಿಸಲಾಗಿದೆ. ತುರ್ತು ಸಂದರ್ಭಗಳಲ್ಲಿ ಗಮನ ಸೆಳೆಯುವ ರೀತಿಯಲ್ಲಿ ಜೋರಾದ ಧ್ವನಿ ಹಾಗೂ ಸ್ಪಷ್ಟ ಸಂದೇಶಗಳ ಮೂಲಕ ನಾಗರಿಕರಿಗೆ ತಕ್ಷಣದ ಎಚ್ಚರಿಕೆ ನೀಡುವುದು ಇದರ ಪ್ರಮುಖ ಉದ್ದೇಶವಾಗಿದೆ. ಭೂಕಂಪ, ಸುನಾಮಿ, ಚಂಡಮಾರುತದಂತಹ ಪ್ರಕೃತಿ ವಿಕೋಪಗಳ ಜೊತೆಗೆ ಅನಿಲ ಸೋರಿಕೆ, ರಾಸಾಯನಿಕ ಅಪಾಯಗಳು ಹಾಗೂ ಇತರ ಮಾನವ ನಿರ್ಮಿತ ತುರ್ತು ಪರಿಸ್ಥಿತಿಗಳಲ್ಲಿಯೂ ಈ ವ್ಯವಸ್ಥೆಯನ್ನು ಬಳಸಲಾಗುತ್ತದೆ.

ಯಾವುದೇ ವಿಳಂಬವಿಲ್ಲದೆ ಸ್ಥಳಾಧಾರಿತ (geo-targeted) ಎಚ್ಚರಿಕೆಗಳನ್ನು ನೀಡುವ ಸಾಮರ್ಥ್ಯ ಇದರ ಪ್ರಮುಖ ವೈಶಿಷ್ಟ್ಯವಾಗಿದೆ. ಸಂಪೂರ್ಣವಾಗಿ ಕಾರ್ಯಾರಂಭವಾದ ನಂತರ, ಈ ವ್ಯವಸ್ಥೆಯು ಮೊಬೈಲ್ ಫೋನ್ ಸೆಟ್ಟಿಂಗ್‌ಗಳ ಮೇಲೆ ಅವಲಂಬಿಸದೆ ಎಲ್ಲ ಹ್ಯಾಂಡ್‌ಸೆಟ್‌ಗಳಿಗೂ ತುರ್ತು ಸಂದೇಶಗಳನ್ನು ತಲುಪಿಸಲಾಗುವುದು ಅಧಿಕಾರಿಗಳು ತಿಳಿಸಿದ್ದಾರೆ. ಈ ಪರೀಕ್ಷಾ ಹಂತದಲ್ಲಿ ಇಂಗ್ಲಿಷ್, ಹಿಂದಿ ಹಾಗೂ ವಿವಿಧ ಪ್ರಾದೇಶಿಕ ಭಾಷೆಗಳಲ್ಲಿ ಸಂದೇಶಗಳನ್ನು ರವಾನಿಸಲಾಗಿದೆ. ಮೊಬೈಲ್ ಸೆಟ್ಟಿಂಗ್‌ಗಳಲ್ಲಿ ಟೆಸ್ಟ್ ಚಾನೆಲ್ ಸಕ್ರಿಯವಾಗಿದ್ದ ಬಳಕೆದಾರರಿಗೆ ಮಾತ್ರ ಈ ಅಲರ್ಟ್‌ಗಳು ತಲುಪಿವೆ ಎಂದು ಸ್ಪಷ್ಟಪಡಿಸಲಾಗಿದೆ. ಇದು ಕೇವಲ ಪರೀಕ್ಷಾ ಪ್ರಕ್ರಿಯೆಯಾಗಿದ್ದು, ಯಾವುದೇ ತುರ್ತು ಪರಿಸ್ಥಿತಿ ಇಲ್ಲ ಎಂದು ಸರ್ಕಾರ ತಿಳಿಸಿದೆ.

## ಯೋಗೀಶ್‌ಗೌಡ ಕೊಲೆ ಪ್ರಕರಣ: ವಿನಯ್ ಕುಲಕರ್ಣಿ ಶಾಸಕ ಸ್ಥಾನ ರದ್ದುಗೊಳಿಸಿ ಆದೇಶ



**ಬೆಂಗಳೂರು, ಮೇ 2:** ಯೋಗೀಶ್‌ಗೌಡ ಕೊಲೆ ಪ್ರಕರಣದಲ್ಲಿ ಅಪರಾಧಿ ಎಂದು ಸಾಬೀತಾಗಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ವಿನಯ್ ಕುಲಕರ್ಣಿ ಅವರ ಶಾಸಕ ಸ್ಥಾನವನ್ನು ರದ್ದುಗೊಳಿಸಿ ವಿಧಾನಸಭೆ ಕಾರ್ಯದರ್ಶಿ ಅಧಿಕೃತ ಪ್ರಕಟಣೆ ಹೊರಡಿಸಿದ್ದಾರೆ. ಜನಪ್ರತಿನಿಧಿ ಕಾಯ್ದೆಯ ನಿಯಮಾವಳಿಗಳ ಅನ್ವಯ ವಿನಯ್ ಕುಲಕರ್ಣಿ ಅವರನ್ನು ಶಾಸಕ ಸ್ಥಾನದಿಂದ ಅನರ್ಹಗೊಳಿಸಲಾಗಿದೆ. ಈ ಅನರ್ಹತೆಯು ಏಪ್ರಿಲ್ 15ರಿಂದಲೇ ಅನ್ವಯವಾಗುವಂತೆ ಜಾರಿಗೆ ಬರಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ವಿಧಾನಸಭೆಯ ಕಾರ್ಯದರ್ಶಿಯವರು ಈ ಕುರಿತು ಅಧಿಕೃತವಾಗಿ ಆದೇಶವನ್ನು ಪ್ರಕಟಿಸಿದ್ದಾರೆ.

## ಆಮ್ ಆದ್ಮಿ ಪಕ್ಷ ತೊರೆದು ಬಿಜೆಪಿ ಸೇರಿದ 7 ಮಂದಿ ವಿರುದ್ಧ ಪಂಜಾಬ್ ಪೊಲೀಸರಿಂದ ಎಫ್‌ಐಆರ್

**ನವದೆಹಲಿ, ಮೇ 2:** ಇತ್ತೀಚೆಗೆ ಆಮ್ ಆದ್ಮಿ ಪಕ್ಷದಿಂದ ಭಾರತೀಯ ಜನತಾ ಪಕ್ಷಕ್ಕೆ ಸೇರ್ಪಡೆಗೊಂಡ ಸಂಸದ ಸಂದೀಪ್ ಪಾಠಕ್ ಮತ್ತು ಇತರ 6 ಜನರ ವಿರುದ್ಧ ಪಂಜಾಬ್ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಪಾಠಕ್ ವಿರುದ್ಧ ಜಾಮೀನುರಹಿತ ವಿಭಾಗಗಳ ಅಡಿಯಲ್ಲಿ ಎರಡು ಎಫ್‌ಐಆರ್‌ಗಳು ದಾಖಲಾಗಿವೆ. ಎಫ್‌ಐಆರ್‌ಗಳ ಕುರಿತು ಹೆಚ್ಚಿನ ವಿವರಗಳನ್ನು ಇನ್ನೂ ಬಹಿರಂಗಪಡಿಸಲಾಗಿಲ್ಲ.

ಆಮ್ ಆದ್ಮಿ ಪಕ್ಷವನ್ನು ತೊರೆದು ಬಿಜೆಪಿಗೆ ಸೇರಿದ ಏಳು ರಾಜ್ಯಸಭಾ ಸಂಸದರಲ್ಲಿ ಪಾಠಕ್ ಕೂಡ ಒಬ್ಬರಾಗಿದ್ದಾರೆ. ಅರವಿಂದ್ ಕೇಜ್ರಿವಾಲ್ ಅವರ ಪಕ್ಷವು ತನ್ನ ತತ್ವಗಳು, ಮೌಲ್ಯಗಳು ಮತ್ತು ಮೂಲ ನೈತಿಕತೆಗಳಿಂದ ದೂರ ಸರಿದಿದೆ ಎಂದು ಆರೋಪಿಸಿ, ಏ.24 ರಂದು ಎಎಪಿಯ 10 ರಾಜ್ಯಸಭಾ ಸದಸ್ಯರಲ್ಲಿ 7 ಮಂದಿ ರಾಜೀನಾಮೆ ನೀಡಿದ್ದರು.

### ಕಾಂಗ್ರೆಸ್ ಸಂಸದೆ ಗೆನಿಬೆನ್ ಠಾಕೂರ್ ವಿರುದ್ಧ ಅವಹೇಳನಕಾರಿ ಹೇಳಿಕೆ

## ಬಿಜೆಪಿ ವಿರುದ್ಧ ರಾಹುಲ್ ಗಾಂಧಿ ವಾಗ್ದಾಳಿ

ನವದೆಹಲಿ, ಮೇ 2: ಕಾಂಗ್ರೆಸ್ ಸಂಸದೆ ಗೆನಿಬೆನ್ ಠಾಕೋರ್ ಅವರ ಬಗ್ಗೆ ಗುಜರಾತ್ ಬಿಜೆಪಿ ರಾಜ್ಯಾಧ್ಯಕ್ಷರು "ಅಸಭ್ಯ ಹೇಳಿಕೆ" ನೀಡಿದ್ದಾರೆ ಎಂದು ಆರೋಪಿಸಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಇದು ಬಿಜೆಪಿಯ "ಮಹಿಳಾ ವಿರೋಧಿ ಸಿದ್ಧಾಂತ"ವನ್ನು ಬಯಲು ಮಾಡಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.



ಈ ಕುರಿತು ತಮ್ಮ ಎಕ್ಸ್‌ನಲ್ಲಿ ಶನಿವಾರ ಪೋಸ್ಟ್ ಮಾಡಿರುವ ಅವರು, ಬಿಜೆಪಿಯ 'ನಾರಿ ವಂದನ್' ಎಂಬ ಮುಖವಾಡ ಈಗ ಕಳಚಿ ಬಿದ್ದಿದೆ. ಇದು ಕೇವಲ ನಾಚಿಕೆಗೇಡಿನ ಸಂಗತಿಯಲ್ಲ, ಬದಲಿಗೆ ಬಿಜೆಪಿಯ ಹಿಂದುಳಿದ ಮತ್ತು ಮಹಿಳಾ ವಿರೋಧಿ ಮನಸ್ಥಿತಿಯ ನಿಜವಾದ ಮುಖವಾಗಿದೆ. ಹೀಗಾದರೆ ಅವರು ಮಹಿಳೆಯರನ್ನು ಹೇಗೆ ಸಬಲೀಕರಣಗೊಳಿಸುತ್ತಾರೆ? ಅವರಿಗೆ ಹಕ್ಕುಗಳನ್ನು ನೀಡುತ್ತಾರೆಯೇ? ಎಂದು ಪ್ರಶ್ನಿಸಿದ್ದಾರೆ.

ಅಧಿಕಾರದಲ್ಲಿರುವವರನ್ನು ಪ್ರಶ್ನಿಸುವ ಮಹಿಳೆಯರನ್ನು ಬಿಜೆಪಿ ಸಹಿಸುವುದಿಲ್ಲ. ಕಾಂಗ್ರೆಸ್ ಮಹಿಳಾ ಸಂಸದರ ಪ್ರಶ್ನೆಗಳಿಂದ ಪ್ರಧಾನಿಯವರು ಈಗಾಗಲೇ ಬೆಚ್ಚಿಬಿದ್ದಿದ್ದು, ಸಂಸತ್ತಿನಿಂದ ಹೊರನಡೆದಿದ್ದಾರೆ ಎಂದು ರಾಹುಲ್ ಕುಟುಕಿದ್ದಾರೆ.

ಮಹಿಳೆ ಎಲ್ಲವನ್ನೂ ಮರೆಯಬಹುದು, ಆದರೆ ತನಗಾದ ಅವಮಾನವನ್ನು ಎಂದಿಗೂ ಮರೆಯುವುದಿಲ್ಲ ಎಂದು ಮೋದಿ ಅವರೇ ಈ ಹಿಂದೆ ಹೇಳಿದ್ದರು. ಆದರೆ ಬಿಜೆಪಿ ಇದನ್ನು ಮರೆತಂತಿದೆ. ಗುಜರಾತ್ ಮತ್ತು ಇಡೀ ದೇಶದ ಮಹಿಳೆಯರು ಈ ಪ್ರತಿಯೊಂದು ಅವಮಾನಕ್ಕೂ ಬಿಜೆಪಿಗೆ ತಕ್ಕ ಉತ್ತರ ನೀಡಲಿದ್ದಾರೆ ಎಂದು ರಾಹುಲ್ ಗಾಂಧಿ ಎಚ್ಚರಿಸಿದ್ದಾರೆ.

ಮಹಿಳಾ ಹಕ್ಕುಗಳು ಮತ್ತು ಪ್ರಾತಿನಿಧ್ಯದ ವಿಷಯವಾಗಿ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ರಾಜಕೀಯ ಸಂಘರ್ಷ ಮುಂದುವರಿಯುತ್ತಿರುವ ಬೆನ್ನಲ್ಲೇ ಈ ವಿವಾದ ಉಂಟಾಗಿದೆ.


## ಮೇ 14-16 ರ ನಡುವೆ ಭಾರತಕ್ಕೆ ಮುಂಗಾರು ಪ್ರವೇಶ

**ನವದೆಹಲಿ, ಮೇ 2:** ದೇಶದ್ಯಾಂತ ಅಸ್ತಿತ್ವದಲ್ಲಿರುವ ಉರಿಬಿಸಿಲು ಪರಿಸ್ಥಿತಿಯಿಂದ ಶೀಘ್ರದಲ್ಲೇ ಪರಿಹಾರ ಸಿಗುವ ಸಾಧ್ಯತೆಯಿದೆ, ಮೇ ತಿಂಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ ಮತ್ತು ಮೇ 14 ರಿಂದ 16 ರ ಸುಮಾರಿಗೆ ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳಲ್ಲಿ ನೈಋತ್ಯ ಮಾನ್ಸೂನ್ ಆಗಮನವಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಹಿಮಾಲಯದ ತಪ್ಪಲಿನ ಕೆಲವು ಭಾಗಗಳು, ಪೂರ್ವ ಕರಾವಳಿ ರಾಜ್ಯಗಳು, ಗುಜರಾತ್ ಮತ್ತು ಮಹಾರಾಷ್ಟ್ರಗಳಲ್ಲಿ ಈ ತಿಂಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಶಾಖದ ಅಲೆಯ ದಿನಗಳು ಮುಂದುವರಿಯುವ ಸಾಧ್ಯತೆಯಿದೆ ಎಂದು ಐಎಂಡಿ ತನ್ನ ಮಾಸಿಕ ಮುನ್ಸೂಚನೆಯಲ್ಲಿ ತಿಳಿಸಿದೆ.

ಮೇ ತಿಂಗಳಲ್ಲಿ ದೇಶಾದ್ಯಂತ ಸರಾಸರಿ ಮಳೆ ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ ಎಂದು ಇಲಾಖೆ ಗಮನಿಸಿದೆ, ಆದರೆ ಪೂರ್ವ, ಈಶಾನ್ಯ ಮತ್ತು ಪೂರ್ವ ಮಧ್ಯ ಭಾರತದ ಕೆಲವು ಭಾಗಗಳು ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗಬಹುದು.

**ಮೇ ತಿಂಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಮಳೆಯಾಗುವ ಸಾಧ್ಯತೆ - ಐಎಂಡಿ**



ಮೇನಲ್ಲಿ ದೇಶದ ಹಲವು ಭಾಗಗಳಲ್ಲಿ ಕನಿಷ್ಠ ತಾಪಮಾನವು ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ ಎಂದು ಹವಾಮಾನಶಾಸ್ತ್ರದ ಮಹಾನಿರ್ದೇಶಕ ಮೃತ್ಯುಂಜಯ್ ಮೊಹಾಪಾತ್ರ ಹೇಳಿದ್ದಾರೆ.

ಇದೇ ಸಮಯದಲ್ಲಿ, ವಾಯುವ್ಯ ಭಾರತದ ಹಲವಾರು ಪ್ರದೇಶಗಳು, ಮಧ್ಯ ಭಾರತದ ಕೆಲವು ಭಾಗಗಳು ಮತ್ತು ಭಾರತದ ಪರ್ಯಾಯ ದ್ವೀಪದ ಪಕ್ಕದ ಪ್ರದೇಶಗಳು ಮತ್ತು ಈಶಾನ್ಯ ಭಾರತದ ದಕ್ಷಿಣ ಭಾಗಗಳಲ್ಲಿ ಸಾಮಾನ್ಯ ಅಥವಾ ಸಾಮಾನ್ಯಕ್ಕಿಂತ ಕಡಿಮೆ ತಾಪಮಾನವನ್ನು ಅನುಭವಿಸುವ ಸಾಧ್ಯತೆಯಿದೆ.

ಮುಂಗಾರು ಆರಂಭದ ಬಗ್ಗೆ ಮಾತನಾಡಿದ ಮಹಾಪಾತ್ರ, ನೈಋತ್ಯ ಮುಂಗಾರು ಮೇ 14 ಮತ್ತು 16 ರ ನಡುವೆ ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳನ್ನು ತಲುಪುವ ನಿರೀಕ್ಷೆಯಿದೆ ಎಂದು ಹೇಳಿದರು. ಸಮಭಾಜಕ ಪೆಸಿಫಿಕ್ ಮೇಲಿನ ಎಲ್‌ನಿನೋ ದಕ್ಷಿಣ ಆಂದೋಲನ, **ENSO** ತಟಸ್ಥ ಪರಿಸ್ಥಿತಿಗಳು ಕ್ರಮೇಣ ಎಲ್ ನಿನೋ ಕಡೆಗೆ ವಿಕಸನಗೊಳ್ಳುತ್ತಿವೆ ಎಂದು ಐಎಂಡಿ ಹೇಳಿದೆ, ಇದು ಮಧ್ಯ ಪೆಸಿಫಿಕ್ ಮಹಾಸಾಗರದಲ್ಲಿ ನೀರಿನ ಆವರ್ತಕ ತಾಪಮಾನ ಏರಿಕೆಯನ್ನು ಸೂಚಿಸುತ್ತದೆ.

## ನಿತ್ಯ ಪಂಚಾಂಗ 3.05.2026 ಭಾನುವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ**

**ವೈಶಾಖ ಬಹುಳ, ಬಿದಿಗೆ, ಅನುರಾಧ ನಕ್ಷತ್ರ, ನಾರದ ಜಯಂತಿ, ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನ, ವಿಶ್ವ ಅಸ್ತಮಾ ದಿನ, ವಿಶ್ವ ನಗೆ ದಿನ, ಬಸವಾಪಟ್ಟಣ ಚಂದ್ರಶೇಖರ ಪುಣ್ಯತಿಥಿ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಆತ್ಮನಿರ್ಭರ ಭಾರತಕ್ಕೆ ಬಲ ನೀಡುವ ಸಂದೇಶ: ಸಂಸದ ಡಾ. ಸಿ.ಎನ್. ಮಂಜುನಾಥ್

**ಬೆಂಗಳೂರು, ಮೇ 2:** ಇಂದು ಭಾರತೀಯ ಜನತಾ ಪಾರ್ಟಿ, ಬೆಂಗಳೂರು ದಕ್ಷಿಣ ಜಿಲ್ಲೆ ಹಾಗೂ ಆನೇಕಲ್ ಮಂಡಲದ ವತಿಯಿಂದ ಜಿಗಣಿಯ ಎಸ್–ವ್ಯಾಸ ಯೋಗ ವಿಶ್ವವಿದ್ಯಾಲಯ ಮತ್ತು ಆರೋಗ್ಯಧಾಮದಲ್ಲಿ ಆಯೋಜಿಸಲಾದ ಪ್ರಶಿಕ್ಷಣ ಮಹಾಭಿಯಾನ 2026 ಸಮಾರೋಪ ಸಮಾರಂಭದಲ್ಲಿ ಜನಪ್ರಿಯ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ.ಸಿ.ಎನ್.ಮಂಜುನಾಥ್ ಅವರು ಭಾಗವಹಿಸಿ, ಕೇಂದ್ರ ಸರ್ಕಾರದ ಸಾಧನೆಗಳು ಮತ್ತು ದೇಶದ ಅಭಿವೃದ್ಧಿ ದಿಕ್ಕಿನ ಬಗ್ಗೆ ದಿಟ್ಟ ದೃಷ್ಟಿಕೋನದೊಂದಿಗೆ ಸಮಗ್ರವಾಗಿ ವಿವರಿಸಿದರು.

ಅವರು ತಮ್ಮ ಭಾಷಣದಲ್ಲಿ, ಜಾಗತಿಕ ಸಂಕಷ್ಟಗಳ ನಡುವೆಯೂ ದೇಶವನ್ನು ಸ್ಥಿರವಾಗಿ ಮುನ್ನಡೆಸುತ್ತಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವ, ಬಲಿಷ್ಠ ನಿರ್ಧಾರ ಸಾಮರ್ಥ್ಯ ಹಾಗೂ ವಿಶಿಷ್ಟ ರಾಜತಾಂತ್ರಿಕ ನೈಪುಣ್ಯವನ್ನು ವಿಶೇಷವಾಗಿ ಪ್ರಶಂಸಿಸಿದರು.




ಜಾಗತಿಕ ಇಂಧನ ಸಂಕಷ್ಟಗಳ ನಡುವೆಯೂ ಸಾಮಾನ್ಯ ಜನರ ಮೇಲೆ ಹೊರೆ ಬೀಳದಂತೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ನಿಯಂತ್ರಣದಲ್ಲಿಟ್ಟುಕೊಂಡು, 1.4 ಲಕ್ಷ ಕೋಟಿ ನಷ್ಟವನ್ನು ಸರ್ಕಾರವೇ ಹೊತ್ತುಕೊಂಡಿರುವುದು ಜನಪರ ಆಡಳಿತದ ಉಜ್ವಲ ಉದಾಹರಣೆ ಎಂದು ಅವರು ಹೇಳಿದರು. ರೈತರ ಕಲ್ಯಾಣಕ್ಕಾಗಿ ಪ್ರಧಾನಮಂತ್ರಿ ಕಿಸಾನ್ ಯೋಜನೆ, ಬೆಳೆ ಭದ್ರತೆಗೆ ಫಸಲ್ ಭೀಮಾ ಯೋಜನೆ, ಸೌರಶಕ್ತಿ ಉತ್ತೇಜನಕ್ಕೆ ವಿವಿಧ ಯೋಜನೆಗಳು ಸೇರಿದಂತೆ ಅನೇಕ ಜನಪರ ಕಾರ್ಯಕ್ರಮಗಳು ದೇಶದ ಆರ್ಥಿಕ ಹಾಗೂ ಸಾಮಾಜಿಕ ಬಲವರ್ಧನಕ್ಕೆ ಪ್ರಮುಖ ಪಾತ್ರವಹಿಸುತ್ತಿವೆ ಎಂದು ತಿಳಿಸಿದರು.

ಭಾರತವು ಇಂದು ಜಾಗತಿಕ ವೇದಿಕೆಯಲ್ಲಿ ತನ್ನದೇ ಆದ ಪ್ರಭಾವಿ ಸ್ಥಾನವನ್ನು ಪಡೆದುಕೊಂಡಿದ್ದು, ವಿಶೇಷವಾಗಿ ರಕ್ಷಣಾ ಕ್ಷೇತ್ರದಲ್ಲಿ ಆತ್ಮನಿರ್ಭರತೆಯತ್ತ ಮಹತ್ವದ ಹೆಜ್ಜೆ ಇಟ್ಟಿದೆ. ದೇಶದ ರಕ್ಷಣಾ ಸಾಮಗ್ರಿಗಳಲ್ಲಿ ಸುಮಾರು 80% ತಯಾರಿಕೆ ದೇಶದಲ್ಲೇ ನಡೆಯುತ್ತಿದ್ದು, ತೇಜಸ್ ಯುದ್ಧ ವಿಮಾನಗಳ ತಯಾರಿಕೆಗಾಗಿ 67,000 ಕೋಟಿ ಮೊತ್ತವನ್ನು ಬೆಂಗಳೂರಿನ ಊಂಐ ಗೆ ನೀಡಿರುವುದು 'ಮೇಕ್ ಇನ್ ಇಂಡಿಯಾ' ಕನಸಿನ ಸಾಕಾರ ರೂಪವಾಗಿದೆ ಎಂದು ಸಂಸದರು ವಿವರಿಸಿದರು.

ಖರೀದಿ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸೆಮಿಕಂಡಕ್ಟರ್ ಹೂಡಿಕೆಗಳು, ಗ್ರಾಮೀಣ ಅಭಿವೃದ್ಧಿ, ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರಗಳಿಗೆ ಭಾರೀ ಅನುದಾನಗಳನ್ನು ನೀಡುವ ಮೂಲಕ ಆತ್ಮನಿರ್ಭರ ಹಾಗೂ ವಿಕಸಿತ ಭಾರತದ ದಿಸೆಯಲ್ಲಿ ದೇಶ ದೃಢ ಹೆಜ್ಜೆ ಹಾಕುತ್ತಿದೆ ಎಂದು ಅವರು ಹೇಳಿದರು.

ಮಹಿಳಾ ಸಬಲೀಕರಣ, ಯುವಶಕ್ತಿ ಅಭಿವೃದ್ಧಿ ಹಾಗೂ ಸಮಾಜದ ಎಲ್ಲಾ ವರ್ಗಗಳ ಸಮಗ್ರ ಪ್ರಗತಿಯನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ಸರ್ಕಾರ ಕಾರ್ಯನಿರ್ವಹಿಸುತ್ತಿದ್ದು, ಇದು ಭಾರತದ ಭವಿಷ್ಯವನ್ನು ಇನ್ನಷ್ಟು ದೀಪ್ತಿಮಂತವಾಗಿಸುತ್ತಿದೆ ಎಂದು ತಿಳಿಸಿದರು.

2047ರೊಳಗೆ ವಿಕಸಿತ ಭಾರತ ನಿರ್ಮಾಣ ನಮ್ಮೆಲ್ಲರ ಸಂಯುಕ್ತ ಜವಾಬ್ದಾರಿ ಎಂದು ಕರೆ ನೀಡಿ, ಪ್ರತಿಯೊಬ್ಬ ಕಾರ್ಯಕರ್ತರೂ ಸಂಘಟನೆಯ ಬಲವರ್ಧನೆ ಹಾಗೂ ದೇಶಭಕ್ತಿ ಮೌಲ್ಯಗಳನ್ನು ಬೆಳೆಸುವ ದಿಕ್ಕಿನಲ್ಲಿ ಶ್ರಮಿಸಬೇಕು ಎಂದು ಪ್ರೇರಣಾದಾಯಕ ಸಂದೇಶ ನೀಡಿದರು. ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಬಿಜೆಪಿ ಅಧ್ಯಕ್ಷರು ಹಾಗೂ ಶಾಸಕರು ಸಿ.ಕೆ. ರಾಮಮೂರ್ತಿ, ಆನೇಕಲ್ ಬಿಜೆಪಿ ಮುಖಂಡ ಹುಲ್ಲಹಳ್ಳಿ ಶ್ರೀನಿವಾಸ್, ಮಂಡಲ ಬಿಜೆಪಿ ಅಧ್ಯಕ್ಷ ಅಶೋಕ್ ರೆಡ್ಡಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಶ್ವೇತಾ ರಾಘವೇಂದ್ರ ಹಾಗೂ ಮಾಜಿ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯಿತಿ ಸದಸ್ಯರು, ಮಂಡಲ ಮತ್ತು ಮೋರ್ಚಾ ಪದಾಧಿಕಾರಿಗಳು, ಮಹಿಳಾ ಮುಖಂಡರು ಹಾಗೂ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

# ಬೆಲೆ ಏರಿಸಿ ಬಡವರ ವಿರೋಧಿ ನೀತಿ ಪ್ರದರ್ಶಿಸಿದ ಕೇಂದ್ರ ಸರ್ಕಾರ: ಖಂಡ್ರೆ ಆಕ್ರೋಶ



**ಬೆಂಗಳೂರು, ಮೇ 2:** ಪಂಚ ರಾಜ್ಯಗಳ ಮತದಾನ ಮುಗಿದ ಕೂಡಲೇ ವಾಣಿಜ್ಯ ಬಳಕೆ ಅಡುಗೆ ಸಿಲಿಂಡರ್ ಹಾಗೂ ಆಟೋಗ್ಯಾಸ್ ದರ ಹೆಚ್ಚಳ ಮಾಡುವ ಮೂಲಕ ಕೇಂದ್ರ ಸರ್ಕಾರ ತನ್ನ ಬಡವರ ವಿರೋಧಿ ನೀತಿಯನ್ನು ಮತ್ತೊಮ್ಮೆ ಪ್ರದರ್ಶಿಸಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಖಂಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾರ್ಚ್ 1ರಿಂದ ವಾಣಿಜ್ಯ ಅಡುಗೆ ಅನಿಲ ಸಿಲಿಂಡರ್ ದರ ಸುಮಾರು 1300 ರೂ. ಹೆಚ್ಚಳವಾಗಿದೆ. ಹೋಟೆಲ್ ಮಾಲೀಕರು ಅನಿವಾರ್ಯವಾಗಿ ಊಟ, ತಿಂಡಿ, ಕಾಫಿ, ಟೀ ದರ ಹೆಚ್ಚಳ ಮಾಡುತ್ತಾರೆ. ಇದರ ಹೊರೆ ಶ್ರೀಸಾಮಾನ್ಯನ ಮೇಲೆ ಬೀಳಲಿದೆ. ಮತದಾನ ಮುಗಿದ ಕೂಡಲೇ ಕೇಂದ್ರ ಬಿಜೆಪಿ ಸರ್ಕಾರ ಬಡ, ಮಧ್ಯಮವರ್ಗದವರ ಬದುಕನ್ನು ದುರ್ಬರ ಮಾಡಲು ಹೊರಟಿದೆ ಎಂದು ಹೇಳಿದ್ದಾರೆ.

ಮಧ್ಯಪ್ರಾಚ್ಯದ ಸಂಘರ್ಷದ ಹಿನ್ನೆಲೆಯಲ್ಲಿ ಸಮರ್ಪಕವಾಗಿ ಆಡುಗೆ ಅನಿಲ ಪೂರೈಕೆಯಾಗದೆ ಈಗಾಗಲೇ ಹಲವು ಹೋಟೆಲ್‌ಗಳು ಬಂದ್ ಆಗಿದ್ದು, ಕಾರ್ಮಿಕರು ಬೀದಿಗೆ ಬಿದ್ದಿದ್ದಾರೆ. ಈ ಸನ್ನಿವೇಶದಲ್ಲಿ 993 ರೂ. ಪ್ರತಿ ಸಿಲಿಂಡರ್ ಗೆ ಹೆಚ್ಚಳ ಮಾಡುವ ಮೂಲಕ ಕಾರ್ಮಿಕ ದಿನದಂದು ಕೇಂದ್ರ ಸರ್ಕಾರ ತನ್ನ ಕಾರ್ಮಿಕ ವಿರೋಧಿ ನೀತಿ ಪ್ರದರ್ಶಿಸಿದೆ ಎಂದೂ ತಿಳಿಸಿದ್ದಾರೆ.

ಸರತಿ ಸಾಲಲ್ಲಿ ನಿಂತರೂ ಸಿ.ಎನ್.ಜಿ. ಅನಿಲ ಸಿಗದೆ ತತ್ತರಿಸಿರುವ ಆಟೋ ಚಾಲಕರ ಮೇಲೂ ಕೇಂದ್ರ ಸರ್ಕಾರ ಗದಾ ಪ್ರಹಾರ ಮಾಡಿದೆ. ಯುಪಿಎ ಕಾರ್ಯಕಾಲದಲ್ಲಿ ಅಡುಗೆ ಅನಿಲ ದರ 10–15 ರೂ ಹೆಚ್ಚಳವಾದರೆ, ರೂಪಾಯಿ ಮೌಲ್ಯ ಡಾಲರ್ ಎದುರು ಕೆಲವೇ ಪೈಸೆ ಕುಸಿತವಾದರೂ ಬೊಬ್ಬೆ ಹೊಡೆಯುತ್ತಿದ್ದ ಬಿಜೆಪಿ ನಾಯಕರು ಈಗ ಬಾಯಿಗೆ ಬೀಗ ಹಾಕಿಕೊಂಡಿದ್ದಾರೆ. ಅವರು ಈಗ ತಮ್ಮ ತಾಕತ್ತು ಪ್ರದರ್ಶಿಸಲಿ, ಪ್ರಧಾನಿ ನರೇಂದ್ರ ಮೋದಿ ದುರಾಡಳಿತದ ವಿರುದ್ಧ ಮಾತನಾಡಲಿ ಎಂದು ಸವಾಲು ಹಾಕಿದ್ದಾರೆ.



ಕರ್ನಾಟಕ ರಾಜ್ಯ ತಿಗಳರ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ನೇಮಕಗೊಂಡಿರುವ ಕೋಲಾರದ ಎಲ್.ಎ. ಮಂಜುನಾಥ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶಪತ್ರ ನೀಡಿ ಅಭಿನಂದಿಸಿದ ಸಂದರ್ಭ. ಸಚಿವರಾದ ಜಮೀರ್ ಅಹಮದ್ ಖಾನ್, ದಿನೇಶ್ ಗುಂಡೂರಾವ್, ವೆಂಕಟೇಶ್ ಈ ಸಂದರ್ಭದಲ್ಲಿ ಹಾಜರಿದ್ದರು.

# ದೇಶದ ಆರ್ಥಿಕ ಸ್ಥಿತಿ ಸುಭದ್ರವಾಗಿರುವಾಗ ದರ ಹೆಚ್ಚಿಸುವ ಅಗತ್ಯವೇನಿತ್ತು?

### ಜನರ ಮೇಲೆ ಹೆಚ್ಚುವರಿ ಹೊರೆ ಹಾಕುವುದು ಸರಿಯಲ್ಲ: ಸಚಿವ ಡಾ.ಜಿ. ಪರಮೇಶ್ವರ್



**ಬೆಂಗಳೂರು, ಮೇ 2:** ದೇಶದ ಆರ್ಥಿಕ ಸ್ಥಿತಿ ಬಲವಾಗಿದೆ ಎಂದು ಪ್ರಧಾನಮಂತ್ರಿ, ಹಣಕಾಸು ಸಚಿವರನ್ನು ಒಳಗೊಂಡು ಅನೇಕ ನಾಯಕರು ಹೇಳುತ್ತಿರುವ ಸಂದರ್ಭದಲ್ಲಿ, ಈಗ ದರಗಳನ್ನು ಹೆಚ್ಚಿಸುವ ಅಗತ್ಯವೇನಿತ್ತು. ಜನರ ಮೇಲೆ ಹೆಚ್ಚುವರಿ ದರ ಏರಿಕೆಯ ಭಾರ ಹಾಕುವುದು ಸರಿಯಲ್ಲ ಎಂದು ಗೃಹಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ.

ಎಲ್‌ಪಿಜಿ ದರ ಏರಿಕೆ ಕುರಿತು ಮಾಧ್ಯಮಗಳ ಜತೆ ಮಾತನಾಡಿದ ಅವರು, ಈಗಾಗಲೇ ಎಲ್ಲಾ ವಸ್ತುಗಳ ಬೆಲೆ ಏರಿಕೆಯಿಂದ ಸಾಮಾನ್ಯ ಜನತೆ ತತ್ತರಿಸಿ ಹೋಗಿದ್ದಾರೆ, ಜೀವನ ಕಷ್ಟವಾಗುತ್ತಿದೆ, ಅಂತಹ ಸಂದರ್ಭದಲ್ಲಿ ವಾಣಿಜ್ಯ ಬಳಕೆ ಸಿಲಿಂಡರ್ ಬೆಲೆ ಹೆಚ್ಚು ಮಾಡುವ ಅವಶ್ಯಕತೆಯಿರಲಿಲ್ಲ. ಮಧ್ಯಪ್ರಾಚ್ಯದಲ್ಲಿ ಯುದ್ಧ ಪ್ರಾರಂಭವಾದಾಗಿನಿಂದ ಬಹಳಷ್ಟು ತೊಂದರೆಯಾಗಿದೆ ಎಂದು ಕೇಂದ್ರ ಸರ್ಕಾರ ಹೇಳುತ್ತಿದೆ. ಆದರೆ ಈಗ ಬೆಲೆ ಹೆಚ್ಚಳ ಮಾಡಬಾರದಾಗಿತ್ತು. ಆದರೆ ದೇಶದ ಆರ್ಥಿಕತೆ ಉತ್ತಮವಾಗಿದೆ, ಹಣದುಬ್ಬರ ನಿಯಂತ್ರಿಸಲು, ಸಂಕಷ್ಟ ನಿಭಾಯಿಸುವ ಶಕ್ತಿಯಿದೆ, ಆರ್ಥಿಕ ಸ್ಥಿತಿ ಸುಭದ್ರವಾಗಿದೆ ಎಂದು ಪ್ರಧಾನ ಮಂತ್ರಿಗಳೂ ಹೇಳುತ್ತಾರೆ, ಕೇಂದ್ರ ಹಣಕಾಸು ಸಚಿವರು ಕೂಡ ಹೇಳುತ್ತಾರೆ.

ಹೀಗಿರುವಾಗ ಇಂತಹ ಸಂದರ್ಭದಲ್ಲಿ ಸರ್ಕಾರ ಪರಿಸ್ಥಿತಿ ನಿಭಾಯಿಸಿ ತೋರಿಸಬೇಕು ಎಂದಿದ್ದಾರೆ.

ತೈಲದ ದರ ಬ್ಯಾರಲ್ ಗೆ ದರ ಹೆಚ್ಚಳವಾಗಿದ್ದರೆ ಅದನ್ನು ತಡೆದುಕೊಳ್ಳುವ ಶಕ್ತಿ ತೋರಿಸಬೇಕು, ಅದನ್ನು ಬಿಟ್ಟು ಜನಸಮುದಾಯಕ್ಕೆ ಹೊರೆಯಾಗುವ ರೀತಿಯಲ್ಲಿ ಅಗತ್ಯ ವಸ್ತುಗಳ ಬೆಲೆ ಹೆಚ್ಚಳ ಮಾಡುವುದು ಸರಿಯಲ್ಲ ಎಂದರು.ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರವಿದ್ದಾಗ ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೆಲೆ ಹೆಚ್ಚಳವಾದಾಗ ದರ ಏರಿಕೆ ಮಾಡುವುದು ಅನಿವಾರ್ಯ ಎಂದು ನಾವು ಹೇಳುತ್ತಿದ್ದಾಗ ಬಿಜೆಪಿಯವರು ಟೀಕೆ ಮಾಡುತ್ತಿದ್ದರು. ಈಗ ಅವರೇನು ಮಾಡುತ್ತಿದ್ದಾರೆ ಎಂದು ಪರಮೇಶ್ವರ್ ಕೇಳಿದರು.

### ಸಿಎಂ ಆಗುವ ಡಿಕೆಶಿ ಆಸೆಗೆ ಸಚಿವ ಡಾ.ಪರಮೇಶ್ವರ್ ಬೆಂಬಲ

ಕರ್ನಾಟಕ ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಸ್ಥಾನದ ಪೈಪೋಟಿ ತೀವ್ರಗೊಂಡಿರುವ ನಡುವೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಿಎಂ ಆಗುವ ಆಕಾಂಕ್ಷೆಯನ್ನು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಮುಕ್ತವಾಗಿ ಬೆಂಬಲಿಸಿದ್ದಾರೆ. ಡಿ.ಕೆ. ಶಿವಕುಮಾರ್ ಅವರನ್ನು "ಉತ್ತಮ ಸ್ನೇಹಿತ" ಎಂದು ಬಣ್ಣಿಸಿದ ಪರಮೇಶ್ವರ್, ಪಿಸಿಸಿ ಅಧ್ಯಕ್ಷರಾಗಿರುವ ಅವರಿಗೆ ಮುಖ್ಯಮಂತ್ರಿಯಾಗುವ ಆಸೆ ಇರುವುದು ಸಹಜ ಮತ್ತು ಅವರ ಆಕಾಂಕ್ಷೆಗೆ ಯಾರೂ ಆಕ್ಷೇಪ ವ್ಯಕ್ತಪಡಿಸಲು ಸಾಧ್ಯವಿಲ್ಲ ಎಂದು ಹೇಳುವ ಮೂಲಕ ಕಾಂಗ್ರೆಸ್ ವಲಯದಲ್ಲಿ ಹೊಸ ರಾಜಕೀಯ ಸಂಚಲನ ಮೂಡಿಸಿದ್ದಾರೆ. ಮುಖ್ಯಮಂತ್ರಿ ಸ್ಥಾನದ ಪೈಪೋಟಿ ನಡುವೆ ಕರ್ನಾಟಕದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೇಳಿಕೆ ಕುರಿತು ರಾಜ್ಯ ಸಚಿವ ಜಿ. ಪರಮೇಶ್ವರ್ ಪ್ರತಿಕ್ರಿಯಿಸಿದ್ದು, "ನಾನು ಅವರಿಗೆ ಶುಭ ಹಾರೈಸುತ್ತೇನೆ. ನಾನು ಯಾವಾಗಲೂ ಅವರಿಗೆ ಒಳ್ಳೆಯದನ್ನೇ ಬಯಸುತ್ತೇನೆ. ನಾವು ಒಳ್ಳೆಯ ಸ್ನೇಹಿತರು. ಸದಾ ಅವರಿಗೆ ಶುಭ ಕೋರಿದ್ದೇನೆ. ಅವರು ಪಿಸಿಸಿ ಅಧ್ಯಕ್ಷರು. ಸಹಜವಾಗಿಯೇ ಅವರು ಸಿಎಂ ಆಗಬೇಕೆಂಬ ಆಕಾಂಕ್ಷೆ ಹೊಂದಿರುತ್ತಾರೆ. ಅದಕ್ಕೆ ಯಾರೂ ಆಕ್ಷೇಪ ವ್ಯಕ್ತಪಡಿಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

# ಕೇಂದ್ರದ ಆರ್ಥಿಕ ದಿವಾಳಿತನ, ಜನರ ಬದುಕಿನ ಮೇಲೆ ಮೋದಿ ಸರ್ಕಾರದಿಂದ ನೇರ ದಾಳಿ

### ಬೆಲೆ ಏರಿಕೆ ಬಗ್ಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿಕೆಗೆ ಬಿ.ಕೆ. ಹರಿಪ್ರಸಾದ್ ಟೀಕೆ

**ಬೆಂಗಳೂರು, ಏ.2:** ಎಲ್.ಪಿ.ಜಿ ಗ್ಯಾಸ್ ಬೆಲೆ ಏರಿಸುವುದು ಕಂಪನಿಗಳೇ ಹೊರತು ಕೇಂದ್ರ ಸರ್ಕಾರವಲ್ಲ ಎನ್ನುವ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಗೆ ಆಡಳಿತದ ಅಜ್ಞಾನವೋ ಅಥವಾ ಜನರನ್ನು ಮೂರ್ಖರನ್ನಾಗಿಸುವ ವ್ಯರ್ಥ ಪ್ರಯ2ತ್ನವೋ ಗೊತ್ತಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಬಿ,ಕೆ. ಹರಿಪ್ರಸಾದ್ ಟೀಕಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ದೇಶದ ಬಡ–ಮಧ್ಯಮ ವರ್ಗದ ಜನರ ಬದುಕು ಬೆಂಕಿಯಲ್ಲಿ ಕರಗುತ್ತಿದೆ. ಬೆಲೆ ಏರಿಕೆಯ ಬಿಸಿ ಬಡಜನರ ದೈನಂದಿನ ಜೀವನದ ಮೇಲೆ ಬರೆ ಎಳೆಯುತ್ತಿದೆ. ಅಡುಗೆ ಅನಿಲದ ಬೆಲೆ ಏರಿಕೆಯಿಂದ ಕುಟುಂಬಗಳೇ ನಲುಗಿ ಹೋಗುತ್ತಿವೆ. ಹೋಟೆಲ್‌ಗಳಲ್ಲಿ ಊಟದ ಬೆಲೆ ಗಗನಕ್ಕೇರುವ ಪರಿಸ್ಥಿತಿ ಎದುರಾಗಿದೆ. ಇದು ಕೇವಲ ಕೇಂದ್ರ ಸರ್ಕಾರದ ಆರ್ಥಿಕ ದಿವಾಳಿತನ ಮಾತ್ರವಲ್ಲ, ಜನರ ದಿನನಿತ್ಯದ ಬದುಕಿನ ಮೇಲೆ ಪ್ರಧಾನಿ ನರೇಂದ್ರ ಮೋದಿ ಸರ್ಕಾರ ನಡೆಸುತ್ತಿರುವ ನೇರ ದಾಳಿಯಾಗಿದೆ ಎಂದು ಟೀಕಿಸಿದ್ದಾರೆ.

ಜೋಶಿ ಅವರೇ ಯಾವ ಕಂಪನಿಗಳು ಗ್ಯಾಸ್ ಸಿಲಿಂಡರ್ ಬೆಲೆ ಏರಿಸಿವೆ ಅಂತ ಸ್ಪಷ್ಟಪಡಿಸುತ್ತೀರಾ? ಇಂಡಿಯನ್ ಆಯಿಲ್ ಕಾರ್ಪೊರೇಷನ್, ಭಾರತ್ ಪೆಟ್ರೋಲಿಯಂ, ಎಚ್.ಪಿ.ಸಿ.ಎಲ್ ಇವೆಲ್ಲವೂ ಸರ್ಕಾರದ ನಿಯಂತ್ರಣದಲ್ಲಿಲ್ಲವೇ. ಈ ಕಂಪನಿಗಳ ಮಂಡಳಿ ನೇಮಕಾತಿ, ನೀತಿ ಮಾರ್ಗದರ್ಶನ ಇವೆಲ್ಲದರ ಮೇಲೆ ಸರ್ಕಾರದ ಹಿಡಿತ ಇಲ್ಲವೇ. ಎಲ್.ಪಿ.ಜಿ ದರದಲ್ಲಿ ಅಬಕಾರಿ ಸುಂಕ, ಸಬ್ಸಿಡಿ ಕಡಿತ? ಇವೆಲ್ಲವೂ ಕೇಂದ್ರದ ನಿರ್ಧಾರಗಳಲ್ಲವೇ? ಎಂದು ಬಿ.ಕೆ. ಹರಿಪ್ರಸಾದ್ ಪ್ರಶ್ನಿಸಿದ್ದಾರೆ.

ಸರ್ಕಾರಕ್ಕೆ ಅಧಿಕಾರ ಇಲ್ಲ ಎಂದಾದರೆ, ಈ ದೇಶದ ಆಡಳಿತ ಯಾರ ಕೈಯಲ್ಲಿದೆ. ನರೇಂದ್ರ ಮೋದಿಯ ಸ್ನೇಹಿತರಾಗಿರುವ ಅದಾನಿ ಅಂಬಾನಿಗಳ ಪೆಟ್ರೋಲ್ ಕಂಪನಿಗಳು ಬೆಲೆ ಏರಿಕೆಯನ್ನು ನಿರ್ಧರಿಸುತ್ತಿವೆಯೇ. ಅಥವಾ ಇಡೀ ದೇಶದ ಆಯಿಲ್ ಸಂಸ್ಥೆಗಳನ್ನೇ ಕಾರ್ಪೋರೇಟ್ ಕಂಪನಿಗಳಿಗೆ ಮಾರಿದ್ದೀರಾ. ಯುಪಿಎ ನೇತೃತ್ವದ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಪೈಸೆಗಳ ಲೆಕ್ಕದಲ್ಲಿ ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆಯಾಗುತ್ತಿತ್ತು, ನರೇಂದ್ರ ಮೋದಿ ಕಾಲದಲ್ಲಿ ಸಾವಿರ ರೂಗಳ ಲೆಕ್ಕದಲ್ಲಿ ಏರಿಕೆಯಾಗುತ್ತಿದೆ. ಇದೇ ಅಲ್ಲವೇ ಬಿಜೆಪಿ ಸರ್ಕಾರದ ಮಾಸ್ಟರ್ ಸ್ಟ್ರೋಕ್.. ಪೆಟ್ರೋಲ್–ಡಿಸೇಲ್ ಬೆಲೆ ನೂರರ ಗಡಿ ದಾಟಿದೆ, ಗ್ಯಾಸ್ ಸಿಲಿಂಡರ್ ಬೆಲೆ ಮೂರು ಸಾವಿರ ದಾಟಿದೆ, ಡಾಲರ್ ಎದುರು ರೂಪಾಯಿ ಮೌಲ್ಯ ಸಾರ್ವಕಾಲಿಕ ನೂರಕ್ಕೆ ಕುಸಿದಿದೆ.



### ರಾಹುಲ್‌ಮಾತಿಗೆ ಹರಿಪ್ರಸಾದ್ ಬೆಂಬಲ

ದೇಶದ ಜನರಿಗೆ ಪ್ರಧಾನಿ ನರೇಂದ್ರ ಮೋದಿಯ ಮಾಸ್ಟರ್ ಸ್ಟ್ರೋಕ್‌ಗಳು ಒಂದಾ, ಎರಡಾ. ಇದು ಸ್ಯಾಂಪಲ್ ಅಷ್ಟೇ ಪಿಚ್ಚರ್ ಅಭಿ ಬಾಕಿ ಹೈ..! ಪಂಚ ರಾಜ್ಯಗಳ ಚುನಾವಣೆ ಮುಗಿದ ಕೂಡಲೇ ಭಾರಿ ಬೆಲೆ ಏರಿಕೆಯ ಎಚ್ಚರಿಕೆಯನ್ನು ಲೋಸಕಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ಎಚ್ಚರಿಸಿದ್ದರು. ಹಲವಾರು ಬಾರಿ ದೇಶ ಎದುರಿಸಬಹುದಾದ ಸವಾಲುಗಳ ಬಗ್ಗೆ ಹಾಗೂ ಬೆಲೆ ಏರಿಕೆ ಬಿಸಿ ಭಾರಿ ಪ್ರಮಾಣದಲ್ಲಿ ತಟ್ಟಲಿದೆ ಎಂದು ಎಚ್ಚರಿಸುತ್ತಲೇ ಇದ್ದಾರೆ. ಆದರೆ ಕುಹಕ, ವ್ಯಂಗ್ಯ ಮಾಡುವ ಬಿಜೆಪಿಯ ಭಕ್ತರು ಹಾಗೂ ಪ್ರಧಾನಿಗಳು ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲೇ ಇಲ್ಲ. ಅದರ ಪರಿಣಾಮವಾಗಿ ಇಂದು ದೇಶ ತತ್ತರಿಸುತ್ತಿದೆ. ಜನರ ಬದುಕು ಕುಸಿಯುತ್ತಿರುವಾಗ, ಹೊಣೆಗೇಡಿತನದ ಹೇಳಿಕೆಗಳಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಜನರು ನೋಡುತ್ತಿದ್ದಾರೆ, ನೆನಪಿಟ್ಟುಕೊಳ್ಳುತ್ತಿದ್ದಾರೆ ಎಂದು ಹರಿಪ್ರಸಾದ್ ಟೀಕಿಸಿದ್ದಾರೆ.

# ಗೃಹಬಳಕೆ ಅನಿಲ ದರ ಏರಿಕೆಯೂ ನಿಶ್ಚಿತ: ದಿನೇಶ್ ಗುಂಡೂರಾವ್



**ಬೆಂಗಳೂರು, ಮೇ 2:** ಊಹಿಸಿದಂತೆಯೇ ಪಂಚರಾಜ್ಯ ಚುನಾವಣೆ ಬಳಿಕ ಕೇಂದ್ರ ಸರಕಾರ ಬೆಲೆಯೇರಿಕೆಯ ಛಾಟಿ ಬೀಸಲು ಪ್ರಾರಂಭಿಸಿದೆ. ಕಮರ್ಷಿಯಲ್ ಸಿಲಿಂಡರ್ ಬೆಲೆಯನ್ನು ಏಕಾಏಕಿ 993 ರೂ. ಏರಿಸುವ ಮೂಲಕ ಮರ್ಮಾಘಾತ ನೀಡಿದೆ. ಚುನಾವಣೆ ಮುಗಿದ ಕೂಡಲೇ ಬೆಲೆಯೇರಿಕೆ ನಿರೀಕ್ಷಿತವಾಗಿತ್ತು. ಆದರೆ ಒಂದೇ ಭಾರಿ 993 ರೂ. ಹೆಚ್ಚಳ ಮಾಡಿರುವುದು ಅನಿರೀಕ್ಷಿತದ ಜೊತೆಗೆ ಆಘಾತ ತಂದಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ವಾಣಿಜ್ಯ ಬೆಲೆ ಏರಿಸಿರುವುದು ಕೇವಲ ಟ್ರೈಲರ್ ಮಾತ್ರ. ಇದು 'ಮುಂದೈತೆ ಮಾರಿಹಬ್ಬ' ಎಂಬುದರ ಅಪಾಯದ ಮುನ್ಸೂಚನೆ. ಇನ್ನು ಕೆಲವೇ ದಿನಗಳಲ್ಲಿ ಪೆಟ್ರೋಲ್, ಡೀಸೆಲ್ ಹಾಗೂ ಗೃಹಬಳಕೆ ಸಿಲಿಂಡರ್ ಬೆಲೆ ಭಾರಿ ಪ್ರಮಾಣದಲ್ಲಿ ಹೆಚ್ಚಳ ಮಾಡುವುದು ಖಡಾಖಂಡಿತ. ಯಾಕೆಂದರೆ ಸದ್ಯಕ್ಕೆ ಯಾವುದೇ ಚುನಾವಣೆಯಿಲ್ಲ ಎಂದವರು ಟೀಕಿಸಿದ್ದಾರೆ. ವಾಣಿಜ್ಯ ಬೆಲೆಯೇರಿಕೆಯಿಂದ ಬೆಂಗಳೂರಿನಲ್ಲಿ ಒಂದು ಸಿಲಿಂಡರ್ ಬೆಲೆ 3152 ರೂ.ಗಳಿಗೆ ತಲುಪಿದೆ. ಇದರಿಂದ ಹೋಟೆಲ್ ಹಾಗೂ ರೆಸ್ಟೋರೆಂಟ್ ಉದ್ಯಮಗಳಿಗೆ ದೊಡ್ಡ ಹೊಡೆತ ಬೀಳಲಿದೆ. ವಿಪರ್ಯಾಸವೆಂದರೆ ಬೆಲೆಯೇರಿಕೆಯ ಹೊಡೆತ ನೇರವಾಗಿ ಬೀಳುವುದು ಹೋಟೆಲ್ ಗ್ರಾಹಕರ ಮೇಲೆ ಎಂದು ಹೇಳಿದ್ದಾರೆ.ಈ ಹಿಂದೆ ಸಿಲಿಂಡರ್ ಬೆಲೆಗಳು ರೂ.50 ಹಾಗೂ 100ರೂ.ಗಳ ಆಸುಪಾಸಿನಲ್ಲಿ ಹೆಚ್ಚಳವಾಗುತಿತ್ತು. ಆದರೆ ಈಗ ಒಂದೇ ಬಾರಿ 993 ರೂ.ಹೆಚ್ಚಿಸಲಾಗಿದೆ. ಇದನ್ನು ಹಗಲು ದರೋಡೆ ಅನ್ನದೆ ಇನ್ನೇನು ಹೇಳಬೇಕು. ಬಿಜೆಪಿಯವರು ಹೇಳುತ್ತಿದ್ದ ಅಚ್ಛೆದಿನ್ ಅಂದರೆ ಇದೆ ಎಂದು ಭಾವಿಸಬೇಕೇ ಎಂದು ಟೀಕಿಸಿದ್ದಾರೆ.

ಬಿಜೆಪಿಯೇತರ ಸರಕಾರ ಸ್ವಲ್ಪವೇ ಸ್ವಲ್ಪ ಬೆಲೆ ಏರಿಸಿದ್ದರೂ ಹಾದಿಬೀದಿಯಲ್ಲಿ ಬಂದು ರಂಪಮಾಡುವ ಬಿಜೆಪಿಯವರು ಮೋದಿ ಸರಕಾರದ ಬೆಲೆಯೇರಿಕೆಯ ಬಗ್ಗೆ ಬಾಯಿ ಬಿಡುವುದೇ ಇಲ್ಲ. ಇದೇನು ವಿಷಗುರು ಮೋದಿಯವರ ಮೇಲಿನ ಭಯವೋ? ಅಥವಾ ಜನ ಹೇಗಾದರೂ ಸಾಯಲಿ ಎಂಬ ಭಂಡತನವೋ ಅರ್ಥವಾಗುತ್ತಿಲ್ಲ ಎಂದು ಟೀಕಿಸಿದ್ದಾರೆ.

# ತೆಂಗಿನ ನಾರಿನ ಉತ್ಪನ್ನ ಜೈಪುರಕ್ಕೆ ರವಾನೆ

**ಬೆಂಗಳೂರು, ಮೇ 2:** ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತವು, ಗ್ರಾಮೀಣ ಮಹಿಳೆಯರಿಂದ ತಯಾರಿಸಲ್ಪಟ್ಟ ಒಟ್ಟು 6000 ಮ್ಯಾಟ್‌ಗಳನ್ನು ಹಾಗೂ ಇತರ ತೆಂಗಿನ ನಾರಿನ ಉತ್ಪನ್ನಗಳನ್ನು ಜೈಪುರಕ್ಕೆ ಸರಬರಾಜು ಮಾಡಲು ಸಿದ್ಧಪಡಿಸಿದ್ದು, ಸದರಿ ತೆಂಗಿನ ನಾರಿನ ಉತ್ಪನ್ನಗಳ ಸರಬರಾಜು ವಾಹನಕ್ಕೆ ಕರ್ನಾಟಕ ಸರ್ಕಾರದ ಮುಖ್ಯಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಶನಿವಾರ ಹಸಿರು ನಿಶಾನೆ ತೋರಿದರು. ಕಾರ್ಯಕ್ರಮವು ವಿಧಾನಸೌಧದ ಆವರಣದಲ್ಲಿ ಆಯೋಜಿಸಲಾಗಿತ್ತು.



ತೆಂಗಿನನಾರಿನ ಉತ್ಪನ್ನಗಳ ಮಾರಾಟ ಹೆಚ್ಚಿಸಲು ನಿಗಮವು ಜೈಪುರದಲ್ಲಿ Stockist cum Carrying and Forwarding ಏಜೆಂಟಾಗಿ ಅನಿಲ್ ಕುಮಾರ್ ಜೈನ್ ಇವರನ್ನು ನಿಗಮದ ಉತ್ಪನ್ನಗಳನ್ನು ಕಲ್ಪಕೃತಿ ಬ್ರ್ಯಾಂಡ್ ಹೆಸರಿನಲಿ ವಿತರಿಸಲು ನೇಮಿಸಲಾಗಿದೆ.

ಇವರು ರಾಜಸ್ಥಾನ, ದೆಹಲಿ ಮತ್ತು ಗುಜರಾತ್ ರಾಜ್ಯಗಳಲ್ಲಿ ತೆಂಗಿನ ನಾರಿನ ಉತ್ಪನ್ನಗಳ ಸರಬರಾಜು ಮತ್ತು ಮಾರಾಟ ಮಾಡಲು ಜೈಪುರದಲ್ಲಿ ದಿನಾಂಕ 09.05.2026 ರಂದು ಒಂದು ಮಳಿಗೆಯನ್ನು ಹೊಸದಾಗಿ ತೆರೆಯುತ್ತಿದ್ದಾರೆ. ಮಳಿಗೆಯ ಉದ್ಘಾಟನೆಗೆ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಶರಣಬಸಪ್ಪ ದರ್ಶನಾಪುರ, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ ಇದರ ಅಧ್ಯಕ್ಷ ನಟರಾಜ್ ಜಾನಕಿರಾಮ್ ಇವರನ್ನು ಮುಖ್ಯ ಅತಿಥಿಗಳಾಗಿ ಆಹ್ವಾನಿಸಲಾಗಿದೆ.

ಪರಿಸರ ಸಂರಕ್ಷಣೆ ಮತ್ತು ಆರ್ಥಿಕ ಅಭಿವೃದ್ಧಿಗೆ ಸಹಕಾರಿಯಾಗಿರುವ ಡಚ್‌ಮ್ಯಾಟ್, ಕಾರಿಡಾರ್ ಮ್ಯಾಟ್, ರೋಲಿಂಗ್ ಮ್ಯಾಟ್, ಜಿಯೋಟೆಕ್ಸ್‌ಟೈಲ್ಸ್, ಡೆಸ್ಕ್, ಕಾಯರ್ ಹಾಸಿಗೆ ಮತ್ತು ದಿಂಬು ನಿಜವಾದ ಹಸಿರು ಉತ್ಪನ್ನಗಳಾಗಿವೆ. ಇವುಗಳ ಉತ್ಪಾದನೆಯಲ್ಲಿ ತೊಡಗಿರುವ ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮವನ್ನು ಬೆಳೆಸಲು ನಾವೆಲ್ಲಾ ತೆಂಗಿನ ನಾರಿನ ಉತ್ಪನ್ನಗಳನ್ನು ಖರೀದಿಸಿ ಪೋಷಿಸಬೇಕಿದೆ ಎಂದು ಕ.ರಾ.ತೆಂ.ನಾ.ಅ.ನಿ.ನಿ., ವ್ಯವಸ್ಥಾಪಕ ನಿರ್ದೇಶಕರು ಸಿ. ಎನ್. ಶಿವಪ್ರಕಾಶ್ ಮನವಿ ಮಾಡಿಕೊಂಡಿ ದ್ದಾರೆ.

# ಪ್ರಸಾರ ಭಾರತಿಗೆ ಪ್ರಸೂನ್ ಜೋಶಿ ನೂತನ ಅಧ್ಯಕ್ಷ

**ನವದೆಹಲಿ, ಮೇ 2:** ಪ್ರಸಾರ ಭಾರತಿಯ ನೂತನ ಅಧ್ಯಕ್ಷರನ್ನಾಗಿ ಖ್ಯಾತ ಗೀತೆ ರಚನೆಕಾರ, ಬರಹಗಾರ ಮತ್ತು ಸಂವಹನ ತಜ್ಞ ಪ್ರಸೂನ್ ಜೋಶಿ ಅವರನ್ನು ನೇಮಿಸಲಾಗಿದೆ ಎಂದು ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಶನಿವಾರ ಆದೇಶ ಹೊರಡಿಸಿದೆ. ಸಾಹಿತ್ಯ, ಜಾಹೀರಾತು, ಸಿನಿಮಾ ಮತ್ತು ಸಾರ್ವಜನಿಕ ಸಂಪರ್ಕದಲ್ಲಿ ವ್ಯಾಪಕ ಕೊಡುಗೆಗಳನ್ನು ನೀಡಿರುವ ವಿಶಿಷ್ಟ ಸೃಜನಶೀಲ, ವೃತ್ತಿಪರ ಮತ್ತು ಪ್ರಭಾವಶಾಲಿ ಬರವಣಿಗೆ, ಸಾಂಸ್ಕೃತಿಕ ಸಂವೇದನೆಗೆ ಹೆಸರುವಾಸಿಯಾದ ಜೋಶಿ, ಸಮಕಾಲೀನ ಭಾರತೀಯ ಮಾಧ್ಯಮ ನಿರೂಪಣೆಗಳನ್ನು ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ ಎಂದು ಆದೇಶದಲ್ಲಿ ಹೇಳಲಾಗಿದೆ. ನೂತನ ಅಧ್ಯಕ್ಷ ಪ್ರಸೂನ್ ಜೋಶಿ ಅವರಿಗೆ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಅಭಿನಂದನೆ ಸಲ್ಲಿಸಿದ್ದಾರೆ. ಪ್ರಸೂನ್ ಅವರು ಜಾಹೀರಾತು, ಸಾಹಿತ್ಯ, ಕಲೆ ಮತ್ತು ಸಿನಿಮಾದಲ್ಲಿ ಪ್ರಪಂಚದಾದ್ಯಂತ ಹೆಸರುವಾಸಿಯಾದ ಅಪರೂಪದ ಸೃಜನಶೀಲ ಮನೋಭಾವದ ಸೆಲೆಬ್ರಿಟಿಯಾಗಿದ್ದಾರೆ. ಆದಾಗ್ಯೂ, ಅವರ ಹೃದಯ ಭಾರತಕ್ಕಾಗಿ ನಿಸ್ಸಂದೇಹವಾಗಿ ಬಡಿಯುತ್ತದೆ. ಜೋಶಿಯವರ ಮಾತುಗಳು ದೇಶದ ಮಣ್ಣಿನ ಪರಿಮಳವನ್ನು ಹೊತ್ತಿವೆ ಮತ್ತು ಅವರ ದೃಷ್ಟಿಕೋನವು ಭಾರತೀಯ ಸಂಸ್ಕೃತಿಯ ಕಾಲಾತೀತ ಸಾರವನ್ನು ಪ್ರತಿಬಿಂಬಿಸುತ್ತದೆ ಎಂದು ವೈಷ್ಣವ್ ಹೇಳಿದ್ದಾರೆ. ಜೋಶಿ ಅವರ ನಾಯಕತ್ವದಲ್ಲಿ ಪ್ರಸಾರ ಭಾರತಿಗೆ ಹೊಸ ಚೈತನ್ಯ ಸಿಗಲಿದೆ. ಅವರ ಮುಂದಿನ ಅವಧಿ ಸ್ಮರಣೀಯ ಮತ್ತು ಅರ್ಥಪೂರ್ಣವಾಗಿರಲಿ ಎಂದು ಅಶ್ವಿನಿ ವೈಷ್ಣವ್ ಶುಭ ಕೋರಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಬಜೆಟ್ ಘೋಷಣೆ ಜಾರಿಯಾಗದಿದ್ದರೆ ಇಲಾಖಾ ಕಾರ್ಯದರ್ಶಿಗಳೇ ಜವಾಬ್ದಾರಿ: ಸಿಎಂ ಸಿದ್ದರಾಮಯ್ಯ

## ಸಂವಿಧಾನದ ಆಶಯಗಳ ಪ್ರಕಾರ ಕರ್ತವ್ಯ ನಿರ್ವಹಿಸಿ: ಎಲ್ಲ ಇಲಾಖೆ ಕಾರ್ಯದರ್ಶಿಗಳಿಗೆ ಸೂಚನೆ



**ಬೆಂಗಳೂರು,ಮೇ.2:** 2026–27ನೇ ಬಜೆಟ್ ನಲ್ಲಿನ ಘೋಷಣೆಗಳ ಪೈಕಿ ಕೇವಲ 5 ಘೋಷಣೆಗಳ ಬಗ್ಗೆ ಮಾತ್ರ ಸರ್ಕಾರಿ ಆದೇಶ ಮಾಡಲಾಗಿದೆ. ಮೇ ತಿಂಗಳ ಒಳಗಾಗಿ ಎಲ್ಲಾ ಸರ್ಕಾರಿ ಆದೇಶಗಳನ್ನು ಜಾರಿಗೊಳಿಸಿ, ಅನುಷ್ಠಾನ ಕಾರ್ಯ ಆರಂಭಿಸಬೇಕು. ಇಲ್ಲದಿದ್ದರೆ ಆಯಾ ಕಾರ್ಯದರ್ಶಿಗಳನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದ್ದಾರೆ.

ವಿವಿಧ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳ ಸಭೆಯಲ್ಲಿ ಮಾತನಾಡಿದ ಅವರು, ಬಜೆಟ್ ನಲ್ಲಿ ಮಾಡಿರುವ ಘೋಷಣೆಗಳನ್ನು ಜಾರಿಗೊಳಿಸುವ ಕಾರ್ಯ ಅಧಿಕಾರಿಗಳದ್ದಾಗಿದೆ. ಕಳೆದ ವರ್ಷದ ಬಜೆಟ್ ನಲ್ಲಿನ 15 ಘೋಷಣೆಗಳ ಜಾರಿ ಇನ್ನೂ ಆಗಿಲ್ಲ. ಇದಕ್ಕೆ ಯಾರು ಹೊಣೆ? ಈ ವರ್ಷದ ಬಜೆಟ್ನಲ್ಲಿ 218 ಹೊಸ ಘೋಷಣೆಗಳು ಸೇರಿದಂತೆ ಒಟ್ಟಾರೆ 565 ಘೋಷಣೆಗಳನ್ನು ಮಾಡಿದ್ದೇವೆ. ಬಜೆಟ್ ನ ಎಲ್ಲಾ ಘೋಷಣೆಗಳನ್ನು ಅದೇ ವರ್ಷ ಜಾರಿಗೊಳಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ಬಜೆಟ್ ಘೋಷಣೆಗಳು ಯಾವುದೇ ಕಾರಣಕ್ಕೂ ಅನುಷ್ಠಾನಗೊಳ್ಳದೆ ಇರಬಾರದು. ಅನುಷ್ಠಾನದಲ್ಲಿನ ಪ್ರಾಯೋಗಿಕ ತೊಡಕುಗಳನ್ನು ನೇರವಾಗಿ ನನ್ನ ಅಥವಾ ಮುಖ್ಯ ಕಾರ್ಯದರ್ಶಿಯವರ ಗಮನಕ್ಕೆ ತರಬೇಕು ಎಂದರು.

ಅಧಿಕಾರಿಗಳು ಯಾವತ್ತೂ ಸರ್ಕಾರಕ್ಕೆ ತಪ್ಪು ಮಾಹಿತಿಯನ್ನು ನೀಡಬಾರದು ಹಾಗೂ ತಪ್ಪು ಹಾದಿಗೆ ಎಳೆಯಬಾರದು. ನಮ್ಮ ನಿಲುವುಗಳು, ತೀರ್ಮಾನಗಳು ಯಾವತ್ತೂ ಜನಪರವಾಗಿರಬೇಕು. ಅಧಿಕಾರಿಗಳು 30–35 ವರ್ಷಗಳ ಕಾಲ ಆಡಳಿತ ವ್ಯವಸ್ಥೆಯಲ್ಲಿದ್ದರೆ, ಜನಪ್ರತಿನಿಧಿಗಳು ಕೇವಲ 5 ವರ್ಷಗಳ ಕಾಲ ಮಾತ್ರ ಇರುತ್ತಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅಧಿಕಾರಿಗಳ ಜವಾಬ್ದಾರಿ ಹೆಚ್ಚಾಗಿದೆ. ಅಧಿಕಾರಕ್ಕೆ ಬಂದ ಬಳಿಕ ರಾಜ್ಯಮಟ್ಟದಲ್ಲಿ ಎರಡು ಜನಸ್ಪಂದನ ಸಭೆಯಲ್ಲಿ ಸ್ವೀಕರಿಸಲಾಗಿದ್ದ 15334 ಸ್ವೀಕೃತಿಗಳ ಪೈಕಿ 15295 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಬಾಕಿಯಿರುವ 45 ಅರ್ಜಿಗಳನ್ನು ವಿಲೇವಾರಿ ಮಾಡಬೇಕು ಎಂದರು.

ಸಾರ್ವಜನಿಕ ಕುಂದುಕೊರತೆ ಅಡಿ 3,27,052 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, 3,17,576 ವಿಲೇವಾರಿ ಮಾಡಲಾಗಿದೆ. 1828 ಅರ್ಜಿಗಳ ವಿಲೇವಾರಿ ನಿಗದಿತ ಕಾಲಾವಧಿ ಮುಗಿದಿದೆ. ಸಾರ್ವಜನಿಕರ ಕುಂದುಕೊರತೆಗಳನ್ನು ಸಕಾಲದಲ್ಲಿ ವಿಲೇವಾರಿ ಮಾಡದಿದ್ದರೆ ಜನರಿಗೆ ಸರ್ಕಾರದ ಮೇಲಿನ ನಂಬಿಕೆಯೇ ಹೊರಟು ಹೋಗುತ್ತದೆ. ಇದಕ್ಕೆ ಅವಕಾಶ ಮಾಡಬಾರದು. ಇದೇ ರೀತಿ ಸಕಾಲ ಅಡಿ ಸ್ವೀಕರಿಸಲಾಗುವ ಅರ್ಜಿಗಳನ್ನು ಸಹ ಸಕಾಲದಲ್ಲಿಯೇ ವಿಲೇವಾರಿ ಮಾಡಬೇಕು.

ವಿವಿಧ ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳಡಿಯಲ್ಲಿ 2025–26 ನೇ ಸಾಲಿನಲ್ಲಿ ರಾಜ್ಯ ಸರ್ಕಾರ ತನ್ನ ಪಾಲಿನ ರೂ. 22,768 ಕೋಟಿ ಬಿಡುಗಡೆ ಮಾಡಿದ್ದು, ಕೇಂದ್ರ ಸರ್ಕಾರ ರೂ. 16,729 ಕೋಟಿ ಬಿಡುಗಡೆ ಮಾಡಿದೆ. ಕೇಂದ್ರದಿಂದ ರೂ.11,367 ಕೋಟಿ ಅನುದಾನ ಬಿಡುಗಡೆಗೆ ಬಾಕಿಯಿದೆ. ಈ ಅವಧಿಯಲ್ಲಿ ಒಟ್ಟಾರೆ ರೂ.42222 ಕೋಟಿ ಲಭ್ಯ ಅನುದಾನವಿದ್ದು, ರೂ.38,236 ಕೋಟಿ ವೆಚ್ಚ ಮಾಡಲಾಗಿದೆ. ಅನುದಾನವನ್ನು ನಿಗದಿತ ಅವಧಿಯ ಒಳಗಾಗಿ ಖರ್ಚು ಮಾಡಲು ಕ್ರಮ ಕೈಗೊಳ್ಳಬೇಕು.

ಅಧಿಕಾರಿಗಳು ರಾಜಕಾರಣಿಗಳ ಓಲೈಕೆ ಮಾಡಲು ಹೋಗಬಾರದು, ಇದು ಸರ್ವಾಧಿಕಾರಕ್ಕೆ ಹಾದಿ ಮಾಡುತ್ತದೆ ಎಂದು ಅಂಬೇಡ್ಕರ್ ಅವರು ಎಚ್ಚರಿಕೆ ನೀಡಿದ್ದರು. ಅದರಂತೆ ನೀವು ಕಾನೂನಿನ ಚೌಕಟ್ಟಿನಲ್ಲಿ ಕಾರ್ಯ ನಿರ್ವಹಿಸಿ. ಸಚಿವರಿಗೆ ಕಾನೂನಿನ ವ್ಯಾಪ್ತಿಯೊಳಗೆ ಸಲಹೆಗಳನ್ನು ನೀಡಿ. ಸರ್ಕಾರಕ್ಕೆ ಒಳ್ಳೆಯ ಹೆಸರು ತರುವುದು ಕಾರ್ಯದರ್ಶಿಗಳ ಕಾರ್ಯ ಚಟುವಟಿಕೆಗಳ ಮೇಲೆ ಅವಲಂಬಿತವಾಗಿದೆ. ಆಡಳಿತಕ್ಕೆ ಇನ್ನಷ್ಟು ಚುರುಕು ಮೂಡಿಸಬೇಕು ಎಂದು ಸೂಚನೆ ನೀಡಿದರು.

### ಗುತ್ತಿಗೆಯಲ್ಲಿ ಪರಿಶಿಷ್ಟ ಜಾತಿ, ಪಂಗಡದವರಿಗೆ ಮೀಸಲಾತಿ ತಪ್ಪಿಸಲು ಅವವಾಶ ನೀಡಬೇಡಿ

**ಗುತ್ತಿಗೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಗುತ್ತಿಗೆದಾರರಿಗೆ ರೂ.2 ಕೋಟಿವರೆಗೆ ಮೀಸಲಾತಿ ಕಲ್ಪಿಸಲಾಗಿದೆ. ವಿವಿಧ ಕಾಮಗಾರಿಗಳನ್ನು ಒಟ್ಟು ಸೇರಿಸಿ ಪ್ಯಾಕೇಜ್ ಮಾಡುವ ಮೂಲಕ ಮೀಸಲಾತಿ ತಪ್ಪಿಸಲು ಅವಕಾಶ ನೀಡಬಾರದು. ಎಲ್ಲಾ ಕಾಮಗಾರಿಗಳನ್ನು ನಿಗದಿತ ಅವಧಿಯ ಒಳಗಾಗಿ ಪೂರ್ಣಗೊಳಿಸಬೇಕು. ಕಾಮಗಾರಿ ವಿಳಂಬದಿಂದ ನಿರ್ಮಾಣ ವೆಚ್ಚ ಹೆಚ್ಚಳಕ್ಕೆ ಅವಕಾಶ ಮಾಡಬಾರದು.ವರ್ಷ ಮಳೆ ಶೇ.5ರಷ್ಟು ಮಳೆ ಕಡಿಮೆಯಾಗುವ ಸಾಧ್ಯತೆಯಿದ್ದು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಮ್ಮ ವ್ಯಾಪ್ತಿಯ ಜಿಲ್ಲೆಯಲ್ಲಿನ ಕುಡಿಯುವ ನೀರಿನ ಪರಿಸ್ಥಿತಿ ಬಗ್ಗೆ ನಿರಂತರ ನಿಗಾ ವಹಿಸಬೇಕು. ಈ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಜೊತೆ ಸಭೆ ನಡೆಸಬೇಕು. ತಮ್ಮ ಉಸ್ತುವಾರಿಯಲ್ಲಿನ ಜಿಲ್ಲೆಯ ಸಮಸ್ಯೆಗಳನ್ನು ಬಗೆಹರಿಸುವುದು ಆಯಾ ಕಾರ್ಯದರ್ಶಿಗಳ ಜವಾಬ್ದಾರಿಯಾಗಿದೆ. ಯಾವುದೇ ಕಾರಣಕ್ಕೂ ಕುಡಿಯುವ ನೀರಿಗೆ ತೊಂದರೆಯಾಗಬಾರದು ಎಂದು ಸಿದ್ದರಾಮಯ್ಯ ಹೇಳಿದರು.**

**ಭರ್ತಿ ಮಾಡಿಕೊಳ್ಳಲು ಮಂಜೂರಾತಿ ನೀಡಲಾಗಿರುವ ಹುದ್ದೆಗಳ ಭರ್ತಿಗೆ ತಕ್ಷಣ ಕ್ರಮ ಕೈಗೊಳ್ಳಬೇಕು. ಆರ್ಥಿಕ ಇಲಾಖೆಯಿಂದ 24,300 ಹುದ್ದೆಗಳ ಭರ್ತಿಗೆ ಮಂಜೂರಾತಿ ನೀಡಲಾಗಿದೆ. ಕಲ್ಯಾಣ ಕರ್ನಾಟಕಕ್ಕೆ ಸಂಬಂಧಿಸಿದ ವೃಂದದಲ್ಲಿ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗದೇ ಬಾಕಿಯಿರುವ 32132 ಹುದ್ದೆಗಳಿವೆ. ಕೆಲವು ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿ ಪರಿಷ್ಕರಣೆ ಬಾಕಿಯಿದ್ದು, ಇದನ್ನು ಆದಷ್ಟು ಬೇಗನೆ ಮುಗಿಸಬೇಕು.**

**–ಸಿದ್ದರಾಮಯ್ಯ, ಮುಖ್ಯಮಂತ್ರಿ**

# ರಾಜ್ಯ ಮುಖ್ಯ ಮಾಹಿತಿ ಆಯುಕ್ತರಾಗಿ ಸತ್ಯವತಿ ನೇಮಕ



**ಬೆಂಗಳೂರು, ಮೇ 2:** ಬಹಳ ದಿನಗಳಿಂದ ಖಾಲಿ ಇದ್ದ ರಾಜ್ಯದ ಮುಖ್ಯ ಮಾಹಿತಿ ಆಯುಕ್ತರಾಗಿ ನಿವೃತ್ತ ಐಎಎಸ್ ಅಧಿಕಾರಿ ಜಿ. ಸತ್ಯವತಿ ಅವರನ್ನು ನೇಮಕಗೊಳಿಸಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು ಶನಿವಾರ ಅಧಿಕೃತ ಆದೇಶ ಹೊರಡಿಸಿದ್ದಾರೆ. ದೀರ್ಘಕಾಲದಿಂದ ತೆರವಾಗಿದ್ದ ಈ ಪ್ರಮುಖ ಸ್ಥಾನಕ್ಕೆ ಅರ್ಹ ಅಧಿಕಾರಿಯ ಆಯ್ಕೆಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಆಯ್ಕೆ ಸಮಿತಿಯು ಇತ್ತೀಚೆಗೆ ಸಭೆ ನಡೆಸಿ ಚರ್ಚಿಸಿತ್ತು. ಸಮಿತಿಯ ಶಿಫಾರಸಿನ ಮೇರೆಗೆ ರಾಜ್ಯಪಾಲರು ಈಗ ಜಿ. ಸತ್ಯವತಿ ಅವರ ಹೆಸರನ್ನು ಅಂತಿಮಗೊಳಿಸಿ ಮುದ್ರೆ ಒತ್ತಿದ್ದಾರೆ. ಇದರೊಂದಿಗೆ ಮಾಹಿತಿ ಹಕ್ಕು ಕಾಯ್ದೆಯಡಿ ಸಲ್ಲಿಕೆಯಾಗುವ ಮೇಲ್ಮನವಿಗಳ ವಿಲೇವಾರಿಗೆ ಹೆಚ್ಚಿನ ವೇಗ ಸಿಗುವ ನಿರೀಕ್ಷೆಯಿದೆ. ಶೀಘ್ರದಲ್ಲೇ ಅವರು ರಾಜಭವನದಲ್ಲಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

# ಬಿಎಸ್‌ವೈಗೆ ಶುಭಹಾರೈಸಿದ ಬಿ. ಎಲ್. ಸಂತೋಷ್



ಬೆಂಗಳೂರು, ಮೇ 2: ಪ್ರಮುಖ ಬೆಳವಣಿಗೆಯಲ್ಲಿ ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಅವರು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ನಿವಾಸಕ್ಕೆ ಶನಿವಾರ ಭೇಟಿ ನೀಡಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಬಿಎಸ್‌ವೈ, ಬಿ.ಎಲ್. ಸಂತೋಷ್ ಅವರ ಸಂಘಟನಾ ಸಾಮರ್ಥ್ಯ ಮತ್ತು ಚತುರತೆ ಪ್ರತಿಯೊಬ್ಬ ಕಾರ್ಯಕರ್ತನಿಗೂ ಸ್ಫೂರ್ತಿಯ ಸೆಲೆಯಾಗಿದೆ ಎಂದು ಬಣ್ಣಿಸಿದ್ದಾರೆ.

ತಮ್ಮ ನಿವಾಸಕ್ಕೆ ಆಗಮಿಸಿದ ಸಂತೋಷ್ ಅವರನ್ನು ಬಿಎಸ್‌ವೈ ಆತ್ಮೀಯವಾಗಿ ಸ್ವಾಗತಿಸಿದರು. ಬಳಿಕ ಉಭಯ ನಾಯಕರು ಜೊತೆಯಾಗಿ ಉಪಹಾರ ಸೇವಿಸಿ, ರಾಜಕೀಯ ವಿದ್ಯಮಾನಗಳ ಕುರಿತು ಸುದೀರ್ಘ ಚರ್ಚೆ ನಡೆಸಿದ್ದಾರೆ. ಪಂಚರಾಜ್ಯ ಚುನಾವಣೆಯ ಬಗ್ಗೆ ಮಹತ್ವದ ಸಮಾಲೋಚನೆ ನಡೆಸಿದರು ಎನ್ನಲಾಗಿದೆ.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಬಿಜೆಪಿಯು 5 ರಾಜ್ಯಗಳಲ್ಲಿ ಐತಿಹಾಸಿಕ ಗೆಲುವು ಸಾಧಿಸಲಿದೆ ಎಂದು ಬಿ.ಎಲ್.ಸಂತೋಷ್ ವಿಶ್ವಾಸ ವ್ಯಕ್ತಪಡಿಸಿದರು ಎಂದು ಯಡಿಯೂರಪ್ಪ ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ 50 ವರ್ಷಗಳ ಯಶಸ್ವಿ ರಾಜಕೀಯ ಜೀವನದ ಸಾಧನೆಯನ್ನು ಸ್ಮರಿಸಿದ ಸಂತೋಷ್ ಅವರು ಬಿಎಸ್‌ವೈಗೆ ಶುಭಾಶಯಗಳನ್ನು ಸಲ್ಲಿಸಿದ್ದಾರೆ.

ರಾಜ್ಯ ರಾಜಕಾರಣದ ದೃಷ್ಟಿಯಿಂದ ಈ ಹಿರಿಯ ಇಬ್ಬರು ನಾಯಕರ ಭೇಟಿ ಅತ್ಯಂತ ಮಹತ್ವದ್ದೆಂದು ವಿಶ್ಲೇಷಿಸಲಾಗುತ್ತಿದೆ.



**ದೆಹಲಿಯ ಅಶೋಕ ಹೋಟೆಲ್‌ನಲ್ಲಿ ಶನಿವಾರ ಹಮ್ಮಿಕೊಂಡಿದ್ದ ಟೂರಿಸಂ ಸ್ಟೇಕ್‌ಹೋಲ್ಡರ್ ಸಮ್ಮೇಳನದಲ್ಲಿ ದೆಹಲಿ ಮುಖ್ಯಮಂತ್ರಿ ರೇಖಾಗುಪ್ತಾ, ಸಚಿವ ಕಪಿಲ್ ಮಿಶ್ರಾ ಮತ್ತಿತರರು ಭಾಗವಹಿಸಿದ್ದರು.**

# ನ್ಯಾಯಾಧೀಶರ ಮೃತದೇಹ ಪತ್ತೆ: ಆತ್ಮಹತ್ಯೆ ಶಂಕೆ

ನವದೆಹಲಿ, ಮೇ 2: ನಗರದ ಸಫ್ದರ್‌ಜಂಗ್ ಪ್ರದೇಶದ ನಿವಾಸದಲ್ಲಿ ನ್ಯಾಯಾಧೀಶರೊಬ್ಬರು ಮೃತಪಟ್ಟಿರುವುದು ಪತ್ತೆಯಾಗಿದೆ. ನ್ಯಾಯಾಧೀಶ ಅಮನ್ ಕುಮಾರ್ ಶರ್ಮಾ (30) ನೇಣು ಬಿಗಿದುಕೊಂಡಿದ್ದಾರೆ ಎನ್ನಲಾಗಿದೆ. ಇದು ಆತ್ಮಹತ್ಯೆ ಎಂದು ಶಂಕಿಸಲಾಗಿದ್ದು, ಯಾವುದೇ ಡೆತ್‌ನೋಟ್ ಪತ್ತೆಯಾಗಿಲ್ಲ. ದೆಹಲಿ ಪೊಲೀಸರು ಇದು ಆತ್ಮಹತ್ಯೆ ಪ್ರಕರಣ ಎಂದು ಶಂಕಿಸಿದ್ದು, ಪ್ರಕರಣ ದಾಖಲಿಸಿಕೊಂಡಿದ್ದಾರೆ. ನ್ಯಾಯಾಧೀಶ ಅಮನ್ ಕುಮಾರ್ ಶರ್ಮಾ ಅವರ ಹಠಾತ್ ಸಾವು ನಗರದ ಕಾನೂನು ಸಮುದಾಯದಲ್ಲಿ ಆಘಾತ ಉಂಟುಮಾಡಿದೆ. ಗ್ರೀನ್ ಪಾರ್ಕ್ ಪ್ರದೇಶದ ಅವರ ನಿವಾಸದಲ್ಲಿ ಸ್ನಾನಗೃಹದೊಳಗೆ ಮೃತದೇಹ ಪತ್ತೆಯಾಗಿದೆ. ದೆಹಲಿಯ ಕರ್ಕಾರ್ಡೂಮಾ ನ್ಯಾಯಾಲಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿಯಾಗಿ ಅಮನ್ ಅವರನ್ನು ನೇಮಿಸಲಾಗಿತ್ತು. ಪೊಲೀಸರ ಪ್ರಕಾರ, ಶಂಕಿತ ಆತ್ಮಹತ್ಯೆಯ ಕುರಿತು ಸಫ್ದರ್ಜಂಗ್ ಎನ್‌ಕ್ಲೇವ್ ಪೊಲೀಸ್ ಠಾಣೆಗೆ PCR ಕರೆ ಬಂದಿತ್ತು. ಮಧ್ಯಾಹ್ನ 1:45ರ ಸುಮಾರಿಗೆ ಕರೆ ಬಂದಿದ್ದು, ಪೊಲೀಸರು ತಕ್ಷಣ ಪ್ರತಿಕ್ರಿಯಿಸುವಂತೆ ಪ್ರೇರೇಪಿಸಿತು. ಆತ್ಮಹತ್ಯೆ ವ್ಯಾಪಕ ಗಮನ ಸೆಳೆದಿದ್ದು, ಸಾವಿಗೆ ಕಾರಣವನ್ನು ಬಯಲು ಮಾಡುವತ್ತ ಅಧಿಕಾರಿಗಳು ಗಮನಹರಿಸಿದ್ದಾರೆ.

# ಶೃಂಗೇರಿ ಕ್ಷೇತ್ರದ ಅಂಚೆಮತಗಳ ಮರುಎಣಿಕೆ ಗೆಲುವು ಉಳಿಸಿಕೊಂಡ ಶಾಸಕ ರಾಜೇಗೌಡ




ಚಿಕ್ಕಮಗಳೂರು, ಮೇ 2: ತೀವ್ರ ಕುತೂಹಲ ಕೆರಳಿಸಿದ್ದ ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆ ಪ್ರಕ್ರಿಯೆ ಇಂದು ನಗರದ ಐಡಿಎಸ್‌ಜಿ ಸರ್ಕಾರಿ ಕಾಲೇಜಿನಲ್ಲಿ ಮುಕ್ತಾಯಗೊಂಡಿದೆ. ಹೈಕೋರ್ಟ್ ಆದೇಶದಂತೆ ನಡೆದ ಈ ಮರು ಎಣಿಕೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಟಿ.ಡಿ.ರಾಜೇಗೌಡ ಅವರು ತಮ್ಮ ಗೆಲುವನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಈ ಮೂಲಕ ದೀರ್ಘಕಾಲದ ಕಾನೂನು ಹೋರಾಟಕ್ಕೆ ಸದ್ಯ ತೆರೆ ಬಿದ್ದಂತಾಗಿದೆ.

ಚುನಾವಣಾ ಫಲಿತಾಂಶ ಪ್ರಕಟವಾದಾಗಿನಿಂದಲೂ ಶೃಂಗೇರಿ ಕ್ಷೇತ್ರದಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ಜಿದ್ದಾಜಿದ್ದಿನ ವಾತಾವರಣ ನಿರ್ಮಾಣವಾಗಿತ್ತು. ಅಂಚೆ ಮತಗಳ ಎಣಿಕೆಯಲ್ಲಿ ವ್ಯತ್ಯಾಸವಾಗಿದೆ ಎಂದು ಆರೋಪಿಸಿ ಬಿಜೆಪಿ ಅಭ್ಯರ್ಥಿ ಕಾನೂನು ಹೋರಾಟ ಆರಂಭಿಸಿದ್ದರು. ಇಂದು ಮರು ಎಣಿಕೆ ಪ್ರಕ್ರಿಯೆ ಆರಂಭವಾಗುತ್ತಿದ್ದಂತೆ ಕಾಲೇಜು ಆವರಣದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು. ಎರಡೂ ಪಕ್ಷಗಳ ಕಾರ್ಯಕರ್ತರು ಫಲಿತಾಂಶಕ್ಕಾಗಿ ಕಾದು ಕುಳಿತಿದ್ದು, ರಾಜಕೀಯ ಸಂಚಲನ ಮೂಡಿಸಿತ್ತು.ಶೃಂಗೇರಿ ಕ್ಷೇತ್ರದಲ್ಲಿ ಒಟ್ಟು 1,822 ಅಂಚೆ ಮತಗಳು ಚಲಾವಣೆಯಾಗಿದ್ದವು. ಈ ಪೈಕಿ ಆರಂಭದಲ್ಲಿ 279 ಮತಗಳನ್ನು ವಿವಿಧ ತಾಂತ್ರಿಕ ಕಾರಣಗಳಿಂದ ತಿರಸ್ಕರಿಸಲಾಗಿತ್ತು. ಈ ತಿರಸ್ಕೃತ ಮತಗಳಲ್ಲೇ ಗೊಂದಲ ಸೃಷ್ಟಿಯಾಗಿದ್ದು, ಅವುಗಳಲ್ಲಿ 12 ಮತಗಳು ನಾಪತ್ತೆಯಾಗಿರುವುದು ವರದಿಯಾಗಿದೆ. ಉಳಿದಂತೆ 3 ಮತಗಳು 'ನೋಟಾ'ಗೆ ಚಲಾವಣೆಯಾಗಿದ್ದು, ಅಂತಿಮವಾಗಿ 1,540 ಅಂಚೆ ಮತಗಳನ್ನು ಮರು ಎಣಿಕೆಗೆ ಪರಿಗಣಿಸಲಾಗಿತ್ತು. ಈ ಎಲ್ಲಾ ಪ್ರಕ್ರಿಯೆಗಳ ನಂತರ ರಾಜೇಗೌಡ ಅವರ ಗೆಲುವನ್ನು ಚುನಾವಣಾಧಿಕಾರಿಗಳು ಅಧಿಕೃತವಾಗಿ ಘೋಷಿಸಿದರು.

2023ರ ವಿಧಾನಸಭಾ ಚುನಾವಣೆಯಲ್ಲಿ ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜೀವರಾಜ್ ಕಾಂಗ್ರೆಸ್ ಅಭ್ಯರ್ಥಿ ಟಿ.ಡಿ ರಾಜೇಗೌಡ ಎದುರು 201 ಮತಗಳ ಅಂತರದಿಂದ ಸೋತಿದ್ದರು. ಒಟ್ಟು 1822 ಅಂಚೆ ಮತಗಳಲ್ಲಿ 279 ಮತಗಳು ತಿರಸ್ಕೃತವಾಗಿದ್ದವು. ಈ ಫಲಿತಾಂಶವನ್ನು ಪ್ರಶ್ನಿಸಿ ಡಿ.ಎನ್. ಜೀವರಾಜ್ ಮರು ಎಣಿಕೆಗೆ ಮನವಿ ಮಾಡಿದ್ದರು ಕೂಡ ಅಂದಿನ ಜಿಲ್ಲಾ ಚುನಾವಣಾಧಿಕಾರಿ ಅದನ್ನು ಪರಿಗಣಿಸದೆ ಟಿ.ಡಿ. ರಾಜೇಗೌಡರನ್ನು ವಿಜೇತರೆಂದು ಘೋಷಿಸಿದ್ದರು. ಇದರಿಂದ ಅಸಮಾಧಾನಗೊಂಡಿದ್ದ ಜೀವರಾಜ್ ಹೈಕೋರ್ಟ್ ಮೆಟ್ಟಿಲೇರಿದ್ದರು. ಅದರಂತೆ ಇಂದು ಮರು ಎಣಿಕೆ ನಡೆಯಿತು.

# ರಾಜಕೀಯ ಬದಿಗಿಟ್ಟು ರಾಜ್ಯದ ಆರ್ಥಿಕ ಸುಸ್ಥಿರತೆಗೆ ಗಮನಹರಿಸಿ



**ಬೆಂಗಳೂರು, ಮೇ.2:** ರಾಜಕೀಯ ಮೇಲಾಟವನ್ನು ಬದಿಗಿಟ್ಟು ಹಳಿತಪ್ಪಿರುವ ರಾಜ್ಯದ ಆರ್ಥಿಕ ಸ್ಥಿತಿಯನ್ನು ಸರಿದಾರಿಗೆ ತರುವತ್ತ ಗಮನಹರಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಗ್ರಹಿಸಿದ್ದಾರೆ. ಅಧಿಕಾರಿದ ಹಪಾಹಪಿಗೆ ರಾಜ್ಯದ ಬೊಕ್ಕಸವನ್ನು ಖಾಲಿಮಾಡಿ ಮುಂದಿನ ಪೀಳಿಗೆಯನ್ನು ಸಾಲದ ಸುಳಿಗೆ ದೂಡುವುದು ಯಾವ ನ್ಯಾಯ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ರಾಜ್ಯದ ಒಳಿತಿಗಾಗಿ ನಿಮ್ಮ ರಾಜಕೀಯ ಮೇಲಾಟ ಬದಿಗಿಟ್ಟು ರಾಜ್ಯದ ಆರ್ಥಿಕ ಸ್ಥಿತಿಯನ್ನು ಹಳಿಗೆ ತರುವತ್ತ ಗಮನಹರಿಸಿ ಎಂದು ಅವರು ಒತ್ತಾಯಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆ ಹಾಕಿರುವ ಅವರು ಅವೈಜ್ಞಾನಿಕ ಆರ್ಥಿಕ ನಿರ್ವಹಣೆಯಿಂದಾಗಿ ರಾಜ್ಯದಲ್ಲಿ ಆದಾಯ ಸ್ವೀಕೃತಿಯ ಶೇ. 15ಕ್ಕಿಂತ ಹೆಚ್ಚು ಹಣ ಬಡ್ಡಿ ಪಾವತಿಗೆ ವಯ್ಯವಾಗುತ್ತಿದೆ. ರಾಜ್ಯದ ಶೇ. 0.7ರಷ್ಟು ಆದಾಯ ಕೊರತೆ ಎದುರಿಸುತ್ತಿರುವುದು ಆತಂಕಕಾರಿ ಸಂಗತಿ. ಈ ಬಗ್ಗೆ ಕೇಂದ್ರ ಸರ್ಕಾರ ಕಳವಳ ವ್ಯಕ್ತಪಡಿಸಿದೆ. ಈ ಬೆಳವಣಿಗೆ ಮುಂದಿನ ದಿನಗಳಲ್ಲಿ ರಾಜ್ಯದ ಆರ್ಥಿಕ ಸಂಕಷ್ಟಕ್ಕೆ ತುತ್ತಾಗುವುದಕ್ಕೆ ಕಾರಣವಾಗಬಹುದು ಎಂದು ಎಚ್ಚರಿಸಿದೆ ಎಂದಿದ್ದಾರೆ. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ರಾಜಕೀಯ ಪರಿಗಣನೆ ಮತ್ತು ಮೇಲಾಟಗಳಿಂದಾಗಿ ರಾಜ್ಯದ ಅಭಿವೃದ್ಧಿ ಹಾಗೂ ಆದ್ಯತೆ ವಲಯಗಳಿಗೆ ಹಣವಿಲ್ಲದಂತಾಗಿದೆ. ಎದುರಾಗಬಹುದಾದ ಯಾವುದೇ ತುರ್ತುಪರಿಸ್ಥಿತಿಗಳಿಗೆ ಸ್ಪಂದಿಸುವ ಸಾಮರ್ಥ್ಯ ರಾಜ್ಯ ಸರ್ಕಾರ ಕಳೆದುಕೊಳ್ಳುತ್ತಿದೆ ಎಂದು ಅವರು ಹೇಳಿದ್ದಾರೆ.

**ಸುತ್ತೂರು ಶ್ರೀಗಳಿಗೆ ಆಹ್ವಾನ:** ಸುತ್ತೂರು ಮಠಕ್ಕೆ ಶನಿವಾರ ಭೇಟಿ ನೀಡಿ ಶ್ರೀಗಳ ಆಶೀರ್ವಾದ ಪಡೆದ ನಂತರ ಮಾಧ್ಯಮದವರ ಜೊತೆ ಮಾತನಾಡಿ, ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಯಡಿಯೂರಪ್ಪ ಅವರ 50 ವರ್ಷದ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಆಹ್ವಾನ ನೀಡಿದ್ದೇವೆ. ಕಾರ್ಯಕ್ರಮಕ್ಕೆ ಬರಲು ಸ್ವಾಮೀಜಿ ಒಪ್ಪಿದ್ದಾರೆ. ಮೇ 8ರಂದು ಯಡಿಯೂರಪ್ಪ ಚಿತ್ರದುರ್ಗದ ಪ್ರವೇಶ ಮಾಡಲಿದ್ದು, ಅದ್ದೂರಿಯಾಗಿ ಸ್ವಾಗತ ಕೋರಲಾಗುವುದು. 9ರಂದು ಅಮಿತ್ ಶಾ ವೇದಿಕೆ ಕಾರ್ಯಕ್ರಮಕ್ಕೆ ಆಗಮಿಸುತ್ತಾರೆ. ನಾಡಿನ ರೈತರು, ಮಹಿಳೆಯರು, ಸ್ವಾಮೀಜಿಗಳು ಎಲ್ಲರೂ ಕಾರ್ಯಕ್ರಮದಲ್ಲಿ ಭಾಗಿಯಾಗುತ್ತಾರೆ. 10 ಲಕ್ಷ ಜನ ಸೇರುವ ಐತಿಹಾಸಿಕ ಕಾರ್ಯಕ್ರಮ ಇದಾಗಲಿದೆ ಎಂದು ಹೇಳಿದರು.

# ಎಪಿಎಂಸಿ ಆದಾಯದಿಂದಲೇ 410 ಕೋಟಿ ರೂ. ನೀಡಿ 450 ಎಕರೆ ಭೂಮಿ ಸ್ವಾಧೀನ

**ಬೆಂಗಳೂರು, ಮೇ 2:** ಮೂರು ಭೂಸ್ವಾಧೀನ ಪ್ರಕರಣಗಳ ಸುದೀರ್ಘ ಕಾನೂನು ಸಮರದಲ್ಲಿ ಎಪಿಎಂಸಿ ಪರ ತೀರ್ಪು ಬಂದಿದ್ದು, ಎಪಿಎಂಸಿ ಆದಾಯದ ಮೂಲದಿಂದಲೇ 410 ಕೋಟಿ ರೂ. ಪರಿಹಾರ ಧನ ಪಾವತಿ ಮಾಡಿ 450 ಎಕರೆ ಭೂಮಿಯನ್ನು ಸ್ವಾಧೀನಕ್ಕೆ ಪಡೆಯಲಾಗಿದೆ ಎಂದು ಕಬ್ಬು ಅಭಿವೃದ್ಧಿ, ಸಕ್ಕರೆ, ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು.

ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ ಕಚೇರಿಯಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದಿನ ಸರ್ಕಾರ ಎಪಿಎಂಸಿ ಕಾಯ್ದೆಗೆ ತಿದ್ದುಪಡಿ ತಂದಿದ್ದ ಪರಿಣಾಮ ಬಹುತೇಕ ಎಪಿಎಂಸಿಗಳು ದುಸ್ಥಿತಿ ತಲುಪಿದ್ದವು. ಎಪಿಎಂಸಿ ಆಸ್ತಿಗಳು ಕೈತಪ್ಪಿ ಹೋಗುವ ಪರಿಸ್ಥಿತಿ ಇತ್ತು. ಈಗ ಮೂರೂ ಭೂಸ್ವಾಧೀನ ಪ್ರಕರಣಗಳಲ್ಲಿ ಎಪಿಎಂಸಿ ಪರ ತೀರ್ಪು ಬಂದಿದ್ದು, ಮೆಗಾ ಮಾರುಕಟ್ಟೆ ನಿರ್ಮಾಣ ಸೇರಿದಂತೆ ಉದ್ದೇಶಿತ ಯೋಜನೆಗಳನ್ನು ಕೈಗೊಳ್ಳಲು ಇದ್ದ ಅಡ್ಡಿ ನಿವಾರಣೆಯಾಗಿದೆ ಎಂದು ವಿವರಿಸಿದರು.

### ಸುದೀರ್ಘ ಕಾನೂನು ಸಮರದಲ್ಲಿ ಎಪಿಎಂಸಿ ಪರ ತೀರ್ಪು: ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್

ಮೆಗಾ ಮಾರ್ಕೆಟ್ ನಿರ್ಮಾಣ ಉದ್ದೇಶಕ್ಕೆ 1994ರಲ್ಲಿ ಯಶವಂಪುರ ಎಪಿಎಂಸಿಯಿಂದ ಶ್ರೀಗಂಧ ಕಾವಲು ಗ್ರಾಮದ 172 ಎಕರೆ 22 ಗುಂಟೆ ಹಾಗೂ ಇದಕ್ಕೆ ಹೊಂದಿಕೊಂಡ ಹೇರೋಹಳ್ಳಿ ಗ್ರಾಮದ 100 ಎಕರೆ 11 ಗುಂಟೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿತ್ತು.

ಜಮ್ನಾಲಾಲ್ ಬಜಾಜ್ ಸೇವಾ ಟ್ರಸ್ಟ್ ಭೂಸ್ವಾಧೀನವನ್ನು ಹೈಕೋರ್ಟ್‌ನಲ್ಲಿ ಪ್ರಶ್ನೆ ಮಾಡಿತ್ತು. ಹೈಕೋರ್ಟ್‌ನಲ್ಲಿ ಎಪಿಎಂಸಿ ಪರವಾಗಿ ತೀರ್ಪು ಬಂದಿದ್ದು, ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಕಳೆದ ವಾರ ಸುಪ್ರೀಂ ಕೋರ್ಟ್‌ನಲ್ಲಿ ಎಪಿಎಂಸಿ ಪರವಾಗಿ ತೀರ್ಪು ಬಂದಿದೆ. ಭೂಸ್ವಾಧೀನ ಪರಿಹಾರಕ್ಕೆ 186 ಕೋಟಿ ರೂ. ಪಾವತಿಸಲಾಗಿದೆ ಎಂದು ಹೇಳಿದರು. ಹಣ್ಣು, ಹೂವು, ತರಕಾರಿ ಕೃಷಿ ಉತ್ಪನ್ನ ಮಾರುಕಟ್ಟೆ ಯೋಜನೆಗೆ 2003ರಲ್ಲಿ ಸರ್ಜಾಪುರ ಹೋಬಳಿಯ ಗೂಳಿಮಂಗಲದಲ್ಲಿ 42 ಎಕರೆ 31 ಗುಂಟೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿತ್ತು. ಈ ಪ್ರಕರಣ ಕೂಡ ಸುಪ್ರೀಂ ಕೋರ್ಟ್‌ವರೆಗೆ ಹೋಗಿದ್ದು, ಹೈಕೋರ್ಟ್‌ನಲ್ಲಿಯೇ ಇತ್ಯರ್ಥ ಪಡಿಸಿಕೊಳ್ಳಲು ನಿರ್ದೇಶನ ನೀಡಿದ್ದು, ಈಚೆಗೆ ಹೈಕೋರ್ಟ್‌ನಲ್ಲಿ ನಮ್ಮ ಪರವಾಗಿ ತೀರ್ಪು ಬಂದಿದ್ದು, 211.37 ಕೋಟಿ ರೂ.ಗಳನ್ನು ನ್ಯಾಯಾಲಯಕ್ಕೆ ಪಾವತಿ ಮಾಡಲಾಗಿದೆ.

ಕೊಪ್ಪಳ ಜಿಲ್ಲೆಯ ಗಂಗಾವತಿ ಎಪಿಎಂಸಿಯಿಂದ ಕಾರಟಗಿಯಲ್ಲಿ ರೈಸ್ ಟೆಕ್ನಾಲಜಿ ಪಾರ್ಕ್ ನಿರ್ಮಾಣಕ್ಕೆ 2012ರಲ್ಲಿ 136 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿತ್ತು. ಈ ಪ್ರಕರಣದಲ್ಲಿ ಜಿಲ್ಲಾ ನ್ಯಾಯಾಲಯ ಚದರ ಅಡಿಗೆ 50 ರೂ. ಪರಿಹಾರ ನೀಡಲು ಆದೇಶ ಮಾಡಿತ್ತು. ಜಿಲ್ಲಾ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲಾಗಿದ್ದು, ತೀರ್ಪು ಎಪಿಎಂಸಿ ಪರವಾಗಿ ಬಂದಿದೆ. ಪರಿಹಾರಕ್ಕೆ 12 ಕೋಟಿ ರೂ.ಗಳನ್ನು ಪಾವತಿ ಮಾಡಲಾಗಿದೆ ಎಂದು ವಿವರಿಸಿದರು.



**ಈಗ ಎಪಿಎಂಸಿ ಸ್ವಾಧೀನಕ್ಕೆ ಪಡೆದಿರುವ ಶ್ರೀಗಂಧ ಕಾವಲು ಮತ್ತು ಹೇರೋಹಳ್ಳಿಯಲ್ಲಿ ಮೆಗಾ ಮಾರುಕಟ್ಟೆ, ಗೂಳಿಮಂಗಲದಲ್ಲಿ ಹಣ್ಣು, ಹೂವು, ತರಕಾರಿ ಮಾರುಕಟ್ಟೆ ಹಾಗೂ ಕಾರಟಗಿಯಲ್ಲಿ ರೈಸ್ ಟೆಕ್ನಾಲಜಿ ಪಾರ್ಕ್ ನಿರ್ಮಿಸಲು ಯೋಜನೆ ರೂಪಿಸಲಾಗಿದೆ.**

**–ಶಿವಾನಂದ ಪಾಟೀಲ, ಕೃಷಿ ಮಾರುಕಟ್ಟೆ ಸಚಿವ**

### ಎಪಿಎಂಸಿಗೆ ಬಿಎಂಟಿಸಿ ಭೂಮಿ

**ದಾಸನಪುರ ಎಪಿಎಂಸಿಗೆ ಹೊಂದಿಕೊಂಡಿರುವ ಬಿಎಂಟಿಸಿಯ 12 ಎಕರೆ ಭೂಮಿಯನ್ನು ಬಾಡಿಗೆ ಆಧಾರದ ಮೇಲೆ ಎಪಿಎಂಸಿಗೆ ನೀಡಲು ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ ಎಂದು ಸಚಿವ ಶಿವಾನಂದ ಪಾಟೀಲ ತಿಳಿಸಿದರು. ಯಶವಂತಪುರ ಮಾರುಕಟ್ಟೆಯಿಂದ ದಾಸನಪುರ ಮಾರುಕಟ್ಟೆಗೆ ಈರುಳ್ಳಿ, ಬೆಳ್ಳುಳ್ಳಿ, ಆಲೂಗಡ್ಡೆ ಮತ್ತು ಶುಂಠಿ ಮಾರಾಟವನ್ನು ದಾಸನಪುರಕ್ಕೆ ಸ್ಥಳಾಂತರ ಮಾಡಲಿದೆ. ಬಿಎಂಟಿಸಿ ಭೂಮಿ ಲಭ್ಯವಾಗಿರುವುದು ಮಾರುಕಟ್ಟೆ ಚಟುವಟಿಕೆಗಳಿಗೆ ಅನುಕೂಲವಾಗಲಿದೆ. ಉತ್ತರ ಕರ್ನಾಟಕದಿಂದ ಈರುಳ್ಳಿ, ಶುಂಠಿ, ಬೆಳ್ಳುಳ್ಳಿ ಅಧಿಕ ಪ್ರಮಾಣದಲ್ಲಿ ಆಗಮಿಸುತ್ತಿದ್ದು, ನೂರಾರು ಲಾರಿಗಳು ಬರುವುದರಿಂದ ಯಶವಂತಪುರ ಬಳಿ ಟ್ರಾಫಿಕ್ ಸಮಸ್ಯೆಯಾಗುತ್ತಿದೆ. ಈ ನಾಲ್ಕು ಕೃಷಿ ಉತ್ಪನ್ನಗಳ ವಹಿವಾಟನ್ನು ದಾಸನಪುರಕ್ಕೆ ಸ್ಥಳಾಂತರ ಮಾಡಿದರೆ ವಾಹನ ಸಂಚಾರ ಸಮಸ್ಯೆಗೆ ಪರಿಹಾರ ಸಿಗಲಿದೆ ಎಂದು ಸಚಿವರು ಹೇಳಿದರು.**

# ಪಶ್ಚಿಮ ಏಷ್ಯಾದ ಉದ್ವಿಗ್ನತೆ ನಡುವೆ 2,900ಕ್ಕೂ ಹೆಚ್ಚು ಭಾರತೀಯ ನಾವಿಕರು ಸ್ವದೇಶಕ್ಕೆ ವಾಪಸ್



**ನವದೆಹಲಿ, ಮೇ 2:** ಪಶ್ಚಿಮ ಏಷ್ಯಾದಲ್ಲಿ ಬೆಳೆಯುತ್ತಿರುವ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಮತ್ತು ನಿರಂತರ ಇಂಧನ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು, ಕಡಲ ಕಾರ್ಯಾಚರಣೆಗಳನ್ನು ರಕ್ಷಿಸಲು ಮತ್ತು ನಡೆಯುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳ ನಡುವೆ ಈ ಪ್ರದೇಶದಲ್ಲಿ ಭಾರತೀಯ ಪ್ರಜೆಗಳಿಗೆ ಸಹಾಯ ಮಾಡಲು ಸಂಘಟಿತ ಪ್ರತಿಕ್ರಿಯೆ ಕಾರ್ಯವಿಧಾನವನ್ನು ಜಾರಿಗೆ ತಂದಿದೆ ಎಂದು ಸರ್ಕಾರ ಶನಿವಾರ ತಿಳಿಸಿದೆ. ವಿವರವಾದ ನವೀಕರಣದಲ್ಲಿ, ದೇಶಾದ್ಯಂತ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿಯ ಸಾಕಷ್ಟು ದಾಸ್ತಾನು ಲಭ್ಯವಿದೆ ಎಂದು ಸರ್ಕಾರ ಹೇಳಿದೆ ಮತ್ತು ನಾಗರಿಕರು ಭಯಭೀತ ಖರೀದಿಯಲ್ಲಿ ತೊಡಗಬೇಡಿ ಎಂದು ಒತ್ತಾಯಿಸಿದೆ. ಜನರು ವದಂತಿಗಳನ್ನು ತಪ್ಪಿಸಿ ಮಾಹಿತಿಗಾಗಿ ಅಧಿಕೃತ ಮೂಲಗಳನ್ನು ಮಾತ್ರ ಅವಲಂಬಿಸುವಂತೆ ಸಲಹೆ ನೀಡಿದೆ. ಕಡಲ ಕಾರ್ಯಾಚರಣೆಗಳ ಕುರಿತು, ಬಂದರುಗಳು, ಹಡಗು ಮತ್ತು ಜಲಮಾರ್ಗಗಳ ಸಚಿವಾಲಯವು ಕೊಲ್ಲಿ ಪ್ರದೇಶದ ಎಲ್ಲಾ ಭಾರತೀಯ ನಾವಿಕರು ಸುರಕ್ಷಿತರಾಗಿದ್ದಾರೆ ಮತ್ತು ಕಳೆದ 24 ಗಂಟೆಗಳಲ್ಲಿ ಭಾರತೀಯ ಧ್ವಜ ಹೊಂದಿರುವ ಹಡಗುಗಳನ್ನು ಒಳಗೊಂಡ ಯಾವುದೇ ಘಟನೆ ವರದಿಯಾಗಿಲ್ಲ ಎಂದು ಹೇಳಿದೆ.

ಹಡಗು ನಿಯಂತ್ರಣ ಕೊಠಡಿಯ ನಿರ್ದೇಶನಾಲಯವು ಇದನ್ನು ಸಕ್ರಿಯಗೊಳಿಸಿದಾಗಿನಿಂದ 8,335 ಕ್ಕೂ ಹೆಚ್ಚು ಕರೆಗಳು ಮತ್ತು 17,838 ಇಮೇಲ್‌ಗಳನ್ನು ನಿರ್ವಹಿಸಿದೆ. ಕಳೆದ 24 ಗಂಟೆಗಳಲ್ಲಿ 30 ಮಂದಿ ಸೇರಿದಂತೆ, ಇಲ್ಲಿಯವರೆಗೆ 2,922 ಕ್ಕೂ ಹೆಚ್ಚು ಭಾರತೀಯ ನಾವಿಕರನ್ನು ಸುರಕ್ಷಿತವಾಗಿ ವಾಪಸ್ ಕಳುಹಿಸಲು ಸಚಿವಾಲಯ ಅನುಕೂಲ ಮಾಡಿಕೊಟ್ಟಿದೆ. ಭಾರತದಾದ್ಯಂತ ಬಂದರು ಕಾರ್ಯಾಚರಣೆಗಳು ದಟ್ಟಣೆಯಿಲ್ಲದೆ ಸಾಮಾನ್ಯವಾಗಿ ಮುಂದುವರೆದಿವೆ. ಕೊಲ್ಲಿ ಮತ್ತು ಪಶ್ಚಿಮ ಏಷ್ಯಾದಲ್ಲಿರುವ ಭಾರತೀಯ ಪ್ರಜೆಗಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಭಾರತೀಯ ರಾಯಭಾರ ಕಚೇರಿಗಳು, ರಾಜ್ಯ ಸರ್ಕಾರಗಳು ಮತ್ತು ಸ್ಥಳೀಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭಾರತೀಯ ರಾಯಭಾರ ಕಚೇರಿಗಳು ದಿನದ 24 ಗಂಟೆಯೂ ಸಹಾಯವಾಣಿಗಳನ್ನು ನಿರ್ವಹಿಸುತ್ತಿವೆ ಮತ್ತು ಅಗತ್ಯವಿರುವಲ್ಲಿ ಪ್ರಯಾಣ ವ್ಯವಸ್ಥೆ, ಕಾನ್ಸುಲರ್ ಬೆಂಬಲ ಮತ್ತು ಸ್ಥಳಾಂತರಿಸುವ ಪ್ರಯತ್ನಗಳಲ್ಲಿ ನಾಗರಿಕರಿಗೆ ಸಹಾಯ ಮಾಡುತ್ತಿವೆ. ಈ ಪ್ರದೇಶದ ಹಲವಾರು ದೇಶಗಳಿಂದ ವಿಮಾನ ಕಾರ್ಯಾಚರಣೆಗಳು ಕ್ರಮೇಣ ಸಾಮಾನ್ಯವಾಗುತ್ತಿವೆ ಎಂದು ಸರ್ಕಾರ ತಿಳಿಸಿದೆ. ಯುಎಇ, ಸೌದಿ ಅರೇಬಿಯಾ, ಓಮನ್, ಕತಾರ್, ಕುವೈತ್ ಮತ್ತು ಬಹ್ರೇನ್‌ನಿಂದ ಸೀಮಿತ ವಿಮಾನಗಳು ಕಾರ್ಯನಿರ್ವಹಿಸುತ್ತಿವೆ, ಆದರೆ ಇರಾಕ್, ಇರಾನ್ ಮತ್ತು ಇಸ್ರೇಲ್‌ನಲ್ಲಿ ಭಾಗಶಃ ಕಾರ್ಯಾಚರಣೆಗಳು ಪುನರಾರಂಭಗೊಂಡಿವೆ. ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಇದುವರೆಗೆ 2,490 ಭಾರತೀಯ ಪ್ರಜೆಗಳು ಭೂ ಗಡಿ ಮಾರ್ಗಗಳ ಮೂಲಕ ಇರಾನ್‌ನಿಂದ ಹೊರಹೋಗಲು ಸಹಾಯ ಮಾಡಿದೆ.

# ಲೇಹ್‌ನಲ್ಲಿ ಬುದ್ಧನ ಅವಶೇಷಗಳ ಪ್ರದರ್ಶನ: ಪ್ರಧಾನಿ ಮೋದಿ ಶ್ಲಾಘನೆ



**ನವದೆಹಲಿ, ಮೇ 2:** ಲೇಹ್‌ನಲ್ಲಿ 'ತಥಾಗತನ ಪವಿತ್ರ ಅವಶೇಷಗಳ ಪವಿತ್ರ ಪ್ರದರ್ಶನ' ಉದ್ಘಾಟನೆಯನ್ನು ಪ್ರಧಾನಿ ನರೇಂದ್ರ ಮೋದಿ ಶನಿವಾರ ಸ್ವಾಗತಿಸಿದರು, ಇದನ್ನು "ಅಗಾಧ ಆನಂದ"ದ ಕ್ಷಣ ಮತ್ತು ಈ ಪ್ರದೇಶಕ್ಕೆ ಅದರ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಮಹತ್ವವನ್ನು ಎತ್ತಿತೋರಿಸುತ್ತದೆ ಎಂದು ಬಣ್ಣಿಸಿದರು. ಬುದ್ಧ ಪೂರ್ಣಿಮೆಯ ಸಂದರ್ಭದಲ್ಲಿ ಉದ್ಘಾಟಿಸಲಾದ ಪ್ರದರ್ಶನವು ಹತ್ತೊಂಬತ್ತನೇ ಶತಮಾನದ ಅಂತ್ಯದಲ್ಲಿ ಉತ್ಖನನ ಮಾಡಲಾದ ಪಿಪ್ರಾಹ್ವಾ ಸ್ತೂಪಕ್ಕೆ ಸಂಬಂಧಿಸಿದ ಪೂಜ್ಯ ಅವಶೇಷಗಳನ್ನು ಪ್ರದರ್ಶಿಸುತ್ತದೆ ಎಂದು ಮೋದಿ ಹೇಳಿದರು. "

ಈ ಪೂಜ್ಯ ಅವಶೇಷಗಳು... ಭಗವಾನ್ ಬುದ್ಧನ ಶಾಶ್ವತ ಬೋಧನೆಗಳನ್ನು ಸಾಕಾರಗೊಳಿಸುತ್ತವೆ" ಎಂದು ಅವರು ಹೇಳಿದರು. ಮೇ 14 ರವರೆಗೆ ಲೇಹ್‌ನಲ್ಲಿ ಈ ಪ್ರದರ್ಶನ ಮುಂದುವರಿಯುತ್ತದೆ ಮತ್ತು ನಂತರ ಝನ್ಸ್ಕರ್‌ಗೆ ಪ್ರಯಾಣಿಸುತ್ತದೆ, ಲಡಾಖ್‌ನಾದ್ಯಂತ ಜನರಿಗೆ ಗೌರವ ಸಲ್ಲಿಸಲು ಅವಕಾಶವನ್ನು ನೀಡುತ್ತದೆ ಎಂದು ಪ್ರಧಾನಿ ಗಮನಿಸಿದರು. "ಲಡಾಖ್‌ನಾದ್ಯಂತದ ಜನರು ತಮ್ಮ ಗೌರವ ಸಲ್ಲಿಸಲು ಇದು ಅಮೂಲ್ಯವಾದ ಅವಕಾಶವನ್ನು ನೀಡುತ್ತದೆ" ಎಂದು ಅವರು ಹೇಳಿದರು. ಈ ಉಪಕ್ರಮದ ವಿಶಾಲ ಪರಿಣಾಮವನ್ನು ಒತ್ತಿ ಹೇಳುತ್ತಾ, ಈ ಪ್ರದರ್ಶನವು ಕೇಂದ್ರಾಡಳಿತ ಪ್ರದೇಶದಲ್ಲಿ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಪ್ರವಾಸೋದ್ಯಮವನ್ನು ಹೆಚ್ಚಿಸುವ ನಿರೀಕ್ಷೆಯಿದೆ ಎಂದು ಮೋದಿ ಹೇಳಿದರು. ಆಳವಾಗಿ ಬೇರೂರಿರುವ ಬೌದ್ಧ ಪರಂಪರೆಗೆ ಹೆಸರುವಾಸಿಯಾದ ಲಡಾಖ್, ಯಾತ್ರಾರ್ಥಿಗಳು ಮತ್ತು ಪ್ರವಾಸಿಗರಿಗೆ ಪ್ರಮುಖ ತಾಣವಾಗಿದೆ, ಮತ್ತು ಇಂತಹ ಕಾರ್ಯಕ್ರಮಗಳನ್ನು ಈ ಪ್ರದೇಶದ ಸಾಂಸ್ಕೃತಿಕ ಗುರುತನ್ನು ಮತ್ತಷ್ಟು ಉತ್ತೇಜಿಸುವ ಮತ್ತು ಸಂದರ್ಶಕರನ್ನು ಆಕರ್ಷಿಸುವ ಪ್ರಯತ್ನಗಳಾಗಿ ನೋಡಲಾಗುತ್ತದೆ.

# ವಂಚನೆ ಪ್ರಕರಣದಲ್ಲಿ ಕಮಲೇಶ್ ಪರೇಖ್ ಯುಎಇಯಿಂದ ಗಡಿಪಾರು



**ನವದೆಹಲಿ, ಮೇ 2:** ಬ್ಯಾಂಕಿಂಗ್ ಮತ್ತು ಆರ್ಥಿಕ ವಂಚನೆಯ ದೊಡ್ಡ ಪ್ರಕರಣದಲ್ಲಿ ಸಿಬಿಐಗೆ ಮಹತ್ವದ ಯಶಸ್ಸು ದೊರಕಿದೆ. ದೀರ್ಘಕಾಲದಿಂದ ಪರಾರಿಯಾಗಿದ್ದ ಪ್ರಮುಖ ಕುಖ್ಯಾತ ಆರೋಪಿ ಕಮಲೇಶ್ ಪರೇಖ್‌ನನ್ನು ಅಧಿಕಾರಿಗಳು ಬಂಧಿಸಿದ್ದಾರೆ.

ಇಂಟರ್‌ಪೋಲ್‌ನ ರೆಡ್ ಕಾರ್ನರ್ ನೋಟಿಸ್ ಆಧರಿಸಿ ಯುಎಇ ಅಧಿಕಾರಿಗಳು ಪರೇಖ್‌ನನ್ನು ಬಂಧಿಸಿ, ಭಾರತದ ಅಧಿಕೃತ ವಿನಂತಿಯ ಮೇರೆಗೆ ಒಪ್ಪಿಸಿದರು. ಮೇ 1ರಂದು ಭಾರತಕ್ಕೆ ಕರೆತರಲಾದ ಪರೇಖ್ ಅವರನ್ನು ದೆಹಲಿಯಲ್ಲಿ ಸಿಬಿಐ ಅಧಿಕಾರಿಗಳು ವಶಕ್ಕೆ ಪಡೆದುಕೊಂಡರು. ವಿದೇಶಾಂಗ ಮತ್ತು ಗೃಹ ಸಚಿವಾಲಯದ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆಸಲಾಯಿತು.

ಕಮಲೇಶ್ ಪರೇಖ್ ಅವರು ಇತರ ಪ್ರಮೋಟರ್‌ಗಳು ಮತ್ತು ನಿರ್ದೇಶಕರೊಂದಿಗೆ ಸೇರಿ ಬ್ಯಾಂಕ್‌ಗಳಿಂದ ಪಡೆದ ಹಣವನ್ನು ವಿದೇಶಿ ಕಂಪನಿಗಳಿಗೆ ಡೈವರ್ಟ್ ಮಾಡಿದ್ದಾರೆ ಎಂಬ ಆರೋಪವಿದೆ. ಇದರಿಂದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸೇರಿದಂತೆ ಹಲವು ಬ್ಯಾಂಕ್‌ಗಳಿಗೆ ಸಾವಿರಾರು ಕೋಟಿ ರೂ. ನಷ್ಟವಾಗಿದೆ. ಫಿಕ್ಷನ್ ಎಕ್ಸ್ಪೋರ್ಟ್ ಚಟುವಟಿಕೆಗಳು, ಸಂದೇಹಾಸ್ಪದ ಹಣ ವರ್ಗಾವಣೆ ಮತ್ತು ಬ್ಯಾಂಕಿಂಗ್ ಚಲನ್‌ಗಳ ದುರ್ಬಳಕೆಯ ಮೂಲಕ ಈ ದೊಡ್ಡಮಟ್ಟದ ವಂಚನೆ ನಡೆದಿದೆ ಎಂದು ತನಿಖೆಯಲ್ಲಿ ಬಯಲಾಗಿದೆ.

ಸಿಬಿಐ ಅಧಿಕಾರಿಗಳು ಈಗ ಪರೇಖ್ ವಿಚಾರಣೆ ನಡೆಸಿ, ಆತನ ಪೂರ್ಣ ನೆಟ್ವರ್ಕ್ ಮತ್ತು ಇತರ ಆರೋಪಿಗಳ ಪಾತ್ರವನ್ನು ಬಯಲು ಮಾಡುವಲ್ಲಿ ತೊಡಗಿದ್ದಾರೆ. ಭಾರತಪೋಲ್ ಪ್ಲಾಟ್ಫಾರ್ಮ್ ಮೂಲಕ ಸಿಬಿಐ ಇಂಟರ್‌ಪೋಲ್‌ನೊಂದಿಗೆ ಸಹಕರಿಸುತ್ತಿದ್ದು, ಇತ್ತೀಚಿನ ವರ್ಷಗಳಲ್ಲಿ 150ಕ್ಕೂ ಹೆಚ್ಚು ವಂಚಕರನ್ನು ಭಾರತಕ್ಕೆ ಕರೆತರಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಸ್ಟ್ರಾಂಗ್‌ರೂಮ್‌ಗಳ ಸಿಸಿಟಿವಿ ಕಾರ್ಯನಿರ್ವಹಿಸುತ್ತಿಲ್ಲ: ಮಮತಾ ಆರೋಪ



**ಕೋಲ್ಕತ್ತಾ, ಮೇ 2:** ಪಶ್ಚಿಮ ಬಂಗಾಳದ ಹಲವು ಸ್ಟ್ರಾಂಗ್‌ರೂಮ್‌ಗಳ ಸಿಸಿಟಿವಿಗಳು ಕಾರ್ಯನಿರ್ವಹಿಸುತ್ತಿಲ್ಲ. ಆಗಾಗೇ ಆಫ್ ಆಗುತ್ತಿದೆ ಎಂದು ತೃಣಮೂಲ ಕಾಂಗ್ರೆಸ್ (ಟಿಎಂಸಿ) ನಾಯಕಿ ಶಶಿ ಪಂಜಾ ಅವರು ಪಶ್ಚಿಮ ಬಂಗಾಳದ ಮುಖ್ಯ ಚುನಾವಣಾ ಅಧಿಕಾರಿ (ಸಿಇಒ)ಗೆ ಪತ್ರ ಬರೆದಿದ್ದಾರೆ. ಸಿಸಿಟಿವಿ ದೋಷ ಉಂಟಾದರೆ ಇವಿಎಂಗಳು ಮತ್ತು ವಿವಿಪ್ಯಾಟ್‌ಗಳ ಸುರಕ್ಷತೆ ಅಪಾಯಕ್ಕೆ ಸಿಲುಕಬಹುದು ಎಂದು ಹೇಳಿದ್ದಾರೆ.


ಕೋಲ್ಕತ್ತಾ, ಜಲಪೈಗುಡಿ, ಗೈಘಾಟ ವಿಧಾನಸಭಾ ಕ್ಷೇತ್ರದ ಸ್ಟ್ರಾಂಗ್‌ರೂಮ್‌ಗಳು, ಚಂದ್ರನಾಗೋರ್ ಸರ್ಕಾರಿ ಕಾಲೇಜು ಮತ್ತು ಜಂಗಿಪುರ ಪಾಲಿಟೆಕ್ನಿಕ್ ಕಾಲೇಜು ಸೇರಿದಂತೆ ಹಲವು ಸ್ಥಳಗಳಲ್ಲಿ ಈ ರೀತಿ ಸಿಸಿಟಿವಿ ಸಮಸ್ಯೆ ಉಂಟಾಗುತ್ತಿದೆ ಎಂದು ಆರೋಪಿಸಲಾಗಿದೆ. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿರುವ ಪಂಜಾ, ಚುನಾವಣಾ ಆಯೋಗದ ಮಾರ್ಗಸೂಚಿಗಳ ಅಡಿಯಲ್ಲಿ ಸ್ಟ್ರಾಂಗ್‌ರೂಮ್‌ಗಳ ನಿರಂತರ 24×7 ಸಿಸಿಟಿವಿ ಮೇಲ್ವಿಚಾರಣೆ ಕಡ್ಡಾಯವಾಗಿದೆ. ಯಾವುದೇ ಲೋಪವು ಸಂಗ್ರಹಿಸಲಾದ ಯಂತ್ರಗಳ ಸುರಕ್ಷತೆಯ ಬಗ್ಗೆ ಗಂಭೀರ ಕಳವಳವನ್ನು ಹುಟ್ಟುಹಾಕುತ್ತದೆ. ಈಗಾಗಲೇ ಒತ್ತಡವಿರುವಾಗ ಚುನಾವಣಾ ಪ್ರಕ್ರಿಯೆಯಲ್ಲಿ ಜನರ ವಿಶ್ವಾಸ ಇನ್ನಷ್ಟು ಕಡಿಮೆಯಾಗುತ್ತದೆ ಎಂದು ಪತ್ರದಲ್ಲಿ ಬರೆದಿದ್ದಾರೆ.

ಸಿಸಿಟಿವಿ ನಿಷ್ಕ್ರಿಯತೆಯ ಸಂಪೂರ್ಣ ನಿದರ್ಶನವಾರು ವರದಿಯನ್ನು ಅಧಿಕಾರಿಗಳು ತಕ್ಷಣ ಒದಗಿಸಬೇಕು. ಆ ಅವಧಿಯ ದಾಖಲೆಗಳನ್ನು ಒದಗಿಸಬೇಕು. ಚುನಾವಣಾ ಆಯೋಗದ ಮಾರ್ಗಸೂಚಿಗಳಿಗೆ ಅನುಗುಣವಾಗಿ ಅಧಿಕೃತ ಪ್ರತಿನಿಧಿಗಳಿಗೆ ನಿರಂತರ ಪ್ರವೇಶಕ್ಕೆ ಅವಕಾಶ ನೀಡಬೇಕು ಎಂದು ಟಿಎಂಸಿ ನಾಯಕಿ ಒತ್ತಾಯಿಸಿದ್ದಾರೆ.

ಸಂಪೂರ್ಣ ಸಿಸಿಟಿವಿ ದಾಖಲೆಗಳನ್ನು ಸಂರಕ್ಷಿಸಲು ಮತ್ತು ಒದಗಿಸಲು ವಿಫಲವಾದರೆ ಮೇಲ್ವಿಚಾರಣಾ ಪ್ರಕ್ರಿಯೆಯ ಸಮಗ್ರತೆಯ ಬಗ್ಗೆ ಪ್ರತಿಕೂಲ ತೀರ್ಮಾನಕ್ಕೆ ಬರಬೇಕಾಗುತ್ತದೆ. ತ್ವರಿತವಾಗಿ ಕ್ರಮ ಕೈಗೊಳ್ಳದಿದ್ದರೆ ಮುಂದಿನ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಏಪ್ರಿಲ್ 23 ಮತ್ತು 29ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆದಿದೆ. ಎರಡನೇ ಹಂತದಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳು ಕೇಳಿಬಂದ ಹಿನ್ನೆಲೆ 15 ಮತಗಟ್ಟೆಗಳಲ್ಲಿ ಇಂದು ಮರು ಮತದಾನ ನಡೆಯುತ್ತಿದೆ. ಮೇ 4ರಂದು ಎಲ್ಲ ಕ್ಷೇತ್ರಗಳ ಮತ ಎಣಿಕೆ ನಡೆಯಲಿದೆ. ಈ ನಡುವೆ ಮಾಹಿತಿ ನೀಡದೆಯೇ ಸ್ಟ್ರಾಂಗ್ ರೂಮ್ನ ಸೀಲ್ ತೆಗೆದು ಅಂಚೆ ಮತಪತ್ರಗಳನ್ನು ತೆರೆದಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದೆ.

# ಮಧ್ಯಪ್ರಾಚ್ಯದಲ್ಲಿ ಯುದ್ಧ: ಜೆಟ್ ಇಂಧನ ಬೆಲೆ ಏರಿಕೆ



**ನವದೆಹಲಿ, ಮೇ 2:** ಜೆಟ್ ಇಂಧನ ಬೆಲೆ ಏರಿಕೆ ಮತ್ತು ಮಧ್ಯಪ್ರಾಚ್ಯದಲ್ಲಿ ಇರಾನ್–ಅಮೆರಿಕಾ ಸಂಘರ್ಷದಿಂದಾಗಿ ಕೆಲವು ಆಕಾಶ ಮಾರ್ಗಗಳ ಮುಚ್ಚುವಿಕೆಯ ಕಾರಣ ಏರ್ ಇಂಡಿಯಾ ಜೂನ್ ಮತ್ತು ಜುಲೈ ತಿಂಗಳವರೆಗೆ ತನ್ನ ಅಂತರರಾಷ್ಟ್ರೀಯ ವಿಮಾನಗಳ ಸಂಖ್ಯೆಯನ್ನು ಗಣನೀಯವಾಗಿ ಕಡಿಮೆ ಮಾಡಲು ನಿರ್ಧರಿಸಿದೆ.

ಕಂಪನಿಯ ಸಿಇಒ ಮತ್ತು ಎಂಡಿ ಕ್ಯಾಂಪ್ಬೆಲ್ ವಿಲ್ಸನ್ ಅವರು ಸಿಬ್ಬಂದಿಗೆ ಕಳುಹಿಸಿದ ಸಂದೇಶದಲ್ಲಿ ಈ ಮಾಹಿತಿ ನೀಡಿದ್ದಾರೆ. ಜೆಟ್ ಇಂಧನ ಬೆಲೆಯ ಭಾರಿ ಏರಿಕೆ, ಆಕಾಶ ಮಾರ್ಗಗಳ ಮುಚ್ಚುವಿಕೆ ಮತ್ತು ದೀರ್ಘಕಾಲದ ವಿಮಾನ ಪ್ರಯಾಣಗಳಿಂದಾಗಿ ಅನೇಕ ಅಂತರರಾಷ್ಟ್ರೀಯ ಸಂಚಾರಗಳು ಲಾಭದಾಯಕವಾಗಿಲ್ಲ. ಇದರಿಂದ ಏಪ್ರಿಲ್–ಮೇನಲ್ಲಿ ಕೆಲವು ವಿಮಾನಗಳನ್ನು ಕಡಿಮೆ ಮಾಡಿದ್ದೇವೆ. ಈಗ ಜೂನ್–ಜುಲೈಗೂ ಸಹ ಕಡಿತಗೊಳಿಸುವುದು ಅನಿವಾರ್ಯವಾಗಿದೆ ಎಂದು ಅವರು ಹೇಳಿದ್ದಾರೆ. ಏರ್ ಇಂಡಿಯಾ ಈಗಾಗಲೇ 2025–26ನೇ ಆರ್ಥಿಕ ವರ್ಷದಲ್ಲಿ 22,000 ಕೋಟಿ ರೂಪಾಯಿ ಮೀರಿದ ನಷ್ಟ ಅನುಭವಿಸಿದೆ.

ಇಂದು ಅಂತರರಾಷ್ಟ್ರೀಯ ವಿಮಾನಗಳಿಗೆ ಏವಿಯೇಷನ್ ಟರ್ಬೈನ್ ಇಂಧನ ಬೆಲೆಯನ್ನು 5 ಶೇಕಡಾ ಹೆಚ್ಚಿಸಲಾಗಿದೆ. ಇದು ಎರಡನೇ ತಿಂಗಳಲ್ಲಿ ಎರಡನೇ ಏರಿಕೆಯಾಗಿದೆ. ಮಧ್ಯಪ್ರಾಚ್ಯ ಸಂಘರ್ಷದಿಂದ ಜಾಗತಿಕ ಸರಬರಾಜು ಸರಪಳಿಗಳು ಪ್ರಭಾವಿತವಾಗಿವೆ.

ದೆಹಲಿಯಲ್ಲಿ ಈಗ ಒಂದು ಕಿಲೋಲೀಟರ್ ಎಟಿಎಫ್ ಬೆಲೆ 1,511.86 ಡಾಲರ್ ಆಗಿದೆ. ಆದರೆ ದೇಶೀಯ ವಿಮಾನಗಳಿಗೆ ಎಟಿಎಫ್ ಬೆಲೆಯಲ್ಲಿ ಬದಲಾವಣೆ ಇಲ್ಲ. ಏರ್ ಇಂಡಿಯಾ ಗ್ರಾಹಕರ ಮತ್ತು ಸಿಬ್ಬಂದಿಯ ಅನಾನುಕೂಲಕ್ಕೆ ವಿಷಾದ ವ್ಯಕ್ತಪಡಿಸಿದ್ದು, ಮಧ್ಯಪ್ರಾಚ್ಯ ಪರಿಸ್ಥಿತಿ ಸುಧಾರಿಸಿ ಹಾರ್ಮುಜ್ ಜಲಸಂಧಿ ತೆರೆದರೆ ಸಾಮಾನ್ಯ ಸ್ಥಿತಿಗೆ ಮರಳುವುದಾಗಿ ಆಶಿಸಿದೆ. ಈ ಕಡಿತದಿಂದ ಪ್ರಯಾಣಿಕರ ಯೋಜನೆಗಳು ಮತ್ತು ಸಿಬ್ಬಂದಿ ಕಾರ್ಯಕ್ರಮಗಳಿಗೆ ಅಡಚಣೆ ಉಂಟಾಗುವ ಸಾಧ್ಯತೆ ಇದೆ.

# ಸುಪ್ರೀಂನಲ್ಲಿ ಟಿಎಂಸಿಗೆ ಹಿನ್ನಡೆ

**ನವದೆಹಲಿ,ಮೇ 2:** ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಮತ ಎಣಿಕೆ ಪ್ರಕ್ರಿಯೆಗೆ ಕೇಂದ್ರ ಸರ್ಕಾರ ಮತ್ತು ಪಿಎಸ್ಯು (ಸಾರ್ವಜನಿಕ ವಲಯ ಉದ್ಯಮ) ನೌಕರರನ್ನು ನೇಮಿಸುವ ಚುನಾವಣಾ ಆಯೋಗದ ನಿರ್ಧಾರವನ್ನು ಪ್ರಶ್ನಿಸಿ ತೃಣಮೂಲ ಕಾಂಗ್ರೆಸ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ವಜಾಗೊಳಿಸಿದೆ.

■ ಮತ ಎಣಿಕೆಗೆ ಕೇಂದ್ರ ನೌಕರರ ನಿಯೋಜನೆ ಕಾನೂನು ಬದ್ಧ ಎಂದ ಸುಪ್ರೀಂಕೋರ್ಟ್

ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಟಿಎಂಸಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿಗಳಾದ ಜಸ್ಟಿಸ್ ಪಿ.ಎಸ್. ನರಸಿಂಹ ಮತ್ತು ಜಸ್ಟಿಸ್ ಜಾಯ್ಮಲ್ಯ ಬಾಗ್ಚಿ ಅವರ ಪೀಠ ವಿಚಾರಣೆ ನಡೆಸಿತು.

ಟಿಎಂಸಿ ಪರ ವಕೀಲ ಕಪಿಲ್ ಸಿಬ್ಬಲ್ ಅವರು ಚುನಾವಣಾ ಆಯೋಗದ ಸುತ್ತೋಲೆಯನ್ನು ಪ್ರಶ್ನಿಸಿದರು. ಇದು ರಾಜ್ಯ ಸರ್ಕಾರಿ ನೌಕರರನ್ನು ಉದ್ದೇಶಪೂರ್ವಕವಾಗಿ ಹೊರಗಿಡುವ ಉದ್ದೇಶ ಹೊಂದಿದೆ ಎಂದು ಹೇಳಿದರು.

ಇದಕ್ಕೆ ಉತ್ತರಿಸಿದ ನ್ಯಾಯಮೂರ್ತಿ ಬಾಗ್ಚಿ, ಚುನಾವಣಾ ಆಯೋಗದ ನಿಯಮಗಳು ಸ್ಪಷ್ಟವಾಗಿವೆ. ಮತ ಎಣಿಕೆ ಸೂಪರ್ವೈಸರ್ ಮತ್ತು ಅಸಿಸ್ಟೆಂಟ್‌ಗಳನ್ನು ಕೇಂದ್ರ ಅಥವಾ ರಾಜ್ಯ ಸರ್ಕಾರಿ ನೌಕರರಿಂದ ನೇಮಿಸಬಹುದು ಎಂದು ಹೇಳಿದೆ ಹೀಗಾಗೀ ಆಯೋಗವು ಕೇಂದ್ರ ನೌಕರರನ್ನು ಮಾತ್ರ ನೇಮಿಸುವುದು ನಿಯಮ ವಿರುದ್ಧವಲ್ಲ ಎಂದು ಹೇಳಿತು. ಮತ ಎಣಿಕೆ ಸಮಯದಲ್ಲಿ ಎಲ್ಲಾ ರಾಜಕೀಯ ಪಕ್ಷಗಳ ಏಜೆಂಟ್‌ಗಳು ಉಪಸ್ಥಿತರಿರುವುದರಿಂದ, ಸೂಪರ್ ವೈಸರ್ ಕೇಂದ್ರ ಅಥವಾ ರಾಜ್ಯದವರಾಗಿರುವುದು ವಿಶೇಷ ಪರಿಣಾಮ ಬೀರುವುದಿಲ್ಲ ಎಂದು ಕೋರ್ಟ್ ಅಭಿಪ್ರಾಯಪಟ್ಟಿತು. ಚುನಾವಣಾ ಆಯೋಗಕ್ಕೆ ನೇಮಕಾತಿಯ ಪೂರ್ಣ ಅಧಿಕಾರವಿದೆ ಹೊಸ ಆದೇಶದ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದೆ ಅರ್ಜಿ ವಜಾ ಮಾಡಿತು.

ಆಯೋಗವು ತನ್ನ ಏಪ್ರಿಲ್ 13ರ ಸುತ್ತೋಲೆಯನ್ನು ಪೂರ್ಣವಾಗಿ ಅನುಸರಿಸುವುದಾಗಿ, ಅಗತ್ಯ ಮುನ್ನಚ್ಚರಿಗೆ ವಹಿಸುವುದು, ಮತ ಎಣಿಕೆ ವಿಡಿಯೋ, ಸಿಸಿಟಿವಿ ವಿಡಿಯೋಗಳನ್ನು 45 ದಿನಗಳ ವರೆಗೂ ಸಂರಕ್ಷಿಸುವ ಭರವಸೆ ನೀಡಿದ್ದರಿಂದ ಕೋರ್ಟ್ ಹೆಚ್ಚುವರಿ ಯಾವುದೇ ಆದೇಶ ಹೊರಡಿಸಲು ನಿರಾಕರಿಸಿತು.



ಪಶ್ಚಿಮ ಬಂಗಾಳದ ಡೈಮಂಡ್ ಹಾರ್ಬರ್‌ನಲ್ಲಿ ಶನಿವಾರ ಮರು ಮತದಾನದ ಸಮಯದಲ್ಲಿ ಮತದಾರರು ಮತಗಟ್ಟೆಯಲ್ಲಿ ತಮ್ಮ ಹಕ್ಕು ಚಲಾಯಿಸಲು ಸರತಿ ಸಾಲಿನಲ್ಲಿ ನಿಂತಿದ್ದರು.

# ಆಪ್ ತೊರೆದು ಬಿಜೆಪಿ ಸೇರಿದ್ದ ರಾಜ್ಯಸಭಾ ಸಂಸದ ಸಂದೀಪ್ ಪಾಠಕ್‌ಗೆ ಶಾಕ್

## ಪಂಜಾಬ್‌ನ ಎರಡು ಜಿಲ್ಲೆಗಳಲ್ಲಿ ಜಾಮೀನುರಹಿತ ಎಫ್‌ಐಆರ್



**ಚಂಡೀಗಢ, ಮೇ 2:** ಆಮ್ ಆದ್ಮಿ ಪಕ್ಷ ತೊರೆದು ಭಾರತೀಯ ಜನತಾ ಪಕ್ಷ ಸೇರಿದ ರಾಜ್ಯಸಭಾ ಸಂಸದ ಸಂದೀಪ್ ಪಾಠಕ್ ವಿರುದ್ಧ ಎರಡು ಎಫ್‌ಐಆರ್ ದಾಖಲಾಗಿವೆ. ಅವರು ವಿರುದ್ಧ ಪಂಜಾಬ್‌ನ ಎರಡು ಜಿಲ್ಲೆಗಳಲ್ಲಿ ಜಾಮೀನು ರಹಿತ ವಿಭಾಗಗಳ ಅಡಿಯಲ್ಲಿ ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ.

ಮೂಲಗಳ ಪ್ರಕಾರ, ಮಹಿಳೆಯರಿಗೆ ಕಿರುಕುಳ ಮತ್ತು ಭ್ರಷ್ಟಾಚಾರದ ಆರೋಪದ ಮೇಲೆ ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ. ಅವರ ಬಂಧನಕ್ಕಾಗಿ ಪಂಜಾಬ್ ಪೊಲೀಸರ ತಂಡವು ನವದೆಹಲಿಯಲ್ಲಿರುವ ಪಾಠಕ್ ಅವರ ನಿವಾಸಕ್ಕೂ ಆಗಮಿಸಿತು, ಆದರೆ ಅಧಿಕಾರಿಗಳು ಬರುವ ಮೊದಲೇ ಪಾಠಕ್ ಮನೆಯಿಂದ ಹೊರಟು ಹೋಗಿದ್ದರು.

ಎಫ್‌ಐಆರ್‌ಗಳ ಬಗ್ಗೆ ತನಗೆ ತಿಳಿದಿಲ್ಲ ಮತ್ತು ಪೊಲೀಸರು ಅವರನ್ನು ಸಂಪರ್ಕಿಸಿಲ್ಲ ಎಂದು ಸಂದೀಪ್ ಪಾಠಕ್ ಹೇಳಿದ್ದಾರೆ, ನಾನು ಪ್ರಾಮಾಣಿಕತೆ ಮತ್ತು ಸಮಗ್ರತೆ ಯಿಂದ ದೇಶಕ್ಕೆ ಸೇವೆ ಸಲ್ಲಿಸಿದ್ದೇನೆ. ದೇಶವು ಯಾವುದೇ ಪಕ್ಷಕ್ಕಿಂತ ದೊಡ್ಡದು, ನಾನು ಅದನ್ನು ಎಂದಿಗೂ ದೇಶಕ್ಕೆ ದ್ರೋಹ ಮಾಡುವುದಿಲ್ಲ, ಅಥವಾ ಬೇರೆಯವರಿಗೆ ಹಾಗೆ ಮಾಡಲು ಬಿಡುವುದಿಲ್ಲ. ನನ್ನಂತಹ ವ್ಯಕ್ತಿಯ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲಾಗಿದ್ದರೆ, ಅದು ಅವರು ಎಷ್ಟು ಭಯಭೀತರಾಗಿದ್ದಾರೆ ಎಂಬುದನ್ನು ತೋರಿಸುತ್ತದೆ. ನಾನು ಹೆಚ್ಚಿಗೆ ಏನನ್ನೂ ಹೇಳಲು ಬಯಸುವುದಿಲ್ಲ ಎಂದು ಅವರು ಹೇಳಿದರು.

ಏಪ್ರಿಲ್ 2022 ರಿಂದ ಪಂಜಾಬ್‌ನಿಂದ ರಾಜ್ಯಸಭಾ ಸದಸ್ಯರಾಗಿರುವ ಪಾಠಕ್ ಅವರನ್ನು 2022 ರ ವಿಧಾನಸಭಾ ಚುನಾವಣೆಯಲ್ಲಿ ಎಎಪಿಯ ಪಂಜಾಬ್ ಗೆಲುವಿನ ಶಿಲ್ಪಿ ಎಂದು ಪರಿಗಣಿಸಲಾಗಿತ್ತು. ಮುಂದಿನ ವರ್ಷ ರಾಜ್ಯದಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗೆ ಮುನ್ನ ಅವರು, ರಾಘವ್ ಛಡ್ಡಾ ಸೇರಿದಂತೆ ಇತರ ಆರು ಎಎಪಿ ಸಂಸದರೊಂದಿಗೆ ಬಿಜೆಪಿಗೆ ಸೇರ್ಪಡೆಗೊಂಡಿದ್ದು, ಅರವಿಂದ್ ಕೇಜ್ರಿವಾಲ್ ಅವರ ಪಕ್ಷಕ್ಕೆ ದೊಡ್ಡ ಹಿನ್ನಡೆಯಾಗಿದೆ.

ಎಎಪಿ ತೊರೆಯುವ ನಿರ್ಧಾರದ ಬಗ್ಗೆ ಪಾಠಕ್ ಕಳೆದ ತಿಂಗಳು ಮಾತನಾಡುತ್ತಾ, ದೇಶಕ್ಕಾಗಿ ಕೆಲಸ ಮಾಡುವುದು ಮಾತ್ರ ನನ್ನ ಉದ್ದೇಶ ಮತ್ತು ಅದೇ ನನ್ನ ಏಕೈಕ ಗುರಿ ಎಂದು ಹೇಳಿದ್ದರು. ಆದಾಗ್ಯೂ, ವಿವಿಧ ಕಾರಣಗಳಿಂದಾಗಿ ಎಎಪಿ ಅಡಿಯಲ್ಲಿ ಕೆಲಸ ಮಾಡುವುದು ಕಷ್ಟಕರವಾಗಿತ್ತು ಮತ್ತು ಅದಕ್ಕಾಗಿಯೇ ಅವರು ಪಕ್ಷವನ್ನು ತೊರೆದು ಬಿಜೆಪಿಗೆ ಸೇರಬೇಕಾಯಿತು ಎಂದು ಹೇಳಿದ್ದರು.

# ತಪ್ಪು ಮಾಡದಿದ್ದರೂ 3 ತಿಂಗಳು ಜೈಲಿನಲ್ಲಿಟ್ಟಿದ್ದ ಉ.ಪ್ರ ಸರ್ಕಾರಕ್ಕೆ 10 ಲಕ್ಷ ರೂ. ದಂಡ



**ಲಖನೌ, ಮೇ 2:** ಅಲಹಾಬಾದ್ ಹೈಕೋರ್ಟ್‌ನ ಲಖನೌ ಪೀಠವು ಉತ್ತರ ಪ್ರದೇಶ ಸರ್ಕಾರವನ್ನು ತೀವ್ರವಾಗಿ ಖಂಡಿಸಿದೆ. ಅಲ್ಲದೆ, ಅದಕ್ಕೆ 10 ಲಕ್ಷ ರೂ. ದಂಡವನ್ನು ವಿಧಿಸಿದೆ. ಕಾರಣಗಳನ್ನು ನೀಡದೆ ವ್ಯಕ್ತಿಯನ್ನು 3 ತಿಂಗಳ ಕಾಲ ಜೈಲಿನಲ್ಲಿ ಇರಿಸಿದ್ದ ರಾಜ್ಯ ಸರ್ಕಾರದ ಕ್ರಮವನ್ನು ನ್ಯಾಯಾಲಯವು ಸಂವಿಧಾನಬಾಹಿರ ಎಂದು ಘೋಷಿಸಿದೆ. ಹೇಬಿಯಸ್ ಕಾರ್ಪಸ್ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅಬ್ದುಲ್ ಮೊಯಿನ್ ಮತ್ತು ನ್ಯಾಯಮೂರ್ತಿ ಪ್ರಮೋದ್ ಕುಮಾರ್ ಶ್ರೀವಾಸ್ತವ ಅವರ ವಿಭಾಗೀಯ ಪೀಠವು ಈ ಆದೇಶವನ್ನು ನೀಡಿದೆ.

ಈ ಅಕ್ರಮ ಬಂಧನಕ್ಕೆ ಕಾರಣರಾದ ಅಧಿಕಾರಿಗಳಿಂದ ರಾಜ್ಯ ಸರ್ಕಾರವು ಈ ದಂಡದ ಮೊತ್ತವನ್ನು ವಸೂಲಿ ಮಾಡಬಹುದು ಎಂದು ನ್ಯಾಯಾಲಯವು ನಿರ್ದೇಶಿಸಿದೆ.

ಮನೋಜ್ ಕುಮಾರ್ ಎಂಬುವವರನ್ನು ಜನವರಿ 27ರಂದು ಉನ್ನಾವೊ ಜಿಲ್ಲೆಯ ಅಸಿವಾನ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಬಂಧಿಸಲಾಯಿತು. ಬಂಧನದ ನಂತರ ಅವರನ್ನು 3 ತಿಂಗಳು ಜೈಲಿನಲ್ಲಿ ಇರಿಸಲಾಗಿತ್ತು. ಆದರೆ ಅವರ ವಿರುದ್ಧ ಪೊಲೀಸರು ಯಾವುದೇ ಆರೋಪಗಳನ್ನು ದಾಖಲಿಸಲು ವಿಫಲರಾಗಿದ್ದಾರೆ. ಪೊಲೀಸರಿಗೆ ಆ ವ್ಯಕ್ತಿಯ ಬಂಧನಕ್ಕೆ ಯಾವುದೇ ಸ್ಪಷ್ಟ ಕಾರಣಗಳನ್ನು ನೀಡಲು ಸಾಧ್ಯವಾಗಲಿಲ್ಲ. ಹೀಗಾಗಿ, ಮನೋಜ್ ಕುಮಾರ್ ಬೇರೆ ಯಾವುದೇ ಪ್ರಕರಣದಲ್ಲಿ ಆರೋಪಿಯಾಗಿಲ್ಲದಿದ್ದರೆ ಅವರನ್ನು ತಕ್ಷಣ ಬಿಡುಗಡೆ ಮಾಡಲು ನ್ಯಾಯಾಲಯ ಆದೇಶಿಸಿದೆ. ಪೊಲೀಸರು ಬಂಧನಕ್ಕೆ ಕಾರಣಗಳನ್ನು ನೀಡಲು ವಿಫಲವಾದರೆ ಆ ಬಂಧನ ಸಂವಿಧಾನಬಾಹಿರವಾಗಿರುತ್ತದೆ ಎಂದು ನ್ಯಾಯಪೀಠ ಹೇಳಿದೆ.

ಉತ್ತರ ಪ್ರದೇಶದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಸೇರಿದಂತೆ ಉನ್ನತ ಅಧಿಕಾರಿಗಳ ಸ್ಥಿತಿಯೇ ಹೀಗಿದ್ದರೆ, ರಾಜ್ಯದ ಇತರ ಅಧಿಕಾರಿಗಳು ಯಾವ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರಬಹುದು ಎಂದು ನ್ಯಾಯಾಲಯವು ಕಳವಳ ವ್ಯಕ್ತಪಡಿಸಿದೆ.

ಸುಪ್ರೀಂ ಕೋರ್ಟ್‌ನ ವಿವಿಧ ತೀರ್ಪುಗಳನ್ನು ಉಲ್ಲೇಖಿಸಿದ ಅಲಹಾಬಾದ್ ಹೈಕೋರ್ಟ್, ಯಾವುದೇ ವ್ಯಕ್ತಿಯನ್ನು ಬಂಧಿಸಲು ಲಿಖಿತ ಆಧಾರಗಳನ್ನು ಒದಗಿಸುವುದು ಸಾಂವಿಧಾನಿಕ ಬಾಧ್ಯತೆಯಾಗಿದೆ ಎಂದು ಹೇಳಿದೆ. ಇದನ್ನು ನಿರ್ಲಕ್ಷಿಸುವುದು ನಾಗರಿಕರ ಮೂಲಭೂತ ಹಕ್ಕುಗಳ ನೇರ ಉಲ್ಲಂಘನೆಯಾಗುತ್ತದೆ ಎಂದಿದೆ.

# ಶಿಥಿಲಾವಸ್ಥೆಯಲ್ಲಿರುವ ಕಾಂಪೌಂಡ್, ಕಟ್ಟಡ ತೆರವುಗೊಳಿಸಿ
## ಅಧಿಕಾರಿಗಳಿಗೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ

**ಬೆಂಗಳೂರು, ಮೇ 2:** ತನ್ನ ವ್ಯಾಪ್ತಿಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಕಾಂಪೌಂಡ್‌ಗಳು ಮತ್ತು ಕಟ್ಟಡಗಳನ್ನು ತಕ್ಷಣವೇ ಗುರುತಿಸಿ ಕೆಡವುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬುಧವಾರ ಸಂಜೆ ನಗರದಲ್ಲಿ ಸುರಿದ ಭಾರಿ ಮಳೆ, ಬಲವಾದ ಗಾಳಿ ಮತ್ತು ಆಲಿಕಲ್ಲು ಮಳೆಯಿಂದ ಉಂಟಾದ ಹಾನಿ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿ ಮತ್ತು ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿಕೆ ಶಿವಕುಮಾರ್ ಅವರ ನಿರ್ದೇಶನದ ಮೇರೆಗೆ ಈ ಸೂಚನೆಗಳನ್ನು ನೀಡಲಾಗಿದೆ.

ಗುಡುಗು ಸಹಿತ ಮಳೆ ಮತ್ತು ಬಿರುಗಾಳಿಯು ನಗರದಲ್ಲಿ ತಾಪಮಾನವನ್ನು ಕಡಿಮೆ ಮಾಡಲು ಸಹಾಯ ಮಾಡಿತಾದರೂ, ಹಲವೆಡೆ ವ್ಯಾಪಕ ಹಾನಿಯುಂಟು ಮಾಡಿತು. ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯಲ್ಲಿ ಕಾಂಪೌಂಡ್ ಗೋಡೆ ಕುಸಿದು ಒಂದು ಮಗು ಸೇರಿದಂತೆ ಏಳು ಜನರು ಸಾವಿಗೀಡಾಗಿದ್ದಾರೆ. ಮಳೆಯ ತೀವ್ರತೆಯಿಂದಾಗಿ



ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಗೋಡೆ ಕುಸಿದು ಏಳು ಮಂದಿ ಸಾವಿಗೀಡಾಗಿದ್ದು, ಇದು ಅತ್ಯಂತ ದುರದೃಷ್ಟಕರ ಘಟನೆಯಾಗಿದೆ. ಮಳೆಯಿಂದಾಗಿ ಸಾರ್ವಜನಿಕ ಮತ್ತು ಖಾಸಗಿ ಆಸ್ತಿಪಾಸ್ತಿಗಳಿಗೆ ಹಾನಿಯಾಗಿದೆ ಮತ್ತು ಸಾರ್ವಜನಿಕ ಸಂಚಾರಕ್ಕೆ ಅಡ್ಡಿಯಾಗಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪ್ರಕಟಣೆಯಲ್ಲಿ ತಿಳಿಸಿದೆ.

ಇದಲ್ಲದೆ, ಹಲವಾರು ಪ್ರದೇಶಗಳಲ್ಲಿ ಮರಗಳು ಮತ್ತು ಕೊಂಬೆಗಳು ಬೀಳುವ ಅಪಾಯ ಎದುರಾಗಿದೆ ಎಂದು ಅದು ಹೇಳಿದೆ.'ಅಪಾಯಕಾರಿ ಮರಗಳು, ದುರ್ಬಲ ಕೊಂಬೆಗಳು, ಅಪಾಯಕಾರಿ ಗೋಡೆಗಳು ಮತ್ತು ಅಸುರಕ್ಷಿತ ಕಟ್ಟಡಗಳನ್ನು ತಕ್ಷಣ ಗುರುತಿಸಲು ಮತ್ತು ಯಾವುದೇ ಅಹಿತಕರ ಘಟನೆಗಳು ಮತ್ತು ಸಾರ್ವಜನಿಕರಿಗೆ ಅನಾನುಕೂಲ ತಪ್ಪಿಸಲು ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ಉಪ ಮುಖ್ಯಮಂತ್ರಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ' ಎಂದು ಅದು ಹೇಳಿದೆ. ಅದರಂತೆ, ಐದು ನಗರ ಪಾಲಿಗೆಗಳ ಆಯುಕ್ತರು ಮತ್ತು ಹೆಚ್ಚುವರಿ ಆಯುಕ್ತರು ಪರಿಸ್ಥಿತಿಯನ್ನು ವೈಯಕ್ತಿಕವಾಗಿ ಮೇಲ್ವಿಚಾರಣೆ ಮಾಡಲು ಮತ್ತು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿ, ಪೊಲೀಸ್ ಸಿಬ್ಬಂದಿ ಮತ್ತು ನಗರ ನಿಗಮದ ಅಧಿಕಾರಿಗಳು ಮತ್ತು ನೌಕರರನ್ನು ಒಳಗೊಂಡ ವಿಶೇಷ ತಂಡಗಳನ್ನು ರಚಿಸಲು ಸೂಚಿಸಲಾಗಿದೆ.

ಮತ್ತಷ್ಟು ಮಳೆಯಾಗುವ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು, ಸಾರ್ವಜನಿಕರಿಗೆ ಯಾವುದೇ ಅನಾನುಕೂಲ ಉಂಟಾಗದಂತೆ ನೋಡಿಕೊಳ್ಳಲು ಅಗತ್ಯವಿರುವ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಜಾರಿಗೆ ತರಲು ಈ ತಂಡಗಳಿಗೆ ನಿರ್ದೇಶನ ನೀಡಲಾಗಿದೆ. ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ಬಿನ್ನಿಮಿಲ್ ರಸ್ತೆಯಲ್ಲಿ, ಹಳೆಯ ಗೋಡೆಯು ತೀವ್ರವಾಗಿ ದುರ್ಬಲಗೊಂಡ ಸ್ಥಿತಿಯಲ್ಲಿದ್ದು, ಕುಸಿಯುವ ಅಪಾಯದಲ್ಲಿದೆ ಎಂದು ಜಿಬಿಎ ತಿಳಿಸಿದೆ. ಇತ್ತೀಚಿನ ಮಳೆಯ ನಂತರ, 10 ಅಡಿ ಎತ್ತರದ ಗೋಡೆಯ ಸುಮಾರು 60 ಮೀಟರ್ ಈಗಾಗಲೇ ಕುಸಿದಿತ್ತು. ಇದರ ಪರಿಣಾಮವಾಗಿ, 25 ಅಡಿ ಎತ್ತರದ, 300 ಮೀಟರ್ ಉದ್ದದ ಗೋಡೆಯ ಭಾಗವನ್ನು ಈಗ ಕೆಡವಲಾಗಿದ್ದು, 10 ಅಡಿ ಎತ್ತರದ ಗೋಡೆಯ ಹೆಚ್ಚುವರಿ 100 ಮೀಟರ್ ಭಾಗವನ್ನು ತೆಗೆದುಹಾಕುವ ಕಾರ್ಯ ಸದ್ಯ ಪ್ರಗತಿಯಲ್ಲಿದೆ.ಪಶ್ಚಿಮ ನಗರ ಪಾಲಿಗೆ ವ್ಯಾಪ್ತಿಯಲ್ಲಿ, ಮಲ್ಲೇಶ್ವರದ ಮೈಸೂರು ಲ್ಯಾಂಪ್ಸ್ ಆವರಣದ 8ನೇ ಮುಖ್ಯ ರಸ್ತೆಯಲ್ಲಿ 240 ಮೀಟರ್ ಉದ್ದದ ಕಾಂಪೌಂಡ್ ಗೋಡೆಯನ್ನು ಅಸುರಕ್ಷಿತವೆಂದು ಗುರುತಿಸಲಾಗಿದೆ. ಸೂಕ್ತ ಸುರಕ್ಷತಾ ಕ್ರಮಗಳು, ಮಾನವಶಕ್ತಿ ಮತ್ತು ಯಂತ್ರೋಪಕರಣಗಳೊಂದಿಗೆ, ಗೋಡೆಯ ಕೆಡವುವಿಕೆ ಪೂರ್ಣಗೊಂಡಿದೆ.

# ಮೇ 20ರಿಂದ ಸಾರಿಗೆ ನೌಕರರಿಂದ ಅನಿರ್ದಿಷ್ಟಾವಧಿ ಮುಷ್ಕರ

**ಬೆಂಗಳೂರು, ಏ.2:** ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ಸಾರಿಗೆ ನಿಮಗಳ ನೌಕರರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಜಂಟಿ ಕ್ರಿಯಾ ಸಮಿತಿ ಮೂಲಕ ಮೇ 20ರಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲು ತೀರ್ಮಾನಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಂಟಿ ಕ್ರಿಯಾ ಸಮಿತಿ ಪದಾಧಿಕಾರಿಗಳಾದ ಬಿ. ಜಯದೇವರಾಜೇ ಅರಸು, ಜ್ಯೋತಿ ಅನಂತ ಸುಬ್ಬರಾವ್, ವಿಜಯ ಭಾಸ್ಕರ್ ಎಚ್.ಎಸ್. ಮಂಜುನಾಥ್, ಗಂಡಸಿ ಸದಾನಂದಸ್ವಾಮಿ, 2024ರ ಜನವರಿ 1ರಿಂದ ಬಾಕಿಯಿರುವ ವೇತನ ಪರಿಷ್ಕರಣೆ ಬೇಡಿಕೆಯನ್ನು ಜಾರಿಗೆ ತರಬೇಕು. ನಿವೃತ್ತ ನೌಕರರಿಗೆ ಬಾಕಿ ಇರುವ 12 ತಿಂಗಳ ವೇತನವನ್ನು ಪಾವತಿಸಬೇಕು. 26 ತಿಂಗಳ ಬಾಕಿ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು. ಇದೇ ವೇಳೆ, 2020ರಲ್ಲಿ ಕೋವಿಡ್ ಅವಧಿಯಲ್ಲಿ ಸೇವೆಯಲ್ಲಿದ್ದ ಸಿಬ್ಬಂದಿಗೆ ಪ್ರೋತ್ಸಾಹಧನ ನೀಡಬೇಕು. 2022ರ ಜುಲೈ 1ರಿಂದ ಬಾಕಿಯಿರುವ ಶೇ.31 ತುಟ್ಟಿಭತ್ಯೆಯನ್ನು ಮರು ವೇತನದಲ್ಲಿ ವಿಲೀನಗೊಳಿಸಿ ಬಾಕಿ ಹಣ ಪಾವತಿಸಬೇಕು. ಸಾರಿಗೆ ನಿಗಮಗಳ ಸಿಬ್ಬಂದಿಗೆ ಸರ್ಕಾರಿ ನೌಕರರ ಸ್ಥಾನಮಾನ ನೀಡಬೇಕು ಎಂಬ ಪ್ರಮುಖ ಬೇಡಿಕೆಯನ್ನು ಕೂಡ ಜಂಟಿ ಕ್ರಿಯಾ ಸಮಿತಿ ಮುಂದಿಟ್ಟಿದೆ ಎಂದರು. ಅಲ್ಲದೆ, ನಾಲ್ಕು ನಿಗಮಗಳ ನೌಕರರಿಗೆ 4 ವರ್ಷಕ್ಕೊಮ್ಮೆ 7ನೇ ವೇತನ ಆಯೋಗದ ಮಾದರಿಯಲ್ಲಿ ಶೇ.27.5ರ ವೇತನ ಹೆಚ್ಚಳ ನೀಡಬೇಕು. ಈ ಕುರಿತು ಸರ್ಕಾರಕ್ಕೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಮುಷ್ಕರ ಅನಿವಾರ್ಯವಾಗಿದೆ ಎಂದು ಎಂದು ತಿಳಿಸಿದರು.

# ವಾಣಿಜ್ಯ ಬಳಕೆ ಸಿಲಿಂಡರ್ ಮೇಲಿನ ಜಿಎಸ್‌ಟಿ ಶೇ.5ಕ್ಕೆ ಇಳಿಸಿ ಸರ್ಕಾರಕ್ಕೆ ರಾಜ್ಯ ಹೋಟೆಲ್ ಮಾಲೀಕರ ಸಂಘ ಒತ್ತಾಯ

**ಬೆಂಗಳೂರು, ಮೇ 2:** 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಮೇಲಿನ ಜಿಎಸ್‌ಟಿಯನ್ನು ತಕ್ಷಣವೇ ಶೇಕಡಾ 18ರಿಂದ ಶೇಕಡಾ 5ಕ್ಕೆ ಇಳಿಸುವಂತೆ ಸರ್ಕಾರವನ್ನು ರಾಜ್ಯ ಹೋಟೆಲ್‌ಗಳ ಸಂಘವು ಶನಿವಾರ ಒತ್ತಾಯಿಸಿದೆ.

ಪಶ್ಚಿಮ ಏಷ್ಯಾ ಪರಿಸ್ಥಿತಿಯಿಂದಾಗಿ ಜಾಗತಿಕ ಇಂಧನ ಬೆಲೆಗಳ ಏರಿಕೆಯಿಂದಾಗಿ ವಾಣಿಜ್ಯ ಎಲ್‌ಪಿಜಿಯ ಬೆಲೆಯನ್ನು ಶುಕ್ರವಾರ 19 ಕೆಜಿ ಸಿಲಿಂಡರ್‌ಗೆ ರೂ 993ರಷ್ಟು ತೀವ್ರವಾಗಿ ಹೆಚ್ಚಿಸಿದ ನಂತರ ಈ ಬೇಡಿಕೆ ಬಂದಿದೆ. ಸರ್ಕಾರ ತೈಲ ಮಾರುಕಟ್ಟೆ ಕಂಪನಿಗಳ ಮೂಲಕ ಘೋಷಿಸಿದ 60 ದಿನಗಳಲ್ಲಿ 1,308 ರೂ.ಗಳ ಹೆಚ್ಚಳವು ಇತ್ತೀಚಿನ ದಿನಗಳಲ್ಲಿ ತೀವ್ರ ಏರಿಕೆಯಾಗಿದೆ ಎಂದು ಹೋಟೆಲ್ ಸಂಘದ ಅಧ್ಯಕ್ಷ ಜಿ.ಕೆ.ಶೆಟ್ಟಿ ಹೇಳಿದ್ದಾರೆ.

ಮಾರ್ಚ್‌ನಲ್ಲಿ 1,800 – 2,000 ರೂ.ಗಳಿದ್ದ ಬೆಲೆಗಳು ಈಗ 3,100 ರೂ.ಗೆ ಏರಿಕೆಯಾಗಿದೆ. 60 ದಿನಗಳಲ್ಲಿ ಶೇ.50ರಿಂದ 70 ರವರೆಗೆ ಏರಿಕೆಯಾಗಿದೆ. ತಕ್ಷಣವೇ ಕ್ರಮಗಳನ್ನು ತೆಗೆದುಕೊಳ್ಳದಿದ್ದರೆ, ಹೆಚ್ಚಿದ ವೆಚ್ಚವನ್ನು ಗ್ರಾಹಕರಿಗೆ ವರ್ಗಾಯಿಸುವುದನ್ನು ಬಿಟ್ಟು ಬೇರೆ ದಾರಿಯಿಲ್ಲ, ಇದು ಗ್ರಾಹಕರಿಗೆ ದುಬಾರಿಯಾಗಲಿದೆ ಎಂದಿದ್ದಾರೆ.



ವಾಣಿಜ್ಯ ಎಲ್‌ಪಿಜಿ ಕೊರತೆಯು ಬೆಲೆ ಏರಿಕೆಯೊಂದಿಗೆ ಸೇರಿಕೊಂಡು ರಾಜ್ಯಾದ್ಯಂತ ಹೋಟೆಲ್‌ಗಳು ಮತ್ತು ತಿನಿಸುಗಳ ನಿರ್ವಹಣಾ ವೆಚ್ಚವನ್ನು ಗಮನಾರ್ಹವಾಗಿ ಹೆಚ್ಚಿಸಿದೆ. ಸದ್ಯ ಆತಿಥ್ಯ ವಲಯವು ಚೇತರಿಸಿಕೊಳ್ಳುತ್ತಿದ್ದು ಬಹು ಸವಾಲುಗಳನ್ನು ಎದುರಿಸುತ್ತಿದೆ. ಹೆಚ್ಚುತ್ತಿರುವ ಇಂಧನ ವೆಚ್ಚಗಳ ಜೊತೆಗೆ, ಬೆಂಗಳೂರಿನಲ್ಲಿ ಕಸ ಸಂಗ್ರಹ ಶುಲ್ಕಗಳು ಮತ್ತು ಇತರ ವೆಚ್ಚಗಳಂತಹ ಸ್ಥಳೀಯ ತೆರಿಗೆಗಳಿಂದ ವ್ಯವಹಾರಕ್ಕೆ ಹೊರೆಯಾಗಿವೆ, ಈ ನಿಟ್ಟಿನಲ್ಲಿ ವಾಣಿಜ್ಯ ಬಳಕೆ ಸಿಲಿಂಡರ್ ಮೇಲಿನ ಜಿಎಸ್‌ಟಿ ಕಡಿಮೆ ಮಾಡುವುದು ಒಂದು ನಿರ್ಣಾಯಕ ಹೆಜ್ಜೆಯಾಗಲಿದೆ ಎಂದು ಸಂಘವು ಒತ್ತಿಹೇಳಿದೆ.

# ಮೇ 9ರಿಂದ ರಾಜ್ಯಮಟ್ಟದ ಬ್ರಾಹ್ಮಣ ವಧು-ವರಾನ್ವೇಷಣಾ ಸಮಾವೇಶ ಶ್ರೀನಿವಾಸ ಕಲ್ಯಾಣೋತ್ಸವ

**ಬೆಂಗಳೂರು, ಮೇ 2:** ಬ್ರಾಹ್ಮಣ ವಿವಿಧ ಸಂಘಟನೆಗಳು ಬೆಂಗಳೂರು, ಮಂಗಳಸೂತ್ರ ಫೌಂಡೇಶನ್, ಸಪ್ತಪದಿ ಫೌಂಡೇಶನ್ ಟ್ರಸ್ಟ್, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಬೆಂಗಳೂರು ಸಹಕಾರದೊಂದಿಗೆ ರಾಜ್ಯಮಟ್ಟದ ಬ್ರಾಹ್ಮಣ ವಧು-ವರಾನ್ವೇಷಣ ಸಮಾವೇಶ ಮೇ 9 ಹಾಗೂ 10 ರಂದು ಹಮ್ಮಿಕೊಳ್ಳಲಾಗಿದೆ.

ಸಮಾವೇಶ ಹಾಗೂ ಕಲ್ಯಾಣ ಪ್ರಾಪ್ತಿಗಾಗಿ ಶ್ರೀನಿವಾಸ ಕಲ್ಯಾಣೋತ್ಸವವನ್ನು ಬನಶಂಕರಿ ಎರಡನೇ ಹಂತ, ಬಸವನಗುಡಿಯಲ್ಲಿರುವ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ "ಗಾಯತ್ರಿ ಭವನದಲ್ಲಿ ನಡೆಯಲಿದೆ ಎರಡು ದಿನಗಳ ಕಾಲ ಬೆಳಗ್ಗೆ 9:00 ರಿಂದ ಸಂಜೆ 5:00ರವರೆಗೆ ವಧು-ವರಾನ್ವೇಷಣಾ ಸಮಾವೇಶ ಆಯೋಜಿಸಲಾಗಿದೆ.

ಆಸಕ್ತರು 1 ಪೋಸ್ಟ್ ಕಾರ್ಡ್ ಸೈಜ್ ಫೋಟೋ, ಬಯೋಡೇಟಾ, ಜಾತಕದೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಂಚಾಲಕ ಶ್ರೀನಿವಾಸ್ ಅಥವಾ ಮೊಬೈಲ್ ಸಂಖ್ಯೆ 9449425536 / 8088843300 ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಮೇ 29ರಂದು ಶಾಲೆಗಳು ಪುನರಾರಂಭ ಶಿಕ್ಷಣ ಇಲಾಖೆಯಿಂದ ವೇಳಾಪಟ್ಟಿ ಪ್ರಕಟ

**ಬೆಂಗಳೂರು, ಮೇ 2:** ರಜೆಯ ಮಜಾದಲ್ಲಿರುವ ವಿದ್ಯಾರ್ಥಿಗಳಿಗೆ ಹಾಗೂ ಶೈಕ್ಷಣಿಕ ವರ್ಷದ ಆರಂಭದ ನಿರೀಕ್ಷೆಯಲ್ಲಿದ್ದ ಪೋಷಕರಿಗೆ ಶಿಕ್ಷಣ ಇಲಾಖೆಯು ಮುಖ್ಯ ಮಾಹಿತಿ ನೀಡಿದೆ. 2026-27ನೇ ಸಾಲಿನ ಶೈಕ್ಷಣಿಕ ಸಾಲಿನ ಅಧಿಕೃತ ಕ್ಯಾಲೆಂಡರ್ ಬಿಡುಗಡೆಯಾಗಿದ್ದು, ಮೇ 29ರಂದು ಶಾಲೆಗಳು ಪುನರಾರಂಭಗೊಳ್ಳಲಿವೆ. ಶಿಕ್ಷಣ ಇಲಾಖೆಯ ಮಾರ್ಗಸೂಚಿಯಂತೆ ಈ ಬಾರಿಯ ಶೈಕ್ಷಣಿಕ ವರ್ಷದ ವೇಳಾಪಟ್ಟಿ ಪ್ರಕಟವಾಗಿದೆ.



ಬೇಸಿಗೆ ರಜೆ ಅಂತ್ಯ: ಮೇ 28, 2026..ಶಾಲಾ ಪುನರಾರಂಭ: ಮೇ 29, 2026 (ಶುಕ್ರವಾರ).ಮೊದಲ ಶೈಕ್ಷಣಿಕ ಅವಧಿ: ಮೇ 29 ರಿಂದ ಅಕ್ಟೋಬರ್ 2 ರವರೆಗೆ?ದಸರಾ ರಜೆ: ಅಕ್ಟೋಬರ್ 3 ರಿಂದ ಅಕ್ಟೋಬರ್ 20 ರವರೆಗೆ (ಒಟ್ಟು 18 ದಿನಗಳು). ಎರಡನೇ ಶೈಕ್ಷಣಿಕ ಅವಧಿ: ಅಕ್ಟೋಬರ್ 21 ರಿಂದ 2027ರ ಏಪ್ರಿಲ್ ವರೆಗೆ.ಈ ವರ್ಷ ಒಟ್ಟು 245 ದಿನಗಳನ್ನು ಶಾಲಾ ಕೆಲಸದ ದಿನಗಳೆಂದು ಗುರುತಿಸಲಾಗಿದೆ. ಅದರಲ್ಲಿ:

181 ದಿನಗಳು: ಕೇವಲ ಬೋಧನೆ ಮತ್ತು ಕಲಿಕಾ ಪ್ರಕ್ರಿಯೆಗಾಗಿ ಮೀಸಲು. ಉಳಿದ ದಿನಗಳು: ಪರೀಕ್ಷೆಗಳು, ಕ್ರೀಡೆ, ಪ್ರವಾಸ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ನಿಗದಿಪಡಿಸಲಾಗಿದೆ.ದಾಖಲಾತಿ ಅವಧಿ: ಜೂನ್ 30 ರೊಳಗೆ ಎಲ್ಲಾ ವಿದ್ಯಾರ್ಥಿಗಳ ಪ್ರವೇಶಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಶಾಲೆಗಳಿಗೆ ಸೂಚಿಸಲಾಗಿದೆ.

ಶಿಕ್ಷಣದಿಂದ ವಂಚಿತರಾದ ಮಕ್ಕಳನ್ನು ಗುರುತಿಸಲು ಇಲಾಖೆ ಈ ಬಾರಿ ವಿಶೇಷ ಗಮನ ಹರಿಸಿದೆ. 6 ರಿಂದ 18 ವರ್ಷದೊಳಗಿನ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪತ್ತೆಹಚ್ಚಿ, ಅವರನ್ನು ಮುಖ್ಯವಾಹಿನಿಗೆ ತರಲು ಗ್ರಾಮ ಮತ್ತು ಜಿಲ್ಲಾ ಮಟ್ಟದಲ್ಲಿ ವಿಶೇಷ ಅಭಿಯಾನ ನಡೆಯಲಿದೆ.ಸರ್ಕಾರವು ಈಗಾಗಲೇ ಪೂರ್ವ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ಮೇ 29ರಿಂದ ಪೂರ್ಣ ಪ್ರಮಾಣದಲ್ಲಿ ತರಗತಿಗಳು ಆರಂಭವಾಗಲಿವೆ. ಹೀಗಾಗಿ, ಪೋಷಕರು ತಮ್ಮ ಮಕ್ಕಳಿಗೆ ಅಗತ್ಯವಿರುವ ಪಠ್ಯಪುಸ್ತಕಗಳು, ಸಮವಸ್ತ್ರ ಹಾಗೂ ಶೈಕ್ಷಣಿಕ ಸಾಮಗ್ರಿಗಳನ್ನು ಸಿದ್ಧಪಡಿಸಿಕೊಳ್ಳುವಂತೆ ತಿಳಿಸಲಾಗಿದೆ.

## ಭೂಮಾಫಿಯಾ, ಹ್ಯಾಕರ್‌ಗಳಿಗೆ ಹೆಬ್ಬಾಗಿಲು: ಪತ್ರ ಬರಹಗಾರರ ಒಕ್ಕೂಟ ಆತಂಕ
# ಕಾಗದರಹಿತ ನೋಂದಣಿಯಿಂದ ಆಸ್ತಿ ಭದ್ರತೆ ಅಪಾಯದಲ್ಲಿ

**ಬೆಂಗಳೂರು, ಏ.2:** ರಾಜ್ಯದಲ್ಲಿ ಜಾರಿಗೊಂಡಿರುವ ಕಾಗದರಹಿತ ಡಿಜಿಟಲ್ ಇ-ನೋಂದಣಿ ವ್ಯವಸ್ಥೆ ಇದೀಗ ಭಾರೀ ವಿವಾದಕ್ಕೆ ಕಾರಣವಾಗಿದ್ದು, ಸಾಮಾನ್ಯ ಜನರ ಆಸ್ತಿ ಭದ್ರತೆ ಗಂಭೀರ ಅಪಾಯಕ್ಕೆ ಸಿಲುಕಿದೆ. ವಿಶ್ವಾಸಾರ್ಹವಲ್ಲದ ಈ ವ್ಯವಸ್ಥೆಯ ಲೋಪದೋಷಗಳನ್ನು ಸರಿಪಡಿಸಿದ್ದರೆ ರಾಜ್ಯಾದ್ಯಂತ ಹೋರಾಟ ನಡೆಸುವುದಾಗಿ ರಾಜ್ಯ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಗಿ ಪಡೆದ (ದಸ್ತು)ಪತ್ರ ಬರಹಗಾರರ ಒಕ್ಕೂಟ ಎಚ್ಚರಿಕೆ ನೀಡಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಧರ್ಮರಾಜ್ ಮಾತನಾಡಿ, ಈ ವ್ಯವಸ್ಥೆಯಲ್ಲಿ ಸಾಕಷ್ಟು ಲೋಪದೋಷಗಳಿದ್ದು, ಜನ ಸಾಮಾನ್ಯರ ಆಸ್ತಿ ರಕ್ಷಣೆಗೆ ಗಂಭೀರ ಸವಾಲು ಎದುರಾಗಿದೆ. ತಾಂತ್ರಿಕ ದೋಷಗಳು, ಭದ್ರತಾ ಕೊರತೆ ಹಾಗೂ ಪಾರದರ್ಶಕತೆಯ ಅಭಾವದಿಂದ ಈ ವ್ಯವಸ್ಥೆ ಭೂಮಾಫಿಯಾ ಮತ್ತು ಹ್ಯಾಕರ್‌ಗಳಿಗೆ ನೆರವಾಗಲಿದೆ. ಇ-ನೋಂದಣಿ ಬಳಿಕ ಖರೀದಿದಾರರಿಗೆ ಯಾವುದೇ ಭೌತಿಕ ದಾಖಲೆಗಳನ್ನು ನೀಡುತ್ತಿಲ್ಲ. ಡಿಜಿಟಲ್ ಲಾಕರ್‌ನಲ್ಲೇ ದಾಖಲೆಗಳು ಉಳಿಯುತ್ತಿರುವುದರಿಂದ ಜನರಿಗೆ ಆಸ್ತಿಯ ನಿಖರ ದಸ್ತಾವೇಜುಗಳು ದೊರೆಯುವುದಿಲ್ಲ ಎಂದರು.

ಆಸ್ತಿ ಬಗ್ಗೆ ವಾರಸುದಾರರಿಗೆ ಮಾಹಿತಿಯೇ ಇರುವುದಿಲ್ಲ. ಇದರಿಂದ ಆಸ್ತಿ ಕಳೆದುಕೊಳ್ಳುವ



ಭೀತಿಯಲ್ಲದೆ, ಆಸ್ತಿ ಖರೀದಿ ಬಗ್ಗೆ ಕುಟುಂಬ ಸದಸ್ಯರಿಗೆ ಸ್ಪಷ್ಟ ಮಾಹಿತಿ ಸಿಗದಿರುವುದರಿಂದ ಮುಂದಿನ ದಿನಗಳಲ್ಲಿ ಆಸ್ತಿಗಳು ಕೈತಪ್ಪುವ ಆತಂಕ ಇರಲಿದೆ. ಇ-ಸಹಿ ದುರುಪಯೋಗವಾಗಲಿದ್ದು, ಮೋಸಕ್ಕೆ ಅವಕಾಶವಾಗಲಿದೆ. ಭೌತಿಕ ಸಹಿಯ ಬದಲು ಇ-ಸಹಿಯನ್ನು ಬಳಸುವುದರಿಂದ ಹಿರಿಯ ನಾಗರಿಕರು, ಅಕ್ಷರಜ್ಞಾನದ ಕೊರತೆಯವರು ಮೋಸಕ್ಕೆ ಒಳಗಾಗುವ ಸಾಧ್ಯತೆ ಹೆಚ್ಚಿದೆ ಎಂದು ಧರ್ಮರಾಜ್ ವಿ.ಕೋಟೆ ಆರೋಪಿಸಿದರು.

ಈ ಪೇಪರ್‌ಲೆಸ್ ವ್ಯವಸ್ಥೆ ಭೂಮಾಫಿಯಾ ಚಟುವಟಿಕೆಗಳಿಗೆ ಅನುಕೂಲ ಮಾಡಿಕೊಡಲಿದೆ. ಬ್ಯಾಂಕ್ ಸಾಲಕ್ಕೂ ಅಡೆತಡೆಯಾಗಲಿದೆ. ಮೂಲ ದಾಖಲೆಗಳಿಲ್ಲದೇ ಬ್ಯಾಂಕ್‌ಗಳಲ್ಲಿ ಆಸ್ತಿ ಮೇಲೆ ಸಾಲ ಪಡೆಯುವುದು ಕಷ್ಟಕರವಾಗಿದೆ. ಜೊತೆಗೆ ಓಟಿಪಿ ಗೊಂದಲ ಹೆಚ್ಚಾಗಿದ್ದು, ಒಂದೇ ನೋಂದಣಿಗೆ ಅನೇಕ ಬಾರಿ ಒಟಿಪಿ ಅಗತ್ಯವಿರುವುದರಿಂದ ಜನರಲ್ಲಿ ಈ ವ್ಯವಸ್ಥೆ ಆತಂಕ ಮೂಡಿಸುತ್ತಿದ್ದು, ಹ್ಯಾಕಿಂಗ್ ಭೀತಿ ಹೆಚ್ಚಾಗಿದೆ ಎಂದರು. ವಿಲ್ ವ್ಯವಸ್ಥೆಯಲ್ಲೂ ಗೊಂದಲ ನಿರ್ಮಾಣವಾಗಲಿದೆ. ಗುಪ್ತವಾಗಿ ಮಾಡಬೇಕಾದ ವಿಲ್ ಪ್ರಕ್ರಿಯೆಯೂ ಈ ವ್ಯವಸ್ಥೆಯಲ್ಲಿ ಸರಿಯಾಗಿ ಕಾರ್ಯನಿರ್ವಹಿಸುವುದಿಲ್ಲ. ಇದು ಮೂಲಭೂತವಾಗಿ ಸಾಮಾನ್ಯರಿಗೆ ಅರ್ಥವಾಗದ ವ್ಯವಸ್ಥೆಯಾಗಿದ್ದು. ವಿದ್ಯಾವಂತರಿಗೂ ಅರ್ಥವಾಗದ ಮಟ್ಟಕ್ಕೆ ಸಂಕೀರ್ಣವಾಗಿದೆ. ಗ್ರಾಮೀಣ ಹಾಗೂ ಸಾಮಾನ್ಯ ಜನರಿಗೆ ಈ ವ್ಯವಸ್ಥೆ ಬಗ್ಗೆ ವಿಶ್ವಾಸ ಮೂಡುತ್ತಿಲ್ಲ ಎಂದರು.

ಸುದ್ದಿಗೋಷ್ಠಿಯಲ್ಲಿ ಒಕ್ಕೂಟದ ಉಪಾಧ್ಯಕ್ಷ ನವೀನ್ ಕುಮಾರ್ ಎಸ್, ಸಹ ಕಾರ್ಯದರ್ಶಿಗಳಾದ ಕರಿಬಸಪ್ಪ ಬಳ್ಳಿ, ಈ.ಕೃಷ್ಣಮೂರ್ತಿ, ಖಜಾಂಚಿಗಳಾದ ಡಿ.ಆರ್. ಗಿರಿರಾಜು, ಕೆ.ಗಂಗಾಧರ್, ಸಂಚಾಲಕ ರಾಜಶೇಖರ್, ನಿರ್ದೇಶಕರಾದ ಕೇಶವಮೂರ್ತಿ, ನಾಗರಾಜ್ ಟಿ, ಜಿ.ಲಕ್ಷ್ಮಣ್, ಜಯಕುಮಾರ್ ಜೆ.ಜಿ ಉಪಸ್ಥಿತರಿದ್ದರು.

### ಪೇಪರ್‌ಲೆಸ್ ಅಲ್ಲ ಪೆನ್‌ಲೆಸ್

**ಇದು ಪೇಪರ್‌ಲೆಸ್ ಅಲ್ಲ, ಇದು ಪೆನ್‌ಲೆಸ್ ವ್ಯವಸ್ಥೆಯಾಗಿದೆ. ಈ ವ್ಯವಸ್ಥೆಯಲ್ಲಿ ಖರೀದಿದಾರರು, ಮಾರಾಟಗಾರರು, ಸಾಕ್ಷಿದಾರರು, ಹಾಗು ಅಧಿಕಾರಿಗಳೂ ಸಹ ಭೌತಿಕ ಸಹಿ ಮಾಡುವ ಅಗತ್ಯವಿಲ್ಲ. ಇದು ವ್ಯವಸ್ಥೆಯ ನಂಬಿಕೆಯನ್ನು ಪ್ರಶ್ನಿಸುವಂತೆ ಮಾಡುತ್ತಿದೆ. ತಜ್ಞರು ಮತ್ತು ಸಂಘಟನೆಗಳು ಈ ವ್ಯವಸ್ಥೆಯ ದೋಷಗಳನ್ನು ತಕ್ಷಣ ಸರಿಪಡಿಸಬೇಕು. ಇಲ್ಲವಾದರೆ ರಾಜ್ಯಾದ್ಯಂತ ಹೋರಾಟಕ್ಕೆ ಮುಂದಾಗುತ್ತೇವೆ. ಡಿಜಿಟಲ್ ಯುಗದಲ್ಲಿ ಸುಲಭತೆಗಾಗಿ ಜಾರಿಗೊಂಡ ಈ ಇ-ನೋಂದಣಿ ವ್ಯವಸ್ಥೆ, ಇದೀಗ ಜನರ ಆಸ್ತಿ ಭದ್ರತೆಯನ್ನೇ ಪ್ರಶ್ನಿಸುವ ಸ್ಥಿತಿಗೆ ತಲುಪಿದೆ. ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಇದು ರಾಜ್ಯದ ಅಸಂಖ್ಯಾತ ಕುಟುಂಬಗಳಿಗೆ ದೊಡ್ಡ ಸಂಕಷ್ಟವನ್ನುಂಟುಮಾಡುವ ಸಾಧ್ಯತೆ ಇದೆ ಎಂದರು.**

# ವಿದ್ಯುತ್ ಸಂಬಂಧಿತ ದೂರು ದಾಖಲಿಸಲು ಪರ್ಯಾಯ ಸಹಾಯವಾಣಿ

**ಬೆಂಗಳೂರು, ಮೇ 2:** ವಿದ್ಯುತ್ ಸಂಬಂಧಿತ ದೂರುಗಳನ್ನು ದಾಖಲಿಸಲು ಗ್ರಾಹಕರಿಗೆ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆಸ್ಕಾಂ) ಮನವಿ ಮಾಡಿದೆ. 1912 ಸಹಾಯವಾಣಿ ಸಂಖ್ಯೆಯ ಸಂಪರ್ಕ ಸಿಗದಿದ್ದಲ್ಲಿ, ಸಾರ್ವಜನಿಕರು ವಾಟ್ಸ್‌ಆಪ್ ಮತ್ತು ಸಾಮಾಜಿಕ ಜಾಲತಾಣಗಳ ಮೂಲಕ ದೂರುಗಳನ್ನು ಸಲ್ಲಿಸಬಹುದಾಗಿದೆ ಎಂದು ಬೆಸ್ಕಾಂ ತಿಳಿಸಿದೆ.

ಗ್ರಾಹಕರು ಈ ವಾಟ್ಸ್‌ಆಪ್ ಸಂಖ್ಯೆಗಳಿಗೆ ಸಂದೇಶದ ಜೊತೆಗೆ ವಿದ್ಯುತ್ ಸಮಸ್ಯೆಗಳಿರುವ ಸ್ಥಳದ ಫೋಟೋ ಹಾಗೂ ವಿಡಿಯೋಗಳನ್ನು ಸಹ ಕಳುಹಿಸಬಹುದಾಗಿದ್ದು, ಇದರಿಂದ ಸಮಸ್ಯೆಗಳನ್ನು ಬೇಗನೆ ಪರಿಹರಿಸಲು ಅನುಕೂಲವಾಗಲಿದೆ.

**ಎಲ್ಲೆಲ್ಲಿ ದೂರು ದಾಖಲಿಸಬಹುದು**

ಜಿಲ್ಲಾವಾರು ವಾಟ್ಸ್‌ಆಪ್ ಸಹಾಯವಾಣಿ ಸಂಖ್ಯೆ: ದಕ್ಷಿಣ ವೃತ್ತ (ಬೆಂಗಳೂರು ನಗರ) 8277884011, ಪಶ್ಚಿಮ ವೃತ್ತ (ಬೆಂಗಳೂರು ನಗರ) 8277884012, ಪೂರ್ವ ವೃತ್ತ (ಬೆಂಗಳೂರು ನಗರ) 8277884013, ಉತ್ತರ ವೃತ್ತ (ಬೆಂಗಳೂರು ನಗರ) 8277884014, ಕೋಲಾರ ಜಿಲ್ಲೆ 8277884015, ಚಿಕ್ಕಬಳ್ಳಾಪುರ ಜಿಲ್ಲೆ 8277884016, ಬೆಂಗಳೂರು ಗ್ರಾಮಾಂತರ ಜಿಲ್ಲೆ 8277884017, ರಾಮನಗರ ಜಿಲ್ಲೆ 8277884018, ತುಮಕೂರು ಜಿಲ್ಲೆ 8277884019, ಚಿತ್ರದುರ್ಗ ಜಿಲ್ಲೆ 8277884020, ದಾವಣಗೆರೆ ಜಿಲ್ಲೆ 8277884021. ಫೇಸ್‌ಬುಕ್ ಖಾತೆ:ನಮ್ಮ ಬೆಸ್ಕಾಂ ಫೇಸ್‌ಬುಕ್, ಎಕ್ಸ್ ಖಾತೆ- ನಮ್ಮ ಬೆಸ್ಕಾಂ ಎಕ್ಸ್.

# ಎರಡು ಕಡೆ ಬೆಂಕಿ ಅವಘಡ

**ಬೆಂಗಳೂರು, ಮೇ 2:** ನಗರದ ಎರಡು ಕಡೆ ಅಗ್ನಿದುರಂತ ಸಂಭವಿಸಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣ ಹಾನಿಯಾಗಿಲ್ಲ. ತಲಘಟ್ಟಪುರ ಪೊಲೀಸ್ ಠಾಣೆ ವ್ಯಾಪ್ತಿಯ ವಾಜರಹಳ್ಳಿ ಸಮೀಪದ ರಘುವನಹಳ್ಳಿಯಲ್ಲಿ ಶಾಮಿಯಾನದ ಗೋದಾಮಿಗೆ ಶನಿವಾರ ಬೆಳಗಿನ ಜಾವ ಬೆಂಕಿ ಕಾಣಿಸಿಕೊಂಡು ಹೊತ್ತಿ ಉರಿದಿದೆ. ಇದನ್ನು ಗಮನಿಸಿದ ಸ್ಥಳೀಯರು ತಕ್ಷಣ ಅಗ್ನಿ ಶಾಮಕದಳಕ್ಕೆ ವಿಷಯ ತಿಳಿಸಿದ್ದಾರೆ. ಸುದ್ದಿ ತಿಳಿದು ಆಗಮಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿಯನ್ನು ನಂದಿಸಿದ್ದಾರೆ. ಶಾರ್ಟ್‌ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿರುವುದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ. ಮಾಗಡಿ ರಸ್ತೆ: ರಾಜಾಜಿನಗರ ಇಂಡಸ್ಟ್ರೀಯಲ್ ಪ್ರದೇಶದಲ್ಲಿರುವ ಆಯಿಲ್ ಫಿಲ್ಟರ್ ಗೋದಾಮಿನಲ್ಲಿ ಇಂದು ಬೆಳಗ್ಗೆ 8 ಗಂಟೆ ಸುಮಾರಿನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಸುದ್ದಿ ತಿಳಿದಾಕ್ಷಣ ವಾಹನದೊಂದಿಗೆ ಆಗಮಿಸಿದ ಅಗ್ನಿ ಶಾಮಕ ಸಿಬ್ಬಂದಿ ಬೆಂಕಿಯನ್ನು ನಂದಿಸಿದ್ದಾರೆ. ಶಾರ್ಟ್‌ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿರುವುದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ. ಈ ಎರಡು ಪ್ರಕರಣಗಳಲ್ಲಿ ಅದೃಷ್ಟವಶಾತ್ ಯಾವುದೇ ಪ್ರಾಣ ಹಾನಿಯಾಗಿಲ್ಲ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಆಯಾಯಾ ಠಾಣಾ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

# ರೈತ ಮಕ್ಕಳ ಶೇ.50 ಮೀಸಲಾತಿ ಸದ್ಬಳಕೆ: ನಾಳೆ ಪ್ರಾಯೋಗಿಕ ಪರೀಕ್ಷೆಗಾಗಿ ತರಬೇತಿ ಕಾರ್ಯಾಗಾರ

**ಬೆಂಗಳೂರು,ಮೇ.2:** ಪಶುಸಂಗೋಪನೆ, ಬಿಎಸ್ಸಿ ಕೃಷಿ, ಬಿಎಸ್ಸಿ ತೋಟಗಾರಿಕೆ ಮುಂತಾದ 12 ಕೋರ್ಸುಗಳ ಪ್ರವೇಶಕ್ಕೆ ಕೃಷಿಕರ ಕೋಟಾದ ಅಡಿಯಲ್ಲಿ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ರೈತರ ಮಕ್ಕಳಿಗೆ 50% ಮೀಸಲಾತಿ ಲಭ್ಯವಿದ್ದು, ಇದನ್ನು ಸದುಪಯೋಗಪಡಿಸಿಕೊಳ್ಳಲು ಜಿಕೆವಿಕೆ ಬಳಿ ಇರುವ ಅರಬಿಂದೋ ಶಾಲೆಯಲ್ಲಿ ವಿಕಸಿತ 47 ಅಕಾಡೆಮಿಯಿಂದ ಕೃಷಿ ಪ್ರಾಯೋಗಿಕ ಪರೀಕ್ಷೆಗೆ ಸನ್ನದ್ಧಗೊಳ್ಳಲು ಮೇ 4 ರಂದು ಒಂದು ದಿನದ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ.

ರೈತ ಮಕ್ಕಳಿಗೆ ಲಭ್ಯವಿರುವ 50% ಮೀಸಲಾತಿ ಸೌಲಭ್ಯ ಪಡೆಯಲು ಕೆಸಿಇಟಿ ಪರೀಕ್ಷೆಯ ಜೊತೆಗೆ ಕೃಷಿ ವಿಶ್ವವಿದ್ಯಾಲಯಗಳಲ್ಲಿ ನಡೆಸುವ ಪ್ರಾಯೋಗಿಕ ಪರೀಕ್ಷೆಯನ್ನು



ಬರೆಯಬೇಕಾಗಿದೆ. ಈ ಪರೀಕ್ಷೆಗೆ ತಯಾರಾಗಲು ಮೇ 4 ರ ಸೋಮವಾರ ಅರಬಿಂದೋ ಶಾಲೆಯಲ್ಲಿ ತರಬೇತಿ ನೀಡಲಾಗುತ್ತಿದೆ ಎಂದು ವಿಕಸಿತ 47 ಅಕಾಡೆಮಿಯ ಮುಖ್ಯಸ್ಥ ತೇಜಸ್ ಎಚ್.ಎನ್. ತಿಳಿಸಿದ್ದಾರೆ.

ಈ ಕಾರ್ಯಗಾರದಲ್ಲಿ ಕೃಷಿ ಪ್ರಾಯೋಗಿಕ ಪರೀಕ್ಷೆಯ ಕುರಿತು ಸಂಪೂರ್ಣ ತರಬೇತಿ ನೀಡಲಾಗುತ್ತದೆ. ದ್ವಿತೀಯ ಪಿಯುಸಿ ಮುಗಿಸಿ ಅಗ್ರಿ ಪ್ರಾಕ್ಟಿಕಲ್ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು. ವಿದ್ಯಾರ್ಥಿಗಳು ನೋಂದಣಿ ಮಾಡಿಕೊಳ್ಳಲು 8217413646 ಗೆ ಕರೆಮಾಡುವಂತೆ ಕೋರಲಾಗಿದೆ.

# ಸರ್ಕಾರಿ ಶಾಲೆಗಳ ವ್ಯವಸ್ಥೆ ಸುಧಾರಣೆ 8 ಭರವಸೆಗಳ ಪ್ಯಾಕೇಜ್: ಸರ್ಕಾರ ಘೋಷಣೆ

**ಬೆಂಗಳೂರು, ಮೇ 2:** ಎಸ್‌ಎಸ್‌ಎಲ್‌ಸಿಯಲ್ಲಿ ಇತ್ತೀಚಿನ ದಾಖಲೆ ಫಲಿತಾಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರವು ರಾಜ್ಯದ ಸರ್ಕಾರಿ ಶಾಲಾ ವ್ಯವಸ್ಥೆಯನ್ನು ಸುಧಾರಿಸಲು ಮತ್ತು ಸಾರ್ವಜನಿಕ ಶಿಕ್ಷಣದ ಮೇಲೆ ಜನರ ವಿಶ್ವಾಸವನ್ನು ಪುನಃಸ್ಥಾಪಿಸಲು ಉದ್ದೇಶಿಸಿ ಸರ್ಕಾರ ಎಂಟು ಭರವಸೆಗಳ ಸಮಗ್ರ ಪ್ಯಾಕೇಜ್ ಘೋಷಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರ ನೇತೃತ್ವದಲ್ಲಿ ಈ ಯೋಜನೆ ರೂಪುಗೊಂಡಿದ್ದು, ಶಿಕ್ಷಕರ ಕೊರತೆ, ಮೂಲಸೌಕರ್ಯಗಳ ಅಭಾವ ಮತ್ತು ಹಳೆಯ ಬೋಧನಾ ವಿಧಾನಗಳಂತಹ ದೀರ್ಘಕಾಲದ ಸಮಸ್ಯೆಗಳನ್ನು ಪರಿಹರಿಸುವುದಕ್ಕೆ ಒತ್ತು ನೀಡಲಾಗಿದೆ. ಸರ್ಕಾರಿ ಶಾಲೆಗಳನ್ನು ಖಾಸಗಿ ಸಂಸ್ಥೆಗಳೊಂದಿಗೆ ಸ್ಪರ್ಧಾತ್ಮಕವಾಗಿಸಲು ಇದು ಮಹತ್ವದ ಹೆಜ್ಜೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸುಧಾರಣೆಗಳ ಕೇಂದ್ರ ಬಿಂದುವಾಗಿ ಶಿಕ್ಷಕರ ಕೊರತೆಯನ್ನು ನಿವಾರಿಸುವ ದೃಢನಿಶ್ಚಯವನ್ನು ಸರ್ಕಾರ ಹೊಂದಿದೆ.



ಎಲ್ಲಾ ಪ್ರಾಥಮಿಕ ಶಾಲೆಗಳಲ್ಲಿ 5ನೇ ತರಗತಿವರೆಗೆ ಪ್ರತಿಯೊಂದು ತರಗತಿಗೆ ಒಬ್ಬ ಶಿಕ್ಷಕರನ್ನು ನೇಮಕ ಮಾಡಲಾಗುತ್ತದೆ ಎಂದು ಸರ್ಕಾರ ಹೇಳಿದೆ. 6ನೇ ತರಗತಿಯಿಂದ ವಿಷಯವಾರು ಪರಿಣತ ಶಿಕ್ಷಕರನ್ನು ನೇಮಕ ಮಾಡಲಾಗುತ್ತದೆ. ಇದರಿಂದ ಒಬ್ಬ ಶಿಕ್ಷಕರು ಹಲವು ತರಗತಿಗಳನ್ನು ನೋಡಿಕೊಳ್ಳುವ ಸಮಸ್ಯೆಗೆ ಪರಿಹಾರ ಸಿಗಲಿದೆ.ಪೋಷಕರ ಬೇಡಿಕೆಗೆ ಸ್ಪಂದಿಸಿ, ಬೋಧನಾ ಮಾಧ್ಯಮದಲ್ಲಿ ಗುಣಮಟ್ಟ ಹೆಚ್ಚಿಸುವ ಭರವಸೆ ನೀಡಲಾಗಿದೆ. ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಮಾಧ್ಯಮ ಶಿಕ್ಷಣವನ್ನು ಲಭ್ಯವಾಗುವಂತೆ ಮಾಡಲಾಗುತ್ತದೆ. ಉತ್ತಮ ಗುಣಮಟ್ಟದಲ್ಲಿ ಬೋಧನೆ ನೀಡಲು ಶಿಕ್ಷಕರಿಗೆ ವಿಶೇಷ ತರಬೇತಿಯನ್ನು ಈಗಾಗಲೇ ನೀಡಲಾಗುತ್ತಿದೆ. ಸುಮಾರು 900 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳಾಗಿ ಮೇಲ್ದರ್ಜೆಗೆ ಏರಿಸಲಾಗುತ್ತಿದ್ದು, ಇಲ್ಲಿ ಕನ್ನಡ ಮತ್ತು ಇಂಗ್ಲಿಷ್ ಎರಡೂ ಭಾಷೆಗಳಲ್ಲಿ ಬೋಧನೆ ನಡೆಯಲಿದೆ.ಈ ಸುಧಾರಣಾ ಪ್ಯಾಕೇಜ್ ವಿದ್ಯಾರ್ಥಿಗಳನ್ನು ಡಿಜಿಟಲ್ ಭವಿಷ್ಯಕ್ಕೆ ಸಿದ್ಧಪಡಿಸುವತ್ತವೂ ಗಮನ ಹರಿಸಿದೆ. 1ನೇ ತರಗತಿಯಿಂದ ಹಂತ ಹಂತವಾಗಿ ಕಂಪ್ಯೂಟರ್ ಶಿಕ್ಷಣವನ್ನು ಪರಿಚಯಿಸಲಾಗುತ್ತದೆ, 3ನೇ ತರಗತಿಯಿಂದ ಕೃತಕ ಬುದ್ಧಿಮತ್ತೆಯ ಮೂಲಭೂತ ಅರಿವು ನೀಡಲಾಗುತ್ತದೆ. ಈ ಪರಿವರ್ತನೆಗೆ ಬೆಂಬಲವಾಗಿ ಎಲ್ಲಾ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳಲ್ಲಿ ಕಂಪ್ಯೂಟರ್ ಶಿಕ್ಷಕರನ್ನು ನೇಮಕ ಮಾಡಲಾಗುತ್ತದೆ. ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗೂ ಮಹತ್ವ ನೀಡಲಾಗಿದೆ. ದೈಹಿಕ ಶಿಕ್ಷಣ, ಕಲೆ ಮತ್ತು ಸಂಗೀತಕ್ಕೆ ವಿಶೇಷ ಶಿಕ್ಷಕರನ್ನು ಈ ವರ್ಷದಲ್ಲೇ ನೇಮಕ ಮಾಡುವುದಾಗಿ ಸರ್ಕಾರ ಭರವಸೆ ನೀಡಿದೆ. ಶಿಕ್ಷಕರು ಸಂಪೂರ್ಣವಾಗಿ ಬೋಧನೆಗೆ ಗಮನಹರಿಸಲು ಆಡಳಿತಾತ್ಮಕ ಕಾರ್ಯಗಳನ್ನು ನೋಡಿಕೊಳ್ಳಲು ಪ್ರತ್ಯೇಕ ಸಿಬ್ಬಂದಿಯನ್ನು ನೇಮಿಸಲಾಗುತ್ತದೆ.ಇದಲ್ಲದೆ, ನಿರಂತರ ವಿದ್ಯಾರ್ಥಿ ಮೌಲ್ಯಮಾಪನ ಮತ್ತು ಪೋಷಕರ ಭಾಗವಹಿಸುವಿಕೆಗೆ ಒತ್ತು ನೀಡಲಾಗಿದೆ. ಬೋಧನೆ ಆಧಾರಿತ ಮೌಲ್ಯಮಾಪನ ವ್ಯವಸ್ಥೆಯ ಮೂಲಕ ವಿದ್ಯಾರ್ಥಿಗಳ ಪ್ರಗತಿಯನ್ನು ಗಮನಿಸಲಾಗುತ್ತದೆ. ಎರಡು ತಿಂಗಳಿಗೆ ಒಮ್ಮೆ ಪೋಷಕ-ಶಿಕ್ಷಕರ ಸಭೆಗಳನ್ನು ನಡೆಸಿ ನಿಯಮಿತ ಪ್ರತಿಕ್ರಿಯೆ ಪಡೆಯಲಾಗುತ್ತದೆ.6ನೇ ತರಗತಿಯಿಂದ ಕೌಶಲ್ಯಾಧಾರಿತ ಶಿಕ್ಷಣ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಯನ್ನು ಪರಿಚಯಿಸುವ ಯೋಜನೆಯಿದ್ದು, ವಿದ್ಯಾರ್ಥಿಗಳನ್ನು ಉನ್ನತ ಶಿಕ್ಷಣ ಮತ್ತು ಭವಿಷ್ಯದ ಉದ್ಯೋಗಗಳಿಗೆ ಸಿದ್ಧಪಡಿಸಲಾಗುತ್ತದೆ.ನಮ್ಮ ಶಿಕ್ಷಣ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಲು ಈ ಕ್ರಮಗಳನ್ನು ಕೈಗೊಂಡಿದ್ದೇವೆ. ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಶಿಕ್ಷಣವನ್ನು ಒದಗಿಸುವುದು ನಮ್ಮ ಗುರಿ. ಇದು ಅಂತಿಮವಲ್ಲ; ನಮ್ಮ ಶಾಲೆಗಳನ್ನು ಪ್ರತಿದಿನವೂ ಉತ್ತಮಗೊಳಿಸಲು ನಾವು ಮುಂದುವರಿಸುತ್ತೇವೆ ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದರು.

# ನೀಟ್‌ಗೆ ಮೊದಲು ಬಿಎಸ್ಸಿ ಕೃಷಿಗೆ ಪ್ರವೇಶ ಪರೀಕ್ಷೆ: ವಿದ್ಯಾರ್ಥಿಗಳಲ್ಲಿ ಗೊಂದಲ

**ಕಲಬುರಗಿ, ಮೇ. 2:** ಬಿಎಸ್ಸಿ ಕೃಷಿ, ಪಶುಸಂಗೋಪನೆ, ಮೀನುಗಾರಿಕೆ ಹಾಗೂ ತೋಟಗಾರಿಕೆ ಕೋರ್ಸ್ ಪದವಿಗಳ ಪ್ರವೇಶಾತಿ ಪ್ರಾಯೋಗಿಕ ಪರೀಕ್ಷೆಯ ವೇಳಾಪಟ್ಟಿ ಈಗ ವಿದ್ಯಾರ್ಥಿಗಳನ್ನು ಗೊಂದಲಕ್ಕೆ ದೂಡಿದೆ. ಹಿಂದಿನಿಂದಲೂ ಮೊದಲು ನೀಟ್ ಪರೀಕ್ಷೆ ನಡೆದ ನಂತರವೇ ಇವುಗಳ ಪರೀಕ್ಷೆಯನ್ನು ನಡೆಸಲಾಗುತ್ತಿತ್ತು. ಆದರೆ, ಇದೇ ಮೊದಲ ಬಾರಿಗೆ ನೀಟ್‌ಗೆ ಮುನ್ನವೇ ನಡೆಸಲಾಗುತ್ತಿದೆ.

ನೀಟ್ ಫಾರಿಗೆ ಬರುವ ಮುಂಚೆ ರಾಜ್ಯದ ಸಿಇಟಿ ನಂತರವೇ ಬಿಎಸ್ಸಿ ಕೃಷಿ ಹಾಗೂ ಕೃಷಿಗೆ ಸಂಬಂಧಿಸಿದ ಕೋರ್ಸ್‌ಗಳ ಪ್ರವೇಶಾತಿಯ ಪ್ರಾಯೋಗಿಕ ಪರೀಕ್ಷೆ ನಡೆಸಲಾಗುತ್ತಿತ್ತು. ವೈದ್ಯಕೀಯ ಕೋರ್ಸ್‌ಗಳ ಪ್ರವೇಶಾತಿಗೆ ನಡೆಯುವ ನೀಟ್ ಪರೀಕ್ಷೆ ಬರುವ ಮೇ 3ರಂದು ನಡೆಯುತ್ತದೆ. ಆದರೆ, ಬಿಎಸ್ಸಿ ಕೃಷಿ ಪದವಿ ಹಾಗೂ ಇತರ ಕೃಷಿ ಸಂಬಂಧಿತ ಕೋರ್ಸ್‌ಗಳ ಪ್ರವೇಶಾತಿಯ ಪ್ರಾಯೋಗಿಕ ಪರೀಕ್ಷೆ ಇಂದೇ ನಡೆಯುತ್ತಿದೆ. ಕೃಷಿ ಪದವಿ ಕೋರ್ಸ್‌ಗಳ ಪ್ರವೇಶಾತಿಯ ಪ್ರಾಯೋಗಿಕ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ನಡೆಸುತ್ತದೆ.

ಬಿಎಸ್ಸಿ ಕೃಷಿ, ತೋಟಗಾರಿಕೆ ಹಾಗೂ ಇತರ ಕೃಷಿಗೆ ಸಂಬಂಧಿಸಿದ ಕೋರ್ಸ್‌ಗಳ ಪ್ರವೇಶಾತಿ ಒಟ್ಟಾರೆ ಸೀಟುಗಳಲ್ಲಿ ಶೇ.50ರಷ್ಟು ಸೀಟುಗಳು ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಮೂಲಕ ಆಯ್ಕೆಯಾದರೆ, ಇನ್ನುಳಿದ ಶೇ.50ರಷ್ಟು ಸೀಟುಗಳು ಪ್ರಾಯೋಗಿಕ ಪರೀಕ್ಷೆ ಮೂಲಕ ಆಯ್ಕೆ ಮಾಡಲಾಗುತ್ತದೆ. ಇವುಗಳು ಪ್ರಾಕ್ಟಿಕಲ್



ನೀಟ್‌ಗೂ ಮೊದಲೇ ಪರೀಕ್ಷೆ ಸಮಜಂಸವಲ್ಲ. ವೈದ್ಯಕೀಯ ಕೋರ್ಸ್‌ಗಳ ಪ್ರವೇಶಾತಿ ನೀಟ್ ಪರೀಕ್ಷೆ ಮುಂಚೆಯೇ ಬಿಎಸ್ಸಿ ಕೃಷಿ, ಪಶುಸಂಗೋಪನೆ, ಮೀನುಗಾರಿಕೆ ಹಾಗೂ ತೋಟಗಾರಿಕೆ ಕೋರ್ಸ್ ಪದವಿಗಳ ಪ್ರವೇಶಾತಿ ಪ್ರಾಯೋಗಿಕ ಪರೀಕ್ಷೆ ನಡೆಸುವುದು ಸಮಂಜಸವಲ್ಲ ಎಂಬುದು ಈಗಷ್ಟೇ ನನ್ನ ಗಮನಕ್ಕೆ ಬಂದಿದೆ. ಈ ಕುರಿತು ಕೆಇಎ ಕಾರ್ಯದರ್ಶಿ ಜತೆ ಮಾತನಾಡುತ್ತೇನೆ.

– ಪ್ರಿಯಾಂಕ್ ಖರ್ಗೆ, ಗ್ರಾಮೀಣಾಭಿವೃದ್ಧಿ ಸಚಿವ

ಪರೀಕ್ಷೆ ಮೂಲಕ ಸಂಪೂರ್ಣ ರೈತನ ಮಕ್ಕಳನ್ನೇ ಆಯ್ಕೆ ಮಾಡಲಾಗುತ್ತದೆ.

ಪರೀಕ್ಷೆ ಮುಂದೂಡಲ್ಲವೆಂದ ಕೆಇಎ: ಕಳೆದ 15 ವರ್ಷಗಳಿಂದ ರಾಜ್ಯದಲ್ಲಿ ಬಿ.ಎಸ್ಸಿ ಕೃಷಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಪದವಿ ಕೋರ್ಸ್‌ಗಳ ಪ್ರವೇಶಾತಿಯಲ್ಲಿ ರೈತರ ಮಕ್ಕಳಿಗೆ ಮೀಸಲಾತಿ ಕಲ್ಪಿಸುವ ಕಾಯ್ದೆ ಜಾರಿಯಲ್ಲಿದೆ. ಇಷ್ಟು ವರ್ಷಗಳ ಕಾಲ ವೈದ್ಯಕೀಯ ಕೋರ್ಸ್‌ಗಳ ಸಿಇಟಿ ಪರೀಕ್ಷೆಯ ನಂತರವೇ ಈ ಕೃಷಿ ಕೋರ್ಸ್‌ಗಳ ಪ್ರಾಯೋಗಿಕ ಪರೀಕ್ಷೆಯನ್ನು ನಡೆಸಲಾಗುತ್ತಿತ್ತು. ಆದರೆ ಈ ಬಾರಿ ಮೊದಲ ಬಾರಿಗೆ ನೀಟ್ ಪರೀಕ್ಷೆಗೂ ಮುನ್ನವೇ ಪ್ರಾಯೋಗಿಕ ಪರೀಕ್ಷೆಯನ್ನು ನಿಗದಿಪಡಿಸಲಾಗಿದೆ. ಈ ಹಿಂದೆ ಇದೇ ರೀತಿ ಪರೀಕ್ಷಾ ದಿನಾಂಕ ಘೋಷಿಸಿದಾಗ ವಿದ್ಯಾರ್ಥಿಗಳಿಂದ ತೀವ್ರ ವಿರೋಧ ವ್ಯಕ್ತವಾಗಿ, ಅನಿವಾರ್ಯವಾಗಿ ಪರೀಕ್ಷೆಯನ್ನು ಮುಂದೂಡಲಾಗಿತ್ತು. ಆದರೆ, ಈ ಬಾರಿ ಯಾವುದೇ ಕಾರಣಕ್ಕೂ ಪ್ರಾಯೋಗಿಕ ಪರೀಕ್ಷೆಯನ್ನು ಮುಂದೂಡುವುದಿಲ್ಲ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸ್ಪಷ್ಟಪಡಿಸಿದೆ. ಇನ್ನು ರಾಜ್ಯದಲ್ಲಿ ಕೃಷಿ ಪದವಿ ಕೋರ್ಸ್‌ಗಳಿಗೆ ಉತ್ತರ ಕರ್ನಾಟಕ ಭಾಗದ ವಿದ್ಯಾರ್ಥಿಗಳೇ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಆಸಕ್ತಿ ಹೊಂದಿದ್ದಾರೆ.

ಎರಡು ದಿನಗಳ ಹಿಂದಷ್ಟೇ ಅಂದರೆ ಏ.23, 24ರಂದು ಸಿಇಟಿ ಪರೀಕ್ಷೆ ಬರೆದಿದ್ದಾರೆ. ಇನ್ನು ನೀಟ್ ಬಗ್ಗೆ ತಯಾರಿ ಮಾಡಿಕೊಳ್ಳಬೇಕೆಂದರೆ ಮಧ್ಯದಲ್ಲಿ ಬಿಎಸ್ಸಿ ಕೃಷಿ ಪದವಿ ಸೇರಿ ಇತರ ಕೃಷಿ ಸಂಬಂಧಿತ ಕೋರ್ಸ್‌ಗಳ ಪ್ರವೇಶಾತಿಯ ಪ್ರಾಕ್ಟಿಕಲ್ ಪರೀಕ್ಷೆಗಳನ್ನು ನಿಗದಿ ಮಾಡಲಾಗಿದೆ. ಏ.29ರಂದು ಪರೀಕ್ಷೆ ಎಂಬುದಾಗಿ ಕೆಇಎ ನಿಗದಿ ಮಾಡಿದೆ. ಇನ್ನು ಬಹಳಷ್ಟು ವಿದ್ಯಾರ್ಥಿಗಳ ಆನ್‌ಲೈನ್ ಅರ್ಜಿಗಳು ತಿರಸ್ಕೃತವಾಗಿವೆ.


ಏಕೆಂದರೆ ಅರ್ಜಿ ಹಾಕಲು ವಿದ್ಯಾರ್ಥಿಗಳು ಹಲವಾರು ದಾಖಲೆಗಳನ್ನು ಸಲ್ಲಿಸಬೇಕು.

> ವಿದ್ಯಾರ್ಥಿಗಳ ಮೇಲೆ ಒತ್ತಡ ಈಗಾಗಲೇ ಸಿಇಟಿ ಪರೀಕ್ಷೆ ಬರೆಯಲಾಗಿದೆ. ನೀಟ್ ಪರೀಕ್ಷೆ ನಂತರವೇ ಬಿಎಸ್ಸಿ ಕೃಷಿ ಪದವಿ ಹಾಗೂ ಇತರ ಕೃಷಿ ಸಂಬಂಧಿಸಿದ ಕೋರ್ಸ್‌ಗಳ ಪ್ರವೇಶಾತಿಯ ಪ್ರಾಯೋಗಿಕ ಪರೀಕ್ಷೆ ನಡೆಯುವದು ಮೊದಲಿಂದಲೂ ನಡೆದುಕೊಂಡು ಬಂದಿತ್ತು. ಈಗಲೂ ಅದೇ ರೀತಿ ಎಂದು ಬಲವಾಗಿ ನಂಬಲಾಗಿತ್ತು. ಆದರೆ, ನೀಟ್ ಪರೀಕ್ಷೆಗೂ ಒಂದು ದಿನ ಮೊದಲೇ ನಿಗದಿ ಮಾಡಿರುವುದು ನಮ್ಮ ಮೇಲೆ ಒತ್ತಡ ಹೇರಿದಂತಾಗಿದೆ. ಹೀಗಾಗಿ ಮೊದಲಿನಂತೆಯೇ ಪರೀಕ್ಷೆ ನಡೆಯಲಿ.
>
> – ನಂದಕುಮಾರ ಸಂಜೀವರೆಡ್ಡಿ, ಬಿಎಸ್ಸಿ ಕೃಷಿ ಪದವಿ ಪ್ರವೇಶಾತಿ ಪರೀಕ್ಷಾರ್ಥಿ.

ಕೃಷಿ ಪ್ರಮಾಣಪತ್ರ, ಅಫಿಡವಿಟ್, ಜಾತಿ ಮತ್ತು ಆದಾಯ ಪ್ರಮಾಣಪತ್ರ, ಕೃಷಿ ಕೂಲಿ ಕಾರ್ಮಿಕರ ಪತ್ರ ಸೇರಿ ಇತರೆ ದಾಖಲೆ ಸಲ್ಲಿಸಬೇಕು. ಪಿಯುಸಿ ಪರೀಕ್ಷೆ ಮುಗಿದ ನಂತರ ಈ ಪ್ರಮಾಣಪತ್ರ ಪಡೆಯಬೇಕೆಂದರೆ ಸಾಲು ಸಾಲು ರಜೆಗಳು ಬಂದಿವೆ. ಹೀಗಾಗಿ ಸಕಾಲಕ್ಕೆ ಈ ಪ್ರಮಾಣಪತ್ರಗಳನ್ನು ಪಡೆಯಲು ಸಾಧ್ಯವಾಗಿಲ್ಲ. ಇದೇ ಕಾರಣಕ್ಕೆ ಪರೀಕ್ಷೆ ಮುಂದೂಡಿಕೆ ಜತೆಗೆ ಪ್ರಮಾಣ ಪತ್ರಗಳನ್ನು ಸಲ್ಲಿಸಲು ಕಾಲಾವಕಾಶ ನೀಡಬೇಕೆಂಬುದು ವಿದ್ಯಾರ್ಥಿಗಳ ಆಗ್ರಹವಾಗಿದೆ.

ಮೊದಲೇ ಕೃಷಿ ಪದವಿ ಕೋರ್ಸ್‌ಗಳ ಪ್ರವೇಶಾತಿ ಕುರಿತು ವಿದ್ಯಾರ್ಥಿಗಳಿಗೆ ಸೂಕ್ತ ಮಾಹಿತಿ ಇಲ್ಲ. ಈ ಮುಂಚೆ 50ರಿಂದ 70 ಸಾವಿರ ಅಭ್ಯರ್ಥಿಗಳು ಅರ್ಜಿ ಹಾಕುತ್ತಿದ್ದರು. ಈಗ 20,552 ವಿದ್ಯಾರ್ಥಿಗಳು ಮಾತ್ರ ಹಾಕಿದ್ದಾರೆ. ಅದರಲ್ಲಿ ನೀಟ್ ಮುಂಚೆ ಮಾಡಿದರೆ ವಿದ್ಯಾರ್ಥಿಗಳಿಗೆ ಮತ್ತಷ್ಟು ಮಾನಸಿಕ ತೊಂದರೆ ಕೊಟ್ಟಂತಾಗುತ್ತದೆ. ನೀಟ್ ಪರೀಕ್ಷೆ ಮೇ 3ರಂದು ನಡೆಯುತ್ತದೆ. ಇದಾದ ವಾರದ ನಂತರ ಪರೀಕ್ಷೆ ನಡೆದರೆ ಸೂಕ್ತವಾಗುತ್ತದೆ. ಆವಾಗ ಯಾವುದೇ ಒತ್ತಡ ಇರಲ್ಲ ಎನ್ನುವುದು ವಿದ್ಯಾರ್ಥಿಗಳ ಅಭಿಪ್ರಾಯ.

**ಏನು ಸಮಸ್ಯೆ? :** ಪ್ರತಿವರ್ಷ ನೀಟ್ ಬಳಿಕ ಬಿಎಸ್‌ಸಿ ಕೃಷಿ ಪ್ರಾಯೋಗಿಕ ಪರೀಕ್ಷೆ ನಡೆಯುತ್ತಿತ್ತು ಇದರಿಂದ ವಿದ್ಯಾರ್ಥಿಗಳು ನೀಟ್‌ಗೆ ಪರೀಕ್ಷೆ ಬರೆದು ಕೃಷಿಯತ್ತ ಗಮನ ಹರಿಸುತ್ತಿದ್ದರು ಆದರೆ, ಈಗ ನೀಟ್ ಮೊದಲೇ ಕೃಷಿ ಪ್ರವೇಶ ಪರೀಕ್ಷೆ ನಿಗದಿಯಾಗಿದ್ದರಿಂದ ಸಮಸ್ಯೆ ವಿದ್ಯಾರ್ಥಿಗಳಿಗೆ ಪ್ರಮುಖವಾಗಿರುವ ನೀಟ್ ತಯಾರಿಗೆ ಕಾಲಾವಕಾಶದ ಕೊರತೆ. ಕೃಷಿ ಪ್ರವೇಶಕ್ಕೆ ಬರೆಯುವ ಹೆಚ್ಚಿನವರು ನೀಟ್‌ಗೂ ತಯಾರಿ ಮಾಡಿಕೊಂಡಿರುತ್ತಾರೆ. ಹಾಗಾಗಿ, ವಿದ್ಯಾರ್ಥಿಗಳಿಗೆ ನೀಟ್ ಮೇಲೆ ಗಮನ ಹರಿಸಲು ಸಾಧ್ಯವಾಗದು ಎಂಬ ಅಳಲು.



ಬೇಸಿಗೆ ರಜೆ ಹಿನ್ನೆಲೆ ಶ್ರೀರಂಗಪಟ್ಟಣ ಬಳಿಯ ಕಾವೇರಿ ನದಿಯ ಬಲಮುರಿ ಜಲಪಾತದಲ್ಲಿ ಪ್ರವಾಸಿಗರು ನೀರಿನಲ್ಲಿ ಮಿಂದೆದ್ದು ಆನಂದಿಸಿದರು.

# ಮಂಗಳೂರಿನಲ್ಲಿ ಹೈಕೋರ್ಟ್ ಸಂಚಾರಿ ಪೀಠ: ಸ್ಥಳ ಪರಿಶೀಲನೆಗೆ ಮುಖ್ಯ ನ್ಯಾಯಮೂರ್ತಿ ಒಪ್ಪಿಗೆ- ಎಂಎಲ್‌ಸಿ ಐವನ್ ಡಿಸೋಜಾ



**ಮಂಗಳೂರು, ಮೇ 2:** ದ.ಕ., ಉಡುಪಿ, ಉ.ಕ., ಚಿಕ್ಕಮಗಳೂರು, ಕೊಡಗು ಜಿಲ್ಲೆಗಳನ್ನು ಒಳಗೊಂಡು ಮಂಗಳೂರಿನಲ್ಲಿ ಹೈಕೋರ್ಟ್ ಸಂಚಾರಿ ಹಾಗೂ ಕಾಯಂ ಪೀಠ ಸ್ಥಾಪಿಸಬೇಕೆಂಬ ಹಲವು ವರ್ಷಗಳ ಬೇಡಿಕೆಯು ಹೈಕೋರ್ಟ್‌ನ ಮುಖ್ಯ ನ್ಯಾಯಾಧೀಶರಿಗೆ ಮನವರಿಕೆ ಯಾಗಿದ್ದು, ಅವರು ಸ್ಥಳ ಪರಿಶೀಲನೆಗೆ ಒಪ್ಪಿಕೊಂಡಿದ್ದು, ಶೀಘ್ರವೇ ಮಂಗಳೂರಿಗೆ ಭೇಟಿ ನೀಡಲಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜ ಹೇಳಿದ್ದಾರೆ.

ಮಂಗಳೂರು ಮಹಾನಗರ ಪಾಲಿಕೆ ಕಚೇರಿಯಲ್ಲಿರುವ ಕಚೇರಿಯಲ್ಲಿ ಶನಿವಾರ ಈ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಸ್ಟೇಟ್ ಬ್ಯಾಂಕ್‌ನಲ್ಲಿರುವ ಹಳೆಯ ಜಿಲ್ಲಾಧಿಕಾರಿ ಕಚೇರಿಯಲ್ಲಿ ಹೈಕೋರ್ಟ್ ಸಂಚಾರಿ ಪೀಠ ಸ್ಥಾಪಿಸಲು ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಮುಖ್ಯ ನ್ಯಾಯಾಧೀಶರು ಪರಿಶೀಲಿಸಲಿದ್ದಾರೆ ಎಂದರು.

ಹೈಕೋರ್ಟ್ ಪೀಠಕ್ಕೆ ಅಗತ್ಯವಾಗಿ ಕೋರ್ಟ್ ಹಾಲ್, ದಾಖಲೆ ಪತ್ರ ಸಂಗ್ರಹಿಸಲು ಜಾಗದ ಅಗತ್ಯವಿದೆ. ಅದಕ್ಕಾಗಿ ಸದ್ಯ 5.5 ಎಕರೆ ಜಾಗದಲ್ಲಿರುವ ಹಳೆ ಜಿಲ್ಲಾಧಿಕಾರಿ ಕಚೇರಿಯ ನಾಲ್ಕು ಅಂತಸ್ತಿನ ಕಟ್ಟಡವನ್ನು ಜಿಲ್ಲಾ ಉಸ್ತುವಾರಿ ಸಚಿವರು ಮೀಸಲಿಡುವಂತೆ ಸರಕಾರಕ್ಕೆ ಪತ್ರ ಬರೆದಿದ್ದಾರೆ. ಇದಲ್ಲದೆ ಈಗಾಗಲೇ ಮಂಗಳೂರಿನಲ್ಲಿ ಕಾರ್ಯಾಚರಿಸುತ್ತಿರುವ ವಿಚಾರಣಾಧೀನ ಕೈದಿಗಳ ಜೈಲು ಮುಡಿಪುವಿಗೆ ಸ್ಥಳಾಂತರಗೊಂಡ ಬಳಿಕ ಆ ಜಾಗವೂ ಲಭ್ಯವಾಗಲಿದೆ. ಆದರೆ ಆ ಕಾರ್ಯಕ್ಕೆ ಇನ್ನೂ ಎರಡು ಮೂರು ವರ್ಷಗಳು ಬೇಕಾಗಬಹುದಾದ ಕಾರಣ ಸದ್ಯ ಹಳೆ ಜಿಲ್ಲಾಧಿಕಾರಿ ಕಚೇರಿ ಕಟ್ಟಡದಲ್ಲಿ ಪೀಠವನ್ನು ಸ್ಥಾಪಿಸಬಹುದಾಗಿದೆ.

ಸ್ಥಳ ಪರಿಶೀಲನೆ ನಡೆಸಲಿರುವ ಹೈಕೋರ್ಟ್ ನ ಮುಖ್ಯ ನ್ಯಾಯಧೀಶರು ಮುಂದಿನ ನಿರ್ಧಾರ ಕೈಗೊಳ್ಳಲಿದ್ದಾರೆ. ಒಟ್ಟಿನಲ್ಲಿ ಈ ಪ್ರಕ್ರಿಯೆ ಹೈಕೋರ್ಟ್ ಪೀಠಕ್ಕಾಗಿ ಜನಸಾಮಾನ್ಯರು ಸೇರಿದಂತೆ ವಕೀಲರ ಸಂಘ, ಕಾನೂನು ವಿದ್ಯಾರ್ಥಿಗಳು, ಕಾರ್ಮಿಕ ವರ್ಗ ಹಾಗೂ ಜನಪ್ರತಿನಿಧಿಗಳನ್ನು ಒಳಗೊಂಡ ತಂಡದ ಹೋರಾಟದ ಫಲವಾಗಿದೆ. ಹೈಕೋರ್ಟ್ ಪೀಠ ಸ್ಥಾಪನೆಯ ಅಗತ್ಯದ ಕುರಿತಂತೆ ಅಂಚೆಕಾಗದ, ಈಮೇಲ್ ಚಳವಳಿಯ ಮೂಲಕ ಹೈಕೋರ್ಟ್ ನ್ಯಾಯಾಧೀಶರ ಗಮನ ಸೆಳೆಯಲಾಗಿತ್ತು. ಅವರಿಗೆ ಮಂಗಳೂರಿನಲ್ಲಿ ಸಂಚಾರಿ ಹೈಕೋರ್ಟ್ ಪೀಠದ ಅಗತ್ಯದ ಮನವರಿಕೆ ಆಗಿದೆ. ಈ ಮೂಲಕ ಮಂಗಳೂರಿನಲ್ಲೂ ಹುಬ್ಬಳ್ಳಿ– ಧಾರವಾಡ, ಕಲಬುರಗಿ ರೀತಿಯಲ್ಲಿ ಸಂಚಾರಿ ಪೀಠ ಸ್ಥಾಪನೆ ಆಗುವ ಭರವಸೆ ವ್ಯಕ್ತವಾಗಿದೆ ಎಂದು ಐವನ್ ಹೇಳಿದರು.ಸುದ್ದಿಗೋಷ್ಠಿಯಲ್ಲಿ ದ.ಕ. ಜಿಲ್ಲಾ ಬಾರ್ ಅಸೋಸಿಯೇಶನ್ ಅಧ್ಯಕ್ಷ ರಾಘವೇಂದ್ರ ರಾವ್, ಕಾರ್ಯದರ್ಶಿ ಶ್ರೀಧರ್, ಸರಕಾರಿ ವಕೀಲ ಎಂ.ಪಿ. ನೊರೊನ್ಹ, ಭಾಸ್ಕರ್ ಮೊದಲಾದವರು ಉಪಸ್ಥಿತರಿದ್ದರು.

# ಚುನಾವಣಾ ನೀತಿಸಂಹಿತೆ ಉಲ್ಲಂಘನೆ ಪ್ರಕರಣ: ಕೆ.ಎಸ್.ಈಶ್ವರಪ್ಪ ಖುಲಾಸೆ



**ಶಿವಮೊಗ್ಗ, ಮೇ 2:** ಚುನಾವಣಾ ನೀತಿಸಂಹಿತೆ ಉಲ್ಲಂಘನೆ ಪ್ರಕರಣದಲ್ಲಿ ಮಾಜಿ ಸಚಿವ ಕೆ.ಎಸ್ ಈಶ್ವರಪ್ಪ ಖುಲಾಸೆ ಆಗಿದ್ದಾರೆ. ಸಾಕ್ಷ್ಯಾಧಾರ ಕೊರತೆ ಹಿನ್ನೆಲೆಯಲ್ಲಿ ಬೆಂಗಳೂರಿನ 42ನೇ ಎಸಿಜೆಎಂ ಕೋರ್ಟ್ ಇದೀಗ ಕೆ.ಎಸ್. ಈಶ್ವರಪ್ಪ ಅವರನ್ನು ಖುಲಾಸೆಗೊಳಿಸಿದೆ. 2024 ಏಪ್ರಿಲ್ ತಿಂಗಳಿನಲ್ಲಿ ನೀತಿ ಸಂಹಿತೆ ಉಲ್ಲಂಘಿಸಿ ಸಭೆ ಮಾಡಿದ್ದರು. ಅಂಬುತೀರ್ಥ ಸಮೀಪ ಸಭೆ ನಡೆಸಿದ ಆರೋಪದಡಿ ಪ್ರಕರಣ ಸಹ ದಾಖಲಾಗಿತ್ತು. 2024ರ ಏಪ್ರಿಲ್ ತಿಂಗಳಿನಲ್ಲಿ ನಡೆದ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಈ ಘಟನೆ ನಡೆದಿತ್ತು. ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದ ಕೆ.ಎಸ್. ಈಶ್ವರಪ್ಪ ಅವರು, ಅನುಮತಿ ಪಡೆಯದೆ ಸಭೆ ನಡೆಸುವ ಮೂಲಕ ಚುನಾವಣಾ ನೀತಿಸಂಹಿತೆ ಉಲ್ಲಂಘಿಸಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಈ ಕುರಿತು ಅಂದಿನ ಚುನಾವಣಾ ಅಧಿಕಾರಿಗಳು ನೀಡಿದ ದೂರಿನ ಮೇರೆಗೆ ಪೊಲೀಸರು ಎಫ್‌ಐಆರ್ ದಾಖಲಿಸಿ ಕೊಂಡಿದ್ದರು. ಬೆಂಗಳೂರಿನ 42ನೇ ಎಸಿಜೆಎಂ ನ್ಯಾಯಾಲಯದಲ್ಲಿ ಈ ಪ್ರಕರಣದ ವಿಚಾರಣೆ ನಡೆಯುತ್ತಿತ್ತು. ವಿಚಾರಣೆಯ ಸಮಯದಲ್ಲಿ ಪ್ರಾಸಿಕ್ಯೂಷನ್ ಪರವಾಗಿ ಮಂಡಿಸಲಾದ ವಾದಗಳು ಮತ್ತು ಹಾಜರುಪಡಿಸಿದ ದಾಖಲೆಗಳನ್ನು ನ್ಯಾಯಾಲಯವು ಕೂಲಂಕಷವಾಗಿ ಪರಿಶೀಲಿಸಿತು. ಈಶ್ವರಪ್ಪ ಅವರು ಉದ್ದೇಶಪೂರ್ವಕವಾಗಿ ನಿಯಮ ಉಲ್ಲಂಘಿಸಿದ್ದಾರೆ ಎನ್ನುವುದನ್ನು ಸಾಬೀತುಪಡಿಸಲು ಅಗತ್ಯವಿದ್ದ ಪ್ರಬಲ ಸಾಕ್ಷ್ಯಗಳು ಲಭ್ಯವಿಲ್ಲ ಎಂಬುದು ವಿಚಾರಣೆ ವೇಳೆ ಕಂಡುಬಂದಿತು.ಪ್ರಕರಣದಲ್ಲಿ ಸಾಕಷ್ಟು ಸಾಕ್ಷಿಗಳಿಲ್ಲದ ಕಾರಣ ಮತ್ತು ಸಲ್ಲಿಸಲಾದ ಪುರಾವೆಗಳು ಆರೋಪವನ್ನು ದೃಢೀಕರಿಸಲು ಅಸಮರ್ಥವಾದ ಹಿನ್ನೆಲೆಯಲ್ಲಿ, ನ್ಯಾಯಾಲಯವು ಈ ನಿರ್ಧಾರಕ್ಕೆ ಬಂದಿದೆ. "ಆರೋಪಿಗಳ ವಿರುದ್ಧ ಹೊರಿಸಲಾದ ಆರೋಪಗಳಿಗೆ ಪೂರಕವಾದ ಸಾಕ್ಷ್ಯಾಧಾರಗಳ ಕೊರತೆ ಇದೆ" ಎಂದು ಅಭಿಪ್ರಾಯಪಟ್ಟ ನ್ಯಾಯಾಧೀಶರು, ಕೆ.ಎಸ್. ಈಶ್ವರಪ್ಪ ಅವರನ್ನು ಪ್ರಕರಣದಿಂದ ಮುಕ್ತಗೊಳಿಸಿ ಆದೇಶ ಹೊರಡಿಸಿದರು.

# ಮೊಹಮ್ಮದ್ ಇಕ್ರಮುಲ್ಲಾ ಷರೀಫ್ ಕಲಬುರಗಿ ಜಿಲ್ಲಾಧಿಕಾರಿ




ಕಲಬುರಗಿ, ಮೇ 2: ಕಲಬುರಗಿ ಜಿಲ್ಲಾಧಿಕಾರಿಯನ್ನಾಗಿ 2016ನೇ ವೃಂದದ ಐಎಎಸ್ ಅಧಿಕಾರಿ ಮೊಹಮ್ಮದ್ ಇಕ್ರಮುಲ್ಲಾ ಷರೀಫ್ ಅವರನ್ನು ನೇಮಕ ಮಾಡಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶ ಹೊರಡಿಸಿದೆ. ಷರೀಫ್ ಅವರು ಪ್ರಸ್ತುತ ಹಣಕಾಸು ಇಲಾಖೆಯ (ಬಜೆಟ್ ಮತ್ತು ಸಂಪನ್ಮೂಲಗಳು) ಜಂಟಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ಇದಕ್ಕೂ ಮುನ್ನ ರಾಮನಗರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿದ್ದರು. ಜಿಲ್ಲಾಧಿಕಾರಿಯಾಗಿದ್ದ ಬಿ.ಫೌಜಿಯಾ ತರನ್ನುಮ್ ಅವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಇಲಾಖೆ ಅಧೀನದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಆಯುಕ್ತರನ್ನಾಗಿ ವರ್ಗಾವಣೆ ಮಾಡಿ ಆದೇಶಿಸಲಾಗಿದೆ. ಎರಡು ವರ್ಷ 11 ತಿಂಗಳ ಕಾಲ ಜಿಲ್ಲಾಧಿಕಾರಿಯಾಗಿದ್ದ ಫೌಜಿಯಾ ತರನ್ನುಮ್ ಅವರು 'ಕಲಬುರಗಿ ರೊಟ್ಟಿ'ಯನ್ನು ಬ್ರ್ಯಾಂಡ್ ಮಾಡುವಲ್ಲಿ ಹಾಗೂ ಜಿಲ್ಲೆಯ ಕಸೂತಿ ಕಲೆಯನ್ನು ನೀತಿ ಆಯೋಗದವರೆಗೆ ತಲುಪಿಸುವಲ್ಲಿ ಪ್ರಮುಖ ಪಾತ್ರ ನಿರ್ವಹಿಸಿದ್ದಾರೆ. ನಗರದ ಬಹಮನಿ ಕೋಟೆ ಸೇರಿದಂತೆ ವಿವಿಧ ಪ್ರವಾಸಿ ತಾಣಗಳ ಅಭಿವೃದ್ಧಿಗೆ, ಚಂದ್ರಂಪಳ್ಳಿ ಜಲಾಶಯದಲ್ಲಿ ಬೋಟಿಂಗ್, ಟ್ರೆಕ್ಕಿಂಗ್ ಸೇರಿದಂತೆ ಇತರ ಮೂಲಸೌಕರ್ಯಗಳನ್ನು ಕಲ್ಪಿಸಲು ಶ್ರಮಿಸಿದ್ದಾರೆ. ಕಡತಗಳ ವಿಲೇವಾರಿ, ಇ–ಆಫೀಸ್ ನಿರ್ವಹಣೆಯಲ್ಲಿ ರಾಜ್ಯಮಟ್ಟದಲ್ಲಿ ಜಿಲ್ಲೆಯನ್ನು ಮೊದಲ ಸ್ಥಾನಕ್ಕೆ ಕೊಂಡೊಯ್ದಿದ್ದರು.

# ತನಿಖಾ ವರದಿ ಬೇರೊಬ್ಬರಿಗೆ ಕಳುಹಿಸಿದ್ದೇಕೆ: ಲೋಕಾಯುಕ್ತ ಎಸ್‌ಪಿಗೆ ವಿಶೇಷ ನ್ಯಾಯಾಲಯ ತರಾಟೆ

**ಚಿಕ್ಕಮಗಳೂರು, ಮೇ 2:** ನಿಮ್ಮ ಮೇಲೆ ಕುಳಿತಿರುವ ಸೂಪರ್ ಕಾಪ್ (ಪೊಲೀಸ್ ಅಧಿಕಾರಿ) ಯಾರು? ಯಾವ ಕಾನೂನಿನ ಅಡಿ ಅಂತಿಮ ವರದಿ ಸಲ್ಲಿಸಲು ಅನುಮತಿಗೆ ಕಾಯುತ್ತಿದ್ದೀರಿ ಎಂದು ಲೋಕಾಯುಕ್ತ ಹಾಸನ–ಚಿಕ್ಕಮಗಳೂರು ಪೊಲೀಸ್ ವರಿಷ್ಠಾಧಿಕಾರಿಯನ್ನು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಮೌಖಿಕವಾಗಿ ತರಾಟೆಗೆ ತೆಗೆದುಕೊಂಡಿತು.

ಚಿಕ್ಕಮಗಳೂರಿನ ಶೃಂಗೇರಿಯ ಕಾಂಗ್ರೆಸ್ ಶಾಸಕ ಟಿ ಡಿ ರಾಜೇಗೌಡ, ಅವರ ಪತ್ನಿ ಮತ್ತು ಪುತ್ರನ ವಿರುದ್ಧದ ಆದಾಯ ಮೀರಿದ ಆಸ್ತಿ ಸಂಪಾದನೆ ಪ್ರಕರಣಕ್ಕೆ ಸಂಬಂಧಿಸಿದ ತನಿಖೆಯು ಮುಗಿದಿದ್ದು, ಮೇಲಧಿಕಾರಿಗಳ ಅನುಮತಿಗೆ ಕೇಂದ್ರೀಯ ಲೋಕಾಯುಕ್ತ ಕಚೇರಿಗೆ ವರದಿ ಕಳುಹಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಬಿ ಎನ್ ನಂದಿನಿ ಅವರು ನ್ಯಾಯಾಧೀಶರಾದ ಸಂತೋಷ್ ಗಜಾನನ್ ಭಟ್ ಅವರ ಪೀಠಕ್ಕೆ ತಿಳಿಸಿದರು.

ಇದರಿಂದ ಕೆರಳಿದ ಪೀಠವು, ತನಿಖಾ ವರದಿಯನ್ನು ಬೇರೊಬ್ಬರಿಗೆ ಕಳುಹಿಸಿದ್ದೇಕೆ? ಅದಕ್ಕೆ ಸಿಆರ್‌ಪಿಸಿಯಲ್ಲಿ ಅವಕಾಶ ಎಲ್ಲಿದೆ? ಯಾವ ಸೆಕ್ಷನ್ ಅಡಿ ಅವರಿಗೆ ಸಲ್ಲಿಸಿದ್ದೀರಿ. ಮೇಲಧಿಕಾರಿ ಒಪ್ಪಿಗೆ ನೀಡಿದ ಬಳಿಕ ನ್ಯಾಯಾಲಯಕ್ಕೆ ಸಲ್ಲಿಸುತ್ತೀರಾ? ಇದು ನಿಮ್ಮ ವಾದವೇ? ನಿಮ್ಮ ತನಿಖೆಯ ಮೇಲೆ ನಿಮಗೆ ನಿಯಂತ್ರಣ ಇಲ್ಲವೇ? ತನಿಖಾಧಿಕಾರಿಯಾಗಿ, ನೀವು ತನಿಖೆ ಪೂರ್ಣಗೊಳಿಸಿ, ವರದಿ ಸಿದ್ಧಪಡಿಸಿದ್ದೀರಿ. ಇಲ್ಲಿ ನಿಮ್ಮ ಸೂಪರ್ ತನಿಖಾಧಿಕಾರಿ ಯಾರು? ಇದು ಹೇಗೆ? ನೀವು ತನಿಖೆ ಪೂರ್ಣಗೊಳಿಸಿರುವಾಗ ಅದು ಏನೆಂದು ನೀವು ಹೇಳಬೇಕು. ಸಿಆರ್‌ಪಿಸಿಯ ಯಾವ ಸೆಕ್ಷನ್ ಅಡಿ ಮೇಲಧಿಕಾರಿ ತನಿಖಾ ವರದಿಗೆ ಒಪ್ಪಿಗೆ ನೀಡುತ್ತಾರೆ ತೋರಿಸಿ. ಸಿಆರ್‌ಪಿಸಿ, ಬಿಎನ್‌ಎಸ್‌ಎಸ್ ಮೀರಿ ಹೋಗಲಾಗದು. ಸಿಆರ್‌ಪಿಸಿ ಸೆಕ್ಷನ್ 173 ಅಡಿ ತನಿಖೆ ಮುಗಿದ ಮೇಲೆ ನ್ಯಾಯಾಲಯಕ್ಕೆ ವರದಿ ಸಲ್ಲಿಸಬೇಕು? ಎಂದು ನ್ಯಾಯಾಲಯ ಹೇಳಿತು.

ತನಿಖೆಗೆ ಸಂಬಂಧಿಸಿದ ಸ್ಥಿತಿಗತಿ ವರದಿಯಲ್ಲಿ ತನಿಖೆ ಮುಗಿದಿದ್ದು, ಲೋಕಾಯುಕ್ತ ಕೇಂದ್ರ ಕಚೇರಿಗೆ ಅನುಮತಿಗಾಗಿ ಕಳುಹಿಸಲಾಗಿದೆ ಎಂದು ತಿಳಿಸಲಾಗಿದೆ. ತನಿಖಾ ಸಂಸ್ಥೆಗಳು ತಮ್ಮದೇ ಆದ ಪ್ರಕ್ರಿಯೆ ಸಂಹಿತಾ ಪಾಲಿಸುತ್ತವೆ ಎಂಬುದನ್ನು ದಾಖಲಿಸುವುದು ದುರದೃಷ್ಟಕರವಾಗಿದೆ. ಹಾಲಿ ಪೊಲೀಸ್ ವರಿಷ್ಠಾಧಿಕಾರಿ ತನಿಖಾಧಿಕಾರಿಯಾಗಿದ್ದು, ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲು ಮೇಲಧಿಕಾರಿಗಳ ಯಾವ ಸೆಕ್ಷನ್ ಅಡಿ ಅನುಮತಿಬೇಕಾಗಿದೆ ಎಂಬುದನ್ನು ತಿಳಿಸಬೇಕು. ಈ ಕುರಿತು ಮುಂದಿನ ವಿಚಾರಣೆಯ ವೇಳೆಗೆ ತನಿಖಾಧಿಕಾರಿ ವಿವರಿಸಬೇಕು ಎಂದು ಆದೇಶಿಸಿರುವ ನ್ಯಾಯಾಲಯವು ವಿಚಾರಣೆಯನ್ನು ಮೇ 7ಕ್ಕೆ ಮುಂದೂಡಿದೆ.

ಕಾಂಗ್ರೆಸ್ ಶಾಸಕ ರಾಜೇಗೌಡ, ಅವರ ಪತ್ನಿ ಡಿ. ಕೆ.ಪುಷ್ಪಾ ಮತ್ತು ಪುತ್ರ ಟಿ ಆರ್ ರಾಜದೇವ್ ಅವರು ಆದಾಯ ಮೀರಿ ಆಸ್ತಿ ಸಂಪಾದಿಸಿದ್ದಾರೆ. ಇದನ್ನು ಚುನಾವಣಾ ಪ್ರಮಾಣ ಪತ್ರದಲ್ಲಿ ಬಚ್ಚಿಟ್ಟಿದ್ದಾರೆ ಎಂದು ಆರೋಪಿಸಿ ಚಿಕ್ಕಮಗಳೂರಿನ ಕೊಪ್ಪ ನಿವಾಸಿ ಎಚ್ ಕೆ ದಿನೇಶ್ ಅವರು ಖಾಸಗಿ ದೂರು ದಾಖಲಿಸಿದ್ದಾರೆ. ಈ ಸಂಬಂಧ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ನ್ಯಾಯಾಲಯವು ಲೋಕಾಯುಕ್ತ ಪೊಲೀಸರಿಗೆ 2025ರ ಜೂನ್ 6ರಂದು ನಿರ್ದೇಶಿಸಿತ್ತು.

ಕಳೆದ ಏಪ್ರಿಲ್ 21ರ ವಿಚಾರಣೆಯಂದು ತನಿಖಾಧಿಕಾರಿ ನಂದಿನಿ ಅವರು 12ದಲ್ಲಿ ಅಂತಿಮ ವರದಿ ಸಲ್ಲಿಸಲಾಗುವುದು ಎಂದಿದ್ದರು. ಇಂದು ಪ್ರಕರಣ ವಿಚಾರಣೆ ಆರಂಭವಾದಾಗ ನಂದಿನಿ ಅವರು ಕೇಂದ್ರ ಲೋಕಾಯುಕ್ತ ಕಚೇರಿಗೆ ಕಳುಹಿಸಿದ್ದು, ಅನುಮತಿಗಾಗಿ ಕಾಯುತ್ತಿರುವುದಾಗಿ ತಿಳಿಸಿದ್ದಕ್ಕೆ ನ್ಯಾಯಾಲಯ ಆಕ್ರೋಶ ವ್ಯಕ್ತಪಡಿಸಿತು.

# ಬಿಸಿಲ ಧಗೆಗೆ ತಂಪೆರೆದ ಕಾವ್ಯ ಝರಿ

## ಕಾವ್ಯ ನೀರು ಕವಿಮನವು ಜಾಗೃತಿಯ ದೀಪ ಹಚ್ಚಿದೆ: ಡಾ.ಪೇರ್ಲ



ಕಲಬುರಗಿ ನಗರದ ಕನ್ನಡ ಭವನದ ಸುವರ್ಣಸಭಾಗ್ರಹದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ ಬಿಸಿ ಉಸಿರು ಕಾವ್ಯ ನೀರು ವಿಶೇಷ ಜಾಗೃತಿ ಕವಿಗೋಷ್ಠಿಯನ್ನು ಆಕಾಶವಾಣಿ ನಿವೃತ್ತ ಕಾರ್ಯಕ್ರಮ ನಿರ್ವಾಹಕ ಡಾ.ಸದಾನಂದ ಪೆರ್ಲ ಅವರು ಉದ್ಘಾಟಿಸಿದರು. ಕಸಾಪ ಜಿಲ್ಲಾಧ್ಯಕ್ಷ ಟಿ ವಿಜಯಕುಮಾರ ಪಾಟೀಲ್, ಮುಂತಾದವರಿದ್ದರು.

> ಕವಿಯು ಸಾಮಾಜಿಕ ಜವಾಬ್ದಾರಿ ಹೊತ್ತು ಉತ್ತರದಾಯಿತ್ವದಿಂದ ಒಬ್ಬ ರಾಯಭಾರಿಯಾಗಿ ಕೆಲಸ ಮಾಡುವ ಹೊಣೆಗಾರಿಕೆಯ ಎಚ್ಚರಿಕೆಯಿಂದ ಮೂಡಿ ಬಂದ ಕವನಗಳು ಬಿಸಿಲ ಧಗೆಗೆ ಜಾಗೃತಿಯ ದೀಪ ಹಚ್ಚಿದ ಕವನಗಳು ಬಿಸಿಲ ಉಸಿರಿಗೆ ಕಾವ್ಯ ಗಂಗೆಯಾಗಿ ಹರಿದು ಸಹೃದಯರ ಮನ ಗೆದ್ದವು ಎಂದರು.
>
> – ಡಾ.ಸದಾನಂದ ಪೆರ್ಲ, ನಿವೃತ್ತ ಅಧಿಕಾರಿ, ಆಕಾಶವಾಣಿ ಕಲಬುರಗಿ.

**ಕಲಬುರಗಿ, ಮೇ. 2:** ಬಿಸಿಲ ಬೇಗೆಯ ಬದುಕು ಕಟ್ಟಿಕೊಂಡವರ ನೋವಿಗೆ ಸ್ಪಂದಿಸಿದ ಬಿಸಿ ಉಸಿರು ಕಾವ್ಯ ನೀರು ಕವಿಮನವು ಜಾಗೃತಿಯ ದೀಪ ಹಚ್ಚಿದೆ ಎಂದು ಆಕಾಶವಾಣಿ ನಿವೃತ್ತ ಕಾರ್ಯಕ್ರಮ ನಿರ್ವಾಹಕ ಡಾ.ಸದಾನಂದಪೆರ್ಲ ಹೇಳಿದರು.

ನಗರದ ಕನ್ನಡ ಭವನದ ಸುವರ್ಣ ಸಭಾಗ್ರಹದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಏರ್ಪಡಿಸಿದ್ದ ಬಿಸಿ ಉಸಿರು ಕಾವ್ಯ ನೀರು ವಿಶೇಷ ಜಾಗೃತಿ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಂದಿನ ಕವಿಗೋಷ್ಠಿ ಬಿಸಿಲ ಧಗೆಗೆ ಕಾವ್ಯದ ಝರಿ ನಿಜಕ್ಕೂ ತಂಪೆರೆದಂತಾಗಿದೆ ಎಂದರು.

ಇಂದು ಪ್ರಕೃತಿಯ ತಾಪಮಾನ ಏರಿಕೆ, ಅದರಿಂದ ಪರಿಸರಕ್ಕೆ ಉಂಟಾಗುವ ಹಾನಿ, ನವ ನಾಗರೀಕತೆ ಮತ್ತು ಅಭಿವೃದ್ಧಿಯ ಹೆಸರಿನಲ್ಲಿ ಪ್ರಕೃತಿಯ ಮೇಲಿನ ಶೋಷಣೆಗೆ ಕವಿಗಳು ಭಾವನೆಗಳ ಮೂಲಕ ಕಾವ್ಯ ಕಟ್ಟಿಕೊಟ್ಟ ಬಗೆ ಅತ್ಯಂತ ವಿಶಿಷ್ಟವಾಗಿತ್ತು ಎಂದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ, ಇಂದು ಮಿತಿಮೀರಿದ ಬಿಸಿಲಿನಿಂದ ರಸಿಕೊಳ್ಳಲು ನಾವುಗಳು ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ವಿಶಿಷ್ಠ ಶೈಲಿಯ ಕಾವ್ಯದ ಮೂಲಕ ಸಾಮಾಜಿಕ ಜಾಗೃತಿ ಮೂಡಿಸುವ ಪ್ರಯತ್ನ ಪರಿಷತ್ತು ಮಾಡಿದೆ. ವಿಭಿನ್ನ ಕಾರ್ಯಕ್ರಮಗಳ ಮೂಲಕವೇ ಜನಜಾಗೃತಿ ಮೂಡಿಸುವ ಕಾರ್ಯವನ್ನೂ ಪರಿಷತ್ತು ಮಾಡುತ್ತಿದೆ ಎಂದರು.

ವೈದ್ಯಾಧಿಕಾರಿ ಡಾ.ಸಂಧ್ಯಾ ಕಾನೇಕರ್, ಜನಪರ ಹೋರಾಟಗಾರ ಮಂಜುನಾಥ ನಾಲವಾರಕರ್, ನ್ಯಾಯವಾದಿ ಪೂರ್ಣಿಮಾ ಜಾನೆ, ಜಿಲ್ಲಾ ಕಸಾಪ ಕಾರ್ಯದರ್ಶಿಗಳಾದ ಶಿವರಾಜ ಅಂಡಗಿ, ಧರ್ಮಣ್ಣ ಧನ್ನಿ, ಕೋಶಾಧ್ಯಕ್ಷ ಶರಣರಾಜ ಛಪ್ಪರಬಂದಿ, ಪ್ರಮುಖರಾದ ಧರ್ಮರಾಜ ಜವಳಿ, ಸೈಯ್ಯದ್ ನಜಿರುದ್ದಿನ್ ಮುತ್ತವಲ್ಲಿ, ದಿನೇಶ ಮದಕರಿ, ರಾಜೇಂದ್ರ ಮಾಡಬೂಳ, ಶಿವಲೀಲಾ ಕಲಗುರ್ಕಿ ವೇದಿಕೆ ಮೇಲಿದ್ದರು.

ಕವಿಗಳಾದ ವೆಂಕಟೇಶ ಜನಾದ್ರಿ, ವಿಜಯಕುಮಾರ ಪಾಟೀಲ ವಿಕೆ ಸಲಗರ, ಶಾಂತಾ ಪಸ್ತಾಪೂರ, ಅಮೃತ ದೊಡ್ಮನಿ, ಮೋಹನ ಕಟ್ಟಿಮನಿ, ಅನುಪಮಾ ಅಪಗುಂಡೆ, ಡಾ.ಶೀಲಾದೇವಿ ಬಿರಾದಾರ ಅವರು ಬಿಸಿಲಿನ ರಕ್ಷಣೆ ಕುರಿತು ಜಾಗೃತಿ ಕವನ ವಾಚಿಸಿ ವಿಶೇಷ ಗಮನ ಸೆಳೆದರು.ಜ್ಞಾನವಂತ ನಿಜವಾದ ಶ್ರೀಮಂತ ಪಿಯುಸಿ ದ್ವಿತೀಯ ವರ್ಷದ ಪರೀಕ್ಷೆಯ ಕನ್ನಡದಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಖ್ಯಾತಿ ವಿಜ್ಞಾನಿ ಡಾ.ಎಂ.ಎಸ್.ಜೋಗದ, ಜೀವನದಲ್ಲಿ ನಮ್ಮ ಗುರಿ ತಲುಪಬೇಕಾದರೆ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ಯಾವುದೇ ಆಸ್ತಿಕ್ಕಿಂತ ಶಿಕ್ಷಣವನ್ನೇ ಆಸ್ತಿಯನ್ನಾಗಿ ಮಾಡಬೇಕು. ಒಳ್ಳೆಯ ಶಿಕ್ಷಣವೇ ನಿಜವಾದ ಸಂಪತ್ತು. ಶಿಕ್ಷಣದಿಂದ ಗೌರವ ಸ್ಥಾನಮಾನಗಳು ಸಮಾಜದಲ್ಲಿ ದೊರೆಯುತ್ತದೆ. ಈ ದಿಸೆಯಲ್ಲಿ ಮಕ್ಕಳು ಉತ್ತಮ ಶಿಕ್ಷಣ ಪಡೆದುಕೊಂಡು ಹಾಕಿಕೊಂಡ ಗುರಿ ಮುಟ್ಟಬೇಕು ಎಂದು ಹೇಳಿದರು.

# ಲಂಚ ಸ್ವೀಕರಿಸುತ್ತಿರುವಾಗಲೇ ಲೋಕಾಗೆ ಸಿಕ್ಕಿಬಿದ್ದ ಸರ್ವೇ ಸೂಪರ್‌ವೈಸರ್

**ದಾವಣಗೆರೆ, ಮೇ 2:** ಐವತ್ತು 50 ಸಾವಿರ ಲಂಚ ಪಡೆಯುತ್ತಿದ್ದ ಸರ್ವೇ ಸೂಪರವೈಸರ್ ರೆಡ್‌ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಜಿಲ್ಲೆಯ ಚನ್ನಗಿರಿಯ ಎಡಿಎಲ್‌ಆರ್ ಕಚೇರಿಯಲ್ಲಿ ನಡೆದಿದೆ. ಕೆ.ಹೆಚ್ ಅಂಜಿನಪ್ಪ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ದಾವಣಗೆರೆ ನಗರದ ಹಳೇ ಬಸ್‌ನಿಲ್ದಾಣದ ಬಳಿಯ ಲಾಡ್ಜ್‌ನಲ್ಲಿ ಲೋಕಾಯುಕ್ತ ಅಧಿಕಾರಿಗಳು ಅವರನ್ನು ವಶಕ್ಕೆ ಪಡೆದಿದ್ದಾರೆ. ಬೆಳಿಗ್ಗೆ ಸರ್ವೆ ಸೂಪರ್ ಕೆಎಚ್ ಅಂಜಿನಪ್ಪ ಮಧುರ ನಾಯಕನಹಳ್ಳಿ ಎಬಿ ಕುಮಾರನಾಯಕ ಎಂಬ ತನ ಬಳಿ 50,000 ಲಂಚ ಪಡೆಯಲು ಮುಂದಾಗಿದ್ದಾರೆ. ರೈತನ ಜಮೀನು ಹದ್ದುಬಸ್ತು ಮಾಡಿಕೊಡಲು 1 ಲಕ್ಷಕ್ಕೆ ಬೇಡಿಕೆ ಇಟ್ಟಿದ್ದು ಸ್ನೇಹಿತ ಶ್ರೀಧರ್ ಮೂಲಕ ರೈತನಿಂದ ಲಂಚ ಪಡೆಯುವಾಗ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಮೊದಲ ಕಂತು ಐವತ್ತು ಸಾವಿರ ರೂ. ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದು ಸ್ನೇಹಿತ ಶ್ರೀಧರ್ ಜೊತೆಗೆ ಅಂಜಿನಪ್ಪನನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

# ದಾಖಲೆ ಬರೆದ ರಾಯಚೂರು ಮದ್ಯ ಮಾರಾಟ

## ಒಂದೇ ತಿಂಗಳಲ್ಲಿ 13 ಸಾವಿರ ಅಧಿಕ ಬಿಯರ್ ಬಾಕ್ಸ್ ಖಾಲಿ



**ರಾಯಚೂರು, ಮೇ. 2:** ಬಿಸಿಲನಾಡು ರಾಯಚೂರಿನಲ್ಲಿ ಸೂರ್ಯನ ತಾಪ ದಿನದಿಂದ ದಿನಕ್ಕೆ ಏರುತ್ತಿದೆ. ಈ ಕಡು ಬೇಸಿಗೆಯಿಂದ ತಪ್ಪಿಸಿಕೊಳ್ಳಲು ಜನರು ತಂಪು ಪಾನೀಯಗಳ ಮೊರೆ ಹೋಗುತ್ತಿದ್ದರೆ, ಇತ್ತ ಮದ್ಯಪ್ರಿಯರು ಮಾತ್ರ ಬಿಯರ್ ಮೊರೆ ಹೋಗಿದ್ದಾರೆ. ಪರಿಣಾಮವಾಗಿ ಜಿಲ್ಲೆಯಲ್ಲಿ ಬಿಯರ್ ಮತ್ತು ಲಿಕ್ಕರ್ ಮಾರಾಟದಲ್ಲಿ ದಾಖಲೆ ಮಟ್ಟದ ಏರಿಕೆ ಕಂಡುಬಂದಿದೆ.

ರಾಯಚೂರಿನ ಕರ್ನಾಟಕ ರಾಜ್ಯ ಪಾನೀಯ ನಿಗಮ ನಿಯಮಿತದ ಅಂಕಿ–ಅಂಶಗಳ ಪ್ರಕಾರ, ಮಾರ್ಚ್ ತಿಂಗಳಿಗೆ ಹೋಲಿಸಿದರೆ ಏಪ್ರಿಲ್‌ನಲ್ಲಿ ಮದ್ಯದ ಬೇಡಿಕೆ ಗಣನೀಯವಾಗಿ ಹೆಚ್ಚಾಗಿದೆ. ಮಾರ್ಚ್‌ನಲ್ಲಿ ಒಟ್ಟು 82,151 ಬಾಕ್ಸ್ ಬಿಯರ್ ಮಾರಾಟವಾಗಿದ್ದರೆ, ಏಪ್ರಿಲ್ ತಿಂಗಳ ಕೇವಲ 25 ದಿನಗಳ ಅವಧಿಯಲ್ಲೇ 95,319 ಬಾಕ್ಸ್ ಬಿಯರ್ ಪೂರೈಕೆಯಾಗಿದೆ. ಅಂದರೆ, ಕೇವಲ ಒಂದು ತಿಂಗಳ ಅಂತರದಲ್ಲಿ ಸುಮಾರು 13 ಸಾವಿರಕ್ಕೂ ಹೆಚ್ಚು ಅಧಿಕ ಬಾಕ್ಸ್ ಬಿಯರ್ ಮಾರಾಟವಾಗಿರುವುದು ವಿಶೇಷ.

ಬಿಯರ್ ಮಾತ್ರವಲ್ಲದೆ, ಇಂಡಿಯನ್ ಮೇಡ್ ಲಿಕ್ಕರ್ ಮಾರಾಟವೂ ಹಿಂದೆ ಬಿದ್ದಿಲ್ಲ. ಕಳೆದ ವರ್ಷದ ಏಪ್ರಿಲ್‌ಗೆ ಹೋಲಿಸಿದರೆ ಈ ಬಾರಿ 8 ಸಾವಿರ ಬಾಕ್ಸ್ ಹೆಚ್ಚು ಲಿಕ್ಕರ್ ಮಾರಾಟವಾಗಿದೆ. ಇನ್ನೂ ಅಚ್ಚರಿಯ ವಿಷಯವೆಂದರೆ, ಇದೇ ವರ್ಷದ ಮಾರ್ಚ್ ತಿಂಗಳಿಗಿಂತ ಏಪ್ರಿಲ್‌ನಲ್ಲಿ ಬರೋಬ್ಬರಿ 16 ಸಾವಿರ ಬಾಕ್ಸ್ ಹೆಚ್ಚುವರಿ ಲಿಕ್ಕರ್ ಮಾರಾಟ ಕಂಡುಬಂದಿದೆ.

ಬೇಡಿಕೆ ಹೆಚ್ಚಾದಂತೆ ಕೆಎಸ್‌ಬಿಸಿಎಲ್ ಗೋದಾಮುಗಳಲ್ಲಿ ಸ್ಟಾಕ್ ವೇಗವಾಗಿ ಖಾಲಿಯಾಗುತ್ತಿದೆ. ಕಳೆದ ವರ್ಷದ ಏಪ್ರಿಲ್‌ಗಿಂತ ಈ ವರ್ಷ ಹತ್ತು ಸಾವಿರಕ್ಕೂ ಅಧಿಕ ಬಿಯರ್ ಬಾಕ್ಸ್‌ಗಳು ಮಾರಾಟವಾಗಿದ್ದು, ಸರ್ಕಾರಕ್ಕೆ ಭರ್ಜರಿ ಆದಾಯ ಹರಿದುಬರುತ್ತಿದೆ. ಒಟ್ಟಿನಲ್ಲಿ ರಾಯಚೂರಿನ ಬಿಸಿಲು ಮದ್ಯದ ಅಂಗಡಿಗಳ ಪಾಲಿಗೆ ಸುಗ್ಗಿ ಕಾಲವಾಗಿ ಪರಿಣಮಿಸಿದೆ.

# ಜಗತ್ತಿನ 38 ಬಾಷೆಗಳಲ್ಲಿ ಅನುವಾದಗೊಂಡ ವಚನ: ಡಾ.ಅರವಿಂದ ಜತ್ತಿ ಗ್ರಂಥ ಬಿಡುಗಡೆ



ಕಲಬುರಗಿ ನಗರದ ಬಸವ ಸಮಿತಿ ಅನುಭಾವ ಮಂಟಪ, ಡಾ.ಬಿ.ಡಿ.ಜತ್ತಿ ವಚನ ಅಧ್ಯಯನ ಮತ್ತು ಸಂಶೋಧನ ಕೇಂದ್ರದಲ್ಲಿ ವಿಶ್ವ ಬಸವ ಜಯಂತಿ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಜಗತ್ತಿನ 38 ಭಾಷೆಗಳಿಗೆ ಅನುವಾದಗೊಂಡಿರುವ 2500 ವಚನಗಳ ಕನ್ನಡ ಆವೃತ್ತಿಯ ಎರಡು ಸಂಪುಟಗಳ ನೈಜ ಗದ್ಯಾನುವಾದ ಕೃತಿಗಳನ್ನು ಬೆಂಗಳೂರು ಕೇಂದ್ರ ಬಸವ ಸಮಿತಿ ಅಧ್ಯಕ್ಷ ಡಾ.ಅರವಿಂದ ಜತ್ತಿ ಬಿಡುಗಡೆಗೊಳಿಸಿದರು. ಡಾ.ವಿಲಾಸವತಿ ಖೂಬಾ, ಡಾ.ವೀರಣ್ಣ ದಂಡೆ ಮುಂತಾದವರಿದ್ದರು.

**ಕಲಬುರಗಿ, ಮೇ. 2:** ನಗರದ ಬಸವ ಸಮಿತಿ ಅನುಭಾವ ಮಂಟಪ, ಡಾ.ಬಿ.ಡಿ.ಜತ್ತಿ ವಚನ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದಲ್ಲಿ ವಿಶ್ವ ಬಸವ ಜಯಂತಿ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಜಗತ್ತಿನ 38 ಭಾಷೆಗಳಿಗೆ ಅನುವಾದಗೊಂಡಿರುವ 2500 ವಚನಗಳ ಕನ್ನಡ ಆವೃತ್ತಿಯ ಎರಡು ಸಂಪುಟಗಳ ನೈಜ ಗದ್ಯಾನುವಾದ ಕೃತಿಗಳನ್ನು ಬೆಂಗಳೂರು ಕೇಂದ್ರ ಬಸವ ಸಮಿತಿ ಅಧ್ಯಕ್ಷ ಡಾ.ಅರವಿಂದ ಜತ್ತಿ ಬಿಡುಗಡೆಗೊಳಿಸಿದರು.

ಬಸವ ಸಮಿತಿಗೆ ಸತತವಾಗಿ 6ನೇ ಅವಧಿಗೆ ಅಧ್ಯರಾಗಿ ಅಧಿಕಾರ ವಹಿಸಿಕೊಂಡ ಡಾ.ಅರವಿಂದ ಜತ್ತಿ ಅವರನ್ನು ಈ ಸಂದರ್ಭದಲ್ಲಿ ಸತ್ಕರಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ.ಜತ್ತಿ, ನಾನು ಅಧಿಕಾರ ಮತ್ತು ಹಣದ ಆಮಿಷ ತೊರೆದು ತಂದೆ ಡಾ.ಬಿ.ಡಿ.ಜತ್ತಿಯವರ ಅಪೇಕ್ಷೆಯಂತೆ ಬಸವ ತತ್ವದ ಪ್ರಚಾರಕ್ಕಾಗಿ ಜೀವನ ಮುಡುಪಾಗಿಟ್ಟಿದ್ದೇನೆ. ಜಗತ್ತಿನ 38 ಭಾಷೆಗಳಿಗೆ ವಚನಗಳನ್ನು ಅನುವಾದಿಸುವಲ್ಲಿ ಯಶಸ್ವಿಯಾಗಿದ್ದೇವೆ. ಬಸವ ಸಮಿತಿಯು ವಿಶ್ವಾದ್ಯಂತ ಬಸವ ಅಭಿಮಾನಿ ಸಂಟನೆಗಳನ್ನು ಒಟ್ಟುಗೂಡಿಸಿ ಅಮೆರಿಕ, ಇಂಗ್ಲೆಂಡ್, ಆಸ್ಟೇಲಿಯಾ, ಫ್ರಾನ್ಸ್ ಸೇರಿದಂತೆ ಒಂದು ಸೂತ್ರದಡಿ ಬಸವ ಜಯಂತಿ ಆಚರಿಸಲಾಗುತ್ತಿದೆ.

ಪ್ರತಿಯೊಬ್ಬರೂ ಪ್ರತಿದಿನ ಲಿಂಗಪೂಜೆ ಮಾಡಿಕೊಂಡು ವಚನ ಅಧ್ಯಯನ ಮಾಡಬೇಕು ಎಂದು ಮನವಿ ಮಾಡಿದರು.

ವಚನಗಳ ನೈಜ ಗದ್ಯಾನುವಾದ ಕೃತಿಯ ಪ್ರಧಾನ ಸಂಪಾದಕ ಡಾ.ವೀರಣ್ಣ ದಂಡೆ ಮಾತನಾಡಿ, ನೈಜ ಗದ್ಯ ಅನುವಾದ ಗ್ರಂಥವು ಕಲಬುರಗಿ ಬಸವ ಸಮಿತಿ ಶ್ರಮದ ಫಲವಾಗಿದೆ. ವಚನಕಾರರು ಯಾವ ಭಾವದಲ್ಲಿ ವಚನ ರಚಿಸಿದ್ದಾರೆಯೋ ಅದರ ನಿಜವಾದ ಅರ್ಥವನ್ನು ನೇರವಾಗಿ ಜನರಿಗೆ ಮುಟ್ಟಿಸುವಲ್ಲಿ ನೈಜ ಗದ್ಯಾನವಾದ ಗ್ರಂಥ ಉಪಯುಕ್ತವಾಗಿದೆ. ಈ ಗ್ರಂಥದಲ್ಲಿ ಅನುವಾದಕರ ಯಾವುದೇ ವಿವರಣೆ ನೀಡಿಲ್ಲ. ನೇರವಾಗಿ ವಚನಗಳ ಮೂಲ ಆಶಯ ತಿಳಿಸಲಾಗಿದೆ. ಒಂದು ವಿಶ್ವವಿದ್ಯಾಲಯ ಮಾಡುವ ಕೆಲಸಕ್ಕಿಂತ ಬಸವ ಸಮಿತಿ ಹೆಚ್ಚು ಮಾಡುತ್ತಿದೆ ಎಂದರು.

ಡಾ.ವಿಲಾಸ್ವತಿ ಖೂಬಾ ಅವರಿಗೆ ಜೀವಮಾನದ ಸಾಧನೆ ಪ್ರಶಸ್ತಿ ನೀಡಿ ಗೌರವಿಸಿ ಸನ್ಮಾನಿಸಲಾಯಿತು . ಡಾ.ಜಯಶ್ರೀ ದಂಡೆ ಸ್ವಾಗತಿಸಿ, ಪ್ರಸ್ತಾವಿಕ ಮಾತನಾಡಿದರು. ನೈಜ ಗದ್ಯಾನುವಾದ ಕೃತಿಯ ಅನುವಾದಕ ಡಾ.ಶ್ರೀಕಾಂತ ಪಾಟೀಲ್ ಮತ್ತು ಡಾ.ಚಿತ್ಕಳ ಮಠಪತಿಯವರು ಉಪಸ್ಥಿತರಿದ್ದರು. ಉದ್ಯಮಿ ರಾಜೇಂದ್ರ ಖೂಬಾ, ಅಮರನಾಥ ಪಾಟೀಲ್, ಕಾರ್ಯದರ್ಶಿ ಡಾ.ಆನಂದ ಪಾಟೀಲ್ ಸಿದ್ಧಾಮಣಿ, ಡಾ.ಕೆ.ಎಸ್.ವಾಲಿ, ಶರಣಗೌಡ ಪಾಟೀಲ್ ಪಾಳಾ, ಉದ್ದಂಡಯ್ಯ ಭಾಗವಹಿಸಿದ್ದರು.

# ಕಲಬುರಗಿ–ಬೀದರ್ ಜನತೆಗೆ ಸಂತಸದ ಸುದ್ದಿ
## ಸ್ಥಗಿತಗೊಂಡಿದ್ದ ವಿಮಾನ ಸೇವೆ ತಿಂಗಳಲ್ಲೇ ಪುನಾರಂಭ

**ಕಲಬುರಗಿ, ಮೇ. 2:** ವಿಮಾನ ಸೇವೆ ವಿಷಯದಲ್ಲಿ ರಾಜಧಾನಿಯಿಂದ ದೂರದಲ್ಲಿರುವ ಕಲಬುರಗಿ ಮತ್ತು ಬೀದರ್ ಜಿಲ್ಲೆಯ ಜನರಿಗೆ ಇದೊಂದು ಖುಷಿ ಸುದ್ದಿ. ಎರಡೂ ಜಿಲ್ಲೆಗಳ ಏರ್‌ಪೋರ್ಟ್‌ನಿಂದ ಸ್ಥಗಿತಗೊಂಡಿದ್ದ ವಿಮಾನ ಸೇವೆ ತಿಂಗಳಲ್ಲಿ ಪುನರಾಂಭಿಸುವ ಎಲ್ಲ ಸಿದ್ಧತೆಗಳು ನಡೆದಿವೆ. ಕಲಬುರಗಿ ಏರ್‌ಪೋರ್ಟನಿಂದ 2025 ರ ಅಕ್ಟೋಬರ್ 15ಕ್ಕೆ ಮತ್ತು ಬೀದರ್‌ನಿಂದ 2026 ರ ಏಪ್ರಿಲ್ 16 ರಿಂದ ವಿಮಾನ ಸೇವೆ ಸ್ಥಗಿತಗೊಂಡಿದ್ದವು. ಎರಡೂ ಜಿಲ್ಲೆಗಳಿಂದ ಬೆಂಗಳೂರಿಗೆ ಸಂಚರಿಸುತ್ತಿದ್ದ ಸ್ಟಾರ್ ಏರ್ ವಿಮಾನ ನಷ್ಟದ ಕಾರಣದಿಂದ ಸ್ಥಗಿತವಾಗಿತ್ತು.

ಆದರೆ ರಾಜ್ಯ ಸರಕಾರ ಇದೀಗ ಸ್ಟಾರ್ ಏರ್‌ಗೆ ವಿಮಾನ ಸೇವೆಗಳ ನಿರ್ವಹಣೆಗಾಗಿ ಒಂದು ವರ್ಷಕ್ಕೆ 28.47 ಕೋಟಿ ರೂ.ಗಳ ವೆಚ್ಚ ಸರಿದೂಗಿಸುವ ನಿಧಿ (ವಯಾಬಿಲಿಟಿ ಗ್ಯಾಪ್ ಫಂಡ್– ವಿಜಿಎಫ್) ನೀಡಲು ನಿರ್ಧರಿಸಿದೆ. ಎಲ್ಲ ಪ್ರಕ್ರಿಯೆಗಳು ಮುಗಿಯಲು ಹೆಚ್ಚು ಕಮ್ಮಿ 20 ದಿನಗಳಾದರೂ ಬೇಕು. ಎಲ್ಲವೂ ಅಂದುಕೊಂಡಂತೆ ಆದ್ರೆ ತಿಂಗಳಲ್ಲೇ ಮತ್ತೆ ವಿಮಾನ ಸೇವೆ ಶುರುವಾಗಲಿದೆ ಎನ್ನುತ್ತಾರೆ ಅಧಿಕಾರಿಗಳು.

ಅನುದಾನ ಎಲ್ಲಿಂದ?: ಉಡಾನ್ ಯೋಜನೆ–1 ಸ್ಥಗಿತವಾಗಿದ್ದರಿಂದ ವಿಮಾನ ಸಂಚಾರ ಆರ್ಥಿಕವಾಗಿ ಕಾರ್ಯಸಾಧುವಲ್ಲ, ಲಾಭ ಆಗುತ್ತಿಲ್ಲಎಂಬ ಕಾರಣ ಮುಂದೆ ಮಾಡಿ ಸ್ಟಾರ್ ಏರ್ ವಿಮಾನ ಸೇವೆ ರದ್ದುಪಡಿಸಿತ್ತು. ಎರಡೂ ಜಿಲ್ಲೆಗಳಲ್ಲಿ ಏರ್‌ಪೋರ್ಟ್‌ಗಳಿದ್ದು, ಕಲಬುರಗಿ ಜಿಲ್ಲೆಯಿಂದ ಮೂರು ವರ್ಷಗಳಲ್ಲಿ ಸುಮಾರು ಒಂಬತ್ತು ಲಕ್ಷ ಪ್ರಯಣಿಕರು ವಿಮಾನಸೇವೆಯ ಉಪಯೋಗ ಪಡೆದಿದ್ದರು. ಆದರೂ ನಷ್ಟದ ಹೆಸರಿನಲ್ಲಿ ವಿಮಾನ ಸಂಚಾರಕ್ಕೆ ಬ್ರೇಕ್ ಬಿದ್ದಿತ್ತು. ಬರೀ ವಿಐಪಿಗಳ ವಿಮಾನ ಸಂಚಾರಕ್ಕೆ ಈ ನಿಲ್ದಾಣಗಳು ಸೀಮಿತವಾಗಿದ್ದವು. ಇದನ್ನು ಮನಗಂಡು ಸರಕಾರ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಅನುದಾನದಲ್ಲಿ ವಿಜಿಎಫ್ ನೀಡಲು ನಿರ್ಧರಿಸಿದೆ.



ಎಲ್ಲ ಆರ್ಥಿಕ ಹೊರೆ ಮಂಡಳಿ ಮೇಲೆ ಹಾಕದೇ ಸರಕಾರ ಮತ್ತು ಕೆಕೆಆರ್‌ಡಿಬಿ ತಲಾ 50:50 ನೀಡಿದರೆ ಉತ್ತಮ ಎನ್ನುವ ಅಭಿಪ್ರಾಯ ವ್ಯಕ್ತವಾಗಿದೆ. ಮೇ 12 ರಂದು ಕೆಕೆಆರ್‌ಡಿಬಿ ಸಭೆ ನಿಗದಿಯಾಗಿದ್ದು, ಈ ಸಭೆಯಲ್ಲಿ ಈ ಮೊತ್ತಕ್ಕೆ ಅನುಮೋದನೆ ಸಿಗಲಿದೆ. ಸಚಿವ ಸಂಪುಟದ ನಿರ್ಧಾರದಂತೆ ಅನುದಾನ ನೀಡಲಿದೆ.

ಬೀದರ್ ಏರ್‌ಪೋರ್ಟ್‌ಗೆ ಮಂಡಳಿಯ ಮ್ಯಾಕ್ರೋ ಅನುದಾನದ ಅಡಿ ಕಳೆದ ವರ್ಷ ವಿಜಿಎಫ್ ನೀಡಲಾಗಿತ್ತು. ಕಲಬುರಗಿ ಮತ್ತು ಬೀದರ್‌ನಿಂದ ಸಂಚರಿಸುವ ವಿಮಾನ ಸೇವೆಯಿಂದ ಸ್ಟಾರ್ ಏರ್‌ಗೆ ಲಾಭವೂ ಇತ್ತು. ಶೇ 85ಕ್ಕೂ ಹೆಚ್ಚು ಸೀಟುಗಳು ಭರ್ತಿಯಾಗುತ್ತಿದ್ದವು. ನಿಯಮಿತವಾಗಿ ಸೇವೆ ಸಿಗುತ್ತಿದ್ದರೆ ಪ್ರಯಾಣಿಕರು ಸಂಚರಿಸುತ್ತಾರೆ. ಆದರೆ ಈ ಸಂಸ್ಥೆ ಕ್ರಮೇಣ ಸಮಯದಲ್ಲಿ ವ್ಯತ್ಯಾಸ ಮಾಡಿರುವುದು, ಮೂರು ದಿನಗಳಿಗೊಮ್ಮೆ ಓಡಿಸುವುದು ಮಾಡಿದ್ದರಿಂದ ಪ್ರಯಾಣಿಕರು ಒಲವು ಕಡಿಮೆಯಾಯಿತು. ಹೀಗಾಗಿ ಸೇವೆ ಸಂಪೂರ್ಣವಾಗಿ ಸ್ಥಗಿತವಾಯಿತು ಎನ್ನುತ್ತಾರೆ ಪ್ರಯಾಣಿಕರು.

**20 ದಿನಗಳಲ್ಲಿ ಪ್ರಕ್ರಿಯೆ:**

**ಸರಕಾರ ಮತ್ತು ಸ್ಟಾರ್ ಏರ್ ನಡುವೆ ಹಣಕಾಸು ಒಪ್ಪಂದ, ವಿಮಾನಗಳ ಸುಸ್ಥಿರತೆ ಪರಿಶೀಲನೆ, ಸಿಬ್ಬಂದಿ ನಿಯೋಜನೆ ಸೇರಿದಂತೆ ಅಗತ್ಯ ಸಿದ್ಧತೆಗಳಿಗಾಗಿ ಸುಮಾರು 20-25 ದಿನಗಳಾದರೂ ಬೇಕು. ಈ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ತಿಂಗಳಲ್ಲಿ ವಿಮಾನ ಸೇವೆ ಮತ್ತೆ ಶುರುವಾಗಲಿದೆ ಎನ್ನುತ್ತಾರೆ ಏರ್‌ಪೋರ್ಟ್ ಅಧಿಕಾರಿಗಳು.**

**ಮಧ್ಯಪ್ರಾಚ್ಯ ಯುದ್ಧದ ಹಿನ್ನೆಲೆಯಲ್ಲಿ ವಿಮಾನಗಳಿಗೆ ಬಳಸುವ ಏವಿಯೇಷನ್ ಟರ್ಬೈನ್ ಫ್ಯೂಯಲ್ ದರ ಸಹ ದುಬಾರಿಯಾಗಿದ್ದು, ಪ್ರಯಾಣ ದರವೂ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.**



ಎರಡು ದಿನಗಳ ಕಾಲ ನಗರದಲ್ಲಿ ಸುರಿದ ಮಳೆಯ ನಂತರ, ಶನಿವಾರ ಬೆಂಗಳೂರಿನ ಜಯನಗರದಲ್ಲಿ ಆಂಬ್ಯುಲೆನ್ಸ್ ಮೇಲೆ ಮರ ಬಿದ್ದಿತು.

# ಕೃಷಿ ಪ್ರಾಯೋಗಿಕ ಪರೀಕ್ಷೆಗೆ ತರಬೇತಿ ಕಾರ್ಯಾಗಾರ ನಾಳೆ

**ರೈತ ಮಕ್ಕಳ 50% ಮೀಸಲಾತಿ ಸದುಪಯೋಗಪಡಿಸಿಕೊಳ್ಳಲು**

**ಬೆಂಗಳೂರು, ಮೇ2:** ಪಶುಸಂಗೋಪನೆ, ಬಿಎಸ್ಸಿ ಕೃಷಿ, ಬಿಎಸ್ಸಿ ತೋಟಗಾರಿಕೆ ಮುಂತಾದ 12 ಕೋರ್ಸುಗಳ ಪ್ರವೇಶಕ್ಕೆ ಕೃಷಿಕರ ಕೋಟಾದ ಅಡಿಯಲ್ಲಿ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ರೈತರ ಮಕ್ಕಳಿಗೆ 50% ಮೀಸಲಾತಿ ಲಭ್ಯವಿದ್ದು, ಇದನ್ನು ಸದುಪಯೋಗಪಡಿಸಿಕೊಳ್ಳಲು ಜಿಕೆವಿಕೆ ಬಳಿ ಇರುವ ಅರಬಿಂದೋ ಶಾಲೆಯಲ್ಲಿ ವಿಕ್ಸಿತ್47 ಅಕಾಡೆಮಿಯಿಂದ ಕೃಷಿ ಪ್ರಾಯೋಗಿಕ ಪರೀಕ್ಷೆಗೆ ಸನ್ನದ್ಧಗೊಳ್ಳಲು ಮೇ. 4 ರಂದು ಒಂದು ದಿನದ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ.


ರೈತ ಮಕ್ಕಳಿಗೆ ಲಭ್ಯವಿರುವ 50% ಮೀಸಲಾತಿ ಸೌಲಭ್ಯ ಪಡೆಯಲು ಕೆಸಿಇಟಿ ಪರೀಕ್ಷೆಯ ಜೊತೆಗೆ ಕೃಷಿ ವಿಶ್ವವಿದ್ಯಾಲಯಗಳಲ್ಲಿ ನಡೆಸುವ ಪ್ರಾಯೋಗಿಕ ಪರೀಕ್ಷೆಯನ್ನು ಬರೆಯಬೇಕಾಗಿದೆ. ಈ ಪರೀಕ್ಷೆಗೆ ತಯಾರಾಗಲು ಮೇ 4 ರ ಸೋಮವಾರದಂದು ಅರಬಿಂದೋ ಶಾಲೆಯಲ್ಲಿ ತರಬೇತಿ ನೀಡಲಾಗುತ್ತಿದೆ ಎಂದು ವಿಕ್ಸಿತ್47 ಅಕಾಡೆಮಿಯ ಮುಖ್ಯಸ್ಥರಾದ ತೇಜಸ್ ಎಚ್.ಎನ್. ತಿಳಿಸಿದ್ದಾರೆ.

ಈ ಕಾರ್ಯಗಾರದಲ್ಲಿ ಕೃಷಿ ಪ್ರಾಯೋಗಿಕ ಪರೀಕ್ಷೆಯ ಕುರಿತು ಸಂಪೂರ್ಣ ತರಬೇತಿ ನೀಡಲಾಗುತ್ತದೆ. ದ್ವಿತೀಯ ಪಿಯುಸಿ ಮುಗಿಸಿ ಅಗ್ರಿ ಪ್ರಾಕ್ಟಿಕಲ್ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು. ವಿದ್ಯಾರ್ಥಿಗಳು ನೋಂದಣಿ ಮಾಡಿಕೊಳ್ಳಲು 8217413646 ಗೆ ಕರೆಮಾಡುವಂತೆ ಕೋರಲಾಗಿದೆ.

# ಗೋಮಾತೆಗೆ ರಾಷ್ಟ್ರಮಾತೆ ಸ್ಥಾನ ನೀಡಲು: ಬಜರಂಗ ದಳ ಅಭಿಯಾನ

**ಬೀದರ್, ಮೇ. 2:** ಗೋಮಾತೆಗೆ ರಾಷ್ಟ್ರಮಾತೆ ಸ್ಥಾನಮಾನ ನೀಡಬೇಕು ಹಾಗೂ ಗೋಹತ್ಯೆಯನ್ನು ಸಂಪೂರ್ಣವಾಗಿ ನಿಷೇಧಿಸಬೇಕು ಎಂದು ಆಗ್ರಹಿಸಿ, ಬಜರಂಗದಳ ಜಿಲ್ಲಾ ಘಟಕದಿಂದ ನಗರದಲ್ಲಿ ಅಭಿಯಾನ ನಡೆಸಲಾಯಿತು.

ನಗರದ ಅಂಬೇಡ್ಕರ್ ವೃತ್ತದಲ್ಲಿ ಜಮಾಯಿಸಿದ ಕಾರ್ಯಕರ್ತರು ಅಲ್ಲಿಂದ ತಹಸೀಲ್ದಾರ್ ಕಚೇರಿವರೆಗೆ ರ್‍ಯಾಲಿ ಮೂಲಕ ತೆರಳಿ ನಡೆಸಿ, ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ ಮೂಲಕ ಸಲ್ಲಿಸಲಾಯಿತು



ಬೀದರನಲ್ಲಿ ಬಜರಂಗದಳದ ವತಿಯಿಂದ ಹಮ್ಮಿಕೊಂಡ ಗೋಮಾತೆಗೆ ರಾಷ್ಟ್ರಮಾತೆ ಸ್ಥಾನ ನೀಡುವ ಅಭಿಯಾನದೊಂದಿಗೆ ರಾಷ್ಟ್ರಪತಿ, ಪ್ರಧಾನಿ, ರಾಜ್ಯಪಾಲರು ಮತ್ತು ಮುಖ್ಯಮಂತ್ರಿಗಳಿಗೆ ಬರೆದ ಮನವಿಯನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮುಖಂಡ ಈಶ್ವರ ಸಿಂಗ್ ಠಾಕೂರ್, ಗೋಮಾತೆಯನ್ನು ರಾಷ್ಟ್ರಮಾತೆ ಎಂದು ಅಧಿಕೃತವಾಗಿ ಘೋಷಿಸುವವರೆಗೆ ಹೋರಾಟ ನಿಲ್ಲುವುದಿಲ್ಲ. ಮುಂದಿನ ದಿನಗಳಲ್ಲಿ ರಾಜ್ಯ ಹಾಗೂ ರಾಷ್ಟ ಮಟ್ಟದಲ್ಲಿ ದೊಡ್ಡಮಟ್ಟದ ಹೋರಾಟವನ್ನು ರೂಪಿಸಲಾಗುವುದು. ಅಗತ್ಯವಿದ್ದಲ್ಲಿ ಪ್ರತಿ ಮೂರು ತಿಂಗಳಿಗೆ ಒಂದು ಬಾರಿ ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

ಇದೇ ವೇಳೆ ಆ. 16ರಂದು ದೆಹಲಿಯಲ್ಲಿ ಸುಮಾರು ಒಂದು ಕೋಟಿ ಗೋಭಕ್ತರನ್ನು ಸೇರಿಸಿ ಮಹಾ ಪ್ರತಿಭಟನೆ ನಡೆಸುವ ಕುರಿತು ಎಚ್ಚರಿಕೆ ನೀಡಿದರು.

ಮನವಿಯಲ್ಲಿ ಗೋಸಂರಕ್ಷಣೆಗೆ ಕಠಿಣ ಕಾನೂನು ಜಾರಿಗೆ ತರಬೇಕು ಹಾಗೂ ಗೋಹತ್ಯೆಯನ್ನು ಸಂಪೂರ್ಣವಾಗಿ ನಿಷೇಧಿಸಬೇಕು ಎಂದು ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ರಾಷ್ಟ್ರೀಯ ಬಜರಂಗದಳದ ಜಿಲ್ಲಾಧ್ಯಕ್ಷ ವೆಂಕಟೇಶ್ ಶಾಲಿ ಚಿದ್ರಿ, ಪ್ರಧಾನ ಕಾರ್ಯದರ್ಶಿ ಸಂದೀಪ್ ಪಾಟೀಲ, ಜಿಲ್ಲಾ ಉಪಾಧ್ಯಕ್ಷ ವಸಂತ್, ಶ್ರೀಕಾಂತ್ ಮೋದಿ, ಸಿ.ಬಿ ರೆಡ್ಡಿ, ದೀಪಕ್ ತೆಲಗಣಿ, ನರಸಿಂಗರಾವ್, ಅಮರ್ ಸಿಂಗ್ ಠಾಕೂರ್, ರಾಜಕುಮಾರ್ ಆರ್ಯ, ಭರತ್ ಮಾಲೆಗಾಂವ್, ಆಕಾಶ್, ಬಾಬುಗಿರಿ, ಸಾಯಿನಾಥ್, ಸಿದ್ದು, ವಿಷ್ಣು, ನಾರಾಯಣ್ ಹಾಗೂ ಶಾಂತು ಹಡಪದ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಸದ್ಯಕ್ಕೆ ಮಲ್ಲಿಕಾರ್ಜುನ ಖರ್ಗೆ ಸಿಎಂ ಆಗುವ ಪ್ರಶ್ನೆ ಉದ್ಭವಿಸಲ್ಲ

## ನಮ್ಮ ತಂದೆ ಸಿದ್ದರಾಮಯ್ಯರನ್ನು ಕುರ್ಚಿಯಿಂದ ಇಳಿಸಿದರೆ ಮಾತ್ರ ದಲಿತ ಸಿಎಂ ವಿಚಾರ: ಡಾ.ಯತೀಂದ್ರ ಪ್ರತಿಪಾದನೆ



ರಾಯಚೂರಲ್ಲಿ ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

**ರಾಯಚೂರು, ಮೇ. 2:** ಸದ್ಯ ನಮ್ಮ ತಂದೆಯವರು ಮುಖ್ಯಮಂತ್ರಿಗಳಾಗಿದ್ದಾರೆ. ಅವರನ್ನು ಹೈಕಮಾಂಡ್ ಕುರ್ಚಿಯಿಂದ ಇಳಿಸಿದರೆ ಮಾತ್ರ ದಲಿತ ಸಿಎಂ ವಿಚಾರ ಬರುತ್ತದೆ. ಆ ರೀತಿಯಾದಾಗ ಖಂಡಿತ ನಾನೂ ಕೂಡ ನನ್ನ ಅಭಿಪ್ರಾಯ ಏನು ಎಂಬುದನ್ನು ಮಾತನಾಡುತ್ತೇನೆ. ಹೈಕಮಾಂಡ್ ಏನು ತೀರ್ಮಾನ ತೆಗೆದುಕೊಳ್ಳುತ್ತದೋ ಅದನ್ನು ನಾವು ಸ್ವಾಗತ ಮಾಡುತ್ತೇವೆ ಎಂದು ಎಂಎಲ್‌ಸಿ ಡಾ.ಯತೀಂದ್ರ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿಸಿಎಂ ಡಿಕೆ ಶಿವಕುಮಾರ್ ಹುಟ್ಟುಹಬ್ಬಕ್ಕೆ ಹೈಕಮಾಂಡ್ ಶುಭಸುದ್ದಿ ಕೊಟ್ಟರೆ ಸಂತೋಷ.

ಹೈಕಮಾಂಡ್ ಏನು ತೀರ್ಮಾನ ತೆಗೆದುಕೊಳ್ಳುತ್ತದೆಯೋ ಅದಕ್ಕೆ ನಾವೆಲ್ಲ ಬದ್ಧರಾಗಿರುತ್ತೇವೆ ಎಂದರು.

ರಾಜ್ಯ ರಾಜಕಾರಣದಲ್ಲಿ ಮೇ 15 ಕ್ರಾಂತಿ ವಿಚಾರವಾಗಿ ಮಾತನಾಡಿದ ಅವರು, ನವೆಂಬರ್ ನಿಂದಲೂ ಇದನ್ನು ಹೇಳುತ್ತಲೇ ಇದ್ದಾರೆ. ಇದೇ ಪ್ರಶ್ನೆ ಕೇಳುತ್ತಲೇ ಇದ್ದಾರೆ. ನಾನು ಕೂಡ ಉತ್ತರ ಕೊಡುತ್ತಾ ಬರುತ್ತಿದ್ದೇನೆ. ಈಗಾಗಲೇ ಹೇಳುವುದನ್ನೆಲ್ಲಾ ಹೇಳಿದ್ದೇನೆ. ಇದರ ವಿಚಾರವಾಗಿ ಮತ್ತೆ ಮಾತನಾಡುವುದಿಲ್ಲ. ಈ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ಅಥವಾ ಸಿಎಂ ಸಿದ್ದರಾಮಯ್ಯರನ್ನೇ ಕೇಳಿ ಎಂದರು.

ದೆಹಲಿಯಲ್ಲಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಹಾಗೂ ಇತರ ಶಾಸಕರ ಸಭೆ ಬಗ್ಗೆ ನಿಜವಾಗಿಯೂ ನನಗೆ ಯವ ಮಾಹಿತಿಯಿಲ್ಲ. ಯಾಕೆ ಮೀಟಿಂಗ್ ಮಾಡಿದ್ದಾರೋ ಗೊತ್ತಿಲ್ಲ. ಸಂಪುಟ ಪುನಾರಚನೆಯಾದ್ರೆ ಸ್ಥಾನ ಸಿಗುತ್ತದೆ ಎಂಬ ನಿರೀಕ್ಷೆಯಲ್ಲಿ ನಾಯಕರು ದೆಹಲಿಗೆ ಹೋಗುತ್ತಿದ್ದಾರೆ. ಹೀಗಾಗಿ ಹೋದರೆ ತಪ್ಪೇನಿಲ್ಲ ಎಂದು ಯತೀಂದ್ರ ಹೇಳಿದರು

ಮಲ್ಲಿಕಾರ್ಜುನ ಖರ್ಗೆ ಅವರು ಮುಖ್ಯಮಂತ್ರಿಯಾದರೆ ಸ್ವಾಗತ ಎಂಬ ಗೃಹ ಸಚಿವ ಪರಮೇಶ್ವರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಸಿಎಂ ಸಿದ್ದರಾಮಯ್ಯ ಅವರನ್ನು ಹೈಕಮಾಂಡ್ ಇಳಿಸಿದರೇ ತಾನೆ ಆ ಪ್ರಶ್ನೆ ಬರುತ್ತದೆ. ಆ ರೀತಿಯಾಗಿ ನಡೆದಾಗ ಮಾತನಾಡುತ್ತೇನೆ ಎಂದರು.

ದೆಹಲಿಯಲ್ಲಿ ಸಚಿವರು ಹಾಗೂ ಶಾಸಕರ ಡಿನ್ನರ್ ಮೀಟಿಂಗ್ ಕುರಿತು ಯಾವುದೇ ಮಾಹಿತಿಯಿಲ್ಲ. ನನಗೆ ಯಾರೂ ದೆಹಲಿಗೆ ಬರುವಂತೆ ಕರೆದಿಲ್ಲ. ಯಾತಕ್ಕಾಗಿ ಅಲ್ಲಿಗೆ ಹೋಗಿ ಸಭೆ ಮಾಡಿದ್ದಾರೆ ಎಂಬುದು ಗೊತ್ತಿಲ್ಲ. ಸರ್ಕಾರ ಮೂರು ವರ್ಷ ಮುಗಿಸಿದ್ದು, ಸಚಿವ ಸಂಪುಟ ಪುನರಾಚನೆಯಾದರೆ ಹೊಸಬರಿಗೆ ಸಚಿವ ಸ್ಥಾನ ದೊರೆಯುತ್ತದೆ ಎಂಬ ನಿರೀಕ್ಷೆಯಲ್ಲಿರುವ ಸಚಿವ ಸ್ಥಾನದ ಆಕಾಂಕ್ಷಿಗಳು ದೆಹಲಿಗೆ ಸರಣಿ ಭೇಟಿ ನೀಡಿದರೇ ತಪ್ಪೇನಿಲ್ಲ ಎಂದರು.

# ಸೇವೆಯ ಬದುಕು ಸಾವಿನ ನಂತರವೂ ಉಳಿಯುತ್ತದೆ: ಪ್ರಾಚಾರ್ಯ ಡಾ. ರವಿ ಚೌಹಾಣ್



**ಗಂಗಾವತಿ, ಮೇ 2:** ಮನುಷ್ಯ ಜೀವನ ಇರುವುದು ಕೇವಲ ತಾನೊಬ್ಬನೇ ಬದುಕುವುದಕ್ಕಲ್ಲ, ಸಾಮಾಜಿಕ ಪ್ರಾಣಿಯಾದ ಮನುಷ್ಯನ ಮೇಲೆ ಸಮಾಜದ ಋಣ ಅಪಾರವಾಗಿದೆ. ಹಾಗಾಗಿ ಅವನು ಆ ಋಣವನ್ನು ತೀರಿಸಬೇಕಾದದ್ದು ಆತನ ಕರ್ತವ್ಯವಾಗಿದೆ. ಋಣ ತೀರಿಸಲು ಸೇವೆ ಒಂದು ಸುಂದರ ಸಾಧನವಾಗಿದೆ. ಪ್ರತಿಯೊಬ್ಬರೂ ಸೇವಾ ಮನೋಭಾವನೆಯನ್ನು ಬೆಳಸಿಕೊಂಡು ಯಾವುದೇ ರೂಪದ ಸಾಮಾಜಿಕ ಸೇವೆಯಲ್ಲಿ ತೊಡಗಬೇಕು.ಅಂದಾಗಲೇ ಜೀವನ ಸಾರ್ಥಕವಾಗುತ್ತದೆ. ಇಂಥ ಸೇವೆಯ ಬದುಕು ಸಾವಿನ ನಂತರವೂ ಉಳಿಯುತ್ತದೆ ಎಂದು ಎಚ್ ಆರ್ ಸರೋಜಮ್ಮ ಕಾಲೇಜಿನ ಪ್ರಾಚಾರ್ಯ ಡಾ. ರವಿ ಚೌಹಾಣ್ ಅಭಿಪ್ರಾಯ ಪಟ್ಟರು.

ಅವರು ಶನಿವಾರ ಗಂಗಾವತಿಯ ಶ್ರೀ ಕೊಟ್ಟೂರೇಶ್ವರ ವಿದ್ಯಾವರ್ಧಕ ಸಂಘದ ಕಲ್ಮಠ ಶ್ರೀ ಚನ್ನಬಸವಸ್ವಾಮಿ ಮಹಿಳಾ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕಗಳ 2025–26 ನೇ ಸಾಲಿನ ವಿಶೇಷ ವಾರ್ಷಿಕ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ನಂತರ ಸೇವಾ ಮನೋಭಾವನೆಯನ್ನು ವಿದ್ಯಾರ್ಥಿದಿಶೆಯಲ್ಲಿ ಅಳವಡಿಸಿಕೊಳ್ಳಲು ಎನ್‌ಎಸ್‌ಎಸ್ ಒಂದು ಉತ್ತಮ ಯೋಜನೆಯಾಗಿದೆ. ಇದರ ಲಾಭವನ್ನು ವಿದ್ಯಾರ್ಥಿನಿಯರು ಪಡೆಯಬೇಕೆಂದು ಕರೆನೀಡಿದರು. ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಚಾರ್ಯ ಡಾ. ಶರಣಬಸಪ್ಪ ಕೋಲ್ಕಾರ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಕಾಲೇಜಿನಲ್ಲಿ ಎನ್‌ಎಸ್‌ಎಸ್ ಘಟಕಗಳ ಮೂಲಕ ವಿದ್ಯಾರ್ಥಿನಿಯರಿಗೆ ಸೇವೆಯ ಬಗ್ಗೆ ತಿಳಿಸಿಕೊಡಲಾಗುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮ ಅಧಿಕಾರಿ ಡಾ. ವಾಣಿಶ್ರೀ ಪಾಟೀಲ್ ಶಿಬಿರದ ವರದಿ ವಾಚಿಸಿದರು.

ಶಿಬಿರಾರ್ಥಿಗಳು ತಮ್ಮ ಅನುಭವ ಹಂಚಿಕೊಂಡರು, ಉತ್ತಮ ಸ್ವಯಂ ಸೇವಕಿಯರಿಗೆ ಬಹುಮಾನ ವಿತರಿಸಲಾಯಿತು.ಉಪಪ್ರಾಚಾರ್ಯ ಡಾ. ಕೆ.ಎಂ .ಬಸವರಾಜ್ ಸ್ವಾಗತಿಸಿದರು. ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿಗಳಾದ ಡಾ. ಸುರೇಶಗೌಡ, ಡಾ. ಬಸಮ್ಮ ಶಿಗ್ಗಾವಿ, ಉಪನ್ಯಾಸಕರಾದ ಪ್ರೊ. ಜಿ. ಬಸವರಾಜ್, ಡಾ. ಶಾರದಾ ಪಾಟೀಲ್, ಡಾ. ಜರೀನಾ, ಶಿವಮ್ಮ, ಶಾಂತಮ್ಮ, ವಿಜಯಲಕ್ಷ್ಮಿ, ರಷ್ಮೀ, ಹನುಮಂತ, ಮೆಹಕ್ ಸಾನಿಯಾ, ಶಂಕರನಾಗ್, ಸತೀಶ್, ನಿಮಿಷಾ ಮುಂತಾದವರು ಉಪಸ್ಥಿತರಿದ್ದರು

# ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಸಗೊಬ್ಬರ, ಕೀಟನಾಶಕ, ಬೀಜ ಅಂಗಡಿ ಬಂದ್



**ಬೀದರ್, ಮೇ. 2:** ಡಿಎಪಿ, ಯುರಿಯಾ ಸೇರಿದಂತೆ ಇತರ ಉತ್ಪನ್ನಗಳನ್ನು ಒತ್ತಾಯ ಪೂರ್ವಕವಾಗಿ ಜೋಡಣೆ ಮಾಡುವುದನ್ನು ನಿಲ್ಲಿಸಬೇಕು ಎನ್ನುವುದೂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಸಗೊಬ್ಬರ, ಕೀಟನಾಶಕ ಹಾಗೂ ಬೀಜ ಮಾರಾಟಗಾರರು ಜಿಲ್ಲೆಯಲ್ಲಿ ತಮ್ಮ ಅಂಗಡಿಗಳನ್ನು ಬಂದ್ ಮಾಡಿ ಪ್ರತಿಭಟನೆ ನಡೆಸಿದರು.

ಬೀದರ್ ಸೇರಿದಂತೆ ಜಿಲ್ಲೆಯ ಎಲ್ಲೆಡೆ ಬೆಳಿಗ್ಗೆಯಿಂದಲೇ ಅಂಗಡಿಗಳು ಮುಚ್ಚಿದ್ದವು. ಹೀಗಾಗಿ ರೈತರು ರಸಗೊಬ್ಬರ, ಬೀಜ ಹಾಗೂ ಕೀಟನಾಶಕಕ್ಕಾಗಿ ಪರದಾಡುವಂತಾಯಿತು.

ನಗರದಲ್ಲಿ ಜಿಲ್ಲಾ ಆಗ್ರೋ ಇನ್‌ಪುಟ್ ಡೀಲರ್ಸ್ ಅಸೋಸಿಯೇಷನ್ ಪದಾಧಿಕಾರಿಗಳು ನಿಯೋಗದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹಾಗೂ ಜಂಟಿ ಕೃಷಿ ನಿರ್ದೇಶಕಿ ದೇವಿಕಾ ಅವರನ್ನು ಭೇಟಿಮಾಡಿ ವಿವಿಧ ಬೇಡಿಕೆಗಳ ಮನವಿ ಪತ್ರ ಸಲ್ಲಿಸಿದರು.

ರಾಷ್ಟ್ರಮಟ್ಟದ ಕೃಷಿ ಪರಿಕರಗಳ ಮಾರಾಟಗಾರರ ಸಂಘದ ಕರೆಗೆ ಜಿಲ್ಲೆಯಲ್ಲಿ ಸಂಪೂರ್ಣ ಸ್ಪಂದನೆ ದೊರೆತಿದೆ. ಎಲ್ಲ ವ್ಯಾಪಾರಿಗಳು ಅಂಗಡಿಗಳನ್ನು ಬಂದ್ ಮಾಡಿ ಬೆಂಬಲ ನೀಡಿದ್ದಾರೆ ಎಂದು ನಿಯೋಗದ ನೇತೃತ್ವ ವಹಿಸಿದ್ದ ಜಿಲ್ಲಾ ಆಗ್ರೋ ಇನ್‌ಪುಟ್ ಡೀಲರ್ಸ್ ಅಸೋಸಿಯೇಷನ್ ಅಧ್ಯಕ್ಷ ಮಡಿವಾಳಪ್ಪ ಗಂಗಶೆಟ್ಟಿ ತಿಳಿಸಿದರು.

ಯಾವುದೇ ಕಾರಣಕ್ಕೂ ಡಿಎಪಿ, ಯುರಿಯಾ ಜತೆ ಇತರ ಉತ್ಪನ್ನಗಳನ್ನು ಜೋಡಿಸಬಾರದು. ರಸಗೊಬ್ಬರಗಳ ನಿಗದಿತ ದರದ ಮೇಲೆ ವಿತರಕರಿಗೆ ಶೇ 8 ರಷ್ಟು ಲಾಭಾಂಶ ನೀಡಬೇಕು. ಎಲ್ಲ ರಸಗೊಬ್ಬರಗಳನ್ನು ಎಫ್.ಎ.ಎಲ್. ಮೂಲಕ ಸರಬರಾಜು ಮಾಡಬೇಕು. ರಸಗೊಬ್ಬರ, ಬೀಜ, ಕೀಟನಾಶಕ ಮಾರಾಟಕ್ಕೆ ಸಂಬಂಧಿಸಿದ ನಿಯಮಗಳನ್ನು ಸರಳೀಕರಿಸಬೇಕು. ಗೊಬ್ಬರ, ಬಿತ್ತನೆಬೀಜ, ಕೀಟನಾಶಕಗಳ ಮಾದರಿ ಕಳಪೆಯಾದಾಗ ಕಂಪನಿಯರ ಮೇಲೆ ಮಾತ್ರ ಪ್ರಕರಣ ದಾಖಲಿಸಿ, ಡೀಲರ್ಸ್‌ಗಳನ್ನು ಸಾಕ್ಷಿಯಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ಪ್ರಮುಖರಾದ ಕಂಟೆಪ್ಪ ಪಾಟೀಲ, ಮಿಲನ್ ಘೋರ್ಪಡೆ, ಸುನೀಲ್ ಪಾಟೀಲ, ಮಲ್ಲಿಕಾರ್ಜುನ ಪಾಟೀಲ, ವಿದ್ಯಾನಂದ ಸ್ವಾಮಿ, ಜಗನ್ನಾಥ ಕೋಟೆ, ಸೂರ್ಯಕಾಂತ, ಸಂಗಪ್ಪ, ಸಿದ್ಧಲಿಂಗಸ್ವಾಮಿ, ಸಿದ್ದು ಸ್ವಾಮಿ, ಬಾಬುರಾವ್ ಬಿರಾದಾರ ಮತ್ತಿತರರು ಇದ್ದರು.

# ಅಂಕೋಲಾದಲ್ಲಿ ವಿಶ್ವ ಕಾರ್ಮಿಕ ದಿನಾಚರಣೆ




ಅಂಕೋಲಾ : ಮೇ 1 ವಿಶ್ವ ಕಾರ್ಮಿಕ ದಿನಾಚರಣೆ ನಿಮಿತ್ತ ಅಂಕೋಲಾ ಸಿಐಟಿಯು ನೇತ್ರತ್ವದಲ್ಲಿ ಸಭೆ ನಡೆಸಲಾಯಿತು. ಕಾರ್ಮಿಕರ ಮುಖ್ಯ ಬೇಡಿಕೆಗಳಾದ ಸಾಮ್ರಾಜ್ಯಶಾಹಿ ಯುದ್ಧಕೋರ ನೀತಿ ವಿರೋಧಿಸಿ, 8 ಗಂಟೆ ಕೆಲಸ, ಕಾಯಂ ಉದ್ಯೋಗ, ಮಾಸಿಕ ಸರಾಸರಿ 36 ಸಾವಿರ ಕನಿಷ್ಠ ವೇತನ ನಿಗದಿಗಾಗಿ, ಕಾರ್ಮಿಕರ ವಿರೋಧಿ ನಾಲ್ಕು ಸಂಹಿತೆಗಳ ರದ್ದುಪಡಿಸಿ, ಕಾರ್ಮಿಕರ ಹಕ್ಕುಗಳ ಉಳಿವಿಗಾಗಿ, ಸ್ಕೀಮ್ ಮತ್ತು ಅಸಂಘಟಿತ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳ ಜಾರಿಗಾಗಿ ಒತ್ತಾಯಿಸಲಾಯಿತು.

ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಶಾಂತಾರಾಮ ನಾಯಕ, ಸಿಐಟಿಯು ತಾಲೂಕು ಸಂಚಾಲಕ ಎಚ್.ಬಿ. ನಾಯಕ ಕಾರ್ಮಿಕ ದಿನದ ಮಹತ್ವ ವಿವರಿಸಿದರು. ಗೀತಾ ಗೌಡ ಸ್ವಾಗತಿಸಿದರು. ಗೌರೀಶ ನಾಯಕ, ಸಂತೋಷ್ ನಾಯ್ಕ, ಉಷಾ ಪಡ್ತಿ, ಪವಿತ್ರ ಆಗೇರ ಮುಂತಾದವರು ಹಾಜರಿದ್ದರು.

# ಇರಾನ್ ಅಣ್ವಸ್ತ್ರ ಹೊಂದಲು ಅಮೆರಿಕ ಬಿಡುವುದಿಲ್ಲ: ಟೆಹ್ರಾನ್ ಪ್ರಸ್ತಾವಕ್ಕೆ ಟ್ರಂಪ್ ತಿರಸ್ಕಾರ

**ಫ್ಲೋರಿಡಾ, ಮೇ 2:** ಮಧ್ಯಪ್ರಾಚ್ಯ, ಇಸ್ರೇಲ್ ಮತ್ತು ಯುರೋಪ್ಗೆ ಗಂಭೀರ ಭದ್ರತಾ ಅಪಾಯಗಳನ್ನು ಉಲ್ಲೇಖಿಸಿ, ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಪಡೆಯಲು ಅನುಮತಿಸಬಾರದು ಎಂಬ ಕಠಿಣ ನಿಲುವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪುನರುಚ್ಚರಿಸಿದರು. ಆದರೆ ಇರಾನ್ನ ಇತ್ತೀಚಿನ ಪ್ರಸ್ತಾಪವನ್ನು "ಸ್ವೀಕಾರಾರ್ಹವಲ್ಲ" ಎಂದು ತಿರಸ್ಕರಿಸಿದರು ಮತ್ತು ನವೀಕರಿಸಿದ ಮಿಲಿಟರಿ ದಾಳಿಗಳು ಸೇರಿದಂತೆ ಎಲ್ಲಾ ಆಯ್ಕೆಗಳು ಪರಿಗಣನೆಯಲ್ಲಿವೆ ಎಂದು ಎಚ್ಚರಿಸಿದರು. ಇರಾನ್ನಲ್ಲಿನ ಯಾವುದೇ ಪರಮಾಣು ಸಾಮರ್ಥ್ಯವು ತಕ್ಷಣದ ಮತ್ತು ದೂರಗಾಮಿ ಜಾಗತಿಕ ಬೆದರಿಕೆಯನ್ನುಂಟುಮಾಡುತ್ತದೆ ಮತ್ತು ಈಗಾಗಲೇ ಅಸ್ಥಿರ ಪ್ರದೇಶವನ್ನು ಅಸ್ಥಿರಗೊಳಿಸುತ್ತದೆ ಎಂದು ವಾದಿಸಿ ಟ್ರಂಪ್ ಟೆಹ್ರಾನ್ನ ಪರಮಾಣು ಮಹತ್ವಾಕಾಂಕ್ಷೆಗಳ ಕುರಿತು ಎಚ್ಚರಿಕೆ ನೀಡಿದರು. "ನೀವು ಇರಾನ್ಗೆ ಪರಮಾಣು ಶಸ್ತ್ರಾಸ್ತ್ರವನ್ನು ನೀಡಲು ಸಾಧ್ಯವಿಲ್ಲ. ಅವರು ಅದನ್ನು ಇಸ್ರೇಲ್ ಎಂಬ ಸ್ಥಳದ ಮೇಲೆ ಬೇಗನೆ ಬಳಸುತ್ತಾರೆ, ಮತ್ತು ನಂತರ ಮಧ್ಯಪ್ರಾಚ್ಯ ಮತ್ತು ಯುರೋಪ್ನಲ್ಲಿ ಬಳಸುತ್ತಾರೆ. ನಾವು ಮುಂದಿನವರಾಗುತ್ತೇವೆ ಎಂದು ನಾನು ಭಾವಿಸುತ್ತೇನೆ" ಎಂದು ಟ್ರಂಪ್ ದಿ ಫೋರಮ್ ಕ್ಲಬ್ ಆಫ್ ದಿ ಪಾಮ್ ಬೀಚ್ಸ್ ಡಿನ್ನರ್ನಲ್ಲಿ ಹೇಳಿದರು. ಃ–2 ಸ್ಪಿರಿಟ್ ಬಾಂಬರ್ಗಳನ್ನು ಒಳಗೊಂಡ "ಆಪರೇಷನ್ ಮಿಡ್ನೈಟ್ ಹ್ಯಾಮರ್" ಸೇರಿದಂತೆ ಹಿಂದಿನ ಮಿಲಿಟರಿ ಕಾರ್ಯಾಚರಣೆಗಳನ್ನು ಉಲ್ಲೇಖಿಸಿ, ಗಖ ಕ್ರಮಗಳು ಈಗಾಗಲೇ ಇರಾನ್ನ ಮಿಲಿಟರಿ ಸಾಮರ್ಥ್ಯಗಳನ್ನು ಗಮನಾರ್ಹವಾಗಿ ದುರ್ಬಲಗೊಳಿಸಿವೆ ಎಂದು ಅವರು ಮತ್ತಷ್ಟು ಹೇಳಿಕೊಂಡರು."

"ನಾವು ಅವರನ್ನು ಃ2 ಬಾಂಬರ್ಗಳೊಂದಿಗೆ ನಿಲ್ಲಿಸಿದ್ದೇವೆ. ನಾವು ಹಾಗೆ ಮಾಡದಿದ್ದರೆ, ಅವರ ಬಳಿ ಪರಮಾಣು ಶಸ್ತ್ರಾಸ್ತ್ರ ಇರುತ್ತಿತ್ತು. ಇಸ್ರೇಲ್, ಮಧ್ಯಪ್ರಾಚ್ಯ ಮತ್ತು ಯುರೋಪ್ ತುಂಡು ತುಂಡಾಗುತ್ತಿತ್ತು." ಇರಾನ್ನ ಪ್ರಸ್ತುತ ಮಿಲಿಟರಿ ಬಲವನ್ನು ತೀವ್ರವಾಗಿ ಕುಸಿದಿದೆ ಎಂದು ಟ್ರಂಪ್ ವಿವರಿಸಿದರು, "ನಾವು ಅವರ ವಾಯುಪಡೆಗಳನ್ನು ವಶಪಡಿಸಿಕೊಂಡಿದ್ದೇವೆ. ಅದು ಅಸ್ತಿತ್ವದಲ್ಲಿಲ್ಲ. ಅದು ಹೋಗಿದೆ. ನಾವು ಅವರ ನೌಕಾಪಡೆಯನ್ನು ವಶಪಡಿಸಿಕೊಂಡಿದ್ದೇವೆ. ಅವರಿಗೆ ಬಹಳ ಬಲವಾದ ನೌಕಾಪಡೆ ಇತ್ತು. ಅವರು ಮಧ್ಯಪ್ರಾಚ್ಯದಲ್ಲಿ ಇದುವರೆಗೆ ಅತ್ಯಂತ ಬಲಿಷ್ಠ ನೌಕಾಪಡೆಯನ್ನು ಹೊಂದಿದ್ದರು, ಹಲವು ಬಾರಿ. ಅವರ ಬಳಿ 159 ಹಡಗುಗಳಿವೆ. ಪ್ರತಿಯೊಂದು ಹಡಗು ಈಗ ಸಮುದ್ರದ ತಳದಲ್ಲಿದೆ. ಅವರಿಗೆ ಯಾವುದೇ ವಿಮಾನ ವಿರೋಧಿ ಸಾಮರ್ಥ್ಯವಿಲ್ಲ. "ಅವರಿಗೆ ಯಾವುದೇ ರಾಡಾರ್ ಇಲ್ಲ." ಅವರು ಇರಾನ್ನ ಮಿಲಿಟರಿ ನಾಯಕತ್ವದಲ್ಲಿ ಗಮನಾರ್ಹ ನಷ್ಟಗಳನ್ನುಂಟುಮಾಡಿದೆ ಎಂದು ಆರೋಪಿಸಿದರು, ದೇಶದ ರಕ್ಷಣಾ ರಚನೆಯನ್ನು "ನಾಶಪಡಿಸಲಾಗಿದೆ" ಎಂದು ಕರೆದರು. ರಾಜತಾಂತ್ರಿಕ ಪ್ರಯತ್ನಗಳ ಕುರಿತು, ನಡೆಯುತ್ತಿರುವ ಮಾತುಕತೆಗಳ ಬಗ್ಗೆ ಟ್ರಂಪ್ ಸಂದೇಹ ವ್ಯಕ್ತಪಡಿಸಿದರು, ಇರಾನ್ ಸ್ವೀಕಾರಾರ್ಹ ಒಪ್ಪಂದವನ್ನು ನೀಡುತ್ತಿಲ್ಲ ಎಂದು ಹೇಳಿದರು. ಭವಿಷ್ಯದ ಸಂಘರ್ಷ ಅಥವಾ ನವೀಕರಿಸಿದ ಪರಮಾಣು ಅಪಾಯವನ್ನು ಅನುಮತಿಸುವ ಯಾವುದೇ ವ್ಯವಸ್ಥೆಗೆ ಯುನೈಟೆಡ್ ಸ್ಟೇಟ್ಸ್ ಒಪ್ಪುವುದಿಲ್ಲ ಎಂದು ಅವರು ಒತ್ತಿ ಹೇಳಿದರು. "ನಾವು ಹೊಂದಿರಬೇಕಾದ ರೀತಿಯ ಒಪ್ಪಂದದೊಂದಿಗೆ ಅವರು ಬರುತ್ತಿಲ್ಲ" ಎಂದು ಅವರು ಹೇಳಿದರು. "ನಾವು ಈ ಕೆಲಸವನ್ನು ಸರಿಯಾಗಿ ಮಾಡಲಿದ್ದೇವೆ." ಟ್ರಂಪ್ ಪರಿಸ್ಥಿತಿಯನ್ನು ಜಾಗತಿಕ ಆರ್ಥಿಕ ಸ್ಥಿರತೆಗೆ, ವಿಶೇಷವಾಗಿ ಇಂಧನ ಮಾರುಕಟ್ಟೆಗಳಿಗೆ ಲಿಂಕ್ ಮಾಡಿದರು, ಉದ್ವಿಗ್ನತೆಗಳು ಬಗೆಹರಿದ ನಂತರ ತೈಲ ಮತ್ತು ಇಂಧನ ಬೆಲೆಗಳು ಕಡಿಮೆಯಾಗುತ್ತವೆ ಎಂದು ವಾದಿಸಿದರು. ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಪಡೆಯುವುದನ್ನು ತಡೆಯುವುದು ಅಂತರರಾಷ್ಟ್ರೀಯ ಭದ್ರತೆ ಮತ್ತು ದೀರ್ಘಕಾಲೀನ ಪ್ರಾದೇಶಿಕ ಸ್ಥಿರತೆಗೆ ಅತ್ಯಗತ್ಯ ಎಂದು ಅವರು ಸಮರ್ಥಿಸಿಕೊಂಡರು. ಇರಾನ್ನೊಂದಿಗಿನ ಇತ್ತೀಚಿನ ಸಂವಹನಗಳು ಅರ್ಥಪೂರ್ಣ ಪ್ರಗತಿಯನ್ನು ಸಾಧಿಸುವಲ್ಲಿ ವಿಫಲವಾಗಿವೆ ಎಂದು ಟ್ರಂಪ್ ಹೇಳಿದರು. "ನಾವು ಇರಾನ್ನೊಂದಿಗೆ ಸಂಭಾಷಣೆ ನಡೆಸಿದ್ದೇವೆ, ಏನಾಗುತ್ತದೆ ಎಂದು ನೋಡೋಣ." "ಆದರೆ ನಾನು ಸಂತೋಷವಾಗಿಲ್ಲ ಎಂದು ನಾನು ಹೇಳುತ್ತೇನೆ," ಎಂದು ಅವರು ಹೇಳಿದರು. "ಅವರು ನಾನು ಒಪ್ಪಲು ಸಾಧ್ಯವಾಗದ ವಿಷಯಗಳನ್ನು ಕೇಳುತ್ತಿದ್ದಾರೆ." ಇರಾನ್ ತನ್ನ ನವೀಕರಿಸಿದ ಪ್ರಸ್ತಾವನೆಯನ್ನು ಮಧ್ಯವರ್ತಿಗಳ ಮೂಲಕ ಸಲ್ಲಿಸಿದೆ ಎಂದು ವರದಿಯಾಗಿದೆ, ಆದರೆ ಪ್ರಮುಖ ವಿವರಗಳು ಸ್ಪಷ್ಟವಾಗಿಲ್ಲ. ಇರಾನ್ನ ಪರಮಾಣು ಮಹತ್ವಾಕಾಂಕ್ಷೆಗಳು ಮತ್ತು ಕಾರ್ಯತಂತ್ರದ ಜಲಮಾರ್ಗಗಳಲ್ಲಿ ಸಮುದ್ರ



ಪ್ರವೇಶ ಸೇರಿದಂತೆ ಪ್ರಾದೇಶಿಕ ಸಮಸ್ಯೆಗಳಿಗೆ ಸಂಬಂಧಿಸಿದ ಬೇಡಿಕೆಗಳ ಕುರಿತಾದ ವಿವಾದಗಳಿಂದ ಮಾತುಕತೆಗಳು ಜಟಿಲವಾಗಿವೆ. ರಾಜತಾಂತ್ರಿಕತೆ ವಿಫಲವಾದರೆ ಇರಾನ್ ಪರಮಾಣು ಶಸ್ತ್ರಾಸ್ತ್ರಗಳ ಯಾವುದೇ ಅನ್ವೇಷಣೆಯನ್ನು ತ್ಯಜಿಸಬೇಕು ಎಂದು ಟ್ರಂಪ್ ಪುನರುಚ್ಚರಿಸಿದರು, ಆದರೆ ಮಿಲಿಟರಿ ಆಯ್ಕೆಗಳು ಮೇಜಿನ ಮೇಲೆ ದೃಢವಾಗಿ ಉಳಿಯುತ್ತವೆ ಎಂದು ಸೂಚಿಸಿದರು.

## ಯುರೋಪಿಯನ್ ಮಿತ್ರರಾಷ್ಟ್ರಗಳೊಂದಿಗೆ ಬಿರುಕು ಹೆಚ್ಚಾಗುತ್ತಿದ್ದಂತೆ ಜರ್ಮನಿಯಿಂದ ಸೈನ್ಯ ಹಿಂತೆಗೆದುಕೊಳ್ಳಲು ಅಮೆರಿಕ ಆದೇಶ

**ವಾಷಿಂಗ್ಟನ್, ಮೇ 2:** ಇರಾನ್ ಯುದ್ಧದಲ್ಲಿ ವಾಷಿಂಗ್ಟನ್ನ ನಡವಳಿಕೆಯ ಬಗ್ಗೆ ಜರ್ಮನ್ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್ ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಸಾರ್ವಜನಿಕವಾಗಿ ಟೀಕಿಸಿದ ನಂತರ, ಜರ್ಮನಿಯಿಂದ ಅಮೇರಿಕನ್ ಸೈನ್ಯವನ್ನು ಹಿಂತೆಗೆದುಕೊಳ್ಳಲು ಪ್ರಾರಂಭಿಸಲು ಶ್ವೇತಭವನವು ಪ್ರತೀಕಾರದ ನಿರ್ಧಾರವನ್ನು ತೆಗೆದುಕೊಂಡ ನಂತರ ಅಟ್ಲಾಂಟಿಕ್ ಸಾಗರದ ಸಂಬಂಧಗಳಲ್ಲಿ ತೀವ್ರ ಕ್ಷೀಣತೆ ಕಂಡುಬಂದಿದೆ.

ಪೆಂಟಗನ್ ದೃಢಪಡಿಸಿದ ಈ ಕ್ರಮವು, ಭೌಗೋಳಿಕ ರಾಜಕೀಯ ಉದ್ವಿಗ್ನತೆಯ ಸಮಯದಲ್ಲಿ ಯುರೋಪಿನಲ್ಲಿ ಯುನೈಟೆಡ್ ಸ್ಟೇಟ್ಸ್ನ ಮಿಲಿಟರಿ ನಿಲುವಿನಲ್ಲಿ ಸಂಭಾವ್ಯವಾಗಿ ಗಮನಾರ್ಹ ಬದಲಾವಣೆಯನ್ನು ಸೂಚಿಸುತ್ತದೆ. ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಜರ್ಮನಿಯಲ್ಲಿ ಬೀಡುಬಿಟ್ಟಿರುವ ಯುಎಸ್ ಪಡೆಗಳನ್ನು ಹಂತಹಂತವಾಗಿ ಹಿಂತೆಗೆದುಕೊಳ್ಳಲು ಆದೇಶಿಸಿದ್ದಾರೆ, ಈ ಪ್ರಕ್ರಿಯೆಯು ಆರರಿಂದ ಹನ್ನೆರಡು ತಿಂಗಳೊಳಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ. "ಈ ನಿರ್ಧಾರವು ಯುರೋಪಿನಲ್ಲಿ ಇಲಾಖೆಯ ಪಡೆಗಳ ನಿಲುವಿನ ಸಂಪೂರ್ಣ ಪರಿಶೀಲನೆಯನ್ನು ಅನುಸರಿಸುತ್ತದೆ ಮತ್ತು ರಂಗಭೂಮಿಯ ಅವಶ್ಯಕತೆಗಳು ಮತ್ತು ನೆಲದ ಮೇಲಿನ ಪರಿಸ್ಥಿತಿಗಳನ್ನು ಗುರುತಿಸುತ್ತದೆ" ಎಂದು ಪೆಂಟಗನ್ ವಕ್ತಾರ ಶಾನ್ ಪಾರ್ನೆಲ್ ಹೇಳಿದರು, ಹಿಂತೆಗೆದುಕೊಳ್ಳುವಿಕೆಯು ವಿಕಸನಗೊಳ್ಳುತ್ತಿರುವ ಕಾರ್ಯಾಚರಣೆಯ ಆದ್ಯತೆಗಳೊಂದಿಗೆ ಹೊಂದಿಕೆಯಾಗುತ್ತದೆ ಎಂದು ಒತ್ತಿ ಹೇಳಿದರು.

ಈ ವಾರದ ಆರಂಭದಲ್ಲಿ ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಸಂಘರ್ಷದ ಸಂದರ್ಭದಲ್ಲಿ ಅಮೆರಿಕವು ಇರಾನ್ನಿಂದ "ಅವಮಾನಕ್ಕೊಳಗಾಗಿದೆ" ಎಂದು ಮೆರ್ಜ್ ಆರೋಪಿಸಿದ ಅಸಾಮಾನ್ಯವಾಗಿ ನೇರ ಹೇಳಿಕೆಗಳ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಅವರ ಹೇಳಿಕೆಗಳು ವಾಷಿಂಗ್ಟನ್ನಲ್ಲಿ ನರವನ್ನು ಹೊಡೆದಂತೆ ಕಂಡುಬರುತ್ತವೆ, ಅಲ್ಲಿ ಟ್ರಂಪ್ ಪದೇ ಪದೇ ಅಮೆರಿಕದ ಮಿಲಿಟರಿ ಕ್ರಮಗಳಿಗೆ ಯುರೋಪಿಯನ್ ಬೆಂಬಲದ ಕೊರತೆಯ ಬಗ್ಗೆ




ಹತಾಶೆಯನ್ನು ವ್ಯಕ್ತಪಡಿಸಿದ್ದಾರೆ. ಈ ಸಂಚಿಕೆಯು ಇರಾನ್ ಯುದ್ಧದ ಬಗ್ಗೆ ಅಮೆರಿಕ ಮತ್ತು ಪ್ರಮುಖ ಯುರೋಪಿಯನ್ ಮಿತ್ರರಾಷ್ಟ್ರಗಳ ನಡುವೆ ವಿಸ್ತರಿಸುತ್ತಿರುವ ನೀತಿ ಅಂತರವನ್ನು ಎತ್ತಿ ತೋರಿಸುತ್ತದೆ, ವಿಭಿನ್ನ ಬೆದರಿಕೆ ಗ್ರಹಿಕೆಗಳು ಮತ್ತು ಕಾರ್ಯತಂತ್ರದ ಆದ್ಯತೆಗಳ ಮೇಲೆ ನಿರ್ಮಿಸುತ್ತಿರುವ ಪಾಶ್ಚಿಮಾತ್ಯ ಮೈತ್ರಿಕೂಟದೊಳಗಿನ ಬಿರುಕುಗಳನ್ನು ಬಹಿರಂಗಪಡಿಸುತ್ತದೆ. ಜರ್ಮನಿಯು ಯುರೋಪ್ನಲ್ಲಿ ಯುಎಸ್ ಪಡೆಗಳ ಅತಿದೊಡ್ಡ ತುಕಡಿಯನ್ನು ಆಯೋಜಿಸುತ್ತದೆ, ಸುಮಾರು 35,000 ಸಕ್ರಿಯ–ಕರ್ತವ್ಯ ಸಿಬ್ಬಂದಿಯನ್ನು ಪ್ರಮುಖ ನೆಲೆಗಳಲ್ಲಿ ಇರಿಸಲಾಗಿದೆ.

ಈ ಸ್ಥಾಪನೆಗಳು ಲಾಜಿಸ್ಟಿಕ್ಸ್, ತರಬೇತಿ ಮತ್ತು ಕ್ಷಿಪ್ರ ನಿಯೋಜನೆಗೆ ನಿರ್ಣಾಯಕ ಕೇಂದ್ರಗಳಾಗಿ ಕಾರ್ಯನಿರ್ವಹಿಸುತ್ತವೆ, ಇದು ದೇಶವನ್ನು ಓಂಖಿಔ ಕಾರ್ಯಾಚರಣೆಯ ಚೌಕಟ್ಟಿನ ಕೇಂದ್ರವನ್ನಾಗಿ ಮಾಡುತ್ತದೆ. ಈ ಪ್ರಮಾಣದಲ್ಲಿ ಹಿಂತೆಗೆದುಕೊಳ್ಳುವಿಕೆಯು ದೂರಗಾಮಿ ಪರಿಣಾಮಗಳನ್ನು ಬೀರಬಹುದು – ಯುರೋಪ್ ಮತ್ತು ಮಧ್ಯಪ್ರಾಚ್ಯದಲ್ಲಿ ಗಖ ಪಡೆಗಳ ಪ್ರಕ್ಷೇಪಣಕ್ಕೆ ಮಾತ್ರವಲ್ಲದೆ, ಓಂಖಿಔದ ಒಟ್ಟಾರೆ ತಡೆಗಟ್ಟುವ ಭಂಗಿಗೂ ಸಹ. ಉದ್ವಿಗ್ನತೆಗಳು ಜರ್ಮನಿಗೆ ಸೀಮಿತವಾಗಿಲ್ಲ. ಇಟಲಿ ಮತ್ತು ಸ್ಪೇನ್ ಸೇರಿದಂತೆ ಇತರ ಯುರೋಪಿಯನ್ ದೇಶಗಳಲ್ಲಿ ಅಮೆರಿಕದ ಸೈನಿಕರ ಉಪಸ್ಥಿತಿಯನ್ನು ಕಡಿಮೆ ಮಾಡುವುದಾಗಿ ಟ್ರಂಪ್ ಬೆದರಿಕೆ ಹಾಕಿದ್ದಾರೆ, ಇರಾನ್ ಸಂಘರ್ಷದಲ್ಲಿ ಅಮೆರಿಕದ ಪ್ರಯತ್ನಗಳನ್ನು ಸಮರ್ಪಕವಾಗಿ ಬೆಂಬಲಿಸಲು ಅವರು ವಿಫಲರಾಗಿದ್ದಾರೆ ಎಂದು ಆರೋಪಿಸಿದ್ದಾರೆ. ಕಾರ್ಯತಂತ್ರದ ಮರುಮೌಲ್ಯಮಾಪನದ ಭಾಗವಾಗಿ ಪೆಂಟಗನ್ ಸೈನ್ಯವನ್ನು ಹಿಂತೆಗೆದುಕೊಳ್ಳುವುದನ್ನು ರೂಪಿಸಿದ್ದರೂ, ಅದರ ಸಮಯ ಮತ್ತು ರಾಜಕೀಯ ಸನ್ನಿವೇಶವು ಯುಎಸ್–ಯುರೋಪ್ ಸಂಬಂಧಗಳಲ್ಲಿ ಆಳವಾದ ಬಿರುಕು ಉಂಟಾಗುವುದನ್ನು ಸೂಚಿಸುತ್ತದೆ. ಈ ನಿರ್ಧಾರವು ಟ್ರಾನ್ಸ್ ಅಟ್ಲಾಂಟಿಕ್ ಮೈತ್ರಿಕೂಟದ ಭದ್ರತಾ ವಾಸ್ತುಶಿಲ್ಪವನ್ನು ವ್ಯಾಖ್ಯಾನಿಸುವ ಸಾಮರ್ಥ್ಯವನ್ನು ಹೊಂದಿದೆ, ಹೊರೆ ಹಂಚಿಕೆ, ಕಾರ್ಯತಂತ್ರದ ಸ್ವಾಯತ್ತತೆ ಮತ್ತು ಓಂಖಿಔ ನ ಭವಿಷ್ಯದ ಒಗ್ಗಟ್ಟಿನ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ.

## ಒಪ್ಪಂದಗಳಿಗೆ ಅಮೆರಿಕ ಬದ್ಧವಾಗಿಲ್ಲದ ಕಾರಣ ಯುದ್ಧ ಸಂಭವ: ಇರಾನ್


ಟೆಹ್ರಾನ್, ಮೇ 2: ಇರಾನ್ ಮತ್ತು ಅಮೆರಿಕ ನಡುವಿನ ಯುದ್ಧ ಪುನರಾರಂಭ "ಸಂಭವ" ಎಂದು ಇರಾನ್ನ ಮಿಲಿಟರಿ ಪ್ರಧಾನ ಕಚೇರಿ ಎಚ್ಚರಿಕೆ ನೀಡಿದೆ, ಲಭ್ಯವಿರುವ ಪುರಾವೆಗಳು ಅಮೆರಿಕ ಯಾವುದೇ ಒಪ್ಪಂದಗಳು ಅಥವಾ ಒಪ್ಪಂದಗಳಿಗೆ ಬದ್ಧವಾಗಿಲ್ಲ ಎಂದು ಸೂಚಿಸುತ್ತದೆ ಎಂದು ಹೇಳಿದೆ. ಯುದ್ಧ ಪುನರಾರಂಭವಾದರೆ ಪ್ರತಿಕ್ರಿಯಿಸಲು ಮಿಲಿಟರಿ ಸಿದ್ಧತೆಗಳು ನಡೆಯುತ್ತಿವೆ. ಇರಾನ್ನ ಸಶಸ್ತ್ರ ಪಡೆಗಳು ಅಮೆರಿಕ ಮತ್ತು ಇಸ್ರೇಲ್ನೊಂದಿಗೆ ಹೊಸ ಸಂಘರ್ಷ ಸಾಧ್ಯ ಎಂದು ಎಚ್ಚರಿಸಿವೆ, "ಯಾವುದೇ ಒಪ್ಪಂದಕ್ಕೆ ಅಮೆರಿಕ ಬದ್ಧವಾಗಿಲ್ಲ ಎಂದು ಪುರಾವೆಗಳು ತೋರಿಸುತ್ತವೆ" ಎಂದು ಪುನರುಚ್ಚರಿಸಿದ್ದಾರೆ. ಖತಮ್ ಅಲ್–ಅನ್ಬಿಯಾ ಕೇಂದ್ರ ಪ್ರಧಾನ ಕಚೇರಿಯ ಉಪ ಮುಖ್ಯಸ್ಥ ಮೊಹಮ್ಮದ್ ಜಾಫರ್ ಅಸಾದಿ, ಇರಾನ್ನ ಫಾರ್ಸ್ ನ್ಯೂಸ್ ಏಜೆನ್ಸಿ ನಡೆಸಿದ ಹೇಳಿಕೆಯಲ್ಲಿ ಈ ಹೇಳಿಕೆ ನೀಡಿದ್ದಾರೆ. ಇತ್ತೀಚಿನ ಯುಎಸ್ ಕ್ರಮಗಳು ಮತ್ತು ಹೇಳಿಕೆಗಳು ರಾಜತಾಂತ್ರಿಕ ತಿಳುವಳಿಕೆಗಳಿಗೆ ಬದ್ಧತೆಯ ಕೊರತೆಯನ್ನು ಸೂಚಿಸುತ್ತವೆ ಎಂದು ಅವರು ಹೇಳಿದರು. ವಾಷಿಂಗ್ಟನ್ನ ಕ್ರಮಗಳ ಹೊರತಾಗಿಯೂ ಉದ್ವಿಗ್ನತೆ ಹೆಚ್ಚಾಗಬಹುದು ಎಂದು ಇರಾನ್ನ ಮಿಲಿಟರಿ ಸಂಪೂರ್ಣವಾಗಿ ಸಿದ್ಧವಾಗಿದೆ ಎಂದು ಅಸಾದಿ ಹೇಳಿದರು. ಯಾವುದೇ ಪ್ರತಿಕೂಲ ಕ್ರಮಕ್ಕೆ ಇರಾನ್ ಸಿದ್ಧವಾಗಿದೆ ಎಂದು ಅವರು ಒತ್ತಿ ಹೇಳಿದರು. ಇಸ್ಲಾಮಾಬಾದಿನಲ್ಲಿ ನಡೆದ ಮೊದಲ ಸುತ್ತಿನ ಮಾತುಕತೆಗಳಲ್ಲಿ ಮತ್ತು ನಂತರ ಕದನ ವಿರಾಮ ಚರ್ಚೆಗಳಲ್ಲಿ ಅವರು ಸಾಕಷ್ಟು ನಮ್ಯತೆಯನ್ನು ತೋರಿಸಿದ್ದಾರೆ ಎಂದು ಇರಾನಿನ ಅಧಿಕಾರಿಗಳು ನಂಬುತ್ತಾರೆ. ಆದಾಗ್ಯೂ, ಅಮೆರಿಕ ಪರಸ್ಪರ ವಿಧಾನವನ್ನು ತೋರಿಸಿಲ್ಲ ಎಂದು ಅವರು ವಾದಿಸುತ್ತಾರೆ. ಇರಾನಿನ ಅಧಿಕಾರಿಗಳ ಪ್ರಕಾರ, ಇರಾನ್ ಪ್ರತಿಬಾರಿ ತನ್ನ ನಿಲುವನ್ನು ಮೃದುಗೊಳಿಸಿದಾಗ, ಅಮೆರಿಕ ಹೆಚ್ಚಿದ ಒತ್ತಡ ಮತ್ತು ಹೆಚ್ಚು ಆಕ್ರಮಣಕಾರಿ ಬೇಡಿಕೆಗಳೊಂದಿಗೆ ಪ್ರತಿಕ್ರಿಯಿಸಿದೆ. ಅಧ್ಯಕ್ಷ ಟ್ರಂಪ್ ಅಂತಿಮವಾಗಿ ತಿರಸ್ಕರಿಸಿದ



ಪ್ರಸ್ತಾವನೆಯಲ್ಲಿ ಇರಾನ್ ತನ್ನ ಕೆಲವು ಬೇಡಿಕೆಗಳನ್ನು ಕಡಿಮೆ ಮಾಡಿದೆ ಎಂದು ದೃಢೀಕರಿಸದ ವರದಿಗಳಿವೆ, ಇದರಲ್ಲಿ ದಿಗ್ಬಂಧನವನ್ನು ತೆಗೆದುಹಾಕುವ ನಿಬಂಧನೆಗಳು ಸೇರಿವೆ. ಬದಲಾಗಿ, ಪರಮಾಣು ವಿಷಯದಂತಹ ಇತರ ಪ್ರಮುಖ ವಿಷಯಗಳಿಗೆ ತೆರಳುವ ಮೊದಲು ಹಾರ್ಮುಜ್ ಜಲಸಂಧಿಯ ಸ್ಥಿತಿ ಮತ್ತು ನಿರ್ಬಂಧಗಳ ಪರಿಹಾರವನ್ನು ಮೊದಲು ತಿಳಿಸಬೇಕು ಎಂದು ಇರಾನಿನ ಅಧಿಕಾರಿಗಳು ಹೇಳುತ್ತಾರೆ. ಅಮೆರಿಕದ ಬೇಡಿಕೆಗಳು ನಿಜವಾದ ಮಾತುಕತೆಯ ಗುರಿಯನ್ನು ಹೊಂದಿಲ್ಲ, ಬದಲಿಗೆ ಶರಣಾಗತಿಯ ಬೇಡಿಕೆಗೆ ಸಮನಾಗಿರುತ್ತದೆ ಎಂದು ಇರಾನಿನ ಅಧಿಕಾರಿಗಳು ಸೂಚಿಸುತ್ತಾರೆ, ಇದನ್ನು ಅವರು "ಸ್ವೀಕಾರಾರ್ಹವಲ್ಲ" ಎಂದು ವಿವರಿಸುತ್ತಾರೆ. ಇತ್ತೀಚಿನ ಪ್ರಸ್ತಾವನೆಯು ಇರಾನ್ನ ಪುಷ್ಟೀಕರಿಸಿದ ಯುರೇನಿಯಂ ಅಥವಾ ಶಸ್ತ್ರಾಸ್ತ್ರಗಳ ಕಾರ್ಯಕ್ರಮವನ್ನು ಉಲ್ಲೇಖಿಸಿದೆಯೇ ಎಂಬುದು ಸ್ಪಷ್ಟವಾಗಿಲ್ಲ. ಏತನ್ಮಧ್ಯೆ, ರಷ್ಯಾ ಮತ್ತು ಚೀನಾ ಎರಡೂ ಅದನ್ನು ತೆಗೆದುಕೊಳ್ಳಲು ಮುಂದಾಗಿವೆ ಆದರೆ ಇರಾನ್ ಪುಷ್ಟೀಕರಿಸಿದ ಯುರೇನಿಯಂ ಅನ್ನು ವಾಷಿಂಗ್ಟನ್ಗೆ ವರ್ಗಾಯಿಸಬೇಕೆಂದು ಅಮೆರಿಕ ಒತ್ತಾಯಿಸಿದೆ.

## ತಕ್ಷಣವೇ ಕ್ಯೂಬಾ ಸ್ವಾಧೀನ: ಇರಾನ್ ಕಾರ್ಯಾಚರಣೆಯ ನಂತರ ಕೆರಿಬಿಯನ್ ಕಡೆ ನೌಕಾಪಡೆ ನಿಯೋಜನೆ– ಟ್ರಂಪ್ ಘೋಷಣೆ

**ಫ್ಲೋರಿಡಾ, ಮೇ 2 :** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶುಕ್ರವಾರ "ಕ್ಯೂಬಾವನ್ನು ತಕ್ಷಣ ಸ್ವಾಧೀನಪಡಿಸಿಕೊಳ್ಳುವುದಾಗಿ" ಘೋಷಿಸಿದರು, "ಇರಾನ್ನೊಂದಿಗೆ ಮುಕ್ತಾಯಗೊಂಡ ನಂತರ" ಅಮೆರಿಕವು ಕೆರಿಬಿಯನ್ ರಾಷ್ಟ್ರದ ಕಡೆಗೆ ನೌಕಾ ಪಡೆಗಳನ್ನು ಕಳುಹಿಸಬಹುದು ಎಂದು ಸೂಚಿಸಿದರು. ಕ್ಯೂಬನ್ ಸರ್ಕಾರ ಮತ್ತು ಅದರ ಅಂಗಸಂಸ್ಥೆಗಳ ವಿರುದ್ಧ ನಿರ್ಬಂಧಗಳನ್ನು ವಿಸ್ತರಿಸುವ ಕಾರ್ಯನಿರ್ವಾಹಕ ಆದೇಶಕ್ಕೆ ಸಹಿ ಹಾಕಿದ ನಂತರ ಫ್ಲೋರಿಡಾದಲ್ಲಿ ನಡೆದ ಸಾರ್ವಜನಿಕ ಕಾರ್ಯಕ್ರಮವೊಂದರಲ್ಲಿ ಅವರು ಈ ಹೇಳಿಕೆಗಳನ್ನು ನೀಡಿದರು. "ಕ್ಯೂಬಾ ಎಂಬ ಸ್ಥಳವಿದೆ, ಅದನ್ನು ನಾವು ತಕ್ಷಣವೇ ಸ್ವಾಧೀನಪಡಿಸಿಕೊಳ್ಳುತ್ತೇವೆ. ಕ್ಯೂಬಾ ಒಳಗೊಂಡ ಯಾವುದೇ ಕ್ರಮವು ಇರಾನ್ ಜೊತೆ ನಡೆಯುತ್ತಿರುವ ಅಮೆರಿಕ–ಇಸ್ರೇಲಿ ಸಂಘರ್ಷದ ನಂತರವೂ



ಆಗಬಹುದು ಎಂಬ ಹಿಂದಿನ ಹೇಳಿಕೆಗಳನ್ನು ಅವರು ಪುನರಾವರ್ತಿಸಿದರು. ದ್ವೀಪ ರಾಷ್ಟ್ರದ ಬಳಿ ಅಮೆರಿಕ ನೌಕಾಪಡೆಯು ವಿಮಾನವಾಹಕ ನೌಕೆಯನ್ನು ನಿಯೋಜಿಸಬಹುದು ಎಂದು ಟ್ರಂಪ್ ಸೂಚಿಸಿದರು. ಕ್ಯೂಬಾದ ಮೇಲೆ ಅಮೆರಿಕದ ನಿರ್ಬಂಧಗಳನ್ನು ವಿಸ್ತರಿಸುವ ಕಾರ್ಯನಿರ್ವಾಹಕ ಆದೇಶಕ್ಕೆ ಟ್ರಂಪ್ ಸಹಿ ಹಾಕಿದರು. ಮಾನವ ಹಕ್ಕುಗಳ ಉಲ್ಲಂಘನೆ, ಪ್ರತಿಕೂಲ ಪಾತ್ರಧಾರಿಗಳಿಗೆ ಬೆಂಬಲ, ಭಯೋತ್ಪಾದನೆ ಮತ್ತು ಪ್ರಾದೇಶಿಕ ಅಸ್ಥಿರತೆಗೆ ಕ್ಯೂಬನ್ ಸರ್ಕಾರ ಮತ್ತು ಅದರ ಬೆಂಬಲಿಗರನ್ನು ಹೊಣೆಗಾರರನ್ನಾಗಿ ಮಾಡುವ ಉದ್ದೇಶವನ್ನು ಈ ಕ್ರಮಗಳು ಹೊಂದಿವೆ ಎಂದು ಶ್ವೇತಭವನದ ಫ್ಯಾಕ್ಟ್ ಶೀಟ್ ತಿಳಿಸಿದೆ.

### ಕ್ಯೂಬಾದಿಂದ ಅಮೆರಿಕ ರಾಷ್ಟ್ರೀಯ ಭದ್ರತೆಗೆ ಗಂಭೀರ ಬೆದರಿಕೆ: ಪೆಂಟಗನ್ ಹೇಳಿಕೆ

ಶ್ವೇತಭವನದ ಹೇಳಿಕೆಯೊಂದು, "ಕ್ಯೂಬಾ ಸರ್ಕಾರದ ನೀತಿಗಳು, ಅಭ್ಯಾಸಗಳು ಮತ್ತು ಕ್ರಮಗಳು ಅಮೆರಿಕಕ್ಕೆ ಅಸಾಮಾನ್ಯ ಮತ್ತು ಅಸಾಧಾರಣ ಬೆದರಿಕೆಯನ್ನುಂಟುಮಾಡುತ್ತಲೇ ಇವೆ" ಎಂದು ಹೇಳಿದೆ. ಈ ನೀತಿಗಳು, ಅಭ್ಯಾಸಗಳು ಮತ್ತು ಕ್ರಮಗಳು ಮುಕ್ತ ಮತ್ತು ಪ್ರಜಾಪ್ರಭುತ್ವ ಸಮಾಜಗಳ ನೈತಿಕ ಮತ್ತು ರಾಜಕೀಯ ಮೌಲ್ಯಗಳಿಗೆ ಸಹ ಅಸಹ್ಯಕರವಾಗಿವೆ." ಕ್ಯೂಬನ್ ಸರ್ಕಾರವು ನಿರ್ಬಂಧಗಳನ್ನು ತಿರಸ್ಕರಿಸಿತು, ಅವುಗಳನ್ನು ಕ್ಯೂಬನ್ ಜನರ ಮೇಲೆ ಸಾಮೂಹಿಕ ಶಿಕ್ಷೆಯನ್ನು ವಿಧಿಸುವ ಗುರಿಯನ್ನು ಹೊಂದಿರುವ "ಏಕಪಕ್ಷೀಯ ಬಲವಂತದ ಕ್ರಮಗಳು" ಎಂದು ಕರೆದಿದೆ. ಈ ಕ್ರಮಗಳು ವಿಶ್ವಸಂಸ್ಥೆಯ ಚಾರ್ಟರ್ ಅನ್ನು ಉಲ್ಲಂಘಿಸುತ್ತವೆ ಮತ್ತು ಕ್ಯೂಬಾ ಅಥವಾ ಮೂರನೇ ದೇಶಗಳ ಮೇಲೆ ನಿರ್ಬಂಧಗಳನ್ನು ವಿಧಿಸಲು ಅಮೆರಿಕಕ್ಕೆ ಯಾವುದೇ ಹಕ್ಕಿಲ್ಲ ಎಂದು ಕ್ಯೂಬಾದ ವಿದೇಶಾಂಗ ಸಚಿವ ಬ್ರೂನೋ ರೊಡ್ರಿಗಸ್ ಪ್ರತಿಪಾದಿಸಿದರು. ಈ ವಾರದ ಆರಂಭದಲ್ಲಿ, ಕಾಂಗ್ರೆಸ್ನಿಂದ ಮೊದಲು ಅನುಮೋದನೆ ಪಡೆಯದೆ ಟ್ರಂಪ್ ಕ್ಯೂಬಾ ವಿರುದ್ಧ ಮಿಲಿಟರಿ ಕ್ರಮ ಕೈಗೊಳ್ಳುವುದನ್ನು ತಡೆಯಲು ವಿನ್ಯಾಸಗೊಳಿಸಲಾದ ನಿರ್ಣಯವನ್ನು ಯುಎಸ್ ಸೆನೆಟ್ ನಿರ್ಬಂಧಿಸಿತು.

## ಖಮೇನಿ ಆರೋಗ್ಯವಾಗಿದ್ದಾರೆ: ಇರಾನ್ ಸರ್ಕಾರದ ಸ್ಪಷ್ಟನೆ

**ಟೆಹ್ರಾನ್, ಮೇ 2:** ಇರಾನ್ನ ಸರ್ವೋಚ್ಚ ನಾಯಕ ಮೊಜ್ತಬಾ ಖಮೇನಿ ಅವರ ಆರೋಗ್ಯ ತೀರಾ ಹದಗೆಟ್ಟಿದೆ ಎಂದು ಅಮೆರಿಕ ಆಗಾಗ ಆರೋಪ ಮಾಡುತ್ತಲೇ ಇತ್ತು. ಇದಕ್ಕೆ ಇರಾನ್ ಪ್ರತಿಕ್ರಿಯೆ ನೀಡಿದೆ. ಇರಾನ್ನ ಸುಪ್ರೀಂ ನಾಯಕ ಮೊಜ್ತಬಾ ಖಮೇನಿ ಅವರ ಆಪ್ತ ಅಯತೊಲ್ಲಾ ಮೊಹ್ಸೆನ್ ಕೋಮಿ ಅಮೆರಿಕದ ಹೇಳಿಕೆಗಳನ್ನು ತಳ್ಳಿಹಾಕಿದ್ದಾರೆ. ಸುಪ್ರೀಂ ನಾಯಕ ಪರಿಪೂರ್ಣವಾಗಿ ಆರೋಗ್ಯವಾಗಿದ್ದಾರೆ. ಅವರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಶತ್ರು ದೇಶಗಳು ವದಂತಿಗಳನ್ನು ಹರಡಲು ಇಂತಹ ತಂತ್ರಗಳನ್ನು ಬಳಸುತ್ತದೆ ಎಂದು ಕೋಮಿ ಹೇಳಿದ್ದಾರೆ.

ಮೊಜ್ತಾಬಾ ಖಮೇನಿ ಅಮೆರಿಕದಿಂದ ಬಾಂಬ್ ದಾಳಿಗೊಳಗಾದ ಕಟ್ಟಡದಲ್ಲಿದ್ದರು. ಆದರೆ ಅವರನ್ನು ರಕ್ಷಿಸಲಾಯಿತು ಎಂದು ಕೋಮಿ ದೃಢಪಡಿಸಿದ್ದಾರೆ. ಅವರು ಬಾಂಬ್ ದಾಳಿಗೊಳಗಾದ ಕಟ್ಟಡದಲ್ಲೇ ಇದ್ದರು ಎಂಬುದು ನಿಜ. ಅಲ್ಲಿದ್ದ ಇತರರು ಹುತಾತ್ಮರಾದರು. ಸ್ಫೋಟಕ್ಕೆ ಕೆಲವೇ ನಿಮಿಷಗಳ ಮೊದಲು ದೇವರ ಇಚ್ಛೆಯಿಂದ ಅವರು ಅಂಗಳಕ್ಕೆ ಹೋಗಿದ್ದರು. ದೇವರು ಅವರನ್ನು ರಕ್ಷಿಸಬೇಕೆಂದು ಬಯಸಿದ್ದರು ಎಂದು ಅವರು ಹೇಳಿದ್ದಾರೆ.

ಸದ್ಯಕ್ಕೆ ಅವರು ಪರಿಪೂರ್ಣವಾಗಿ ಆರೋಗ್ಯವಾಗಿದ್ದಾರೆ ಮತ್ತು ಅವರೇ ವ್ಯವಹಾರಗಳನ್ನು ನಿರ್ವಹಿಸುತ್ತಿದ್ದಾರೆ. ಇತ್ತೀಚೆಗೆ, ವಿವಿಧ ಪರಿಸ್ಥಿತಿಗಳಲ್ಲಿ ಯಾವ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂಬುದರ ಕುರಿತು ಅವರು ನಿರ್ದಿಷ್ಟ ಸೂಚನೆಗಳನ್ನು ಸಹ ನೀಡಿದ್ದಾರೆ. ಅವರು ಪರಿಸ್ಥಿತಿಯ ಮೇಲೆ ಸಂಪೂರ್ಣ ನಿಯಂತ್ರಣ ಹೊಂದಿದ್ದಾರೆ ಎಂದು ಕೋಮಿ ಹೇಳಿದ್ದಾರೆ ಎಂದು ಫಾರ್ಸ್ ಸುದ್ದಿಸಂಸ್ಥೆ ವರದಿ ಮಾಡಿದೆ.

## ಉದಯೋನ್ಮುಖ ಕೊಡವ ಹಾಕಿ ಆಟಗಾರರ ಜೊತೆ ಕ್ರೀಡಾ ಸಚಿವರ ಸಂವಾದ

**ಮಡಿಕೇರಿ, ಮೇ 2:** ಜಾಗತಿಕ ಕ್ರೀಡಾ ಶಕ್ತಿ ಕೇಂದ್ರವಾಗುವ ಭಾರತದ ಆಕಾಂಕ್ಷೆಗಳನ್ನು ಈಡೇರಿಸುವಲ್ಲಿ ದೇಶದ ವಿವಿಧ ಭಾಗಗಳ ಪ್ರತಿಭೆಗಳನ್ನು ಪೋಷಿಸುವ ಪಾತ್ರದ ಬಗ್ಗೆ ಒತ್ತು ನೀಡುತ್ತಾ, ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯ ಅವರು ಮಡಿಕೇರಿಯಲ್ಲಿರುವ ಭಾರತೀಯ ಕ್ರೀಡಾ ಪ್ರಾಧಿಕಾರದ ತರಬೇತಿ ಕೇಂದ್ರಕ್ಕೆ ಶನಿವಾರ ಭೇಟಿ ನೀಡಿ, ಒಂದು ತಿಂಗಳ ಕಾಲ ನಡೆದ ಹಾಕಿ ಉತ್ಸವದ ಸಮಾರೋಪದಲ್ಲಿ ಕೊಡವ ಸಮುದಾಯದ ಮಹಿಳಾ ಹಾಕಿ ಆಟಗಾರರೊಂದಿಗೆ ಸಂವಾದ ನಡೆಸಿದರು. ಕ್ರೀಡಾ ಸಚಿವರು ಫೀಲ್ಡ್ ಹಾಕಿಯನ್ನು ಉತ್ತೇಜಿಸುವಲ್ಲಿ ಕೊಡವ ಸಮುದಾಯ ವಹಿಸಿದ ಪಾತ್ರವನ್ನು ಎತ್ತಿ ತೋರಿಸಿದರು. ಕೊಡವರ ತವರು ಜಿಲ್ಲೆಯನ್ನು ಭಾರತೀಯ ಹಾಕಿಯ ತೊಟ್ಟಿಲು ಎಂದು ಪ್ರಶಂಸಿಸಲಾಗುತ್ತದೆ. ಸಮುದಾಯದ 50 ಕ್ಕೂ ಹೆಚ್ಚು ಆಟಗಾರರು ಅಂತರರಾಷ್ಟ್ರೀಯ ಪಂದ್ಯಾವಳಿಗಳಲ್ಲಿ ಭಾರತವನ್ನು ಪ್ರತಿನಿಧಿಸಿದ್ದಾರೆ, ಅದರಲ್ಲಿ ಪಿ ಗೋವಿಂದ, ಸಂಸದ ಗಣೇಶ್, ಎಂಎಂ ಸೋಮಯ್ಯ ಮತ್ತು ಸಿಎಸ್ ಪೂಣಚ್ಚ ಅವರಂತಹ ಏಳು ಆಟಗಾರರು ಬೇಸಿಗೆ ಒಲಿಂಪಿಕ್ಸ್ನಲ್ಲಿಯೂ ಭಾಗವಹಿಸಿದ್ದಾರೆ. ಮಡಿಕೇರಿಯಲ್ಲಿರುವ ಖಂಖ ತರಬೇತಿ ಕೇಂದ್ರ 5.49 ಎಕರೆ ಪ್ರದೇಶದಲ್ಲಿ ಹರಡಿಕೊಂಡಿದ್ದು, ಕೊಡಗು ಜಿಲ್ಲೆಯ ಗಿರಿಧಾಮ ಪ್ರದೇಶದಲ್ಲಿ ಸಮುದ್ರ ಮಟ್ಟದಿಂದ ಸುಮಾರು 1100 ಮೀಟರ್ ಎತ್ತರದಲ್ಲಿದೆ. ಇದು ಉಪಖಂಡದಾದ್ಯಂತ



ಹರಡಿರುವ 22 ರಾಷ್ಟ್ರೀಯ ಶ್ರೇಷ್ಠತಾ ಕೇಂದ್ರಗಳಿಗೆ ಫೀಡರ್ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ. ಈ ಕೇಂದ್ರವು ಕೃತಕ ಹಾಕಿ ಟರ್ಫ್, 60 ಹಾಸಿಗೆಗಳ ಹಾಸ್ಟೆಲ್, ಊಟದ ಹಾಲ್ ಮತ್ತು ಅಡುಗೆಮನೆಯನ್ನು ಹೊಂದಿದೆ.

ಕರ್ನಾಟಕದಾದ್ಯಂತ ಆಯೋಜಿಸಲಾದ ವಿವಿಧ ಹಾಕಿ ಕಾರ್ಯಕ್ರಮಗಳಿಗೆ ಕೊಡವ ಸಮುದಾಯದ ಸುಮಾರು 50 ಹುಡುಗಿಯರು ತರಬೇತಿ ನೀಡುತ್ತಾರೆ. 360 ಡಿಗ್ರಿ ಕ್ರೀಡಾ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಕೇಂದ್ರ ಸರ್ಕಾರವು ಸಾಧ್ಯವಿರುವ ಎಲ್ಲವನ್ನೂ ಮಾಡುತ್ತಿದೆ ಮತ್ತು 2030 ರಲ್ಲಿ ಅಹಮದಾಬಾದ್ನಲ್ಲಿ ಕಾಮನ್ವೆಲ್ತ್ ಕ್ರೀಡಾಕೂಟದಂತಹ ಮೆಗಾ ಕಾರ್ಯಕ್ರಮಗಳನ್ನು ಆಯೋಜಿಸುವುದು ಸರಿಯಾದ ದಿಕ್ಕಿನಲ್ಲಿ ಒಂದು ಹೆಜ್ಜೆಯಾಗಿದೆ ಎಂದು ಡಾ. ಮಾಂಡವಿಯಾ ಹೇಳಿದರು.

> **ನಮ್ಮ ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನದಿಂದ ಸ್ಫೂರ್ತಿ ಪಡೆದು, ಕ್ರೀಡಾ ಸಚಿವಾಲಯವು ದೇಶದ ವಿವಿಧ ಭಾಗಗಳಲ್ಲಿ ಲಭ್ಯವಿರುವ ವಿಶಾಲ ಪ್ರತಿಭಾನ್ವಿತ ಗುಂಪನ್ನು ಪೋಷಿಸಲು ಬದ್ಧವಾಗಿದೆ.**
> **– ಡಾ. ಮನ್ಸುಖ್ ಮಾಂಡವಿಯ**
> **ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ**

## ಐಪಿಎಲ್: ಮುಂಬೈಗೆ ಮತ್ತೆ ಸೋಲು, 8 ವಿಕೆಟ್‌ಗಳಿಂದ ಗೆದ್ದು ಬೀಗಿದ ಸಿಎಸ್‌ಕೆ

### ಪ್ಲೇಆಫ್ ರೇಸ್‌ನಿಂದ ಮುಂಬೈ ಇಂಡಿಯನ್ಸ್ ತಂಡ ಹೊರಕ್ಕೆ

ಚೆನ್ನೈ: ಈ ಬಾರಿಯ ಐಪಿಎಲ್ ನಲ್ಲಿ ಮುಂಬೈ ತಂಡದ ಅದೃಷ್ಟವೇ ಸರಿಯಿಲ್ಲ. ಆರಂಭದಿಂದ ಕಳಪೆ ಪ್ರದರ್ಶನದಿಂದ ತೀವ್ರ ಟೀಕೆಗಳಿಗೆ ಗುರಿಯಾಗಿರುವಂತೆಯೇ ಮತ್ತೊಂದು ಸೋಲು ಕಂಡಿದೆ.

ಹೌದು. ಇಲ್ಲಿನ ಎಂ.ಎ ಚಿದಂಬರಂ ಕ್ರೀಡಾಂಗಣದಲ್ಲಿ ಶನಿವಾರ ರಾತ್ರಿ ನಡೆದ ಐಪಿಎಲ್ ಟೂರ್ನಿಯ 44ನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ಭರ್ಜರಿ 8 ವಿಕೆಟ್ ಗಳಿಂದ ಗೆಲುವು ದಾಖಲಿಸಿತು.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ ಇಂಡಿಯನ್ಸ್ ಪರ ಆರಂಭಿಕ ಆಟಗಾರರಾದ ವಿಲ್ ಜಾಕ್ಸ್ ಕೇವಲ 1 ರನ್ ಗಳಿಸಿ ಘೋಷ್‌ಗೆ ಕ್ಯಾಚ್ ನೀಡಿ ನಿರ್ಗಮಿಸಿದರು. ರಿಯಾನ್ ರಿಕೆಲ್ಟಾನ್ 37 ರನ್ ಗಳಿಸಿದಾಗ ನೂರ್ ಅಹ್ಮದ್ ಬೌಲಿಂಗ್ ನಲ್ಲಿ ಪಾಟೀಲ್ ಗೆ ಕ್ಯಾಚ್ ನೀಡಿದರು.

ತದನಂತರ ನಮನ್ ದಿರ್ 4 ಬೌಂಡರಿ, 3 ಸಿಕ್ಸರ್ ಗಳೊಂದಿಗೆ 57 ರನ್ ಗಳಿಸಿದರೆ, ಸೂರ್ಯ ಕುಮಾರ್ ಯಾದವ್ 21, ತಿಲಕ್ ವರ್ಮಾ 5, ನಾಯಕ ಹಾರ್ದಿಕ್ ಪಾಂಡ್ಯ ಕೇವಲ 18 ರನ್ ಗಳಿಸಿ ಔಟ್ ಆದರು.

ಬಳಿಕ ರಾಬಿನ್ ಮಿಂಜ್ 5, ಕ್ರಿಸ್ ಭಗತ್ 3, ಟ್ರೆಂಟ್ ಬೌಲ್ಟ್ 7 ರನ್ ಗಳಿಸುವುದರೊಂದಿಗೆ



ಮುಂಬೈ ಇಂಡಿಯನ್ಸ್ ನಿಗದಿತ 20 ಓವರ್ ಗಳಲ್ಲಿ 7 ವಿಕೆಟ್ ನಷ್ಟಕ್ಕೆ 159 ರನ್ ಗಳಿಸಲಷ್ಟೇ ಶಕ್ತವಾಯಿತು. ಚೆನ್ನೈ ಸೂಪರ್ ಕಿಂಗ್ಸ್ ಪರ ಅಂಶುಲ್ ಕಾಂಬೋಜ್ 3 ವಿಕೆಟ್ ಪಡೆದರೆ, ನೂರ್ ಅಹ್ಮದ್ 2, ರಾಮಕೃಷ್ಣ ಘೋಷ್, ವೋವಾರ್ಟನ್ ತಲಾ ಒಂದೊಂದು ವಿಕೆಟ್ ಗಳಿಸಿದರು.

ಮುಂಬೈ ಇಂಡಿಯನ್ಸ್ ನೀಡಿದ 160 ರನ್ ಗಳ ಗೆಲುವಿನ ಗುರಿ ಬೆನ್ನಟ್ಟಿದ್ದ ಚೆನ್ನೈ ಸೂಪರ್ ಕಿಂಗ್ಸ್ ಪರ ನಾಯಕ ಋತುರಾಜ್ ಗಾಯಕ್ವಾಡ್ ಅಜೇಯ 67 ರನ್ ಗಳಿಸಿದರೆ, ಸಂಜು ಸ್ಯಾಮ್ಸನ್ 11, ಉರ್ವಿಲ್ ಪಟೇಲ್ 24 ಹಾಗೂ ಕಾರ್ತಿಕ್ ಶರ್ಮಾ ಅಜೇಯ 54 ರನ್ ಗಳಿಸಿದರು.

ಇದರೊಂದಿಗೆ 18.1 ಓವರ್ ಗಳಲ್ಲಿ 2 ವಿಕೆಟ್ ನಷ್ಟಕ್ಕೆ 160 ರನ್ ಗಳಿಸುವುದರೊಂದಿಗೆ ಅಖಖ ಗೆಲುವಿನ ನಗೆ ಬೀರಿತು. ಮುಂಬೈ ಇಂಡಿಯನ್ಸ್ ಪರ ಜಸ್ಪ್ರೀತ್ ಬೂಮ್ರಾ ಹಾಗೂ ಎಎಂ ಘಾಜನ್ ಫರ್ ತಲಾ ಒಂದೊಂದು ವಿಕೆಟ್ ಪಡೆದರು.